PRGI No.: KARKAN/2023/86346

# ವಿಜಯ ವಿಶ್ವವಾಣಿ

VIJAYA VISHWAVANI Kannada Daily | ವಿಜಯ ಧ್ವನಿ | ಕನ್ನಡ ದಿನಪತ್ರಿಕೆ | ₹1

ಬೆಂಗಳೂರು * ಬೆಂಗಳೂರು ಗ್ರಾಮಾಂತರ * ಚಿಕ್ಕಬಳ್ಳಾಪುರ * ಕೋಲಾರ * ಮಂಡ್ಯ * ರಾಮನಗರ * ತುಮಕೂರು * ಚಾಮರಾಜನಗರ * ಉತ್ತರ ಕರ್ನಾಟಕ * ಕಲಬುರ್ಗಿ * ಯಾದಗಿರಿ * ಬೀದರ್ * ರಾಯಚೂರು

Volume-2 | ಸಂಪುಟ–2 | Issue- 896 | ಸಂಚಿಕೆ–896 | Wednesday, April 22, 2026 | ಬುಧವಾರ, ಏಪ್ರಿಲ್ 22, 2026 | Pages- 8 | ಪುಟಗಳು–8

**ಶುಭ ಮುಂಜಾವು**

ನಿನ್ನನ್ನು ನೀನು ತಿಳಿದುಕೊಳ್ಳೋದು ನಿನ್ನ ಮನಸ್ಸನ್ನು ಹದಗೊಳಿಸಿಕೊಂಡಾಗ ಮಾತ್ರ. –ಗಾಂಧೀಜಿ

ವಾಸ್ತವತೆಯ ಜಗತ್ತಿಗೆ ಮಿತಿಯುಂಟು, ಕಲ್ಪನೆಯ ಜಗತ್ತಿಗೆ ಮಿತಿಯಿಲ್ಲ. –ರೂಸೋ

ನಿನ್ನ ದೊಡ್ಡ ನೆರಳನ್ನು ನೋಡಿ ಹೆದರುವ ಅಥವಾ ಭಯ ಪಡುವ ಕಾರಣವಿಲ್ಲ. ಅದು ನಿನ್ನ ಗುಲಾಮ. ನಿನ್ನ ಆಜ್ಞೆಯಂತೆ ನಡೆಯುತ್ತದೆ. ನೀನು ನಿಂತರೆ ಅದೂ ನಿಲ್ಲುವುದು, ನೀನು ಕುಳಿತರೆ ಅದೂ ಕುಳಿತುಕೊಳ್ಳುವುದು. –ವಿನೋಬಾ ಭಾವೆ

ಇಡಿ ದಾಳಿ: ಕೇಂದ್ರ ಸರ್ಕಾರ ಕಾಂಗ್ರೆಸ್ ನವರನ್ನು ಗುರಿಯಾಗಿಸಿದೆ: ಸಿದ್ದರಾಮಯ್ಯ 03

ಆರೋಪಿಯಿಂದ 18 ಲಕ್ಷ ರೂ. ಮೌಲ್ಯದ 187 ಕೆಜಿ ಗಾಂಜಾ ವಶ! 06

ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಸಹಕಾರ ನೀಡಿ ಕುಮಾರಸ್ವಾಮಿ, ಡಿ.ಕೆ.ಶಿ ಸವಾಲು 08

# ಕೊಟ್ಟ ಮಾತು ಉಳಿಸಿಕೊಂಡ ಕಾಂಗ್ರೆಸ್

## ಆಕ್ಸಿಜನ್ ದುರಂತದಲ್ಲಿ ಮೃತಪಟ್ಟವರ ಕುಟುಂಬದ ಸದಸ್ಯರಿಗೆ ಸರ್ಕಾರಿ ನೌಕರಿ

ಚಾಮರಾಜನಗರ, ಏಪ್ರಿಲ್ 21: ಕೊರೊನಾ ಎರಡನೇ ಅಲೆಯ ಸಂದರ್ಭ 2021ರ ಮೇ 2ರಂದು ಚಾಮರಾಜನಗರ ಜಿಲ್ಲಾಸ್ಪತ್ರೆಯಲ್ಲಿ ಆಕ್ಸಿಜನ್ ಕೊರತೆಯಿಂದಾಗಿ ಹಲವು ರೋಗಿಗಳು ಪ್ರಾಣ ಕಳೆದುಕೊಂಡಿದ್ದರು. ಈ ಸಂಬಂಧ ಸಂತ್ರಸ್ತ ಕುಟುಂಬಗಳಿಗೆ ಕೊಟ್ಟ ಮಾತನ್ನು ರಾಜ್ಯ ಕಾಂಗ್ರೆಸ್ ಉಳಿಸಿಕೊಂಡಿದ್ದು, ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ 25 ಮಂದಿಗೆ ಸರ್ಕಾರಿ ಉದ್ಯೋಗದ ನೇಮಕಾತಿ ಪತ್ರ ವಿತರಣೆ ಮಾಡಿದೆ. ಗುಂಡ್ಲುಪೇಟೆಯ ದೇವರಾಜ್ ಅರಸ್ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ್ ನೇಮಕಾತಿ ಪತ್ರ ವಿತರಿಸಿದ್ದಾರೆ.

ಗುಂಡ್ಲುಪೇಟೆಯ ದೇವರಾಜ ಅರಸು ಕ್ರೀಡಾಂಗಣದಲ್ಲಿ ಮಂಗಳವಾರ ತಾಲ್ಲೂಕಿನ 110 ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಚಾಲನೆ ನೀಡುವ ಕಾರ್ಯಕ್ರಮದಲ್ಲಿ 25 ಮಂದಿಗೆ ನೇಮಕಾತಿ ಪತ್ರಗಳನ್ನು ಹಸ್ತಾಂತರ ಮಾಡಿದರು.



ಸಂತ್ರಸ್ತರಿಗೆ ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗಳ ಬೋಧನಾ ಆಸ್ಪತ್ರೆಯಲ್ಲಿ (ಸಿಮ್ಸ್) ವಿವಿಧ ವೃಂದದ ಉದ್ಯೋಗಗಳನ್ನು ನೀಡಲಾಗಿದೆ.

ಭಾರತ್ ಜೋಡೋ ಯಾತ್ರೆ ವೇಳೆ ಸಂತ್ರಸ್ತ ಕುಟುಂಬಗಳ ಸದಸ್ಯರಿಗೆ ಸರ್ಕಾರಿ ಉದ್ಯೋಗದ ನೀಡುವ ಭರವಸೆಯನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ನೀಡಿದ್ದರು. ಅದರಂತೆ ಸಂತ್ರಸ್ತ ಕುಟುಂಬಗಳ 25 ಮಂದಿಗೆ ಚಾಮರಾಜನಗರ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಖಾಯಂ ನೌಕರಿಯನ್ನು ರಾಜ್ಯ ಸರ್ಕಾರ ನೀಡಿದೆ.

ರಾಜ್ಯದಲ್ಲಿ ಕೊರೊನಾ ಮಹಾಮಾರಿ ಅಬ್ಬರದ ಸಂದರ್ಭ, ಕೋವಿಡ್ ಎರಡನೇ ಅಲೆಯ ವೇಳೆ ಚಾಮರಾಜನಗರ ಜಿಲ್ಲಾ ಆಸ್ಪತ್ರೆಯಲ್ಲಿ ಬಾರಿ ದುರಂತವೊಂದು ನಡೆದಿತ್ತು. 2021, ಮೇ 2ರಂದು ಜಿಲ್ಲಾ ಕೋವಿಡ್ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗಿದ್ದ 36 ಮಂದಿ ಆಮ್ಲಜನಕ ಸಿಗದೆ ಧಾರುಣವಾಗಿ ಮೃತಪಟ್ಟಿದ್ದರು. ದುರ್ಘಟನೆ ನಡೆದಾಗ ಬಿಜೆಪಿ ಸರ್ಕಾರ ಅಧಿಕಾರದಲ್ಲಿತ್ತು. ಆಮ್ಲಜನಕದ ಕೊರತೆಯಿಂದಾಗಿ ಒಟ್ಟು 36 ಮಂದಿ ಪ್ರಾಣಕಳೆದು ಕೊಂಡಿದ್ದು, ಈ ವಿಚಾರ ದೇಶಾದ್ಯಂತ ಸುದ್ದಿಯಾಗಿತ್ತು. ಈ ಪೈಕಿ 21 ಸಂತ್ರಸ್ತ ಕುಟುಂಬಗಳು ಸರ್ಕಾರಿ ಉದ್ಯೋಗಕ್ಕೆ ಬೇಡಿಕೆ ಇಟ್ಟಿದ್ದರು. ಹೀಗಾಗಿ ಮೃತಪಟ್ಟ ಕುಟುಂಬದವರಿಗೆ ಸರ್ಕಾರಿ ನೌಕರಿ ಭರವಸೆಯನ್ನು ವಿರೋಧ ಪಕ್ಷದಲ್ಲಿದ್ದಾಗ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ನೀಡಿದ್ದರು. ಆ ವೇಳೆ ತಲಾ ಒಂದು ಲಕ್ಷ ರೂ. ಪರಿಹಾರ ನೀಡುವುದರ ಜೊತೆಗೆ, ತಪ್ಪಿತಸ್ಥರಿಗೆ ಶಿಕ್ಷೆ ಕೊಡಿಸುವುದಾಗಿಯೂ ಆಶ್ವಾಸನೆ ನೀಡಲಾಗಿತ್ತು.

ಘಟನೆಯ ಬಳಿಕ ಸಂತ್ರಸ್ತ ಕುಟುಂಬಗಳಿಗೆ ನ್ಯಾಯ ಸಿಗಬೇಕೆಂಬ ನಿಟ್ಟಿನಲ್ಲಿ ಅಂದಿನಿಂದಲೂ ಹೋರಾಟಗಳು ನಡೆದುಕೊಂಡು ಬಂದಿದ್ದವು. ಅಂತಿಮವಾಗಿ ಇವರ ಮನವಿಗೆ ಸ್ಪಂದಿಸಿರುವ ರಾಜ್ಯ ಸರ್ಕಾರ 25 ಮಂದಿಗೆ ಸರ್ಕಾರಿ ನೌಕರಿಯನ್ನು ನೀಡಿದೆ. ಕುಟುಂಬದ ಸದಸ್ಯರನ್ನು ಕಳೆದುಕೊಂಡು ಕಂಗಾಲಾಗಿದ್ದವರ ಬಾಳಲ್ಲಿ ಸರ್ಕಾರದ ಈ ನಿರ್ಧಾರ ಹೊಸ ಅಶಾಕಿರಣ ಮೂಡಿಸಿದ್ದು, ಸಂತ್ರಸ್ತ ಕುಟುಂಬಗಳ ಸುದೀರ್ಘ ಹೋರಾಟಕ್ಕೆ ಕೊನೆಗೂ ಜಯ ಸಿಕ್ಕಂತಾಗಿದೆ.

## ಎಲೆಕ್ಷನ್ ಫಲಿತಾಂಶದ ಬಳಿಕ ಮುಸ್ಲಿಂ ಮುಖಂಡರ ಅಮಾನತು ಆದೇಶ ವಾಪಸ್: ಸಚಿವ ಸತೀಶ ಜಾರಕಿಹೊಳಿ

ಮೈಸೂರು: ' ದಾವಣಗೆರೆ ಉಪಚುನಾವಣೆ ಫಲಿತಾಂಶದ ಬಳಿಕ ಮುಸ್ಲಿಂ ಮುಖಂಡರ ಅಮಾನತು ಆದೇಶ ವಾಪಸ್ ಆಗಬಹುದು' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕು ಕ್ರೀಡಾಂಗಣದ ಹೆಲಿಪ್ಯಾಡ್‌ನಲ್ಲಿ ಮಂಗಳವಾರ ಪತ್ರಕರ್ತರಿಗೆ ಅವರು ಪ್ರತಿಕ್ರಿಯೆ ನೀಡಿದರು.



'ಜಬ್ಬಾರ್ ಸೇರಿದಂತೆ ಕೇವಲ ಅಲ್ಪಸಂಖ್ಯಾತ ನಾಯಕರ ಮೇಲಿನ ಕ್ರಮವು ಮುಸ್ಲಿಂ ಮತಗಳ ಮೇಲೆ ಖಂಡಿತ ಪರಿಣಾಮ ಬೀರಲಿದೆ. ಈ ಕಾರಣಕ್ಕೆ ನಾವೆಲ್ಲ ಮಧ್ಯಸ್ಥಿಕೆ ವಹಿಸಿದ್ದೇವೆ. ಈ ಹಿಂದೆಯೂ ಹೀಗೆ ಅಮಾನತು ಆಗಿದ್ದವರು ಪಕ್ಷಕ್ಕೆ ವಾಪಸ್ ಆಗಿದ್ದಾರೆ. ಜಬ್ಬಾರ್ ಕೂಡ ಮರಳಬಹುದು. ಸದ್ಯ ಅವರನ್ನು ಹೊರತುಪಡಿಸಿ ಉಳಿದ ಯಾರ ಮೇಲೂ ಕ್ರಮ ಕೈಗೊಂಡಿಲ್ಲ' ಎಂದರು.

'ದಾವಣಗೆರೆ ಉಪ ಚುನಾವಣೆಯಲ್ಲಿ ಪಕ್ಷ ವಿರೋಧಿ ಚಟುವಟಿಕೆ ನಡೆದಿದೆಯೋ, ಇಲ್ಲವೋ ಗೊತ್ತಿಲ್ಲ. ಚುನಾವಣೆ ಫಲಿತಾಂಶದ ಬಳಿಕ ಈ ಕುರಿತು ಚರ್ಚಿಸುತ್ತೇವೆ' ಎಂದರು.

ಎಸ್‌ಡಿಪಿಐಗೆ ಕಾಂಗ್ರೆಸ್‌ನ ಕೆಲವು ಮುಖಂಡರಿಂದಲೇ ಹಣಕಾಸು ನೆರವು ನೀಡಲಾಗಿದೆ ಎಂಬ ಆರೋಪದ ಕುರಿತು ಪ್ರತಿಕ್ರಿಯಿಸಿ ' ಈ ಬಗ್ಗೆ ನನಗೆ ಮಾಹಿತಿ ಇಲ್ಲ' ಎಂದರು.

'ಕೆ.ಎನ್. ರಾಜಣ್ಣ ಅವರ ಹೇಳಿಕೆ ಅವರ ವೈಯಕ್ತಿಕ. ರಾಜಕಾರಣದಲ್ಲಿ ಯಾವಾಗಲೂ ನಿಷ್ಠುರವಾಗಿ ಇರಲು ಆಗದು. ಕೆಲವೊಮ್ಮೆ ಹೊಂದಾಣಿಕೆ ಅನಿವಾರ್ಯ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಿಂದಿನಷ್ಟೇ ಕಠಿಣವಾಗಿ ಇದ್ದಾರೆ' ಎಂದರು.

## ರಾಜ್ಯದ ವಿವಿಧೆಡೆ ಮುಂದಿನ 7 ದಿನ ಬಿಸಿ ಗಾಳಿ ಆರ್ಭಟ: ಹವಾಮಾನ ಇಲಾಖೆ ಎಚ್ಚರಿಕೆ

ಬೆಂಗಳೂರು: ರಾಜ್ಯದ ವಿವಿಧೆಡೆ ಮುಂದಿನ 7 ದಿನ ತಾಪಮಾನ ಮತ್ತಷ್ಟು ಏರಿಕೆಯಾಗುವ ಜತೆಗೆ, ಬಿಸಿ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಏಪ್ರಿಲ್ 21ರಿಂದ 27ರವರೆಗೆ ಉತ್ತರ ಒಳನಾಡಿನ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ವಿಜಯಪುರ, ಗದಗ, ಧಾರವಾಡ, ಬಾಗಲಕೋಟೆ ಮತ್ತು ಕೊಪ್ಪಳ, ಕರಾವಳಿಯ ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಯ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಬಿಸಿ ಗಾಳಿ ಬೀಸಲಿದೆ ಎಂದು ಇಲಾಖೆ ತಿಳಿಸಿದೆ.

ಬಿಸಿಲಿನಿಂದ ತೇವಾಂಶ ಹೆಚ್ಚಾಗುವುದರಿಂದ ರಾಜ್ಯದಾದ್ಯಂತ ಅಲ್ಲಲ್ಲಿ ಗುಡುಗು, ಸಿಡಿಲು ಸಹಿತ ಜೋರಾದ ಗಾಳಿಯೊಂದಿಗೆ ಸಾಧಾರಣ ಮಳೆಯಾಗುವ ಮುನ್ಸೂಚನೆ ಕೂಡ ನೀಡಿದೆ.

ಜೊತೆಗೆ ಬಿಸಿಗಾಳಿ ಅಥವಾ ವಿಪರೀತ ತಾಪಮಾನದಿಂದ ನಿಮ್ಮನ್ನು ರಕ್ಷಿಸಲು ಸಾರ್ವಜನಿಕ ಜಾಗೃತಿ ವಿಡಿಯೊಗಳನ್ನು ಹವಾಮಾನ ಇಲಾಖೆ ಎಕ್ಸ್ ಖಾತೆಯಲ್ಲಿ ಹಂಚಿಕೊಳ್ಳುವ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳಿ ಎಂದು ಸಲಹೆ ನೀಡಿದೆ.

## ಜನ ಆಕ್ರೋಶ ಮಹಿಳಾ ಪಾದಯಾತ್ರೆಯಲ್ಲಿ ವಿರೋಧ ಪಕ್ಷಗಳ ವಿರುದ್ಧ ಯೋಗಿ ಕಿಡಿ

ಲಖನೌ: ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ತಿದ್ದುಪಡಿ ಮಸೂದೆಯನ್ನು ವಿರೋಧಿಸಿದ ಕಾಂಗ್ರೆಸ್ ಮತ್ತು ಸಮಾಜವಾದಿ ಪಕ್ಷದ ವಿರುದ್ಧ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕಿಡಿಕಾರಿದ್ದಾರೆ.

ಜನ ಆಕ್ರೋಶ ಮಹಿಳಾ ಪಾದಯಾತ್ರೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಾಂಗ್ರೆಸ್ ಅಥವಾ ಸಮಾಜವಾದಿ ಪಕ್ಷಗಳು ಪ್ರಜಾಪ್ರಭುತ್ವ ವಿರೋಧಿಯಾಗಿವೆ. ಅವರ ಕಾರ್ಯಗಳು ಮಹಿಳಾ ವಿರೋಧಿಯಾಗಿವೆ ಎಂದು ಹರಿಹಾಯ್ದರು.

ಆದ್ದರಿಂದ ಮಹಿಳೆಯರು ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳ ವಿರುದ್ಧ ದೇಶಾದ್ಯಂತ ಬೀದಿಗಳಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ಕಾಂಗ್ರೆಸ್, ಸಮಾಜವಾದಿ, ಟಿಎಂಸಿ ಮತ್ತು ಡಿಎಂಕೆ ಪಕ್ಷಗಳ ಮಹಿಳಾ ವಿರೋಧಿ ಮನೋಭಾವದ ವಿರುದ್ಧ ಮಹಿಳೆಯರಲ್ಲಿರುವ ಅಸಮಾಧಾನವನ್ನು ಪಾದಾಯಾತ್ರೆ ಸಂಕೇತಿಸುತ್ತದೆ ಎಂದು ಯೋಗಿ ಹೇಳಿದ್ದಾರೆ.

ದೇಶದಾದ್ಯಂತ ಲಕ್ಷಾಂತರ ತಾಯಂದಿರು ಮತ್ತು ಸಹೋದರಿಯರ ಆಕಾಂಕ್ಷೆಗಳಿಗೆ ತೀವ್ರ ನೋವುಂಟು ಮಾಡಿರುವ ಮಹಿಳಾ ಮೀಸಲಾತಿಗೆ ಸಂಬಂಧಿಸಿದ ನಿರ್ಣಾಯಕ ತಿದ್ದುಪಡಿ ಮಸೂದೆಯನ್ನು ಅಂಗೀಕರಿಸುವಲ್ಲಿ ವಿಫಲವಾದದ್ದನ್ನು ವಿರೋಧಿಸಿ ಈ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ಸರ್ಕಾರ ಪ್ರಕಟಣೆಯಲ್ಲಿ ತಿಳಿಸಿತ್ತು.

ಶಾಸನ ಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಮತ್ತು ಲೋಕಸಭಾ ಕ್ಷೇತ್ರಗಳ ಸಂಖ್ಯೆ 850ಕ್ಕೆ ಹೆಚ್ಚಿಸುವ ಉದ್ದೇಶ ಹೊಂದಿದ್ದ ಸಂವಿಧಾನ ತಿದ್ದುಪಡಿ ಮಸೂದೆಗೆ ಲೋಕಸಭೆಯಲ್ಲಿ ಸೋಲಾಗಿದೆ. ಮಹಿಳಾ ಮಿಸಲಾತಿ ಕಾಯ್ದೆಗೆ 131ನೇ ಸಂವಿಧಾನ ತಿದ್ದುಪಡಿ ತರುವ ಮೂಲಕ ಶಾಸನ ಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಕಲ್ಪಿಸಲು ಸರ್ಕಾರ ಮುಂದಾಗಿತ್ತು.

## 'ಪ್ರಧಾನಿ ಮೋದಿ ಒಬ್ಬ ಟೆರರಿಸ್ಟ್': ಮಲ್ಲಿಕಾರ್ಜುನ ಖರ್ಗೆ; ಬಳಿಕ ಸ್ಪಷ್ಟನೆ

ಚೆನ್ನೈ: ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಮಂಗಳವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು "ಭಯೋತ್ಪಾದಕ" ಎಂದು ಟೀಕಿಸುವ ಮೂಲಕ ವಿವಾದ ಮೈಮೇಲೆ ಎಳೆದುಕೊಂಡಿದ್ದಾರೆ.

ತಮಿಳುನಾಡಿನಲ್ಲಿ ಚುನಾವಣಾ ಪ್ರಚಾರದ ಕೊನೆಯ ದಿನವಾದ ಇಂದು ಚೆನ್ನೈನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಖರ್ಗೆ ಅವರು, "ಟೆರರಿಸ್ಟ್ ಪ್ರಧಾನಿ ಮೋದಿ ಅವರೊಂದಿಗೆ ಎಐಎಡಿಎಂಕೆ ಕೈಜೋಡಿಸಿರುವುದು ನಿಜಕ್ಕೂ ವಿಷಾದನೀಯ ಎಂದು ಹೇಳಿದರು.

ಮಹಿಳಾ ಮೀಸಲಾತಿ ಮಸೂದೆ ಮತ್ತು ಕ್ಷೇತ್ರ ಪುನರ್ ವಿಂಗಡಣೆ ಮಸೂದೆಯನ್ನು ಸೋಲಿಸುವ ಸಮಯದಲ್ಲಿ ವಿರೋಧ ಪಕ್ಷದ ಒಗ್ಗಟ್ಟನ್ನು ಎತ್ತಿ ತೋರಿಸಿದ ಕಾಂಗ್ರೆಸ್ ಅಧ್ಯಕ್ಷರು, ಬಿಜೆಪಿಯನ್ನು ಬೆಂಬಲಿಸಿದ್ದಕ್ಕಾಗಿ ಎಐಎಡಿಎಂಕೆಯನ್ನು ಟೀಕಿಸಿದರು ಮತ್ತು ಪ್ರಧಾನಿ ಮೋದಿಯವರನ್ನು 'ಸಮಾನತೆಯಲ್ಲಿ ನಂಬಿಕೆಯಿಲ್ಲದ ಭಯೋತ್ಪಾದಕ' ಎಂದು ಟೀಕಿಸಿದರು.

ತಮಿಳುನಾಡಿನಲ್ಲಿ ಎಐಎಡಿಎಂಕೆ ಮತ್ತು ಬಿಜೆಪಿ ನಡುವಿನ ಮೈತ್ರಿಯ ಔಚಿತ್ಯವನ್ನು ಪ್ರಶ್ನಿಸಿದ ಮಲ್ಲಿಕಾರ್ಜುನ ಖರ್ಗೆ, ಸಮಾನತೆ ಮತ್ತು ನ್ಯಾಯದ ಮೇಲೆ ನಂಬಿಕೆ ಇರದ ಪಕ್ಷದೊಂದಿಗೆ ಎಐಎಡಿಎಂಕೆ ನಂಬಿಕೆ ಇಟ್ಟಿರುವುದು ಆಶ್ಚರ್ಯ ಎಂದು ಗುಡುಗಿದರು.



"ನಮಗೆ ಹೆಚ್ಚು ಸಂಸದರನ್ನು ನೀಡಿದ ತಮಿಳು ನಾಡು ಜನರಿಗೆ ನಾನು ಧನ್ಯವಾದ ಹೇಳುತ್ತೇನೆ. ಅದಕ್ಕಾಗಿಯೇ ನಾವು ಮಸೂದೆಯನ್ನು ಹೋರಾಡಿ ಸೋಲಿಸಲು ಸಾಧ್ಯವಾಯಿತು. ಇದು ಪೆರಿಯಾರ್, ಡಾ. ಅಂಬೇಡ್ಕರ್, ಅಣ್ಣಾದೊರೈ, ಮಹಾನ್ ಕಾಮರಾಜ್ ಮತ್ತು ಕರುಣಾನಿಧಿ ಅವರ ವೈಜ್ಞಾನಿಕ ಚಿಂತನೆ ಮತ್ತು ಆದರ್ಶಗಳ ನಾಡು ಎಂದರು.

ಇನ್ನೂ ಪ್ರಧಾನಿ ವಿರುದ್ಧ ಬಳಸಿದ ಪದಗಳ ಬಗ್ಗೆ ಪ್ರಶ್ನಿಸಿದಾಗ, ಖರ್ಗೆ ತಮ್ಮನ್ನು ತಾವು ಸಮರ್ಥಿಸಿಕೊಂಡರು ಮತ್ತು ಪ್ರಧಾನಿ ತಮ್ಮ ರಾಜಕೀಯ ವಿರೋಧಿಗಳನ್ನು, ಇಡಿ, ಸಿಬಿಐ, ಐಟಿ ಬಳಸುವ ಮೂಲಕ ಭಯಭೀತಗೊಳಿಸುತ್ತಿದ್ದಾರೆ ಎಂದು ಹೇಳುವುದು ನನ್ನ ಉದ್ದೇಶ ಎಂದು ಸ್ಪಷ್ಟಪಡಿಸಿದರು.

"ಅವರು (ಪ್ರಧಾನಿ ಮೋದಿ) ಜನರನ್ನು ಮತ್ತು ರಾಜಕೀಯ ಪಕ್ಷಗಳನ್ನು ಭಯಭೀತಗೊಳಿಸುತ್ತಿದ್ದಾರೆ. ಅವರು ಭಯೋತ್ಪಾದಕರೆಂದು ನಾನು ಎಂದಿಗೂ ಹೇಳಿಲ್ಲ... ನಾನು ಇದನ್ನು ಸ್ಪಷ್ಟಪಡಿಸಲು ಬಯಸುತ್ತೇನೆ, ಮೋದಿ ಯಾವಾಗಲೂ ಬೆದರಿಕೆ ಹಾಕುತ್ತಾರೆ. ಇಡಿ, ಐಟಿ ಮತ್ತು ಸಿಬಿಐನಂತಹ ಸಂಸ್ಥೆಗಳು ಅವರ ಕೈಯಲ್ಲಿವೆ. ಅವರು ಕ್ಷೇತ್ರ ಪುನರ್ ವಿಂಗಡಣೆಯನ್ನು ತಮ್ಮ ಕೈಗೆ ತೆಗೆದುಕೊಳ್ಳಲು ಬಯಸುತ್ತಿದ್ದಾರೆ" ಎಂದು ಖರ್ಗೆ ಹೇಳಿದರು.

## ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿ ಕೇಂದ್ರದಿಂದ ಇ.ಡಿ. ದಾಳಿ: ಸಿದ್ದರಾಮಯ್ಯ

ಗುಂಡ್ಲುಪೇಟೆ (ಚಾಮರಾಜನಗರ): ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿಕೊಂಡು ಕೇಂದ್ರ ಸರ್ಕಾರ ಇ.ಡಿ ದಾಳಿ ನಡೆಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಗುಂಡ್ಲುಪೇಟೆ ತಾಲ್ಲೂಕಿನಲ್ಲಿ 110 ಕೆರೆಗಳನ್ನು ತುಂಬಿಸುವ ಯೋಜನೆಗೆ ಚಾಲನೆ ನೀಡಲು ಮಂಗಳವಾರ ಆಗಮಿಸಿದ್ದ ವೇಳೆ ಹೆಲಿಪ್ಯಾಡ್ನಲ್ಲಿ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಸಿಎಂ 'ಬಿಜೆಪಿ ನಾಯಕರ ನಾಯಕರ ಮೇಲೆ ಇಡಿ ದಾಳಿ ನಡೆಸುವುದಿಲ್ಲ ಏಕೆ ಎಂದು ಪ್ರಶ್ನಿಸಿದರು.

ಅಂದು ಕಾಂಗ್ರೆಸ್ನ ಗ್ಯಾರಂಟಿ ಕಾರ್ಯಕ್ರಮಗಳನ್ನು ವಿರೋಧ ಮಾಡಿದ್ದ ಬಿಜೆಪಿ ಇಂದು ಚುನಾವಣೆ ಗೆಲ್ಲಲು ಗ್ಯಾರಂಟಿ ಯೋಜನೆಗಳನ್ನು ಘೋಷಿಸುತ್ತಿದೆ. ಗ್ಯಾರಂಟಿ ಯೋಜನೆಗಳ ಮಹತ್ವ ಬಿಜೆಪಿಗೆ ಅರಿವಾದಂತಿದೆ ಎಂದು ವ್ಯಂಗ್ಯವಾಡಿದರು.

ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಲು ಸಂವಿಧಾನದ 73, 74 ನೇ ಕಲಂಗೆ ತಿದ್ದುಪಡಿ ತಂದು ರಾಜ್ಯಸಭೆಯಲ್ಲಿ ಜಾರಿಗೊಳಿಸಲು ಮುಂದಾದಾಗ ಎನ್ಡಿಎ ಮೈತ್ರಿಕೂಟ ಅಡ್ಡಿಪಡಿಸಿತ್ತು. ಬಿಜೆಪಿ ನಿಜವಾದ ಮಹಿಳಾ ಮೀಸಲಾತಿಯ ವಿರೋಧಿ ಎಂದು ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ರಾಜಕೀಯ ಲಾಭ ಪಡೆಯುವ ಉದ್ದೇಶದಿಂದ ಸಂಸತ್ತಿನಲ್ಲಿ ಡಿಲಿಮಿಟೇಷನ್ ಮಸೂದೆಯ ಜೊತೆಗೆ ಮಹಿಳಾ ಮೀಸಲಾತಿ ಮಸೂದೆಯನ್ನು ಒಟ್ಟುಗೂಡಿಸಿ ಮಂಡಿಸಲು ಮುಂದಾಗಿದ್ದರಿಂದ ಕಾಂಗ್ರೆಸ್ ಪಕ್ಷ ವಿರೋಧ ವ್ಯಕ್ತಪಡಿಸಿತು. ಮಹಿಳಾ ಮೀಸಲಾತಿ ಮಸೂದೆಗೆ ಕಾಂಗ್ರೆಸ್ ಎಂದೂ ವಿರೋಧ ಮಾಡಿಲ್ಲ ಎಂದು ಸಮಜಾಯಿಷಿ ನೀಡಿದರು.

ದಾವಣಗೆರೆ ದಕ್ಷಿಣ ಕ್ಷೇತ್ರದ ಉಪ ಚುನಾವಣೆಯಲ್ಲಿ ಟಿಕೆಟ್ ಹಂಚಿಕೆ ಮಾಡುವಾಗ ಅಲ್ಪಸಂಖ್ಯಾತ ಮುಖಂಡರನ್ನು ಕಡೆಗಣಿಸಿಲ್ಲ. ಬಾಗಲಕೋಟೆ ಹಾಗೂ ದಾವಣಗೆರೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಖಚಿತ ಎಂದು ಸಿಎಂ ವಿಶ್ವಾಸ ವ್ಯಕ್ತಪಡಿಸಿದರು.

## ಶೇ.90ರಷ್ಟು ಮಹಿಳೆಯರ ರಾಜಕಾರಣ ನಾಯಕರ ಬೆಡ್ ರೂಮ್‌ನಿಂದ ಶುರುವಾಗುತ್ತದೆ: ಸಂಸದ ಪಪ್ಪು ಯಾದವ್



ಪಾಟ್ನಾ: ಬಿಹಾರದ ಪೂರ್ಣಿಯದ ಸ್ವತಂತ್ರ ಸಂಸದ ಪಪ್ಪು ಯಾದವ್ ಅಲಿಯಾಸ್ ರಾಜೇಶ್ ರಂಜನ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಪಪ್ಪು ಯಾದವ್ ಮಹಿಳೆಯರ ಬಗ್ಗೆ ಅತ್ಯಂತ ಅವಹೇಳನಕಾರಿ ಹೇಳಿಕೆ ವಿಡಿಯೋ ವೈರಲ್ ಆಗಿದೆ. ಈ ಸಂಬಂಧ ಬಿಹಾರ ರಾಜ್ಯ ಮಹಿಳಾ ಆಯೋಗ ಅವರಿಗೆ ನೋಟಿಸ್ ಜಾರಿ ಮಾಡಿದ್ದು ಲೋಕಸಭಾ ಸದಸ್ಯತ್ವವನ್ನು ರದ್ದುಗೊಳಿಸುವಂತೆ ಶಿಫಾರಸು ಮಾಡುವುದಾಗಿ ಆಯೋಗ ಎಚ್ಚರಿಕೆ ನೀಡಿದೆ.

ರಾಜಿ ಮಾಡಿಕೊಳ್ಳದೆ ದೇಶದ ರಾಜಕೀಯದಲ್ಲಿ ಮಹಿಳೆಯರು ಮುನ್ನಡೆಯುವುದು ಬಹುತೇಕ ಅಸಾಧ್ಯವಾಗಿದ್ದು ಅವರ ಸುರಕ್ಷತೆಯನ್ನು ಗಂಭೀರವಾಗಿ ಪರಿಗಣಿಸಲಾಗಿಲ್ಲ ಎಂದು ಹೇಳಿದ್ದಾರೆ. ಮಾಧ್ಯಮಗಳೊಂದಿಗೆ ಮಾತನಾಡಿದ ಪಪ್ಪು ಯಾದವ್, ಭಾರತೀಯ ಸಮಾಜದಲ್ಲಿ ಮಹಿಳೆಯರನ್ನು ದೇವತೆಗಳೆಂದು ಪರಿಗಣಿಸಲಾಗಿದ್ದರೂ, ವಾಸ್ತವವು ಇದಕ್ಕೆ ವಿರುದ್ಧವಾಗಿದೆ ಎಂದರು.

ಪಪ್ಪು ಯಾದವ್ ಪ್ರಕಾರ, ರಾಜಕೀಯದಲ್ಲಿ ಹೆಚ್ಚಿನ ಮಹಿಳೆಯರು ಪ್ರಭಾವಿ ಜನರ ವೈಯಕ್ತಿಕ ಕ್ಷೇತ್ರದಲ್ಲಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸುತ್ತಾರೆ. ಮಹಿಳೆಯರ ಶೋಷಣೆ ಅಧಿಕಾರದ ಕಾರಿಡಾರ್‌ನಲ್ಲಿ ಆಳವಾಗಿ ಬೇರೂರಿದೆ ಎಂದು ಆರೋಪಿಸಿದರು. ಕಟುಸತ್ಯವೆಂದರೆ ಶೇಕಡ 90ರಷ್ಟು ಮಹಿಳಾ ರಾಜಕೀಯ ವೃತ್ತಿಜೀವನವು ರಾಜಕಾರಣಿಗಳ ಹಾಸಿಗೆಯಲ್ಲಿ ಪ್ರಾರಂಭವಾಗುತ್ತದೆ ಎಂದರು.


ಪಪ್ಪು ಯಾದವ್ ರಾಜಕಾರಣಿಗಳ ಪಾತ್ರವನ್ನು ಸಹ ಪ್ರಶ್ನಿಸಿದ್ದಾರೆ. ಸಂಸತ್ತು ಮತ್ತು ರಾಜ್ಯ ವಿಧಾನ ಸಭೆಗಳಲ್ಲಿ ಅನೇಕ ಪ್ರತಿನಿಧಿಗಳು ಮಹಿಳೆಯರನ್ನು ಗೌರವದಿಂದ ನಡೆಸಿಕೊಳ್ಳುವುದಿಲ್ಲ ಎಂದು ಹೇಳಿದರು. ಹೆಚ್ಚಿನ ಸಂಖ್ಯೆಯ ರಾಜಕಾರಣಿಗಳು ಅಶ್ಲೀಲ ವಿಡಿಯೋಗಳನ್ನು ವೀಕ್ಷಿಸುತ್ತಾರೆ. ಡಿಜಿಟಲ್ ಡೇಟಾವನ್ನು ಸಂಪೂರ್ಣವಾಗಿ ಅಳಿಸಿಹಾಕಲು ಸಾಧ್ಯವಿಲ್ಲದ ಕಾರಣ ಇದನ್ನು ಪರಿಶೀಲಿಸಲು ರಾಜಕಾರಣಿಗಳ ಮೊಬೈಲ್ ಫೋನ್‌ಗಳನ್ನು ಪರಿಶೀಲಿಸಬೇಕು ಎಂದರು.

ಮಹಿಳಾ ಮೀಸಲಾತಿ ಕುರಿತು ಕೇಂದ್ರ ಸರ್ಕಾರದ ಉದ್ದೇಶಗಳನ್ನು ಪಪ್ಪು ಯಾದವ್ ಪ್ರಶ್ನಿಸಿದ್ದಾರೆ. ನಾರಿ ಶಕ್ತಿ ವಂದನ ಕಾಯ್ದೆಯನ್ನು ಕೇವಲ ರಾಜಕೀಯ ಗಿಮಿಕ್ ಎಂದು ಕರೆದ ಅವರು, ಸರ್ಕಾರಕ್ಕೆ ಪೂರ್ಣ ಬಹುಮತವಿದ್ದಾಗ ಅದನ್ನು ಮೊದಲೇ ಏಕೆ ಪರಿಚಯಿಸಲಿಲ್ಲ ಎಂದು ಕೇಳಿದರು. ಈ ಕಾನೂನು ಹಿಂದುಳಿದ ವರ್ಗಗಳು, ಅತ್ಯಂತ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳು ಮತ್ತು ಅಲ್ಪಸಂಖ್ಯಾತರ ಮಹಿಳೆಯರಿಗೆ ಪ್ರತ್ಯೇಕ ನಿಬಂಧನೆಗಳನ್ನು ಹೊಂದಿರಬೇಕು, ಇಲ್ಲದಿದ್ದರೆ ಅದರ ಪ್ರಯೋಜನಗಳು ಶ್ರೀಮಂತರಿಗೆ ಸೀಮಿತವಾಗಿರುತ್ತದೆ ಎಂದರು.

ಸರ್ಕಾರವು ಜಾತಿ ಜನಗಣತಿಯನ್ನು ತಪ್ಪಿಸುತ್ತಿದೆ ಎಂದು ಅವರು ಆರೋಪಿಸಿದರು. ಹಿಂದುಳಿದ ಮತ್ತು ದಲಿತ ವರ್ಗಗಳಿಗೆ ಅವರ ಅರ್ಹತೆಯನ್ನು ನೀಡುವ ಗಂಭೀರ ಬಯಕೆ ಇಲ್ಲ ಎಂದು ಇದು ಸ್ಪಷ್ಟವಾಗಿ ತೋರಿಸುತ್ತದೆ. ರಾಷ್ಟ್ರೀಯ ಸ್ವಯಂಸೇವಕ ಸಂಘ ಮತ್ತು ಮನುಸ್ಮೃತಿಯನ್ನು ಉಲ್ಲೇಖಿಸಿ, ಈ ಸಿದ್ಧಾಂತಗಳು ಮಹಿಳೆಯರು ಮತ್ತು ಹಿಂದುಳಿದವರ ಹಕ್ಕುಗಳಿಗೆ ವಿರುದ್ಧವಾದ ಇತಿಹಾಸವನ್ನು ಹೊಂದಿವೆ ಎಂದು ಅವರು ಆರೋಪಿಸಿದರು. ನ್ಯಾಯಾಂಗ, ಸೇನೆ, ಪೊಲೀಸ್ ಮತ್ತು ಪ್ರಮುಖ ಮಾಧ್ಯಮ ಸಂಸ್ಥೆಗಳಂತಹ ಉನ್ನತ ಸಂಸ್ಥೆಗಳಲ್ಲಿ ಹಿಂದುಳಿದ ಸಮುದಾಯಗಳ ಮಹಿಳೆಯರ ಭಾಗವಹಿಸುವಿಕೆ ಏಕೆ ಕಡಿಮೆಯಾಗಿದೆ ಎಂದು ಅವರು ಪ್ರಶ್ನಿಸಿದರು.

## ತೃತೀಯ ಭಾಷೆಗಳಿಗೆ ಗ್ರೇಡ್ ಬದಲು ಅಂಕಗಳನ್ನೇ ನೀಡಲು ಹೈಕೋರ್ಟ್ ಆದೇಶ; ಸರ್ಕಾರಕ್ಕೆ ಹಿನ್ನಡೆ

ಬೆಂಗಳೂರು: ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ (KSEAB) ನಡೆಸುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆಗಳಿಗೆ ಅಂಕಗಳ ಬದಲು ಗ್ರೇಡ್ ನೀಡಲು ಮುಂದಾಗಿದ್ದ ರಾಜ್ಯ ಸರ್ಕಾರದ ಕ್ರಮಕ್ಕೆ ಹೈಕೋರ್ಟ್ನಲ್ಲಿ ತೀವ್ರ ಹಿನ್ನಡೆಯಾಗಿದ್ದು, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಅಂಕಗಳನ್ನು ನೀಡುವ ಪದ್ಧತಿ ಮುಂದುವರಿಸಬೇಕು ಎಂದು ಸೂಚನೆ ನೀಡಿದೆ.



ಇತ್ತೀಚೆಗೆ ಅಂಕಗಳನ್ನೇ ನೀಡಬೇಕೆಂದು ನಿರ್ದೇಶನ ನೀಡಿದ್ದ ಹೈಕೋರ್ಟ್ ಆದೇಶದ ಕ್ರಮವನ್ನು ಮರುಪರಿಶೀಲಿಸುವಂತೆ ಕೋರಿ ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಈ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಇ.ಎಸ್.ಇಂದಿರೇಶ್ ಅವರ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಅಧಿಸೂಚನೆ ಹೊರಡಿಸಿದಾಗಲೇ ಅಂಕಗಳ ಬದಲಿಗೆ ಗ್ರೇಡ್ ನೀಡುವುದಾಗಿ ಸ್ಪಷ್ಟಪಡಿಸಬೇಕಿತ್ತು. ಆದರೆ, ಅಧಿಸೂಚನೆಯಲ್ಲಿ ತಿಳಿಸದ ಅಂಶವನ್ನು ಪರಿಚಯಿಸಿ ಗ್ರೇಡ್ ಪದ್ಧತಿಯನ್ನು ಅನುಷ್ಠಾನಕ್ಕೆ ಮುಂದಾಗಿದ್ದೀರಿ. ನಿಯಮ ರೂಪಿಸಿದ ಬಳಿಕ ಸರ್ಕಾರ ಸೂಕ್ತವೆನಿಸಿದ ಕ್ರಮ ಕೈಗೊಳ್ಳಬಹುದು. ನಿಯಮ ರೂಪಿಸುವ ಮುಂಚಿನ ಪರೀಕ್ಷೆಯ ಅಂಕ ಪದ್ಧತಿ ಬದಲಾವಣೆ ಸೂಕ್ತವಲ್ಲ ಎಂದು ತಿಳಿಸಿದ ಪೀಠ, 2025–26ನೇ ಸಾಲಿಗೆ ಹಿಂದಿ ಭಾಷೆ ಸೇರಿದಂತೆ ತೃತೀಯ ಭಾಷೆಗಳಿಗೆ ಅಂಕಗಳನ್ನೇ ನೀಡುವುದನ್ನು ಮುಂದುವರೆಸಬೇಕು ಎಂದು ಸೂಚಿಸಿ ಅರ್ಜಿ ಇತ್ಯರ್ಥಪಡಿಸಿದೆ.

ಇದಕ್ಕೂ ಮುನ್ನ ಸರ್ಕಾರದ ಪರವಾಗಿ ವಾದ ಮಂಡಿಸಿದ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಇದೇ ಅಂಶವನ್ನು ಪ್ರಶ್ನಿಸಿ ವಿಭಾಗೀಯ ಪೀಠದಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿತ್ತು. ಈ ಅರ್ಜಿ ವಜಾಗೊಂಡಿದ್ದು, ಅರ್ಜಿದಾರರಿಗೆ ದಂಡ ವಿಧಿಸಲಾಗಿದೆ. ಅಲ್ಲದೆ, ಹಿಂದಿ ಭಾಷೆಯಲ್ಲಿ ಲಕ್ಷಕ್ಕೂ ಹೆಚ್ಚು ಮಂದಿ ಅನುತ್ತೀರ್ಣರಾಗುತ್ತಿದ್ದಾರೆ. ಹೀಗಾಗಿ ವಿದ್ಯಾರ್ಥಿಗಳ ಮೇಲೆ ಒತ್ತಡ ಕಡಿಮೆ ಮಾಡುವ ಸಲುವಾಗಿ ಈ ಕ್ರಮಕ್ಕೆ ಮುಂದಾಗಿದ್ದೇವೆ. ಅಗತ್ಯ ಸೂಕ್ತ ತಿದ್ದುಪಡಿಯೊಂದಿಗೆ ನಿಯಮ ರಚಿಸಲು ಸರ್ಕಾರ ಕರಡು ರೂಪಿಸುತ್ತಿದೆ ಎಂದು ಪೀಠಕ್ಕೆ ವಿವರಿಸಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆ ಮತ್ತು ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟು(ಎನ್‌ಎಸ್‌ಕ್ಯೂಎಫ್) ವಿಷಯಗಳಿಗೆ ಅಂಕದ ಬದಲು ಗ್ರೇಡ್ ನೀಡುವುದಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಪರೀಕ್ಷೆ ನಡೆಯುತ್ತಿದ್ದ ಸಂದರ್ಭ (ಮಾರ್ಚ್ 28)ದಲ್ಲಿ ಪ್ರಕಟಿಸಿದ್ದರು. ಆ ಕ್ರಮವನ್ನು ಪ್ರಶ್ನಿಸಿ ವಿದ್ಯಾರ್ಥಿನಿಯರಾದ ಚಿಕ್ಕಮಗಳೂರಿನ ಸಹನಾ ಆರ್.ನಾಯ್ಕ್, ಉಡುಪಿಯ ಅನುಷಾ ಮತ್ತು ಸುಧೀಕ್ಷಾ ಅವರು ಹೈಕೋರ್ಟ್‌ಗೆ ತಕರಾರು ಅರ್ಜಿ ಸಲ್ಲಿಸಿದ್ದರು.

ಅರ್ಜಿಯನ್ನು ಏ.15ರಂದು ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಇ.ಎಸ್.ಇಂದಿರೇಶ್ ಅವರ ಪೀಠ, 2025–26ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಅಧಿಸೂಚನೆ ಹೊರಡಿಸಿದ ಸಂದರ್ಭದಲ್ಲಿ ಚಾಲ್ತಿಯಲ್ಲಿದ್ದ ನಿಯಮದಂತೆ ಮೌಲ್ಯಮಾಪನ ನಡೆಸಬೇಕು. ಹಿಂದಿ ಸೇರಿ ತೃತೀಯ ಭಾಷೆಗಳ ವಿಷಯಗಳಿಗೆ ಗ್ರೇಡ್ ಬದಲಾಗಿ ಅಂಕ ನೀಡಬೇಕು ಎಂದು ರಾಜ್ಯ ಸರ್ಕಾರಕ್ಕೆ ಸೂಚಿಸಿ, ಅರ್ಜಿ ಇತ್ಯರ್ಥ ಮಾಡಿತ್ತು.

ಈ ಆದೇಶದ ಮರುಪರಿಶೀಲನೆ ಕೋರಿದ್ದ ಸರ್ಕಾರ, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ (ಕೆಎಸ್‌ಇಎಬಿ) ನಿಯಮಗಳಿಗೆ ತಿದ್ದುಪಡಿ ತರಲು ಈಗಾಗಲೇ ಕರಡು ಅಧಿಸೂಚನೆ (ಏ.10ರಂದು) ಯನ್ನು ವಿಶೇಷ ಗೆಜೆಟ್‌ನಲ್ಲಿ ಪ್ರಕಟಿಸಿದೆ. ಈ ಅಂಶವನ್ನು ಅರ್ಜಿದಾರರು ನ್ಯಾಯಾಲಯದ ಗಮನಕ್ಕೆ ತರದೇ ಆದೇಶ ಪಡೆದುಕೊಂಡಿದ್ದಾರೆ. ಅದೇ ರೀತಿ, ಮೂಲ ತಕರಾರು ಅರ್ಜಿ ಸಂಬಂಧ ನ್ಯಾಯಾಲಯಕ್ಕೆ ತನ್ನ ಆಕ್ಷೇಪಣೆಗಳನ್ನು ಸಲ್ಲಿಸಲು ಸರ್ಕಾರಕ್ಕೆ ಅವಕಾಶವೇ ಸಿಕ್ಕಿಲ್ಲ. ಅರ್ಜಿದಾರರು ಕರಡು ಅಧಿಸೂಚನೆಯನ್ನು ನ್ಯಾಯಾಲಯದಲ್ಲಿ ಪ್ರಶ್ನಿಸಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದೆ.

ಗ್ರಾಮೀಣ ಮತ್ತು ನಗರ ಪ್ರದೇಶದ ವಿದ್ಯಾರ್ಥಿಗಳ ನಡುವೆ ಸಮಾನ ಅವಕಾಶ ಕಲ್ಪಿಸಲು ಹಾಗೂ ಪರೀಕ್ಷಾ ಒತ್ತಡವನ್ನು ಕಡಿಮೆ ಮಾಡಲು ತೃತೀಯ ಭಾಷೆ ಮತ್ತು ಎನ್‌ಎಸ್‌ಕ್ಯೂಎಫ್ ವಿಷಯಗಳಿಗೆ ಅಂಕಗಳ ಬದಲಾಗಿ ಗ್ರೇಡ್ ನೀಡಲು ಉದ್ದೇಶಿಸಲಾಗಿದೆ. ಅಂಕದ ಬದಲು ಗ್ರೇಡ್ ನೀಡುವುದು ಸುಧಾರಣಾ ಕ್ರಮವಾಗಿದೆ. ಇದು ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರಯೋಜನಕಾರಿಯಾಗಿದೆ. ಸರ್ಕಾರದ ನಡೆಯಿಂದ ತೃತೀಯ ಭಾಷೆ ತಿರಸ್ಕಾರಕ್ಕೆ ಒಳಗಾಗುತ್ತದೆ ಎಂಬ ವಾದದಲ್ಲಿ ಹುರುಳಿಲ್ಲ. ಆದ್ದರಿಂದ ಏ.15ರಂದು ಹೊರಡಿಸಿರುವ ಆದೇಶವನ್ನು ಮರುಪರಿಶೀಲಿಸಬೇಕು ಎಂದು ಸರ್ಕಾರ ಕೋರಿತ್ತು.

## ಯುಎಸ್ ಜತೆ ಮಾತುಕತೆಗೆ ನಮ್ಮ ಯಾವುದೇ ನಿಯೋಗ ಇಸ್ಲಾಮಾಬಾದ್‌ಗೆ ಭೇಟಿ ನೀಡಿಲ್ಲ : ಇರಾನ್ ಮಾಧ್ಯಮ

ಇರಾನ್: ಅಮೆರಿಕದ ಜೊತೆಗಿನ ಮಾತುಕತೆಗಳ ಕುರಿತು ಊಹಾಪೋಹಗಳು ಹರಿದಾಡುತ್ತಿರುವುದರ ನಡುವೆ, ನಮ್ಮ ಯಾವುದೇ ನಿಯೋಗ ಇಲ್ಲಿಯವರೆಗೆ ಇಸ್ಲಾಮಾಬಾದ್‌ಗೆ ಭೇಟಿ ನೀಡಿಲ್ಲ ಎಂದು ಇರಾನ್ ಮಾಧ್ಯಮ ತಿಳಿಸಿದೆ. ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಕದನ ವಿರಾಮ ಇಂದು ಸಂಜೆ ಕೊನೆಗೊಳ್ಳಲಿದ್ದು, ಮುಂದೇನಾಗಲಿದೆ ಎಂಬ ಕುತೂಹಲ ಮೂಡಿಸಿದೆ.

ಇನ್ನೊಂದೆಡೆ, ಜಾಗತಿಕ ಮಾರುಕಟ್ಟೆಗಳನ್ನು ಬೆಚ್ಚಿಬೀಳಿಸಿರುವ ಯುದ್ಧವನ್ನು ಕೊನೆಗೊಳಿಸುವ ಕುರಿತು ಎರಡನೇ ಸುತ್ತಿನ ಮಾತುಕತೆಗೆ ಇಸ್ಲಾಮಾಬಾದ್ಗೆ ತೆರಳಲು ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಸಿದ್ಧರಿರುವುದಾಗಿ ಶ್ವೇತಭವನ ಪ್ರಕಟಿಸಿದೆ.

ಎರಡು ವಾರಗಳ ಹಿಂದೆ ಪಾಕ್‌ನಲ್ಲಿ ನಡೆದ ಮಾತುಕತೆಗೆ ನಿಯೋಗಗಳ ನೇತೃತ್ವ ವಹಿಸಿದ್ದ ಇರಾನ್‌ನ ಸಂಸತ್ ಸ್ಪೀಕರ್ ಮೊಹಮ್ಮದ್ ಬಘರ್ ಗಾಲಿಬಾಫ್ ಅವರು ಪ್ರತಿಕ್ರಿಯಿಸಿ, ದಿಗ್ಬಂಧನ ಹೇರುವ ಮತ್ತು ಕದನ ವಿರಾಮ ಉಲ್ಲಂಘಿಸುವ ಮೂಲಕ ಟ್ರಂಪ್ ತಮಗೆ ಸೂಕ್ತ ಎಂದು ತೋರುವ ಹೊಸ ಹಗೆತನವನ್ನು ಸಮರ್ಥಿಸಲು ಬಯಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಎಕ್ಸ್ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಹಗೆತನದ ನೆರಳಿನ ಮಾತುಕತೆಯನ್ನು ನಾವು ಒಪ್ಪುವುದಿಲ್ಲ. ಕಳೆದೆರಡು ವಾರದಲ್ಲಿ ಅವರು ಯುದ್ಧ ಭೂಮಿಯಲ್ಲಿ ಹೊಸ ಆಟ ತೋರಿಸಲು ಸಿದ್ಧತೆ ನಡೆಸುತ್ತಿರುವುದಾಗಿ ಆರೋಪಿಸಿದ್ದಾರೆ.

ಇದೇ ಸಂದರ್ಭದಲ್ಲಿ, ಹಾರ್ಮುಜ್ ಜಲಸಂಧಿಯಲ್ಲಿ ಅನುಮತಿ ಇಲ್ಲದೆ ಹಾದುಹೋಗಲು ಪ್ರಯತ್ನಿಸುವ ಯಾವುದೇ ಹಡಗನ್ನು ನಾವು ಟಾರ್ಗೆಟ್ ಮಾಡುವುದಾಗಿ ಇರಾನ್‌ನ ಕ್ರಾಂತಿಕಾರಿ ಗಾರ್ಡ್ ಎಚ್ಚರಿಕೆ ನೀಡಿದೆ.

ಇತ್ತೀಚಿಗೆ ಟ್ರಂಪ್, ಸ್ಟೀವ್ ವಿಟ್ಕಾಫ್ ಮತ್ತು ಜೇರೆಡ್ ಕುಶ್ನರ್ ಸೇರಿದಂತೆ ಅಮೆರಿಕದ ಪ್ರತಿನಿಧಿಗಳು ಇರಾನ್ ಜೊತೆ ಕದನ ವಿರಾಮ ಮಾತುಕತೆ ನಡೆಸಲು ಪಾಕಿಸ್ತಾನಕ್ಕೆ ಪ್ರಯಾಣಿಸಲಿದ್ದಾರೆ ಎಂದು ತಿಳಿಸಿದ್ದರು. ಈ ಮೂಲಕ ಇರಾನ್ ಮತ್ತು ಅಮೆರಿಕದ ನಡುವೆ ಎರಡನೇ ಸುತ್ತಿನ ಮಾತುಕತೆ ನಡೆಯಲಿದೆ ಎಂಬುದನ್ನು ಅವರು ದೃಢಪಡಿಸಿದ್ದರು.

# ಸರಕಾರ, ಶಿಕ್ಷಣ ಸಚಿವರಿಗೆ ಮುಖಭಂಗ: ಎನ್.ರವಿಕುಮಾರ್

ಬೆಂಗಳೂರು: ಹಿಂದಿ ಭಾಷೆಗೆ ಅಂಕ ನೀಡಬೇಕೆಂದು ರಾಜ್ಯ ಹೈಕೋರ್ಟ್ ತೀರ್ಪು ಕೊಟ್ಟಿದ್ದು, ಇದರಿಂದ ರಾಜ್ಯ ಸರಕಾರ, ಶಿಕ್ಷಣ ಸಚಿವರಿಗೆ ಹಾಗೂ ಶಿಕ್ಷಣ ಇಲಾಖೆಗೆ ದೊಡ್ಡ ಮುಖಭಂಗ ಆಗಿದೆ ಎಂದು ವಿಧಾನಪರಿಷತ್ ವಿಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಅವರು



ವಿಶ್ಲೇಷಿಸಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಶಿಕ್ಷಣಕ್ಕೆ ಸಂಬಂಧಿಸಿ ಹುಚ್ಚು ದೊರೆಯ ರೀತಿ ನಿರ್ಧಾರ ಮಾಡಲಾಗುತ್ತಿತ್ತು. ಸುಮಾರು ಒಂದು ತಿಂಗಳ ಹಿಂದೆ ಹಿಂದಿ ಪರೀಕ್ಷೆ ಬಗ್ಗೆ ಕರ್ನಾಟಕ ಸರಕಾರ ಒಂದು ನಿರ್ಧಾರ ಮಾಡಿತ್ತು. ಹಿಂದಿಯಲ್ಲಿ ಉತ್ತೀರ್ಣ ಅಥವಾ ಅನುತ್ತೀರ್ಣ ಆದರೂ ಅದನ್ನು ಗಂಭೀರವಾಗಿ ಪರಿಗಣಿಸುವುದಿಲ್ಲ ಎಂದು ತಿಳಿಸಲಾಗಿತ್ತು. ವಿದ್ಯಾರ್ಥಿಗಳು ಪರೀಕ್ಷೆ ಬರೆಯಬಹುದು ಅಥವಾ ಬರೆಯದೇ ಇರಬಹುದೆಂದು ತಿಳಿಸಿದ್ದರು. ಅಂಕ ಹಾಕುವುದಿಲ್ಲ; ಗ್ರೇಡಿಂಗ್ ನೀಡಲು ಸೂಚಿಸಿದ್ದೇವೆ ಎಂದು ಶಿಕ್ಷಣ ಸಚಿವರು ಹೇಳಿಕೆ ಕೊಟ್ಟಿದ್ದರು ಎಂದರು.

ಗಂಭೀರವಾಗಿ ಸಿದ್ಧತೆ ಮಾಡಿದ್ದ ವಿದ್ಯಾರ್ಥಿಗಳು ಮತ್ತು ಪೋಷಕರು ಪರೀಕ್ಷೆ ಬರೆಯಬೇಕೆಂದು ಅಭಿಪ್ರಾಯ ಪಟ್ಟಿದ್ದರು. ಆದರೆ, ನಾವು ಮೊದಲನೆಯದು ಕನ್ನಡ, ಎರಡನೆಯದು ಇಂಗ್ಲಿಷ್ ಪರಿಗಣಿಸಿದ್ದು, ಮೂರನೆಯದಾದ ಹಿಂದಿಯನ್ನು ಗಂಭೀರವಾಗಿ ನಾವು ಪರಿಗಣಿಸುವುದಿಲ್ಲ ಎಂದು ಉತ್ತರ ನೀಡಿದ್ದರು ಎಂದು ಗಮನ ಸೆಳೆದರು.

ಇದನ್ನು ಕೋರ್ಟಿನಲ್ಲಿ ಅನೇಕ ಜನರು ಪ್ರಶ್ನಿಸಿದ್ದರು. ಇವತ್ತು ತೀರ್ಪು ಬಂದಿದೆ. ವಿದ್ಯಾರ್ಥಿಗಳು ಗಂಭೀರವಾಗಿ ಓದಿರುತ್ತಾರೆ; ಅಧ್ಯಯನ ಮಾಡಿರುತ್ತಾರೆ. ಅವರಿಗೆ ಅಪಮಾನ ಮಾಡಬಾರದು. ಆದ್ದರಿಂದ ಗ್ರೇಡಿಂಗ್ ಬದಲು ಅಂಕ ನೀಡಬೇಕೆಂದು ಕೋರ್ಟ್ ತಿಳಿಸಿದೆ. ಸರಕಾರದ ನಿರ್ಧಾರವನ್ನು ಕಡೆಗಣಿಸಿ, ವಿರೋಧಿಸಿ ಹೈಕೋರ್ಟ್ ತೀರ್ಪು ಕೊಟ್ಟಿದೆ ಎಂದು ವಿವರಿಸಿದರು.

ಸರಕಾರದ ಅಪ್ರಬುದ್ಧ ನಿರ್ಧಾರವನ್ನು ಹೈಕೋರ್ಟ್ ವಿರೋಧಿಸಿದೆ. ಹೈಕೋರ್ಟಿನ ಈ ನಿರ್ಧಾರವನ್ನು ಬಿಜೆಪಿ ಸ್ವಾಗತಿಸುತ್ತದೆ. ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಇದರಿಂದ ಬಹಳಷ್ಟು ಸಂತಸವಾಗಿದೆ. ಇಂಥ ಅಪ್ರಬುದ್ಧ ನಿರ್ಧಾರ ಮಾಡುವುದನ್ನು ಸರಕಾರ ಈಗಲಾದರೂ ಕೈಬಿಡಬೇಕೆಂದು ಅವರು ಆಗ್ರಹಿಸಿದರು.

# ಇಡಿ ದಾಳಿ: ಕೇಂದ್ರ ಸರ್ಕಾರ ಕಾಂಗ್ರೆಸ್‌ನವರನ್ನು ಗುರಿಯಾಗಿಸಿದೆ: ಸಿಎಂ ಸಿದ್ದರಾಮಯ್ಯ

**ಚಾಮರಾಜನಗರ (ಗುಂಡ್ಲು ಪೇಟೆ) :** ಕೇಂದ್ರ ಸರ್ಕಾರ ಕಾಂಗ್ರೆಸ್ ನವರನ್ನು ಗುರಿಯಾಗಿಸಿ ದಾಳಿ ಮಾಡುತ್ತಿದ್ದು ಬಿಜೆಪಿಯವರ ಮೇಲೆ ದಾಳಿ ಆಗುತ್ತಿಲ್ಲ ಎಂದು ಶಾಸಕ ಹ್ಯಾರೀಸ್ ಅವರ ಪುತ್ರ ನಲಪಾಡ್ ಅವರ ಮನೆ ಮೇಲೆ ಇಡಿ ದಾಳಿಯಾಗಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದರು.

ಹೆಲಿಪ್ಯಾಡ್ ನಲ್ಲಿ ಮಾತನಾಡಿದ ಅವರು, ಮೂಢನಂಬಿಕೆಗಳಲ್ಲಿ ನನಗೆ ನಂಬಿಕೆಯಿಲ್ಲ. ಹಾಗಾಗಿ ಚಾಮರಾಜನಗರಕ್ಕೆ ಸಾಕಷ್ಟು ಬಾರಿ ಭೇಟಿ ನೀಡುತ್ತಿದ್ದೇನೆ. ಇಲ್ಲಿಗೆ ಬಂದರೆ ಕುರ್ಚಿ ಗಟ್ಟಿಯಾಗುತ್ತದೆ ಎಂದು ಪ್ರಾಸಂಗಿಕವಾಗಿ ಹೇಳಿದ್ದೆ ಎಂದು ಮಾಧ್ಯಮದರ ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

**ಗ್ಯಾರಂಟಿಗಳು ಬಡವರ ಕಾರ್ಯಕ್ರಮಗಳೆಂದು ಗೊತ್ತಾಗಿದೆ**

ಗ್ಯಾರಂಟಿ ಯೋಜನೆಗಳನ್ನು ವಿರೋಧಿಸುತ್ತಿದ್ದವರೇ ಅದನ್ನು ಘೋಷಣೆ ಮಾಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ವಿರೋಧಿಸುತ್ತಿದ್ದವರಿಗೆ ಗ್ಯಾರಂಟಿಗಳು ಬಡವರ ಕಾರ್ಯಕ್ರಮಗಳೆಂದು ಗೊತ್ತಾಗಿದೆ ಎಂದರು.

**ಎಲ್ಲರಿಗೂ ಪರಿಹಾರ ಕೊಡುತ್ತೇವೆ**

ಸಿಎಂ ತಮ್ಮ ಕ್ಷೇತ್ರದಲ್ಲಿ ಸತ್ತವರಿಗೆ ಮಾತ್ರ ಪರಿಹಾರ ನೀಡುತ್ತಿರುವ ಬಗ್ಗೆ ಜೆಡಿಎಸ್ ಶಾಸಕ ಶರಣಗೌಡ ಚಂದಾಪುರ ಪತ್ರ ಬರೆದಿರುವ ಬಗ್ಗೆ ಮಾತನಾಡಿ ಎಲ್ಲರಿಗೂ ನೀಡಲಾಗುತ್ತಿದೆ, ನಮ್ಮ ಗಮನಕ್ಕೆ ಬಂದರೆ ಪರಿಹಾರ ನೀಡುತ್ತೇವೆ. ಶಾಸಕರು ಕೇಳಿದರೂ ಖಂಡಿತ ಕೊಡುತ್ತೇವೆ ಎಂದರು.

**ಕ್ಷೇತ್ರ ಮರು ವಿಂಗಡಣೆಗೆ ವಿರೋಧವೇ ಹೊರತು**



**ಮಹಿಳಾ ಮೀಸಲಾತಿಗೆ ಅಲ್ಲ**

ಬಿಜೆಪಿಯವರೇ ಮಹಿಳಾ ಮೀಸಲಾತಿ ವಿರೋಧಿಗಳು. ರಾಜೀವ್ ಗಾಂಧಿ ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಸಂವಿಧಾನಕ್ಕೆ 73, 74 ನೇ ತಿದ್ದುಪಡಿಗಳನ್ನು ತಂದು ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಮೀಸಲಾತಿ ತಂದಿದ್ದು ಕಾಂಗ್ರೆಸ್. ಅದನ್ನು ರಾಜ್ಯಸಭೆಯಲ್ಲಿ ಕೆಡವಿದವರು ಎನ್.ಡಿ.ಎ ಈಗ ರಾಜಕೀಯಕ್ಕಾಗಿ ಕ್ಷೇತ್ರ ಮರುವಿಂಗಡನೆ ಸೇರಿಸಿ ಮಸೂದೆ ಮಂಡಿಸಿದ್ದಾರೆ . ನಮ್ಮದು ಕ್ಷೇತ್ರ ಮರು ವಿಂಗಡಣೆಗೆ ವಿರೋಧವೇ ಹೊರತು ಮಹಿಳಾ ಮೀಸಲಾತಿಗೆ ಅಲ್ಲ ಎಂದರು.

ತೃತೀಯ ಭಾಷೆಗೆ ಅಂಕ : ನ್ಯಾಯಾಲಯದ ನಿರ್ದೇಶನವನ್ನು ಪಾಲಿಸಲಾಗುವುದು

ತೃತೀಯ ಭಾಷೆಗೆ ಹಿಂದಿನ ವರ್ಷಗಳಂತೆಯೇ ಮೌಲ್ಯಮಾಪನ ಮಾಡಿ ಅಂಕಗಳನ್ನು ನೀಡಬೇಕೆಂದು ಉಚ್ಚ ನ್ಯಾಯಾಲಯ ಹೇಳಿದ್ದು, ಮುಂದಿನ ತೀರ್ಮಾನ ಮಾಡಲು ಸೂಚಿಸಿದ್ದು, ನ್ಯಾಯಾಲಯದ ನಿರ್ದೇಶನವನ್ನು ಪಾಲಿಸಲಾಗುವುದು ಎಂದರು.

ಆಮ್ಲಜನಕ ದುರಂತ: ಅಧಿಕಾರಿಗಳೊಂದಿಗೆ ಚರ್ಚೆ

ಆಮ್ಲಜನಕ ದುರಂತದಲ್ಲಿ ತಪ್ಪಿತಸ್ಥರ ಬಗ್ಗೆ ಕ್ರಮ ಕೈಗೊಂಡಿಲ್ಲ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಈ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು ಎಂದರು.

**ಅಲ್ಪಸಂಖ್ಯಾತರ ನಾಯಕರ ಉಪಸ್ಥಿತಿಯಲ್ಲಿ ತೀರ್ಮಾನವಾಗಿತ್ತು**


ಅಲ್ಪಸಂಖ್ಯಾತರನ್ನು ಕಡೆಗಣಿಸುತ್ತಿರುವ ಬಗ್ಗೆ ಅಲ್ಪಸಂಖ್ಯಾತರು ಹೈಕಮಾಂಡ್ ಅವರಿಗೆ ಪತ್ರ ಬರೆದಿರುವ ಬಗ್ಗೆ ಮಾತನಾಡಿ ಪಕ್ಷದ ವರಿಷ್ಠರು ತೀರ್ಮಾನ ಕೈಗೊಳ್ಳುವಾಗ ಅಲ್ಪಸಂಖ್ಯಾತರ ನಾಯಕರು ಉಪಸ್ಥಿತರಿದ್ದರು. ಅವರೆದುರೇ ತೀರ್ಮಾನವಾಗಿತ್ತು, ನಂತರ ಅವರು ವಿರೋಧ ಮಾಡಿದರು ಎಂದರು.

**ಕಾಂಗ್ರೆಸ್ ಗೆಲ್ಲಲಿದೆ**

ದಾವಣಗೆರೆ ಮತ್ತು ಬಾಗಲಕೋಟೆ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ಮುಖ್ಯಮಂತ್ರಿಗಳು ವಿಶ್ವಾಸ ವ್ಯಕ್ತಪಡಿಸಿದರು.

# "ಬಿಜೆಪಿ ಮಾಜಿ ಅಧ್ಯಕ್ಷ ಆರ್ ಸಿ ಹರೀಶ್ ಅವರಿಗೆ ಹುಟ್ಟು ಹಬ್ಬದ ಶುಭ ಹಾರೈಸಿದ– ಡಾ ಸಂಗನ ಬಸಪ್ಪ ಬಿರಾದಾರ್"

**ಪೀಣ್ಯ ದಾಸರಹಳ್ಳಿ :** ಸರಳ ಸಜ್ಜನಿಕೆ ವ್ಯಕ್ತಿತ್ವದ ಹೊಂದಿದ ಮತ್ತು ರಾಜಕಾರಣದಲ್ಲಿ ನಿಷ್ಠೆ ಪ್ರಾಮಾಣಿಕತೆ ಪ್ರಬುದ್ಧತೆಯುಳ ವ್ಯಕ್ತಿ ಹಾಗೂ ಪಕ್ಷದ ಶಿಸ್ತಿನ ಮನುಷ್ಯ ಯಾರಾದರೂ ಇದ್ದರೆ ಅವರೆ ಬಿಜೆಪಿ ಮಾಜಿ ಅಧ್ಯಕ್ಷ



ಆರ್ ಸಿ ಹರೀಶ್ ಎಂದರೆ ತಪ್ಪಾಗಲಾರದು ಎಂದು ಜನ ಪ್ರಿಯ ಸಮಾಜ ಸೇವಕ ಚಿಂತಕರು ವಾಗ್ಮಿಗಳು ಬುದ್ಧಿಜೀವಿಗಳು ರಾಷ್ಟ್ರೀಯ ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಡಾ ಸಂಗನ ಬಸಪ್ಪ ಬಿರಾದಾರ್ ಹೇಳಿದರು. ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಜಿಕೆಡಬ್ಲ್ಯೂ ಲೇಔಟ್ ಸರ್ಕಲ್ ನಲ್ಲಿ ಮಾಜಿ ಬಿಜೆಪಿ ಅಧ್ಯಕ್ಷ ಆರ್ ಸಿ ಹರೀಶ್ ಅವರ ಮತ್ತು ಕುಟುಂಬಸ್ಥರ ನೇತೃತ್ವದಲ್ಲಿ ಶ್ರೀರಾಮ ನವಮಿ ಮತ್ತು ಬಸವ ಜಯಂತಿ ಮತ್ತು ಮಾಜಿ ಅಧ್ಯಕ್ಷ ಆರ್ ಸಿ ಹರೀಶ್ ಅವರ ಹುಟ್ಟು ಹಬ್ಬ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀರಾಮನ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಈ ಸಂದರ್ಭದಲ್ಲಿ ಮಾಜಿ ಪಾಲಿಕೆ ಸದಸ್ಯ ಹಾಗೂ ನಿಸರ್ಗ ಶಿಕ್ಷಣ ಸಂಸ್ಥೆಯ ಫೌಂಡರ್ ಕಾರ್ಯದರ್ಶಿ ಹೆಚ್ ಎನ್ ಗಂಗಾಧರ್, ಬಿಜೆಪಿ ಮುಖಂಡರಾದ ದಿನೇಶ್, ಕಂಪ್ಯೂಟರ್ ವಿಜಯ ಕುಮಾರ್, ರಾಧಾಕೃಷ್ಣ ಶೆಟ್ಟಿ, ಬೆಟ್ಟಪ್ಪ, ಮನೋಹನ, ಸುರೇಶ್ ದೊಡ್ಡಮನಿ, ಲಕ್ಷ್ಮಣ ಸೇರಿದಂತೆ ಜಿಕೆಡಬ್ಲ್ಯೂ ಲೇಔಟಿನ ಸಮಸ್ತ ನಾಗರಿಕರು ಮಹಿಳೆಯರು ಮುಂತಾದವರು ಇದ್ದರು.

# ಶಿಸ್ತುಕ್ರಮಕ್ಕೂ, ಟಾರ್ಗೆಟ್ ಮಾಡುವುದಕ್ಕೂ ವ್ಯತ್ಯಾಸ ಇದೆ: ದಿನೇಶ್ ಗುಂಡೂರಾವ್

**ಬೆಂಗಳೂರು :** ಶಿಸ್ತುಕ್ರಮ ತೆಗೆದುಕೊಳ್ಳುವುದಕ್ಕೂ ಟಾರ್ಗೆಟ್ ಮಾಡೋದಕ್ಕೂ ವ್ಯತ್ಯಾಸ ಇದೆ. ಸುಮ್ಮನೆ ಟಾರ್ಗೆಟ್ ಮಾಡುತ್ತಿದ್ದಾರೆ ಎಂದು ಹೇಳುತ್ತಿದ್ದಾರೆ ಅಷ್ಟೆ. ಅದನ್ನು ಸಮುದಾಯಕ್ಕೆ ಜೋಡಿಸುವುದು ಸರಿಯಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ದಾವಣಗೆರೆ ರಾಜಕೀಯದ ಕುರಿತು ಮಾತನಾಡಿ ಅವರು, ಇದು ಪಕ್ಷದ ವಿಚಾರವೇ ಹೊರತು ಪಬ್ಲಿಕ್ ವಿಚಾರ ಅಲ್ಲ. ಅನೇಕ ಸ್ಥಾನಮಾನಗಳು ಮುಸ್ಲೀಂ ಸಮುದಾಯಕ್ಕೆ ಸಿಕ್ಕಿದೆ. ಯಾರದೋ ಬಳಿ ಹೇಳಿಸಿಕೊಂಡು ಮುಸ್ಲೀಮರಿಗೆ ಪಕ್ಷ ಸ್ಥಾನ ಮಾನ ನೀಡಿಲ್ಲ. ಎಲ್ಲರಿಗೂ ಸಮಾನ ಅವಕಾಶ ಸಿಗಬೇಕು ಅನ್ನೋದು ಉದ್ದೇಶ. ಕಾಂಗ್ರೆಸ್ ಮಾತ್ರ ಎಲ್ಲ ಜಾತಿ, ಧರ್ಮದವರಿಗೆ ಅವಕಾಶ ನೀಡುವ ಪಕ್ಷ. ಅಲ್ಪಸಂಖ್ಯಾತರಿಗೆ ಸಮಾನ ಅವಕಾಶ ಸಿಗಬೇಕು ಅನ್ನೋದು ಕಾಂಗ್ರೆಸ್ ಉದ್ದೇಶ.

ಟಿಕೇಟ್ ನೀಡಿದ ವಿಚಾರ ಪಕ್ಷದ ಚೌಕಟ್ಟಿನ ತೀರ್ಮಾನ. ಅಬ್ದುಲ್ ಜಬ್ಬರ್ ಅವರನ್ನು ಅವಮಾನತ್ತಿನಲ್ಲಿಟ್ಟಿದ್ದಾರೆ ಅಷ್ಟೇ. ಮತ್ತೆ ವಾಪಸ್ ತೆಗೆದುಕೊಳ್ಳಲು ಅವಕಾಶ ಇದೆ. ನಸೀರ್ ಅಹಮದ್ ಅವರನ್ನು ನಾವೇ ಎಂಎಲ್ ಸಿ ಮಾಡಿದ್ದು ಸಿಎಂ ಅವರೇ ರಾಜಕೀಯ ಕಾರ್ಯದರ್ಶಿಯನ್ನಾಗಿ ಮಾಡಿದ್ದು. ಈಗ ಸಿಎಂ ಈ ನಿರ್ಧಾರ ತೆಗೆದುಕೊಂಡಿದ್ದಾರೆ.

ಅವರಿಗೆ ಮೂರು ಮೂರು ಬಾರಿ ಎಂಎಲ್ಸಿಯಾಗುವ ಅವಕಾಶ ಕಾಂಗ್ರೆಸ್ ಕೊಟ್ಟಿದೆ. ಹಾಗಾದರೆ ಅವಕಾಶ ನೀಡೋದು ಒಲ್ಯೆಕೆನಾ ಎಂದು ಪ್ರಶ್ನಿಸಿದ್ದಾರೆ.

**ಸಮುದಾಯದಲ್ಲೇ ಗುಂಪುಗಳು ಇವೆ ಎನ್ನುವ ವಿಚಾರ....**

ಗುಂಪುಗಳು ಎಲ್ಲಿಲ್ಲ? ವೀರಶೈವ, ಒಕ್ಕಲಿಗ ಸೇರಿದಂತೆ ಎಲ್ಲ ಸಮುದಾಯದಲ್ಲೂ ಇದೆ. ರಾಜಕೀಯದಲ್ಲಿ ಎಲ್ಲವೂ ಇರಲಿದೆ. ಯತ್ನಾಳ್ ಅವರು ಯಾರ ವಿರುದ್ಧ ಆರೋಪ ಮಾಡಿದ್ದರು? ಅವರದೇ ಸಮುದಾಯದ ನಾಯಕರ ಮೇಲೆ ಅಲ್ಲವೇ? ಕಾಂಗ್ರೆಸ್ ಮುಸ್ಲಿಂ, ಕ್ರಿಶ್ಚಿಯನ್ ಪರ ಅಲ್ಪಸಂಖ್ಯಾತರ ಪರ ಇದ್ದೇವೆ.

ಕೇಂದ್ರದ ಬಿಜೆಪಿ ಮುಸ್ಲಿಂರನ್ನು ಹೇಗೆಲ್ಲ ನಡೆಸಿಕೊಳ್ಳುತ್ತಿದೆ ಅನ್ನೋದು ಎಲ್ಲರಿಗೂ ಗೊತ್ತಿದೆ. ಅವರಿಗೆ ಎಷ್ಟು ಸ್ಥಾನಮಾನ ನೀಡಿದೆ, ಹಿಂದಿನ ಸರ್ಕಾರಗಳು ಮುಸ್ಲೀಂ ಸಮುದಾಯವನ್ನು ಹೇಗೆ ನಡೆಸಿಕೊಂಡಿದೆ ಎನ್ನುವುದು ಎಲ್ಲರಿಗೂ ಗೊತ್ತಿದೆ. ಒಬ್ಬರ ಮೇಲೆ ತೆಗೆದುಕೊಂಡ ಶಿಸ್ತುಕ್ರಮವನ್ನು ಇಡೀ ಸಮುದಾಯದ ವಿರುದ್ಧ ಅಂತಾ ಯಾಕೆ ಅಂದುಕೊಳ್ತೀರಾ?

ಜಮೀರ್ ಅಹಮ್ಮದ್ ಮುಂಚೂಣಿ ನಾಯಕರು, ಕೇರಳದಲ್ಲಿ ಸ್ಟಾರ್ ಕ್ಯಾಂಪನೇರ್ ಆಗಿದ್ದಾರೆ.


UNITY Small Finance Bank

**ಯೂನಿಟಿ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್**
**ಸಿಐಎನ್: U65990DL2021PLC385568**
**ನೋಂದಾಯಿತ ಕಚೇರಿ: 40, ಬಸಂತ್ ಲೋಕ್, ವಸಂತ ವಿಹಾರ್, ನವದೆಹಲಿ-110057,**
**ದೂರವಾಣಿ: 91 22 42159000/9237, ವೆಬ್ಸೈಟ್: www.theunitybank.com**

**ಸಾರ್ವಜನಿಕ ಸೂಚನೆ**

ಆತ್ಮೀಯ ಯೂನಿಟಿ ಬ್ಯಾಂಕ್ ಗ್ರಾಹಕರೇ,

- ಉತ್ತರ ಕನ್ನಡ ಜಿಲ್ಲೆ 581401.ಕರ್ನಾಟಕದ ಸಿ.ಪಿ.ಬಜಾರ್ನಲ್ಲಿರುವ ನಮ್ಮ ಶಾಖೆಯನ್ನು ದಿನಾಂಕ 22-06-2026 ರಂದು ಈ ಕೆಳಗಿನ ವಿಳಾಸದಲ್ಲಿರುವ ಹೊಸ ಆವರಣಕ್ಕೆ ಸ್ಥಳಾಂತರಿಸಲಾಗುವುದು ಎಂದು ನಿಮಗೆ ತಿಳಿಸಲು ಇಚ್ಛಿಸುತ್ತೇವೆ:

**ಅಂಗಡಿ ಸಂಖ್ಯೆ-ಸಿ-3, ಮೊದಲ ಮಹಡಿ, ವೈವಿದ್ಯಾ ಅನುಗ್ರಹ ವಾಣಿಜ್ಯ ಸಂಕೀರ್ಣ, ಸಿಪಿ ಬಜಾರ್ ರಸ್ತೆ, ಎದುರು. ಕೆಡಿಸಿಸಿ ಬ್ಯಾಂಕ್, ಸಿರಸಿ, ಉತ್ತರ ಕನ್ನಡ, ಪಿನ್: 581401 ಕರ್ನಾಟಕ**

ಮೇಲಿನ ನಿಯಮಗಳಿಗೆ ಅನುಸಾರವಾಗಿ, ಗ್ರಾಹಕರು 22-06-2026 ರಿಂದ ಜಾರಿಗೆ ಬರುವಂತೆ ಹೊಸ ಲಾಕರ್ಗಳು ಮತ್ತು ಇತರ ಎಲ್ಲಾ ಬ್ಯಾಂಕಿಂಗ್ ಚಟುವಟಿಕೆಗಳ ಅಗತ್ಯವಿದ್ದರೆ ಹೊಸ ಆವರಣಕ್ಕೆ ಭೇಟಿ ನೀಡಬೇಕೆಂದು ವಿನಂತಿಸಲಾಗಿದೆ.

ಯಾವುದೇ ಪ್ರಶ್ನೆ/ಸ್ಪಷ್ಟೀಕರಣಗಳಿದ್ದಲ್ಲಿ ಗ್ರಾಹಕರು ಶಾಖೆಯನ್ನು ಸಂಪರ್ಕಿಸಲು ಅಥವಾ **sirsibr@unitybank.co.in** ಗೆ ಇಮೇಲ್ ಮಾಡಲು ಅಥವಾ ಸಹಾಯವಾಣಿ ಸಂಖ್ಯೆ 18002091122 ಗೆ ಕರೆ ಮಾಡಲು ಸೂಚಿಸಲಾಗಿದೆ.

**ಯೂನಿಟಿ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್**
ದಿನಾಂಕ: 22.04.2026 **ಸಹಿ/-**
ಸ್ಥಳ: ಶಿರಸಿ **ಅಧಿಕೃತ ಅಧಿಕಾರಿ**



Protium

**ಪ್ರೋಟಿಯಮ್ ಫೈನಾನ್ಸ್ ಲಿಮಿಟೆಡ್**
(ಹಿಂದೆ ಗ್ರೋತ್ ಸೋರ್ಸ್ ಫೈನಾನ್ಷಿಯಲ್ ಟೆಕ್ನಾಲಜೀಸ್ ಲಿಮಿಟೆಡ್)

ನೋಂದಾಯಿತ ಮತ್ತು ಕಾರ್ಪೊರೇಟ್ ಕಚೇರಿ ವಿಳಾಸ: 7ನೇ ಮಹಡಿ, ಬ್ಲಾಕ್ ಬಿ2, ಹಂತ – I ನಿರ್ಲಾನ್ ನಾಲೆಡ್ಜ್ ಪಾರ್ಕ್, ಪಹಾಡಿ ಗ್ರಾಮ, ಪಶ್ಚಿಮ ಎಕ್ಸ್‌ಪ್ರೆಸ್ ಹೆದ್ದಾರಿಯಿಂದ ಹೊರಗೆ, ಕಾಮಾ ಇಂಡಸ್ಟ್ರಿಯಲ್ ಎಸ್ಟೇಟ್, ಗೋರೆಗಾಂವ್(ಪೂ), ಮುಂಬೈ– 400063, ಮಹಾರಾಷ್ಟ್ರ.

**ಸ್ಥಿರ ಆಸ್ತಿಗಳ ಮಾರಾಟದ ಸೂಚನೆ**

**2002ರ ಭದ್ರತಾ ಹಿತಾಸಕ್ತಿ (ಜಾರಿ) ನಿಯಮಗಳ ನಿಯಮ 8 (6) ರ ನಿಬಂಧನೆಯೊಂದಿಗೆ ಓದಲಾದ 2002 ರ ಹಣಕಾಸು ಆಸ್ತಿಗಳ ಸೆಕ್ಯುರಿಟೈಸೇಶನ್ ಮತ್ತು ಪುನರ್ನಿರ್ಮಾಣ ಮತ್ತು ಭದ್ರತಾ ಹಿತಾಸಕ್ತಿ ಜಾರಿ ಕಾಯ್ದೆಯ ಅಡಿಯಲ್ಲಿ ಸ್ಥಿರ ಆಸ್ತಿಗಳ ಮಾರಾಟಕ್ಕಾಗಿ ಇ–ಹರಾಜು ಮಾರಾಟ ಸೂಚನೆ.**

ಸಾರ್ವಜನಿಕರಿಗೆ ಮತ್ತು ವಿಶೇಷವಾಗಿ ಸಾಲಗಾರರು / ಸಹ–ಸಾಲಗಾರರು / ಅಡಮಾನದಾರರು (ಗಳು) ಗೆ ಸೂಚಿಸುವುದೇನೆಂದರೆ, ಕೆಳಗೆ ವಿವರಿಸಿದ ಸ್ಥಿರಾಸ್ತಿಗಳನ್ನು ಸೆಕ್ಯೂರ್ಡ್ ಕ್ರೆಡಿಟ್‌ದಾರರಿಗೆ ಅಡಮಾನ ಇಡಲಾಗಿದೆ, ಇವುಗಳ **ಸಾಂಕೇತಿಕ ಸ್ವಾಧೀನವನ್ನು ಪ್ರೋಟಿಯಮ್ ಫೈನಾನ್ಸ್ ಲಿಮಿಟೆಡ್‌ನ** ಅಧಿಕೃತ ಅಧಿಕಾರಿ ತೆಗೆದುಕೊಂಡಿದ್ದಾರೆ. ಇದನ್ನು ಇಲ್ಲಿ ನಂತರ **ಪ್ರೋಟಿಯಮ್ ಫೈನಾನ್ಸ್ ಲಿಮಿಟೆಡ್** ಎಂದು ಉಲ್ಲೇಖಿಸಲಾಗುತ್ತದೆ. ಸೆಕ್ಯೂರ್ಡ್ ಸ್ವತ್ತುಗಳನ್ನು **"ಎಲ್ಲಿ ಇದೆಯೋ ಹಾಗೆಯೇ", "ಏನಿದೆಯೋ ಹಾಗೆಯೇ"** ಮತ್ತು **"ಏನೇ ಇದೆಯೋ ಹಾಗೆಯೇ"** ಆಧಾರದ ಮೇಲೆ ಇ–ಹರಾಜಿನ ಮೂಲಕ ಮಾರಾಟ ಮಾಡಲಾಗುತ್ತದೆ.

ನಾವು ಸಾರ್ವಜನಿಕ ಇ–ಹರಾಜನ್ನು ವೆಬ್‌ಸೈಟ್ **http://bankauctions.in/** ಮೂಲಕ ನಡೆಸಲಾಗುವುದು ಎಂದು ಸಾರ್ವಜನಿಕರಿಗೆ ತಿಳಿಸಲಾಗಿದೆ.

| | |
|---|---|
| 1. ಖಾತೆ ಸಂಖ್ಯೆ<br>2. ಸಾಲಗಾರ/ ಸಹ–ಸಾಲಗಾರ/ ಅಡಮಾನದಾರರ ಹೆಸರು | 1. **GS003LAP2424830**<br>**(ಎ) ಶ್ರೀ ಶಿವ ಶಕ್ತಿ ಫುಡ್ಸ್ ಇದರ ಮಾಲೀಕರ ಮೂಲಕ ವೇಣುಗೋಪಾಲಗೌಡ ಕೋಳಿಹಳ್ಳಿ ಶಿವಕುಮಾರಸ್ವಾಮಿ, ಬಿನ್ ಶಿವಕುಮಾರಸ್ವಾಮಿ, (ಬಿ) ವೇಣುಗೋಪಾಲಗೌಡ ಕೋಳಿಹಳ್ಳಿ ಶಿವಕುಮಾರ್ ಬಿನ್ ಶಿವಕುಮಾರಸ್ವಾಮಿ, (ಸಿ) ಕಿಶೋರಗೌಡ ಕೆ ಎಸ್, ಬಿನ್ ಶಿವಕುಮಾರಸ್ವಾಮಿ, (ಡಿ) ಮಹಾದೇವಿ ಫ್ಯೂಯಲ್ ಸ್ಟೇಷನ್ ಇದರ ಮಾಲೀಕರ ಮೂಲಕ ವೇಣುಗೋಪಾಲಗೌಡ ಕೋಳಿಹಳ್ಳಿ ಶಿವಕುಮಾರ್ ಬಿನ್ ಶಿವಕುಮಾರಸ್ವಾಮಿ, (ಇ) ಶಿವಕುಮಾರಸ್ವಾವಿ, ಬಿನ್ ಮಂಜುಂಡಯ್ಯ,** ಎಲ್ಲರ ವಾಸ: ಶಿವಕುಮಾರಸ್ವಾಮಿ ಕೋಳಿಹಳ್ಳಿ, ಹಿರೇಹಳ್ಳಿ ಅಂಚೆ ನಾ, ಕರ್ನಾಟಕ 572104 **ಇಲ್ಲಿಯೂ ಸಹ,** ಪಾವಗಡ ತಾಲೂಕು ಎಸ್‌ವೈ ಸಂಖ್ಯೆ 13 4 ತಿರುಮಣಿ ಗ್ರಾಮ ನಾಗಲ ಮಡಿಕೆ ಹೋಬಳಿ ತುಮಕೂರು ಜಿಲ್ಲೆ ಕರ್ನಾಟಕ 572136 **ಇಲ್ಲಿಯೂ ಸಹ,** ಕೋಳಿಹಳ್ಳಿ ಹಿರೇಹಳ್ಳಿ, ಕರ್ನಾಟಕ 572104. **ಇಲ್ಲಿಯೂ ಸಹ,** ಪಾವಗಡ ತಾಲೂಕು ಎಸ್‌ವೈ ಸಂಖ್ಯೆ 13 4 ತಿರುಮಣಿ ಗ್ರಾಮ ನಾಗಲ ಮಡಿಕೆ ಹೋಬಳಿ ತುಮಕೂರು ಜಿಲ್ಲೆ ಕರ್ನಾಟಕ 572104. **ಇಲ್ಲಿಯೂ ಸಹ:** ನಂಜುಂಡಯ್ಯ, ಕೋಳಿಹಳ್ಳಿ, ಹಿರೇಹಳ್ಳಿ ಅಂಚೆ ನಾ, ಕರ್ನಾಟಕ 572104. **ಇಲ್ಲಿಯೂ ಸಹ,** ತಿರುಮಣಿ ಗ್ರಾಮ ಎಸ್‌ವೈ ಸಂಖ್ಯೆ 13 4 ನಾಗಲ ಮಡಿಕೆ ಹೋಬಳಿ ಪಾವಗಡ ತಾಲೂಕು ತುಮಕೂರು ಜಿಲ್ಲೆ ಕರ್ನಾಟಕ 572136. |
| 3. ತಗಾದೆ ಸೂಚನೆಯ ದಿನಾಂಕ | **11ನೇ ಅಕ್ಟೋಬರ್ 2025** |
| 4. U/s 13(2) ಪ್ರಕಾರ ತಗಾದೆ ಸೂಚನೆಯ ಮೊತ್ತ | **11ನೇ ಅಕ್ಟೋಬರ್ 2025 ರ ವೇಳೆಗೆ ರೂ. 79,17,941.18/– (ಎಪ್ಪತ್ತೊಂಬತ್ತು ಲಕ್ಷದ ಹದಿನೇಳು ಸಾವಿರದ ಒಂಬತ್ತು ನೂರ ನಲವತ್ತೊಂದು ಮತ್ತು ಹದಿನೆಂಟು ಪೈಸೆ ಮಾತ್ರ) ಸೆಪ್ಟೆಂಬರ್ 10,2024 ರಿಂದ 18% ರಷ್ಟು ಹೆಚ್ಚಿನ ಬಡ್ಡಿಯೊಂದಿಗೆ, ನಮ್ಮ ಸೂಚನೆಯಲ್ಲಿ ಬೇಡಿಕೆಯಂತೆ ಇತರ ಶುಲ್ಕಗಳೊಂದಿಗೆ ಪೂರ್ಣ ಮೊತ್ತವನ್ನು ಪಾವತಿಸುವವರೆಗೆ, ಈ ಸೂಚನೆಯ ದಿನಾಂಕದಿಂದ 60 ದಿನಗಳ ಶಾಸನಬದ್ಧ ಅವಧಿಯೊಳಗೆ.** |
| 5. ಸಾಂಕೇತಿಕ ಸ್ವಾಧೀನದ ದಿನಾಂಕ | **6ನೇ ಜನವರಿ 2026** |
| 6. ದಿನಾಂಕದಂದು ಮೊತ್ತ | **ಏಪ್ರಿಲ್ 16,2026 ರ ದಿನಾಂಕದಂತೆ ರೂ. 85,29,314/– (ಎಂಭತ್ತೈದು ಲಕ್ಷದ ಇಪ್ಪತ್ತೊಂಬತ್ತು ಸಾವಿರದ ಮುನ್ನೂರ ಹದಿನಾಲ್ಕು ಮಾತ್ರ)** |

**7. ಸ್ಥಿರ ಆಸ್ತಿ/ಆಸ್ತಿಗಳ ವಿವರ:** ಎಲ್ಲಾ ಭಾಗ ಮತ್ತು ವಿಭಾಗಗಳು ಸೇರಿದಂತೆ ಖಾಲಿ ನಿವೇಶನದ ಆಸ್ತಿ ಖಾತಾ ಸಂಖ್ಯೆ 396, ಪರಿವರ್ತಿತ ಭೂ ಸರ್ವೆ ಸಂಖ್ಯೆ 117/5 ರ ಒಂದು ಭಾಗಕ್ಕೆ ನಿಯೋಜಿಸಲಾಗಿದೆ, ಇ–ಸ್ವತ್ತು ಆಸ್ತಿ ಸಂಖ್ಯೆ.152500902101020037, ಅಳತೆ: ಪೂರ್ವದಿಂದ ಪಶ್ಚಿಮಕ್ಕೆ 27.432 ಮೀಟರ್ ಅಂದರೆ 90 ಅಡಿ ಮತ್ತು ಉತ್ತರದಿಂದ ದಕ್ಷಿಣಕ್ಕೆ 51.20 ಮೀಟರ್ ಅಂದರೆ 168 ಅಡಿ, ಒಟ್ಟು 1404.69 ಚದರ ಮೀಟರ್, ಇದು ತುಮಕೂರಿನ ಊರ್ಡಿಗೆರೆ ಹೋಬಳಿಯ ಕೋಳಿಹಳ್ಳಿ ಗ್ರಾಮದಲ್ಲಿ, ಹಿರೇಹಳ್ಳಿಯ ಆಡಳಿತ ವ್ಯಾಪ್ತಿಯಲ್ಲಿದೆ ಮತ್ತು ಚೆಕ್ಕುಬಂದಿ: ಪೂರ್ವಕ್ಕೆ: ಶ್ರೀ ನೀಲಕಂಠಯ್ಯ ಆಸ್ತಿ ಮತ್ತು ರಸ್ತೆಗೆ ಸೇರಿದೆ; ಪಶ್ಚಿಮಕ್ಕೆ: ಭೂ ಸರ್ವೆ ಸಂಖ್ಯೆ. 117/4 & 117/2; ಉತ್ತರಕ್ಕೆ: ಭೂ ಸರ್ವೆ ಸಂಖ್ಯೆ. 117/8; ದಕ್ಷಿಣಕ್ಕೆ: ಭೂ ಸರ್ವೆ ಸಂಖ್ಯೆ. 118.

| | |
|---|---|
| 8. ಮೀಸಲು ಬೆಲೆ | **ರೂ. 1,33,05,600/– (ಒಂದು ಕೋಟಿ ಮೂವತ್ತಮೂರು ಲಕ್ಷದ ಐದು ಸಾವಿರದ ಆರುನೂರು ಮಾತ್ರ)** |
| 9. ಮುಂಗಡ ಠೇವಣಿ ಮೊತ್ತ | **ರೂ. 13,30,560/– (ಹದಿಮೂರು ಲಕ್ಷದ ಮೂವತ್ತು ಸಾವಿರದ ಐದುನೂರ ಅರವತ್ತು)** |
| 10. ಬಿಡ್ ಹೆಚ್ಚಳ ಮೊತ್ತ (ರೂ.ಗಳಲ್ಲಿ) | **ರೂ. 5,000 ಐದು ಸಾವಿರ ರೂಪಾಯಿಗಳು ಮಾತ್ರ** |
| 11. ಇ–ಹರಾಜು ದಿನಾಂಕ ಮತ್ತು ಸಮಯ | **26–ಮೇ–26 ರಂದು ಬೆಳಿಗ್ಗೆ 11:00 ರಿಂದ ಮಧ್ಯಾಹ್ನ 2:00 ರವರೆಗೆ (ತಲಾ 5 ನಿಮಿಷಗಳ ಅನಿಯಮಿತ ವಿಸ್ತರಣೆಯೊಂದಿಗೆ)** |
| 12. ಇಎಂಡಿ ಸಲ್ಲಿಕೆ ಕೊನೆಯ ದಿನಾಂಕ | **25–ಮೇ–2026 ಸಂಜೆ 5:00 ರವರೆಗೆ.** |
| 13. ತಪಾಸಣೆ ದಿನಾಂಕ | **07–ಮೇ–2026 ರಂದು ಬೆಳಿಗ್ಗೆ 11:00 ರಿಂದ ಸಂಜೆ 5:00 ರವರೆಗೆ** |

1. ಎಲ್ಲಾ ಆಸಕ್ತ ಭಾಗವಹಿಸುವವರು/ಬಿಡ್ಡರ್‌ಗಳು ವೆಬ್‌ಸೈಟ್ **https://bankauctions-.in & https://protium.co.in/** ಗೆ ಭೇಟಿ ನೀಡಲು ವಿನಂತಿಸಲಾಗಿದೆ. ಇ–ಹರಾಜಿನ ಕುರಿತು ವಿವರಗಳು, ಸಹಾಯ, ಕಾರ್ಯವಿಧಾನ ಮತ್ತು ಆನ್‌ಲೈನ್ ತರಬೇತಿಗಾಗಿ, ಸಂಭಾವ್ಯ ಬಿಡ್‌ದಾರರು **ಶ್ರೀ ನಿತೇಶ್ ಡಿ ಪವಾರ್** ಅವರನ್ನು ಸಂಪರ್ಕಿಸಬಹುದು **ಸಂಪರ್ಕ ಸಂಖ್ಯೆ: 8142000725/ 8142000066.** ಇಮೇಲ್ ಐಡಿ: **nitesh@bankauctions.in / info@bankauctions.in**

- ನಿಯಮಗಳು ಮತ್ತು ಷರತ್ತುಗಳ ಕುರಿತು ಹೆಚ್ಚಿನ ವಿವರಗಳಿಗಾಗಿ ದಯವಿಟ್ಟು ಇ–ಹರಾಜಿನಲ್ಲಿ ಭಾಗವಹಿಸಲು **https://bankauctions.in & https://protium.co.in/** ಗೆ ಭೇಟಿ ನೀಡಿ.

**ಇದು ಭದ್ರತಾ ಹಿತಾಸಕ್ತಿ (ಜಾರಿ) ನಿಯಮಗಳ ನಿಯಮ 8(6)/ ನಿಯಮ 9 (1) ರ ಅಡಿಯಲ್ಲಿ ಶಾಸನಬದ್ಧ 30 ದಿನಗಳ ಮಾರಾಟ ಸೂಚನೆಯಾಗಿದೆ.**

**ದಿನಾಂಕ: 22.04.2026** ಸಹಿ/–, ಪ್ರೋಟಿಯಮ್ ಫೈನಾನ್ಸ್ ಲಿಮಿಟೆಡ್‌ನ ಪರವಾಗಿ
ಸ್ಥಳ: ಕರ್ನಾಟಕ ಅಧಿಕೃತ ಅಧಿಕಾರಿ


# 400 ಕ್ಕೂ ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳನ್ನು ರೈತರಿಗೆ ನೀಡಲಾಗಿದೆ– ಎನ್ ಚೆಲುವರಾಯಸ್ವಾಮಿ

ಮಂಡ್ಯ : ರೈತರ ಅಭಿವೃದ್ಧಿಗಾಗಿ ಮಂಡ್ಯ ಜಿಲ್ಲೆಗೆ ಕೃಷಿ ವಿಶ್ವವಿದ್ಯಾನಿಲಯ ತರಲಾಗಿದೆ ಜಿಲ್ಲೆಯ ರೈತರು ಕೃಷಿ ವಿಶ್ವವಿದ್ಯಾನಿಲಯದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ಹೇಳಿದರು. ಕೃಷಿ ಇಲಾಖೆಯ ವತಿಯಿಂದ ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿದ್ದ



ಹೈಟೆಕ್ ಹಾರ್ವೆಸ್ಟ್ ಹಬ್ ಮತ್ತು ಸೆಕೆಂಡರಿ ಕೃಷಿ ಯೋಜನೆಗಳ ರೈತ ಫಲಾನುಭವಿಗಳಿಗೆ ಯಂತ್ರೋಪಕರಣಗಳ ವಿತರಣಾ ಕಾರ್ಯಕ್ರಮವನ್ನು ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಕಳೆದ ಮೂರು ವರ್ಷಗಳಿಂದ 2 ಸಾವಿರ ಕೋಟಿಗೂ ಹೆಚ್ಚಿನ ಮೌಲ್ಯದ ಕೃಷಿ ಯಂತ್ರೋಪಕರಣಗಳನ್ನು ರಾಜ್ಯದ ರೈತರಿಗೆ ನೀಡಲಾಗಿದೆ ಎಂದು ಹೇಳಿದರು. ಪರಿಶಿಷ್ಟ ವರ್ಗಗಳಿಗೆ ರೂ 50 ಲಕ್ಷ ಮತ್ತು ಸಾಮಾನ್ಯ ವರ್ಗಗಳಿಗೆ ರೂ 40 ಲಕ್ಷ ಸಬ್ಸಿಡಿಯನ್ನು ದರದಲ್ಲಿ ಹೈಟೆಕ್ ಹಾರ್ವೆಸ್ಟ್ ಹಬ್ ಖರೀದಿಸಲು ನೀಡಲಾಗುತ್ತಿದೆ. ದೇಶದ ಯಾವುದೇ ರಾಜ್ಯದಲ್ಲೂ ಸದರಿ ಯೋಜನೆ ಇಲ್ಲ ಎನ್ನಬಹುದು. ಹೈಟೆಕ್ ಹಾರ್ವೆಸ್ಟ್ ಹಬ್ನ ಸಂಪೂರ್ಣ ಯೋಜನೆ ರಾಜ್ಯ ಸರ್ಕಾರದ್ದಾಗಿದೆ, ರಾಜ್ಯದಲ್ಲಿ 400 ಕ್ಕೂ ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳನ್ನು ರೈತರಿಗೆ ನೀಡಲಾಗಿದೆ ಎಂದು ಹೇಳಿದರು. ವಿವಿಧ ಬೆಳೆಗಳ ಕಟಾವಿಗೆ ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳು ಉಪಯುಕ್ತವಾಗಿದೆ.

ಕೃಷಿ ಕೆಲಸಗಳಿಗೆ ಮಾನವ ಸಂಪನ್ಮೂಲ ಕಡಿಮೆಯಾಗಿರುವ ಈ ಕಾಲಘಟ್ಟದಲ್ಲಿ ಈ ಯಂತ್ರೋಪಕರಣಗಳನ್ನು ಬಳಸಿ ಕಡಿಮೆ ವೆಚ್ಚದಲ್ಲಿ ಹೆಚ್ಚು ಪರಿಣಾಮಕಾರಿಯಾಗಿ ಬೆಳೆಗಳನ್ನು ಕಟಾವು ಮಾಡಬಹುದಾಗಿದೆ ಹಾಗೂ ರೈತನಿಗೆ ಹಣ ಉಳಿತಾಯವಾಗುತ್ತದೆ ಎಂದು ತಿಳಿಸಿದರು. ಕಳೆದ ಮೂರು ವರ್ಷಗಳಿಂದ ನಾನು ಕೃಷಿ ಸಚಿವನಾಗಿ ರೈತರಿಗೆ ಕೃಷಿ ತಾಂತ್ರಿಕ ತರಬೇತಿ ಹಾಗೂ ಯಂತ್ರೋಪಕರಣಗಳ ವಿತರಣೆ ಸೇರಿದಂತೆ ಹಲವಾರು ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದೇನೆ ಎಂದು ಹೇಳಿದರು. ನಮ್ಮ ಸರ್ಕಾರ ಬರುವ ಮೊದಲು 12 ಲಕ್ಷಕ್ಕೂ ಹೆಚ್ಚು ರೈತರು ಬೆಳೆ ವಿಮೆ ತೆಗೆದುಕೊಂಡಿದ್ದರು ಆದರೆ ಇಂದು 28 ಲಕ್ಷಕ್ಕೂ ಅಧಿಕ ರೈತರು ತಮ್ಮ ಬೆಳೆಗಳಿಗೆ ವಿಮೆಯನ್ನು ಮಾಡಿಸಿದ್ದಾರೆ. ವಿಮೆಯಲ್ಲಿ ಸರಿಸುಮಾರು 6,000 ಕೋಟಿಗೂ ಹೆಚ್ಚು ಹಣವನ್ನು ನೀಡಲಾಗಿದೆ ಎಂದರು. ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಅಧ್ಯಕ್ಷರಾದ ರಮೇಶ್ ಬಂಡಿಸಿದ್ದೇಗೌಡ ಅವರು ಮಾತನಾಡಿ ಚೆಲುವರಾಯಸ್ವಾಮಿ ಅವರು ಕೃಷಿ ಸಚಿವರಾದ ನಂತರ ರಾಜ್ಯದ ರೈತರ ಆರ್ಥಿಕ ಸ್ಥಿತಿಯನ್ನು ಹೆಚ್ಚಿಸಲು ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ.

ಮಂಡ್ಯ ಕೃಷಿ ಪ್ರಧಾನ ಜಿಲ್ಲೆಯಾಗಿದ್ದು ಜಿಲ್ಲೆಯ ರೈತರ ಅಭಿವೃದ್ಧಿಗಾಗಿ ಮಂಡ್ಯದಲ್ಲಿ ಕೃಷಿ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ ಆರ್ ನಂದಿನಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

**ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳ ವಿತರಣೆ**

ನಂತರ ಅರ್ಹ ಫಲಾನುಭವಿಗಳಿಗೆ 13 ಹೈಟೆಕ್ ಹಾರ್ವೆಸ್ಟ್ ಹಬ್ ಯಂತ್ರಗಳನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ಹಸ್ತಾಂತರಿಸಿದರು.

ಶಾಸಕ ರಮೇಶ್ ಬಂಡಿಸಿದ್ದೇಗೌಡ, ಜಿಲ್ಲಾಧಿಕಾರಿ ಡಾ.ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ ಆರ್ ನಂದಿನಿ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥರಿದ್ದರು.


**ಕ್ಲಿಕ್ಸ್ ಕ್ಯಾಪಿಟಲ್ ಸರ್ವೀಸಸ್ ಪ್ರೈ. ಲಿಮಿಟೆಡ್ (ಕ್ಲಿಕ್ಸ್)**
**ನೋಂದಾಯಿತ ಕಚೇರಿ: W2/14, 1ನೇ ಮಹಡಿ, ವೆಸ್ಟ್ ಪಟೇಲ್ ನಗರ, ದೆಹಲಿ, 110008**

**ಸ್ವಾಧೀನ ಸೂಚನೆ**
(ಅನುಬಂಧ IV) ನಿಯಮ 8(1)

ಕಂಪನಿಗಳ ಕಾಯ್ದೆ, 1956 ರ ಅಡಿಯಲ್ಲಿ ಸರಿಯಾಗಿ ಸಂಘಟಿತವಾಗಿ ನೋಂದಾಯಿಸಲ್ಪಟ್ಟ ಮತ್ತು ನೋಂದಾಯಿಸಲ್ಪಟ್ಟ ಬ್ಯಾಂಕೇತರ ಹಣಕಾಸು ಕಂಪನಿಯಾದ **ಕ್ಲಿಕ್ಸ್ ಕ್ಯಾಪಿಟಲ್ ಸರ್ವೀಸಸ್ ಪ್ರೈ. ಲಿಮಿಟೆಡ್ (ಕ್ಲಿಕ್ಸ್)** ನ ಅಧಿಕೃತ ಅಧಿಕಾರಿಯು, W2/14, 1ನೇ ಮಹಡಿ, ಪಶ್ಚಿಮ ಪಟೇಲ್ ನಗರ, ದೆಹಲಿ, 11000 ಇಲ್ಲಿ ತನ್ನ ನೋಂದಾಯಿತ ಕಚೇರಿಯನ್ನು ಹೊಂದಿದ್ದು, ಹಣಕಾಸು ಆಸ್ತಿಗಳ ಸೆಕ್ಯುರಿಟೈಸೇಶನ್ ಮತ್ತು ಪುನರ್ನಿರ್ಮಾಣ ಮತ್ತು ಭದ್ರತಾ ಆಸಕ್ತಿ ಜಾರಿ ಕಾಯ್ದೆ, 2002 (54 OF 2002) (ಇನ್ನು ಮುಂದೆ "ಆಕ್ಟ್" ಎಂದು ಉಲ್ಲೇಖಿಸಲಾಗುತ್ತದೆ) ನಿಬಂಧನೆಗಳ ಅಡಿಯಲ್ಲಿ ಮತ್ತು ಭದ್ರತಾ ಆಸಕ್ತಿ (ಜಾರಿ) ನಿಯಮ, 2002 ರ ನಿಯಮ 3 ರೊಂದಿಗೆ ಓದಲಾದ ಕಾಯ್ದೆಯ ಸೆಕ್ಷನ್ 13(2) ಅಡಿಯಲ್ಲಿ ನೀಡಲಾದ ಅಧಿಕಾರವನ್ನು ಚಲಾಯಿಸುವ ಮೂಲಕ, ಈ ಕೆಳಗಿನ ಸಾಲಗಾರರು ಮತ್ತು ಸಹ–ಸಾಲಗಾರರಿಗೆ ನೋಟಿಸ್ ಸ್ವೀಕರಿಸಿದ ದಿನಾಂಕದಿಂದ 60 ದಿನಗಳ ಒಳಗೆ ನೋಟಿಸ್‌ನಲ್ಲಿ ಉಲ್ಲೇಖಿಸಲಾದ ಮೊತ್ತವನ್ನು ಮರುಪಾವತಿಸಲು ತಗಾದೆ ಸೂಚನೆಯನ್ನು ನೀಡಿದ್ದಾರೆ. ಸಾಲಗಾರ/ಖಾತರಿದಾರರು ಮೊತ್ತವನ್ನು ಮರುಪಾವತಿಸಲು ವಿಫಲರಾಗಿದ್ದು, ಕೆಳಸಹಿದಾರರು ಕೆಳಗೆ ವಿವರಿಸಿದ ಆಸ್ತಿಯನ್ನು 2002 ರ ಭದ್ರತಾ ಹಿತಾಸಕ್ತಿ (ಜಾರಿ) ನಿಯಮಗಳ ನಿಯಮ 8 ರೊಂದಿಗೆ ಓದಲಾದ ಕಾಯ್ದೆಯ ಸೆಕ್ಷನ್ 13 ರ ಉಪವಿಭಾಗ (4) ರ ಅಡಿಯಲ್ಲಿ ನೀಡಲಾದ ಅಧಿಕಾರವನ್ನು ಚಲಾಯಿಸಿ ಕೆಳಗೆ ತಿಳಿಸಲಾದ ದಿನಾಂಕದಂದು ಸ್ವಾಧೀನಪಡಿಸಿಕೊಂಡಿದ್ದಾರೆ ಎಂದು ಸಾಲಗಾರ ಮತ್ತು ಸಾರ್ವಜನಿಕರಿಗೆ ಇಲ್ಲಿ ಸೂಚಿಸಿಲಾಗಿದೆ. ನಿರ್ದಿಷ್ಟವಾಗಿ ಸಾಲಗಾರರು ಮತ್ತು ಸಾರ್ವಜನಿಕರು ಆಸ್ತಿಯೊಂದಿಗೆ ವ್ಯವಹರಿಸದಂತೆ ಇಲ್ಲಿ ಎಚ್ಚರಿಕೆ ನೀಡಲಾಗಿದೆ ಮತ್ತು ಆಸ್ತಿಯೊಂದಿಗಿನ ಯಾವುದೇ ವ್ಯವಹಾರವು "ಕ್ಲಿಕ್" ಮತ್ತು ಬಡ್ಡಿಯ ಇತರ ಶುಲ್ಕಗಳಿಗೆ ಒಳಪಟ್ಟಿರುತ್ತದೆ. ಸುರಕ್ಷಿತ ಆಸ್ತಿಯನ್ನು ಪುನಃ ಪಡೆದುಕೊಳ್ಳಲು ಲಭ್ಯವಿರುವ ಸಮಯಕ್ಕೆ ಸಂಬಂಧಿಸಿದಂತೆ, ಕಾಯಿದೆಯ ಸೆಕ್ಷನ್ 13 ರ ಉಪ–ವಿಭಾಗ (8) ರ ನಿಬಂಧನೆಗಳಿಗೆ ಸಾಲಗಾರರ ಗಮನಕ್ಕೆ ತರಲಾಗಿದೆ.

**ಸಾಲಗಾರ/ಸಹ–ಸಾಲಗಾರರ ಹೆಸರು ಮತ್ತು ವಿಳಾಸ: : 1. ಪೋಷಿದಾಬೇಗಂ ಮಹಾಮಮದಲಿ ನಡಾಫ್ ಬಿನ್ ಮಹಬೂಬಸಾಬ್,** ಹಳೇಪೇಟೆ ಬೀದಿ, ನವಲಗುಂದ, ಧಾರವಾಡ, ಕರ್ನಾಟಕ–582208, **ಹಾಗೆಯೇ ಇಲ್ಲಿ:** ಆಸ್ತಿ ಬೇರಿಂಗ್ ಸಂಖ್ಯೆ 22–510–17, ಹಳೆಯ ಆಸ್ತಿ ಸಂಖ್ಯೆ. 1110, ಮೌಲ್ಯಮಾಪನ ಸಂಖ್ಯೆ 1110, ನವಲಗುಂದ ತಾಲೂಕು ನವಲಗುಂದ, ಧಾರವಾಡ, ಕರ್ನಾಟಕ 582208. **ಬಸುಬಿ ಹುಗ್ಗಿ ಕೋಂ ಹುಸೇನಸಾಬ್,** ಗುಡ್ಡದಕೇರಿ ಓಣಿ ನವಲಗುಂದ, ಧಾರವಾಡ, ಕರ್ನಾಟಕ 582208.

**ಡಿಮ್ಯಾಂಡ್ ನೋಟಿಸ್ ದಿನಾಂಕ:** 19.01.2026, **ಸ್ವಾಧೀನ ದಿನಾಂಕ:** 20.04.2026
**ಡಿಮ್ಯಾಂಡ್ ನೋಟಿಸ್ ಮೊತ್ತ:** 16.01.2026 ರಂತೆ ರೂ. 42,72,493.8/–

**ಅಡಮಾನ ಆಸ್ತಿಯ ವಿವರ:** ಎಲ್ಲಾ ಭಾಗ ಮತ್ತು ವಿಭಾಗಗಳು ಸೇರಿದಂತೆ ಆಸ್ತಿಯ ಸಿಟಿಎಸ್ ಸಂಖ್ಯೆ 1110, 240 ಚದರ ಗಜಗಳ ಅಳತೆ. ಅಂದರೆ. 200.67 ಚದರ ಒಖಿಖಿಖ ಇ–ಸ್ವತ್ತು ಸಂಖ್ಯೆ 22–510–17 ನವಲಗುಂದ, ಧಾರವಾಡ, ಕರ್ನಾಟಕ 582208 ನಲ್ಲಿ ಇದೆ. ಪೂರ್ವ: ಸಿಟಿಎಸ್ ಸಂಖ್ಯೆ 1109 ಮತ್ತು 1098, ಪಶ್ಚಿಮ: ಸರ್ಕಾರಿ ರಸ್ತೆ ಮತ್ತು ಸಿಟಿಎಸ್ ಸಂಖ್ಯೆ 11, ಉತ್ತರ: ಸರ್ಕಾರಿ ರಸ್ತೆ, ದಕ್ಷಿಣ: ಸಿಟಿಎಸ್ ಸಂಖ್ಯೆ 1097

**ದಿನಾಂಕ: 20.04.2026, ಸ್ಥಳ: ಕರ್ನಾಟಕ** ಅಧಿಕೃತ ಅಧಿಕಾರಿ, ಕ್ಲಿಕ್ಸ್ ಕ್ಯಾಪಿಟಲ್ ಸರ್ವೀಸಸ್ ಪ್ರೈ. ಲಿ.


# ಎಸ್ಸೆಸ್ಸೆಲ್ಸಿ ತೃತೀಯ ಭಾಷೆಗೆ ಗ್ರೇಡ್ ಬದಲು ಅಂಕಗಳನ್ನೇ ನೀಡಿ

ಬೆಂಗಳೂರು: 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮೂರನೇ ಭಾಷಾ ಪರೀಕ್ಷೆಯ ಉತ್ತರಪತ್ರಿಕೆಗಳನ್ನು ಮೌಲ್ಯಮಾಪನ ಮಾಡುವಂತೆ ರಾಜ್ಯ ಸರ್ಕಾರಕ್ಕೆ ಏಪ್ರಿಲ್ 15ರಂದು ನೀಡಿದ್ದ ಆದೇಶದಲ್ಲಿ ಹಸ್ತಕ್ಷೇಪ ಮಾಡಲು ಹೈಕೋರ್ಟ್ ಇಂದು ಮಂಗಳವಾರ ನಿರಾಕರಿಸಿದೆ. ರಾಜ್ಯ ಸರ್ಕಾರ ಪ್ರಸ್ತಾಪಿಸಿದ್ದ ಗ್ರೇಡಿಂಗ್ ಪದ್ಧತಿಗೆ ಬದಲಾವಣೆ ಮಾಡುವ ಬೇಡಿಕೆಯನ್ನು ನ್ಯಾಯಾಲಯ ತಳ್ಳಿ ಹಾಕಿ ತನ್ನ ಆದೇಶದ ಯಥಾಸ್ಥಿತಿ ಕಾಯ್ದು ಕೊಂಡಿದೆ.

ನ್ಯಾಯಮೂರ್ತಿ ಇ.ಎಸ್. ಇಂಡಿ ರೇಶ್ ಅವರು, ಏಪ್ರಿಲ್ 15ರ ಆದೇಶವನ್ನು ಮರುಪರಿಶೀಲಿಸಲು ರಾಜ್ಯ ಸರ್ಕಾರ ಸಲ್ಲಿಸಿದ್ದ ಪುನರ್ ಪರಿಶೀಲನಾ ಅರ್ಜಿಯನ್ನು ವಜಾಗೊಳಿಸುವ ಮೂಲಕ ಈ ಆದೇಶ ನೀಡಿದ್ದಾರೆ. ಪರೀಕ್ಷೆಗಳ ಪ್ರಕಟಣೆಗೂ ಮುನ್ನ ಜಾರಿಯಲ್ಲಿದ್ದ ನಿಯಮಾವಳಿಗಳ ಪ್ರಕಾರ ಮೌಲ್ಯಮಾಪನ ವ್ಯವಸ್ಥೆಯನ್ನು ಮುಂದುವರಿಸುವುದು ಸರ್ಕಾರದ ಕರ್ತವ್ಯವಾಗಿದ್ದು, ಅದರಿಂದ ವಿಮುಖರಾಗಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಪುನರುಚ್ಚರಿಸಿದೆ.

ಏಪ್ರಿಲ್ 15ರ ಆದೇಶದಲ್ಲಿ ಅಡ್ವೊಕೇಟ್ ಜನರಲ್ ಕೆ. ಶಶಿಕಿರಣ ಶೆಟ್ಟಿ ಅವರು ಕೇಳಿದ್ದ ಕೆಲವು ತಿದ್ದುಪಡಿಗಳನ್ನು ಪರಿಗಣಿಸಿ, ಅಗತ್ಯ ನಿಯಮಗಳಿಗೆ ಕಾನೂನುಬದ್ಧ ತಿದ್ದುಪಡಿ ಮಾಡಿ ಗ್ರೇಡಿಂಗ್ ಪದ್ಧತಿಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಮುಂದಾದರೆ, ಅದಕ್ಕೆ ನ್ಯಾಯಾಲಯ ಅಡ್ಡಿಯಾಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

ರಾಜ್ಯ ಸರ್ಕಾರವೇ 2025–26ನೇ ಶೈಕ್ಷಣಿಕ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಉತ್ತರಪತ್ರಿಕೆಗಳ ಮೌಲ್ಯಮಾ ಪನವನ್ನು ಪರೀಕ್ಷಾ ಪ್ರಕಟಣೆ ದಿನಾಂಕದ ವೇಳೆಗೆ ಜಾರಿಯಲ್ಲಿದ್ದ ನಿಯಮಗಳ ಪ್ರಕಾರ ನಡೆಸಲಾಗುತ್ತದೆ ಎಂದು ತಿಳಿಸಿದ್ದ ಹಿನ್ನೆಲೆಯಲ್ಲಿ, ಏಪ್ರಿಲ್ 15ರಂದು ಹೈಕೋ ರ್ಟ್ ಅದನ್ನೇ ಅನುಸರಿಸಲು ನಿರ್ದೇಶನ ನೀಡಿತ್ತು.

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಮೂರನೇ ಭಾಷಾ ಮೌಲ್ಯ ಮಾಪನದಲ್ಲಿ ಗ್ರೇಡಿಂಗ್ ಪದ್ಧತಿ ಪರಿಚ ಯಿಸುವ ಕುರಿತು ನೀಡಿದ ಹೇಳಿಕೆಯಿಂದ ಆತಂಕಗೊಂಡ ಮೂವರು ವಿದ್ಯಾರ್ಥಿಗಳು ಸಲ್ಲಿಸಿದ್ದ ಅರ್ಜಿಯ ಮೇಲೆ ವಿಚಾರಣೆ ನಡೆಸಿ, ನ್ಯಾಯಾಲಯ ಈ ಆದೇಶ ನೀಡಿತ್ತು. ವಿಚಾರಣೆ ವೇಳೆ ಹೆಚ್ಚುವರಿ ಸರ್ಕಾರಿ ವಕೀಲರು, ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ದಿನಾಂಕಕ್ಕೆ ಜಾರಿಯಲ್ಲಿದ್ದ ನಿಯಮಾವಳಿಗಳ ಪ್ರಕಾರವೇ ಮೌಲ್ಯಮಾಪನ ನಡೆಸಲಾಗು ವುದು ಎಂದು ವಿವರಣೆ ನೀಡಿದರು.


**ಎಲ್&ಟಿ ಫೈನಾನ್ಸ್ ಲಿಮಿಟೆಡ್**
**ರಿಜಿಸ್ಟರ್ಡ್ ಆಫೀಸು:** ಎಲ್&ಟಿ ಫೈನಾನ್ಸ್ ಲಿಮಿಟೆಡ್, ಬೃಂದಾವನ್ ಬಿಲ್ಡಿಂಗ್,
ಪ್ಲಾಟ್ ನಂ. 177, ಕಲೀನಾ, ಸಿಎಸ್‌ಟಿ ರೋಡ್, ಮರ್ಸಿಡಿಸ್ ಶೋರೂಮ್‌ನ ಸಮೀಪ,
ಸಾಂತಾಕ್ರೂಜ್ (ಪೂರ್ವ), ಮುಂಬಯಿ 400098.
**CIN No.:** L67120MH2008PLC181833
**ಶಾಖೆ ಆಫೀಸ್:** ಬೆಂಗಳೂರು

L&T Finance

**ಡಿಮಾಂಡ್ ನೋಟೀಸು**

**ಸೆಕ್ಯುರಿಟೈಜೇಶನ್ ಆ್ಯಂಡ್ ರೀಕನ್‌ಸ್ಟ್ರಕ್ಷನ್ ಆಫ್ ಫೈನಾನ್ಶಿಯಲ್ ಅಸೆಟ್ಸ್ ಆ್ಯಂಡ್ ಎನ್‌ಫೋರ್ಸ್‌ಮೆಂಟ್ ಆಫ್ ಸೆಕ್ಯುರಿಟಿ ಇಂಟರೆಸ್ಟ್ ಆ್ಯಕ್ಟ್ 2002ನ ಸೆಕ್ಷನ್ 13(2) ಅಂತರ್ಗತ (ಇಲ್ಲಿಂದ ಮುಂದೆ ಆ್ಯಕ್ಟ್ ಎಂದು ಉಲ್ಲೇಖಿಸಲಾಗುತ್ತದೆ)**

ನಿಮ್ಮ ಲೋನ್ ಅಕೌಂಟ್ ಬಾಬ್ತು ಬಡ್ಡಿ ಮತ್ತು ಮೂಲಧನದ ಕಂತನ್ನು ಪಾವತಿಸಲು ನೀವು ತಪ್ಪಿರುವುದರಿಂದ, ಮತ್ತು ಸದರಿ ಬಾಕಿನ್ನು ತೀರಿಸಲು ನೀವು ತಪ್ಪಿರುವಿರಿ ಮತ್ತು ಕಡೆಗಣಿಸಿರುವಿರಿ, ಆದ್ದರಿಂದ ನಿಮ್ಮೆಲ್ಲರಿಗೂ (ಸಾಲಗಾರ/ರು, ಸಹ–ಸಾಲಗಾರ/ರು ಮತ್ತು ಗ್ಯಾರಂಟರ್/ರು) ನಾವು ಆ್ಯಕ್ಟ್‌ನ ಸೆಕ್ಷನ್ 13(2) ಅಂತರ್ಗತ ಡಿಮಾಂಡ್ ನೋಟೀಸನ್ನು ಜಾರಿಪಡಿಸಿ ರಿಜಿಸ್ಟರ್ಡ್ ಪೋಸ್ಟ್ ಅಕ್ನಾಲೆಜಿಮೆಂಟ್ ಡ್ಯೂ ಮೂಲಕ ರವಾನಿಸಲಾಗಿದೆ. ಫಲಸ್ವರೂಪವಾಗಿ, ರಿಜರ್ವ್ ಬ್ಯಾಂಕ್ ಆಫ್ ಇಂಡಿಯಾ ಜಾರಿಪಡಿಸಿರುವ ಅಸೆಟ ಕ್ಲಾಸಿಫಿಕೇಶನ್‌ಗೆ ಸಂಬಂಧಪಟ್ಟ ನಿರ್ದೇಶನಗಳ ಅನುಸಾರ ಲೆಕ್ಕ–ಪತ್ರದ ಪುಸ್ತಕದಲ್ಲಿ ಸಾಲ ಖಾತೆಯನ್ನು ನಾನ್–ಪರ್ಫಾರ್ಮಿಂಗ್ ಅಸೆಟ್ (NPA) ಎಂದು ವರ್ಗೀಕರಿಸಲಾಗಿದೆ. ಈ ನೋಟೀಸು ''ಡೆಲಿವರಿ ಸಾಧ್ಯವಾಗಿಲ್ಲ'' – ಎಂದು ಮರಳಿಸಲಾಗಿದೆ ಮತ್ತು ಅದೇ ಕಾರಣಕ್ಕಾಗಿ ನಾವೀಗ ನಿಮ್ಮೆಲ್ಲರಿಗೂ ಆ್ಯಕ್ಟ್‌ನ ಸೆಕ್ಷನ್ 13(2) ಅಂತರ್ಗತ ಈ ನೋಟೀಸನ್ನು ಜಾರಿಪಡಿಸುತ್ತಿದ್ದೇವೆ ಮತ್ತು ನೋಟೀಸಿನಲ್ಲಿ ಕೆಳಗೆ ನಮೂದಿಸಲಾಗಿರುವ ಮೊಬಲಗನ್ನು ಎಲ್&ಟಿ ಫೈನಾನ್ಸ್ ಲಿಮಿಟೆಡ್‌ಗೆ, ಈ ವರ್ತಮಾನ ಪತ್ರಿಕೆಯ ಸೂಚನೆಯ 60 ದಿನಗಳ ಒಳಗೆ, ಇನ್ನು ಮುಂದಿನ ಬಡ್ಡಿ ಮತ್ತು ಡಿಮಾಂಡ್ ನೋಟೀಸಿನ ತಾರೀಖಿನಿಂದ ಹಣ ಸಂದಾಯ ಮಾಡುವ ವರೆಗೆ ಅಥವಾ ಹಣ ಕೈಸೇರುವ ವರೆಗೆ ಇತರ ಚಾರ್ಜ್‌ನ್ನು ಮರುಪಾವತಿ ಮಾಡಬೇಕಾಗಿ ಕರೆ ನೀಡಲಾಗುತ್ತದೆ. ಈ ನೋಟೀಸಿನ ನಿಯಮಗಳ ಅನುಸಾರ ನಿಮ್ಮ ದಾಯಿತ್ವವನ್ನು ಪೂರೈಸಲು ನೀವು ತಪ್ಪಿದರೆ, ನಾವು ಆ್ಯಕ್ಟನ ಸೆಕ್ಷನ್ 13(2) ಅಥವಾ 14ರ ಅಂತರ್ಗತ ನಮಗೆ ದಕ್ಕುವ ಯಾವುದಾದರೊಂದು ಅಥವಾ ಎಲ್ಲಾ ಅಧಿಕಾರಗಳನ್ನು ಬಳಸಿಕೊಳ್ಳದೆ ಗತ್ಯಂತರವಿರಲಾರದು. ''ಇದು ಯಾವುದೇ ಪಕ್ಷಪಾತವಿಲ್ಲದೆ, ಯಾವುದೇ ಆ್ಯಕ್ಟ್ ಮತ್ತು/ಅಥವಾ ಸಮಯ ಸಮಯಕ್ಕೆ ಚಲಾವಣೆಯಲ್ಲಿರುವ ಬೇರೆ ಯಾವುದೇ ಕಾನೂನಿನ ಅನುಸಾರ ನಮಗಿರುವ ಅಧಿಕಾರಗಳಾಗಿವೆ.''

| ಸಾಲ ಖಾತೆಯ ನಂಬರ್ | ಅನುಸಾರಸಾಲಗಾರ/ರು ಮತ್ತು ಸಹ-ಸಾಲಗಾರ/ರು ಹೆಸರುಗಳು | ಡಿಮಾಂಡ್ ನೋಟೀಸಿನ ತಾರೀಖು/ಬಾಕಿ ಇರುವ ಮೊಬಲಗು: ಎನ್‌ಪಿಎ ತಾರೀಖು | ಡಿಮಾಂಡ್ ನೋಟೀಸಿನ ತಾರೀಖು/ಬಾಕಿ ಇರುವ ಮೊಬಲಗು: ಈ ದಿನದ ವರೆಗೆ ಬಾಕಿ ಮೊಬಲಗು (₹) | ಅಚರ ಆಸ್ತಿಯ ವಿವರ (ಜಾಮೀನಾಗಿರುವ) |
|---|---|---|---|---|
| BLRHL1700 0241, BLRHL1700 0194 | 1. ರಾಜಶೇಕರ ವಿ<br>2. ಎಸ್. ತ್ರಿಪುರಾ | ಡಿಮಾಂಡ್ ನೋಟೀಸು ತಾರೀಖು: 09/04/2026<br>ಎನ್‌ಪಿಎ ತಾರೀಖು: 07/03/2026 | ₹38,94,642.79/– (ರೂಪಾಯಿ ಮುವತ್ತೆಂಟು ಲಕ್ಷ ತೊಂಬತ್ತನಾಲ್ಕು ಸಾವಿರದ ಆರ್ನೂರ ನಾಲ್ವತ್ತೆರಡು ಮತ್ತು ಎಪ್ಪತ್ತೈದು ಪೈಸೆ ಮಾತ್ರ) | **ಶೆಡ್ಯೂಲ್ - I**<br>ಎಲ್ಲಾ ಅಂಶವನ್ನು ಸೇರಿಕೊಂಡ ಸಂಪೂರ್ಣ ಪ್ರಾಪರ್ಟಿಯ ವಿಳಾಸ, ಹೊಸ ಮುನ್ಸಿಪಲ್ ನಂ. 1149/521/13/1, ಹಳೆಯ ಮುನ್ಸಿಪಲ್ ನಂ. 1137/521/13/1, 3ನೇ ಹಂತದಲ್ಲಿ ಸ್ಥಿತ, ಜಿಗೇನಹಳ್ಳಿ, ರಾಮನಗರ ಟೌನ್, ರಾಮನಗರ ಜಿಲ್ಲೆ, ವಾರ್ಡ್‌ನಂ. 27, ಪೂರ್ವದಿಂದ ಪಶ್ಚಿಮಕ್ಕೆ : 40 ಅಡಿ, ಮತ್ತು ಉತ್ತರದಿಂದ ದಕ್ಷಿಣಕ್ಕೆ 60 ಅಡಿ. ಒಟ್ಟು 2400 ಚ. ಅಡಿ. ಖಾಲಿ ನಿವೇಶನ ಮತ್ತು ಅದರಲ್ಲಿ ಆರ್‌ಸಿಸಿ ಮನೆಗಾಗಿ 30 x 35. ಒಟ್ಟು 1050 ಚ. ಅಡಿ ಗಡಿಗಳು ಮತ್ತು ಸೀಮೆಗಳಲ್ಲಿ<br>ಗಡಿಗಳು: ಪೂರ್ವದಲ್ಲಿ – ಸ್ವತ್ತಿನ ಮಾಲಿಕರು ಲತಾ (ಎನ್. ರಾಮು ಅವರ ಪತ್ನಿ); ಪಶ್ಚಿಮದಲ್ಲಿ – ಸ್ವತ್ತಿನ ಮಾಲಿಕರು ಎನ್. ಹರೀಷ್; ಉತ್ತರದಲ್ಲಿ – ರಸ್ತೆ; ದಕ್ಷಿಣದಲ್ಲಿ – ಸ್ವತ್ತಿನ ಮಾಲಿಕರು ಲೋಕೇಶ್ |

ಸಹಿ/–
**ತಾರೀಖು:** 22.04.2026 **ಅಧಿಕೃತ ಆಫೀಸರ್**
**ಸ್ಥಳ:** ಬೆಂಗಳೂರು ಎಲ್&ಟಿ ಫೈನಾನ್ಸ್ ಪರವಾಗಿ

# ತಮಿಳುನಾಡಿಗೆ ಡಿಎಂಕೆ ಮೈತ್ರಿಕೂಟದಿಂದಲೇ ಭವಿಷ್ಯ: ಡಿ.ಕೆ. ಶಿವಕುಮಾರ್

**ಕೃಷ್ಣಗಿರಿ:** ತಮಿಳುನಾಡಿಗೆ ಡಿಎಂಕೆ ಮೈತ್ರಿಕೂಟದಿಂದಲೇ ಭವಿಷ್ಯ. ಇದನ್ನು ಅರಿತೇ ಪನ್ನೀರ್ ಸೆಲ್ವಂ ಅವರು ಡಿಎಂಕೆ ಸೇರಿದ್ದಾರೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ತಮಿಳುನಾಡಿನ ಕೃಷ್ಣಗಿರಿ ವಿಧಾನಸಭೆ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಚೆಲ್ಲಕುಮಾರ್ ಪರ ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಸೋಮವಾರ ರಾತ್ರಿ ರೋಡ್ ಶೋ ನಡೆಸಿ, ಪ್ರಚಾರ ಭಾಷಣ ಮಾಡಿದರು. "ಅಣ್ಣಾಮಲೈಗೆ ಬಿಜೆಪಿಯವರು ಟಿಕೆಟ್ ಕೊಡಲಿಲ್ಲ. ಇನ್ನು ಅಣ್ಣಾ ಡಿಎಂಕೆಯನ್ನು ಅವರು ಬಿಡುತ್ತಾರೆಯೇ? ಬಿಹಾರದಲ್ಲಿ ನಿತೀಶ್ ಕುಮಾರ್ ಅವರನ್ನು ಬಲಿ ಪಡೆದು ಬಿಜೆಪಿಯವರನ್ನು ಮುಖ್ಯಮಂತ್ರಿ ಮಾಡಿದ್ದಾರೆ. ಈ ದೇಶದ ಸ್ವಾತಂತ್ರ್ಯಕ್ಕೆ ಹೋರಾಡಿದ ಪಕ್ಷ ಕಾಂಗ್ರೆಸ್. ಈ ದೇಶದ ಉಸಿರಿನಲ್ಲಿ ಕಾಂಗ್ರೆಸ್ ಪಕ್ಷವಿದೆ, ಅಭಿವೃದ್ಧಿ ಸೇರಿದಂತೆ ಪ್ರತಿಯೊಂದು ವಿಚಾರದಲ್ಲೂ ಕಾಂಗ್ರೆಸ್ ಪಕ್ಷ ತನ್ನ ತ್ಯಾಗ ಬಲಿದಾನದಿಂದ ಈ ದೇಶವನ್ನು ತಳಮಟ್ಟದಿಂದ ಕಟ್ಟಿದೆ" ಎಂದರು.

**ದಕ್ಷಿಣ ಭಾರತದ ಹಕ್ಕುಗಳನ್ನು ಉಳಿಸುವ ಸವಾಲು ನಮ್ಮ ಮುಂದಿದೆ**

"ತಮಿಳು, ಕನ್ನಡ, ತೆಲುಗು, ಮಲೆಯಾಳಂ ಸೇರಿದಂತೆ ಅನೇಕ ವೈವಿಧ್ಯತೆಯನ್ನು ದಕ್ಷಿಣ ಭಾರತ ಹೊಂದಿದೆ. ನಮ್ಮ ದಕ್ಷಿಣ ಭಾರತದ ರಾಜ್ಯಗಳ ಹಕ್ಕುಗಳನ್ನು ಉಳಿಸುವ ಸವಾಲು ನಮ್ಮ ಮುಂದೆ ಎದುರಾಗಿದೆ. ಇದಕ್ಕಾಗಿ ನೀವು ಡಿಎಂಕೆ, ಕಾಂಗ್ರೆಸ್, ಮಿತ್ರಪಕ್ಷಗಳಿಗೆ ಜನ ಆಶೀರ್ವಾದ ಮಾಡಬೇಕು" ಎಂದರು.

"ನಮ್ಮ ಪಾಲಿನ ತೆರಿಗೆ ಹಣವನ್ನು ಲೂಟಿ ಮಾಡಲಾಗುತ್ತಿದೆ. ಇದಕ್ಕೆ ನ್ಯಾಯ ಒದಗಿಸಬೇಕು. ಇಡೀ ದೇಶ ನಮ್ಮ ಕಡೆ ನೋಡುತ್ತಿದೆ. ನಾವು ನ್ಯಾಯ, ಸತ್ಯದ ಪರವಾಗಿದ್ದೇವೆ ಎಂದು ಇಡೀ ದೇಶಕ್ಕೆ ಸಂದೇಶ ನೀಡಬೇಕು. ತಮಿಳುನಾಡಿನ ಅಸ್ತಿತ್ವ, ಸ್ವಾತಂತ್ರ್ಯ, ಹಕ್ಕನ್ನು ಉಳಿಸಲು ಸ್ಟಾಲಿನ್ ಅವರು ಬಿಜೆಪಿ ಹಾಗೂ ಮೋದಿಯವರ ವಿರುದ್ಧ 20 ಮಿತ್ರ ಪಕ್ಷಗಳನ್ನು ಕಟ್ಟಿಕೊಂಡು ಹೋರಾಡುತ್ತಿದ್ದಾರೆ" ಎಂದರು.

**ಸ್ಟಾಲಿನ್ ಅವರ ನೇತೃತ್ವದಲ್ಲಿ ಮತ್ತೊಮ್ಮೆ ಡಿಎಂಕೆ ಮೈತ್ರಿಕೂಟ ಅಧಿಕಾರಕ್ಕೆ**

"ರೈತರು, ಕಾರ್ಮಿಕರು, ಕೂಲಿಕಾರರು, ಮಹಿಳೆಯರು ಎಲ್ಲರೂ ನಮ್ಮ ಬದುಕಿಗೆ ಶಕ್ತಿಯಾಗಿ ನಿಂತ ಡಿಎಂಕೆ, ಕಾಂಗ್ರೆಸ್ ಮೈತ್ರಿಕೂಟಕ್ಕೆ ಮತ ಚಲಾವಣೆ ಮಾಡುತ್ತೇವೆ ಎಂದು ಹೇಳಿದ್ದಾರೆ. ತಮಿಳುನಾಡಿನಲ್ಲಿ ಮತ್ತೊಮ್ಮೆ ಪಕ್ಷ ಅಧಿಕಾರಕ್ಕೆ ಬರಲಿದೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ವಿಶ್ವಾಸ ವ್ಯಕ್ತಪಡಿಸಿದರು.



"ತಮಿಳುನಾಡಿನಲ್ಲಿ ಅನೇಕ ಜನಕಲ್ಯಾಣ ಯೋಜನೆಗಳನ್ನು ಈ ಹಿಂದೆ ಜಾರಿಗೆ ತರಲಾಗಿತ್ತು. ಅದರಂತೆ ನಾವು ಸಹ ಕರ್ನಾಟಕದಲ್ಲಿ ಐದು ಗ್ಯಾರಂಟಿ ಯೋಜನೆಗಳ ಮೂಲಕ ಆರ್ಥಿಕ ಕ್ರಾಂತಿ ಮಾಡಿದ್ದೇವೆ. ಮಹಿಳೆಯರಿಗೆ ಉಚಿತ ಬಸ್, ತಿಂಗಳಿಗೆ ಎರಡು ಸಾವಿರ, ಯುವಕರಿಗೆ ಪ್ರೋತ್ಸಾಹ ಧನ, ಉಚಿತ ವಿದ್ಯುತ್ ನೀಡುತ್ತಿದ್ದೇವೆ. 1.36 ಕೋಟಿ ಮಹಿಳೆಯರಿಗೆ ತಮಿಳುನಾಡಿನಲ್ಲಿ ಡಿಎಂಕೆ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ 2 ಸಾವಿರ ಹಣ ನೀಡಲಾಗುವುದು" ಎಂದರು.

"ಕಾಂಗ್ರೆಸ್, ಡಿಎಂಕೆ ಪಕ್ಷ ಜನರ ಸ್ವಾಭಿಮಾನ ಉಳಿಸಲು ಬದ್ಧವಾಗಿವೆ. ಅತಿ ಹೆಚ್ಚು ತೆರಿಗೆ ನೀಡುವ ನಮ್ಮನ್ನು ಕಡೆಗಣಿಸಲಾಗಿದೆ. ಲೋಕಸಭಾ ಕ್ಷೇತ್ರಗಳನ್ನು ಕಡಿಮೆ ಮಾಡುವ ಹುನ್ನಾರ ಮಾಡಲಾಗುತ್ತಿದೆ. ಈ ಸಂಚಿನ ವಿರುದ್ಧ ನಾವು ಹೋರಾಟ ಮಾಡುತ್ತಿದ್ದೇವೆ. ಜನರೂ ಸಹ ಇದಕ್ಕೆ ಕೈ ಜೋಡಿಸಬೇಕು" ಎಂದರು.

"ಹಿಂದೂ ಧರ್ಮದಲ್ಲಿ ಕೃಷ್ಣನಿಗೆ ಮಹತ್ವದ ಸ್ಥಾನವಿದೆ. ಕೃಷ್ಣ ಎಲ್ಲಾ ರಂಗದಲ್ಲೂ ಚಾಣಾಕ್ಷ. ಇಂತಹ ಕೃಷ್ಣನ ಹೆಸರನ್ನು ಹೊಂದಿರುವ ಕ್ಷೇತ್ರ ಕಾಂಗ್ರೆಸ್ ಪಕ್ಷದ ಪಾಲಿಗೆ ವರವಿದ್ದಂತೆ. ದೇವರು ಕೊಟ್ಟ ಅವಕಾಶವನ್ನು ಬಳಸಿಕೊಳ್ಳಬೇಕು" ಎಂದರು. ಪಕ್ಷದ ಹಿರಿಯ ಕಾರ್ಯಕರ್ತ ಚೆಲ್ಲಕುಮಾರ್ ಅವರು ಸಂಸದರಾಗಿ ನಿಮ್ಮ ಸೇವೆ ಮಾಡಿದ್ದವರು. ಈಗ ಶಾಸಕರಾಗಿ ನಿಮ್ಮ ಸೇವೆಗೆ ಅವಕಾಶ ಕೇಳುತ್ತಿದ್ದಾರೆ. ಮುಖ್ಯಮಂತ್ರಿ ಸ್ಟಾಲಿನ್ ಅವರಿಗೆ ಈ ಸ್ಥಾನವನ್ನು ಚೆಲ್ಲಕುಮಾರ್ ಅವರು ಸ್ಪರ್ಧಿಸಲು ಅವಕಾಶ ನೀಡಿದ್ದಕ್ಕೆ ಕೋಟಿ ಕೋಟಿ ವಂದನೆಗಳನ್ನು ತಿಳಿಸುತ್ತೇನೆ. ಇಂತಹ ಅನುಭವಿ, ದಕ್ಷ ಅಭ್ಯರ್ಥಿ ಬೇರೆ ಯಾವುದೇ ಪಕ್ಷದಿಂದಲೂ ಸಿಗಲು ಸಾಧ್ಯವಿಲ್ಲ. ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಅವರು ನಿಮ್ಮ ಮಡಿಲಿಗೆ ಹಾಕಿದ್ದಾರೆ" ಎಂದು ಹೇಳಿದರು.

**ಸಿನಿಮಾ ಡೈಲಾಗ್ ತೆರೆ ಮೇಲೆ ನೋಡಲು ಚೆಂದ**

"ಕೆಲವರು ಸಿನಿಮಾ ಡೈಲಾಗ್ ಹೊಡೆದು ಎಂಜಿಆರ್ ರೀತಿ ಗೆಲ್ಲಬಹುದು ಎಂದು ಭಾವಿಸಿದ್ದಾರೆ. ಸಿನಿಮಾ ಡೈಲಾಗ್ ತೆರೆ ಮೇಲೆ ನೋಡಲು ಚೆಂದ. ವಾಸ್ತವದಲ್ಲಿ ಅವು ಕಾರ್ಯಗತವಾಗುವುದಿಲ್ಲ. ಜನರ ಬದುಕಿಗೆ ಬದಲಾವಣೆ ತರಲು ಜನಪರ ಕಾರ್ಯಕ್ರಮ ತರುವ ಸರ್ಕಾರ ಬರಬೇಕು" ಎಂದು ತಿಳಿಸಿದರು.

# ನಗರ ಸ್ವಚ್ಛತೆ ಹಾಗೂ ಸಮರ್ಪಕ ತ್ಯಾಜ್ಯ ನಿರ್ವಹಣೆಗೆ ಆಯುಕ್ತರ ಕಟ್ಟುನಿಟ್ಟಿನ ಸೂಚನೆ

ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ವಿಡಿಯೋ ಸಂವಾದ ಸಭೆಯಲ್ಲಿ ನಗರ ಸ್ವಚ್ಛತೆ ಮತ್ತು ಘನತ್ಯಾಜ್ಯ ನಿರ್ವಹಣೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸಲು ವಿವಿಧ ಸೂಚನೆಗಳನ್ನು ನೀಡಲಾಗಿದೆ.

ಸಭೆಯಲ್ಲಿ ಎಲ್ಲಾ ವಲಯಗಳ ಸಹಾಯಕ ಪ್ರಧಾನ ವ್ಯವಸ್ಥಾಪಕರಿಗೆ (AGM) ನಗರದ Visual Cleanlineಗೆ ಮೊದಲ ಆದ್ಯತೆ ನೀಡುವಂತೆ ಸೂಚಿಸಲಾಯಿತು.

ಮುಖ್ಯ ಹಾಗೂ ಉಪಮುಖ್ಯ ರಸ್ತೆಗಳಲ್ಲಿ ಪ್ರತಿದಿನವೂ ಸ್ವಚ್ಛತಾ ಕಾರ್ಯವನ್ನು ಕಡ್ಡಾಯವಾಗಿ ಕೈಗೊಳ್ಳುವುದರ ಜೊತೆಗೆ, ನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಎಲ್ಲಾ ಬ್ಲಾಕ್ ಸ್ಪಾಟ್ ಗಳನ್ನು ಸಂಪೂರ್ಣವಾಗಿ ನಿರ್ಮೂಲನೆಗೊಳಿಸುವಂತೆ ನಿರ್ದೇಶನ ನೀಡಲಾಯಿತು.

ನಗರದ ಎಲ್ಲಾ ಬ್ಲಾಕ್ ಸ್ಪಾಟ್ ಮತ್ತು ಗಾರ್ಬೇಜ್ ವಲ್ನರಬಲ್ ಪಾಯಿಂಟ್ ಗಳನ್ನು ಪ್ರತಿದಿನ ಬೆಳಿಗ್ಗೆ 8 ಗಂಟೆಯೊಳಗೆ ತೆರವುಗೊಳಿಸುವುದು ಕಡ್ಡಾಯವಾಗಿದ್ದು, ತೆರವು ಕಾರ್ಯದ ಮೊದಲು ಹಾಗೂ ನಂತರದ ಛಾಯಾಚಿತ್ರಗಳು ಮತ್ತು ಜಿಯೋಲೊಕೇಷನ್ ಮಾಹಿತಿ ದಾಖಲಿಸಿ ಅಗತ್ಯವಿದ್ದಾಗ ಕಚೇರಿಗೆ ಸಲ್ಲಿಸುವಂತೆ ಸೂಚಿಸಲಾಯಿತು.

**ರಸ್ತೆ ಸ್ವಚ್ಛತಾ ಕಾರ್ಯ ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಿ**

ಇದೇ ಸಂದರ್ಭದಲ್ಲಿ, ಪೌರಕಾರ್ಮಿಕರ ಮೂಲಕ ನಡೆಯುವ ಬೀದಿ ಸ್ವಚ್ಛತಾ ಕಾರ್ಯಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸಲು, ಸಂಬಂಧಪಟ್ಟ ಕಿರಿಯ ಆರೋಗ್ಯ ಪರಿವೀಕ್ಷಕರು (JHI) ಮತ್ತು ಮೇಲ್ವಿಚಾರಕರಿಗೆ ಸ್ಪಷ್ಟ ಸೂಚನೆಗಳನ್ನು ನೀಡುವಂತೆ ಂಉಖ ಗಳಿಗೆ ತಿಳಿಸಲಾಯಿತು.

**ತ್ಯಾಜ್ಯ ವಿಂಗಡಣೆ ಬಗ್ಗೆ ನಿಗಧಿತ ಗುರಿ ಸಾಧಿಸಿ, ಪ್ರತಿ ತಿಂಗಳು ವರದಿ ಸಲ್ಲಿಸಿ**

ಘನತ್ಯಾಜ್ಯ ನಿರ್ವಹಣೆಯಡಿಯಲ್ಲಿ, SWM 2026 ನಿಯಮಾವಳಿ ಪ್ರಕಾರ ತ್ಯಾಜ್ಯ ವಿಂಗಡಣೆ (Segregation) ಕಡ್ಡಾಯವಾಗಿದ್ದು, ಹಿಂದಿನ ಸಭೆಗಳಲ್ಲಿ ನಿಗದಿಪಡಿಸಿದ ಗುರಿಗಳನ್ನು ಸಾಧಿಸುವಲ್ಲಿ ದಾಸರಹಳ್ಳಿ ಮತ್ತು ಹೆಬ್ಬಾಳ ವಿಭಾಗಗಳನ್ನು ಹೊರತುಪಡಿಸಿ, ಕೆಲವು ವಿಭಾಗಗಳು ಹಿಂದುಳಿದಿರುವುದು ಗಮನಕ್ಕೆ ಬಂದಿದ್ದು, ಇತರೆ ಎಲ್ಲಾ ವಿಭಾಗಗಳು ನಿಗದಿತ ಗುರಿಯನ್ನು ಸಾಧಿಸಲು ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು. ಪ್ರತಿ ತಿಂಗಳು ವಿಂಗಡಣೆಯಲ್ಲಿ ಆಗುವ ಪ್ರಗತಿಯನ್ನು ವರದಿ ರೂಪದಲ್ಲಿ ಸಲ್ಲಿಸುವುದು ಕಡ್ಡಾಯವಾಗಿದೆ.

ಇದೇ ವೇಳೆ, ಏರ್‌ಪೋರ್ಟ್ ರಸ್ತೆಯ ಸ್ವಚ್ಛತೆ ಕುರಿತು ವಿಶೇಷ ಒತ್ತಡ ನೀಡಿ, ಆ ಮಾರ್ಗವನ್ನು ಸದಾ ಕಸಮುಕ್ತವಾಗಿರಿಸುವಂತೆ ಸೂಚಿಸಲಾಯಿತು. ಈ ಸಂಬಂಧ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಓಊಂಖ), ಬಿಎಂಆರ್‌ಸಿಎಲ್ ಮತ್ತು ರೈಲ್ವೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಸಮಗ್ರ ಕಾರ್ಯಯೋಜನೆ ಸಲ್ಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಸ್ವಚ್ಛತಾ ಕಾರ್ಯದಲ್ಲಿ ನಿರ್ಲಕ್ಷ್ಯ ತೋರಿದಲ್ಲಿ ಕಠಿಣ ಕ್ರಮ**

ನಗರದ ಸ್ವಚ್ಛತೆ, ಸಾರ್ವಜನಿಕ ಆರೋಗ್ಯ ಮತ್ತು ಪರಿಸರ ಸಂರಕ್ಷಣೆಗೆ ಯಾವುದೇ ರೀತಿಯ ನಿರ್ಲಕ್ಷ್ಯವನ್ನು ಸಹಿಸಲಾಗುವುದಿಲ್ಲ ಎಂದು ಆಯುಕ್ತರು ಎಚ್ಚರಿಕೆ ನೀಡಿದರು.

ಈ ಸಭೆಯಲ್ಲಿ ಜಂಟಿ ಆಯುಕ್ತರಾದ ಶ್ರೀಮತಿ ಪಲ್ಲವಿ ಮತ್ತು ಮೊಹಮ್ಮದ್ ನಯೀಮ್ ಮೊಮಿನ್ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.

# ಅನುಮತಿಯಿಲ್ಲದೆ ಗೈರಾಗಿರುವ ಎಲ್ಲಾ ಸಿಬ್ಬಂದಿಗಳ ಮೇಲೆ ಕಾನೂನು ಕ್ರಮ:

ಬೆಂಗಳೂರು : ಜಿಬಿಎ ವ್ಯಾಪ್ತಿಯಲ್ಲಿ ಗಣತಿಗಾರರಿಂದ ನಡೆಯುತ್ತಿರುವ ಜನಗಣತಿ ಕಾರ್ಯದ ಪ್ರಗತಿ ನಿಧಾನವಾಗಿದ್ದು ತೃಪ್ತಿಕರವಾಗಿಲ್ಲ.

ಒಟ್ಟು 23,500 ಗಣತಿಗಾರರು ಮತ್ತು 2,900 ಮೇಲ್ವಿಚಾರಕರಿದ್ದು, ಇವರಲ್ಲಿ ಸುಮಾರು 6,000 ಮಂದಿ ಅನುಮತಿಯಿಲ್ಲದೆ ಗೈರಾಗಿದ್ದಾರೆ.

ಇವರಿಗೆ ಕಾರಣ ಕೇಳಿ ನೋಟಿಸ್‌ಗಳು, ದೈನಂದಿನ ಎಸ್‌ಎಂಎಸ್‌ಗಳು ಮತ್ತು ಕರೆಗಳ ಮೂಲಕ ಸಂಪರ್ಕಿಸಲಾಗುತ್ತಿದೆ. ತಕ್ಷಣ ಕರ್ತವ್ಯಕ್ಕೆ ಹಾಜರಾಗದವರ ವಿರುದ್ಧ "ಕೆಲಸ ಇಲ್ಲ–ವೇತನ ಇಲ್ಲ" (No Work–No Pay) ನಿಯಮ, ಸೇವೆ ವ್ಯತ್ಯಯ (Break-in-Service) ಆದೇಶಗಳು ಜಾರಿಗೊಳ್ಳಲಿವೆ ಹಾಗೂ ಅತ್ಯಂತ ನಿರ್ಲಕ್ಷ್ಯ ತೋರಿದವರ ವಿರುದ್ಧ ಎಫ್‌ಐಆರ್ ಕೂಡಾ ದಾಖಲಿಸಲಾಗುವುದು.

ಅನುಮತಿಯಿಲ್ಲದೆ ಗೈರಾಗಿರುವ ಎಲ್ಲಾ ಸಿಬ್ಬಂದಿ ತಕ್ಷಣ ಕರ್ತವ್ಯಕ್ಕೆ ಹಾಜರಾಗುವಂತೆ ಈ ಮೂಲಕ ಸೂಚಿಸಲಾಗಿದೆ. ಇಲ್ಲವಾದಲ್ಲಿ 24–04–2026 ರೊಳಗೆ ಸೂಕ್ತ ಕ್ರಮಕ್ಕೆ ಆದೇಶಗಳನ್ನು ಜಾರಿಗೊಳಿಸಲಾಗುತ್ತದೆ ಎಂದು ಎಲ್ಲ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

# ಯಲಹಂಕ ಪ್ರದೇಶದಲ್ಲಿ ಅಂಡರ್‌ಪಾಸ್‌ಗಳ ಸಮಗ್ರ ಪರಿಶೀಲನೆ

ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರು ಯಲಹಂಕ ಪ್ರದೇಶದಲ್ಲಿ ಉಂಟಾಗುತ್ತಿರುವ ಸಮಸ್ಯೆಗಳ ಕುರಿತು ಸ್ಥಳೀಯ ಮಟ್ಟದಲ್ಲಿ ಸಮಗ್ರ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ, ಯಲಹಂಕದ ನ್ಯಾಯಾಂಗ ಬಡಾವಣೆಯ ರೈಲ್ವೆ ಅಂಡರ್‌ಪಾಸ್ ಅನ್ನು ವೀಕ್ಷಿಸಿದ ಆಯುಕ್ತರು, ಸ್ಥಳೀಯ ನಿವಾಸಿಗಳಿಂದ ಬಂದಿರುವ ಮನವಿಗಳನ್ನು ಗಮನಿಸಿ, ಅಂಡರ್‌ಪಾಸ್‌ನ ಆಳವನ್ನು ಹೆಚ್ಚಿಸುವ ಅಗತ್ಯವಿರುವುದಾಗಿ ಅಭಿಪ್ರಾಯಿಸಿದರು. ವಾಹನ ಸಂಚಾರದ ಸಮಸ್ಯೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ, ಈ ಕಾಮಗಾರಿಯನ್ನು ಕೈಗೊಳ್ಳಲು ರೈಲ್ವೆ ಇಲಾಖೆಯೊಂದಿಗೆ ಸಮನ್ವಯ ಸಾಧಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದೇ ವೇಳೆ, ನ್ಯಾಯಾಂಗ ಬಡಾವಣೆಯಲ್ಲಿ ರಾಜ್ಯ ಸರಕಾರದ ವಿಶೇಷ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳ ಸಂಬಂಧ ಪಟ್ಟಂತೆ ನ್ಯಾಯಾಂಗ ಬಡಾವಣೆಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಪರಿಶೀಲನೆ ಮಾಡಿದರು.



**ಜಲಾವೃತ ಸಮಸ್ಯೆಗೆ ತಾಂತ್ರಿಕ ಕ್ರಮ ಕೈಗೊಳ್ಳಿ**

ತದನಂತರ, ಯಲಹಂಕದ ಕಾಫಿ ಡೇ ಅಂಡರ್‌ಪಾಸ್‌ನ್ನು ಪರಿಶೀಲಿಸಿದ ಆಯುಕ್ತರು, ಮಳೆಗಾಲದ ಸಂದರ್ಭದಲ್ಲಿ ಇಲ್ಲಿ ನೀರು ಸಂಗ್ರಹವಾಗಿ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದನ್ನು ಗಮನಿಸಿದರು. ಜಲಾವೃತ ಸಮಸ್ಯೆಯಿಂದ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗುವುದಲ್ಲದೆ, ಸಾರ್ವಜನಿಕರ ಸುರಕ್ಷತೆಗೂ ಧಕ್ಕೆಯಾಗುವ ಸಾಧ್ಯತೆ ಇರುವುದರಿಂದ, ಈ ಸಮಸ್ಯೆಯನ್ನು ತಕ್ಷಣ ಪರಿಹರಿಸಲು ಅಗತ್ಯ ತಾಂತ್ರಿಕ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**ಸಮರ್ಪಕ ಡ್ರೇನೇಜ್ ವ್ಯವಸ್ಥೆ ಕಲ್ಪಿಸಿ, ನೀರು ಸರಾಗವಾಗಿ ಹರಿಯಲು ಅನುವು ಮಾಡಿ**

ಅಂಡರ್‌ಪಾಸ್‌ಗಳಲ್ಲಿ ನೀರು ನಿಲ್ಲುವ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲು ಸಮರ್ಪಕ ಡ್ರೇನೇಜ್ ವ್ಯವಸ್ಥೆ, ನೀರಿನ ಹೊರಹರಿವು ವ್ಯವಸ್ಥೆಯ ಸುಧಾರಣೆ ಹಾಗೂ ನಿಯಮಿತ ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುವ ಅಗತ್ಯವಿದ್ದು, ತಕ್ಷಣ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಏರ್‌ಪೋರ್ಟ್ ಮಾರ್ಗದ ಸ್ವಚ್ಛತೆಗೆ ಕಟ್ಟುನಿಟ್ಟಿನ ಸೂಚನೆ**

ಏರ್‌ಪೋರ್ಟ್ ರಾಷ್ಟ್ರೀಯ ಹೆದ್ದಾರಿ ಮಾರ್ಗದ ಸ್ವಚ್ಛತೆ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಆಯುಕ್ತರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರೊಂದಿಗೆ (ಓಊಂಖ) ಸಮನ್ವಯ ಮಾಡಿಕೊಂಡು. ಆ ಮಾರ್ಗದಲ್ಲಿ ನಿರಂತರ ಸ್ವಚ್ಛತಾ ಕಾರ್ಯಗಳನ್ನು ಕೈಗೊಳ್ಳುವಂತೆ ಸ್ಥಳದಲ್ಲಿ ಹಾಜರಿದ್ದ ಯಲಹಂಕ ವ್ಯಾಪ್ತಿಯ ಃಖಘಒಐ ಸಹಾಯಕ ಪ್ರಧಾನ ವ್ಯವಸ್ಥಾಪಕರಿಗೆ (ಂಉಖ) ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಜೊತೆಗೆ, ಸಾರ್ವಜನಿಕ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ರಾತ್ರಿ ವೇಳೆ ಮಾರ್ಷಲ್‌ಗಳ ಮೂಲಕ ಪೆಟ್ರೋಲಿಂಗ್ ವ್ಯವಸ್ಥೆಯನ್ನು ಬಲಪಡಿಸಿ, ರಾತ್ರಿ 1 ಗಂಟೆಯವರೆಗೆ ಪರಿಶೀಲನೆ ನಡೆಸುವಂತೆ ಸೂಚಿಸಿದರು. ನಗರದಲ್ಲಿ ಇಂತಹ ಮೂಲಸೌಕರ್ಯ ಸಂಬಂಧಿತ ಸಮಸ್ಯೆಗಳ ಪರಿಹಾರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಸಾರ್ವಜನಿಕರ ಅನುಕೂಲತೆ ಹಾಗೂ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ಅಗತ್ಯ ಕ್ರಮಗಳನ್ನು ಶೀಘ್ರಗತಿಯಲ್ಲಿ ಕೈಗೊಳ್ಳಲಾಗುವುದು ಎಂದು ಆಯುಕ್ತರು ತಿಳಿಸಿದರು. ಈ ಸಂದರ್ಭದಲ್ಲಿ ಜಂಟಿ ಆಯುಕ್ತರಾದ ಶ್ರೀಮತಿ ಪಲ್ಲವಿ, ಕಾರ್ಯಪಾಲಕ ಅಭಿಯಂತರರಾದ ಸುಧಾಕರ್ ರೆಡ್ಡಿ ಸೇರಿದಂತೆ ಇತರೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗದವರು ಹಾಜರಿದ್ದರು.

# ಇಬ್ಲೂರು ಜಂಕ್ಷನ್‌ನಲ್ಲಿ ಮೇಲ್ಸೇತುವೆ ನಿರ್ಮಾಣಕ್ಕೆ ಡಿಪಿಆರ್ ಸಿದ್ಧಪಡಿಸಿ: ಮಹೇಶ್ವರ್ ರಾವ್

ಬೆಂಗಳೂರು : ಹೊರ ವರ್ತುಲ ರಸ್ತೆಯ ಇಬ್ಲೂರು ಜಂಕ್ಷನ್ ಬಳಿ ಹೆಚ್ಚುವರಿ ಮೇಲ್ಸೇತುವೆ ನಿರ್ಮಾಣಕ್ಕಾಗಿ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಬಿಎ ವ್ಯಾಪ್ತಿಯಲ್ಲಿ ಸುರಕ್ಷಾ–75 ಜಂಕ್ಷನ್‌ಗಳ ಅಭಿವೃದ್ಧಿ ಹಾಗೂ ವೈಟ್ ಟಾಪಿಂಗ್ ಕಾರ್ಯಗಳಿಗೆ ಸಂಬಂಧಿಸಿದಂತೆ ಇಂದು ಜಿಬಿಎ ಕೇಂದ್ರ ಕಚೇರಿಯ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ನಗರದ ಹೊರ ವರ್ತುಲ ರಸ್ತೆಯ ಇಬ್ಲೂರು ಜಂಕ್ಷನ್ ಬಳಿ ಹೆಚ್ಚುವರಿ ಮೇಲ್ಸೇತುವೆ ನಿರ್ಮಾಣ ಮಾಡಿದಲ್ಲಿ ಸಂಚಾರ ದಟ್ಟಣೆ ಕಡಿಮೆಯಾಗಲಿದೆ. ಈ ಹಿನ್ನೆಲೆಯಲ್ಲಿ ಕೂಡಲೇ ಡಿಪಿಆರ್ ಸಿದ್ಧಪಡಿಸಿ, ತ್ವರಿತಗತಿಯಲ್ಲಿ ಮೇಲ್ಸೇತುವೆ ನಿರ್ಮಾಣ ಮಾಡಲು ಸಮಗ್ರ ಯೋಜನೆ ರೂಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸುರಕ್ಷಾ–75 ಯೋಜನೆಯಡಿ ಇಬ್ಲೂರು ಜಂಕ್ಷನ್ ಅಭಿವೃದ್ಧಿ ಕಾರ್ಯ ಪ್ರಗತಿಯಲ್ಲಿದ್ದು, ಸಂಚಾರಿ ಪೊಲೀಸ್ ವಿಭಾಗದೊಂದಿಗೆ ಸಮನ್ವಯ ಮಾಡಿಕೊಂಡು ತ್ವರಿತಗತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಜೊತೆಗೆ, ಜಂಕ್ಷನ್ ಬಳಿಯಿರುವ ಖಾಲಿ ಜಾಗವನ್ನು ಪಾಲಿಕೆ ವಶಕ್ಕೆ ಪಡೆದು ಸಂಚಾರ ದಟ್ಟಣೆ ನಿವಾರಣೆಗೆ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

**ಸಮನ್ವಯ ಮಾಡಿಕೊಂಡು ಕೆಲಸ ಮಾಡಿ:** ಸುರಕ್ಷಾ–75 ಯೋಜನೆಯಡಿ 32 ಜಂಕ್ಷನ್‌ಗಳಿಗೆ ಸಂಬಂಧಿಸಿದಂತೆ



ಸಂಚಾರಿ ಪೊಲೀಸ್ ವಿಭಾಗದೊಂದಿಗೆ ಸಮನ್ವಯ ಸಭೆ ನಡೆಸಿ ಜಿಎಫ್‌ಸಿಗಳನ್ನು ಅಂತಿಮಗೊಳಿಸಿ ಆಯಾ ನಗರ ಪಾಲಿಕೆಗಳಿಗೆ ನೀಡಲಾಗಿದೆ. ಈ ಪೈಕಿ 10 ಜಂಕ್ಷನ್‌ಗಳಲ್ಲಿ ಕೆಲಸ ಪ್ರಾರಂಭಿಸಲಾಗಿದ್ದು, ಶೀಘ್ರಗತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಉಳಿದ ಜಂಕ್ಷನ್ ಗಳಗನ್ನು ಕೂಡಾ ಸಂಚಾರಿ ಪೊಲೀಸ್ ಸಮನ್ವಯದೊಂದಿಗೆ, ತ್ವರಿತಗತಿಯಲ್ಲಿ ಕೈಗೆತ್ತಿಕೊಂಡು, ಪೂರ್ಣಗೊಳಿಸಲು ಸೂಚಿಸಿದರು. ಮೆಟ್ರೋ ಮಾರ್ಗ ಇರುವ ಕಡೆಗಳಲ್ಲಿ ಪಾಲಿಕೆ, ಮೆಟ್ರೋ ಹಾಗೂ ಸಂಚಾರಿ ಪೊಲೀಸ್ ವಿಭಾಗದ ಅಧಿಕಾರಿಗಳು ಜಂಟಿ ಪರಿಶೀಲನೆ ನಡೆಸಿ ವಿನ್ಯಾಸಗಳನ್ನು ಅಂತಿಮಗೊಳಿಸಿಕೊಂಡು ತ್ವರಿತಗತಿಯಲ್ಲಿ ಕೆಲಸ ಪ್ರಾರಂಭಿಸಲು ಸೂಚನೆ ನೀಡಿದರು.

**ಸಮಸ್ಯೆ ಬಗೆಹರಿಸಿ ಕಾಮಗಾರಿಗೆ ವೇಗ ನೀಡಿ:** ನಗರದಲ್ಲಿ ಹಲವಾರು ರಸ್ತೆಗಳಲ್ಲಿ ವೈಟ್ ಟಾಪಿಂಗ್ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಜಲಮಂಡಳಿ ಪೈಪ್‌ಲೈನ್/ಒಳಚರಂಡಿ ಕಾಮಗಾರಿ ಹಾಗೂ ಸಂಚಾರಿ ಪೊಲೀಸ್ ವಿಭಾಗದಿಂದ ಅನುಮತಿ ಪಡೆಯಬೇಕಿರುವ ಕಾಮಗಾರಿಗಳಿಗೆ ಕೂಡಲೇ ಅನುಮತಿ ಪಡೆದು ಕಾಮಗಾರಿಗಳಿಗೆ ವೇಗ ನೀಡಿ, ಕಾಲಮಿತಿಯೊಳಗಾಗಿ ಕೆಲಸ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ ನಗರ ಪಾಲಿಕೆ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್, ಕೆ.ಎನ್. ರಮೇಶ್, ಡಾ. ರಾಜೇಂದ್ರ ಕೆ.ವಿ., ಮುಖ್ಯ ಅಭಿಯಂತರರು, ಬಿ–ಸ್ಮೈಲ್, ಜಲಮಂಡಳಿ, ಬೆಸ್ಕಾಂ, ಮೆಟ್ರೋ ಅಧಿಕಾರಿಗಳು ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಆಕ್ಸಿಜನ್ ದುರಂತದ ಸಂತ್ರಸ್ತ ಕುಟುಂಬದ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡಿ ನುಡಿದಂತೆ ನಡೆದಿದ್ದೇವೆ: ಡಿ.ಕೆ. ಶಿವಕುಮಾರ್

**ಗುಂಡ್ಲುಪೇಟೆ :** "ಚಾಮರಾಜನಗರ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟವರ ಕುಟುಂಬ ಸದಸ್ಯರಿಗೆ ಜಿಲ್ಲಾ ಆಸ್ಪತ್ರೆಯಲ್ಲಿ ಸರ್ಕಾರಿ ಉದ್ಯೋಗ ನೀಡುವ ಮೂಲಕ ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಆ ಕುಟುಂಬದ ಮಹಿಳೆಯರು ಹಾಗೂ ಮಕ್ಕಳ ಮುಖದಲ್ಲಿ ನಗು ನೋಡಿ ನಮ್ಮ ಬದುಕು ಸಾರ್ಥಕವೆನಿಸಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.


ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ 110 ಕೆರೆ ಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿದರು.

"ಜೀವನಕ್ಕಿಂತ ಮಿಗಿಲಾದದ್ದು, ನೆಮ್ಮದಿ, ನೆಮ್ಮದಿಗಿಂತ ಮಿಗಿಲಾದದ್ದು ನಂಬಿಕೆ, ನಂಬಿಕೆಗಿಂತ ಮಿಗಿಲಾದದ್ದು ಆತ್ಮವಿಶ್ವಾಸ, ಆತ್ಮವಿಶ್ವಾಸಕ್ಕಿಂತ ಮಿಗಿಲಾದದ್ದು ನಾವು ನುಡಿದಂತೆ ನಡೆದ ಮಾತು. ನಾನು ಹಾಗೂ ಸಿದ್ದರಾಮಯ್ಯ ಅವರು ಚಾಮರಾಜನಗರಕ್ಕೆ ಬಂದು ಬಿಜೆಪಿ ಸರ್ಕಾರದ ಅವಧಿಯಲ್ಲಿ ಇಲ್ಲಿ ನಡೆದ 33 ಮಂದಿಯ ಕೊಲೆ ಪರಿಶೀಲನೆ ಮಾಡಿದೆವು.

ಅಂದು ಬಿಜೆಪಿ ಸರ್ಕಾರ ಆಸ್ಪತ್ರೆಯಲ್ಲಿ ಸತ್ತವರು ಕೇವಲ 3 ಮಂದಿ ಎಂದು ಹೇಳಿತ್ತು. ನಾನು, ಸಿದ್ದರಾಮಯ್ಯ ಹಾಗೂ ಧ್ರುವನಾರಾಯಣ್, ಕೃಷ್ಣಮೂರ್ತಿ, ಪುಟ್ಟರಂಗಶೆಟ್ಟಿ ಅವರು ಎಲ್ಲರ ಗಮನ ಸೆಳೆದು ಮೃತರ ಕುಟುಂಬಕ್ಕೆ ಭೇಟಿ ಮಾಡಿ ಅವರಿಗೆ ನ್ಯಾಯ ಒದಗಿಸುವ ಮಾತು ಕೊಟ್ಟಿದ್ದೆವು. ನಾವು ನುಡಿದಂತೆ ನಡೆದಿರುವುದು ನಮ್ಮ ಜನಪರ ಆಡಳಿತಕ್ಕೆ ಸಾಕ್ಷಿಯಾಗಿದೆ. ಈ ಕಾರ್ಯಕ್ಕೆ ಸಹಕಾರ ನೀಡಿದ ಜಿಲ್ಲಾ ಉಸ್ತುವಾರಿ ಸಚಿವರಾದ ವೆಂಕಟೇಶ್, ಶರಣಪ್ರಕಾಶ್ ಪಾಟೀಲ್ ಹಾಗೂ ಅಧಿಕಾರಿಗಳಿಗೆ ಸರ್ಕಾರದ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ" ಎಂದರು.

"ಕೋವಿಡ್ ಸಮಯದಲ್ಲಿ ಲಕ್ಷಾಂತರ ಮಂದಿ ಸತ್ತಿದ್ದಾರೆ. ನಾವು ಎಲ್ಲರಿಗೂ ನ್ಯಾಯ ಒದಗಿಸಲು ಸಾಧ್ಯವಾಗದೇ ಇರಬಹುದು. ಆದರೆ ಈ ಜಿಲ್ಲೆಯಲ್ಲಿ ಸತ್ತವರ ಕುಟುಂಬವನ್ನು ಭೇಟಿ ಮಾಡಿ, ಪಕ್ಷದ ವತಿಯಿಂದ ಪರಿಹಾರ ನೀಡಿ, ಅವರಿಗೆ ಆತ್ಮಸ್ಥೈರ್ಯ ತುಂಬಿದೆವು" ಎಂದು ಹೇಳಿದರು.

"ಮನುಷ್ಯನ ಹುಟ್ಟು ಆಕಸ್ಮಿಕ, ಸಾವು ಅನಿವಾರ್ಯ, ಜನನ ಉಚಿತ, ಮರಣ ಖಚಿತ, ಈ ಹುಟ್ಟು ಸಾವಿನ ಮಧ್ಯೆ ನಾವು ಏನು ಮಾಡುತ್ತೇವೆ ಎಂಬುದು ಬಹಳ ಮುಖ್ಯ. ನಮಗೆ ಸಿಕ್ಕ ಅವಕಾಶದಲ್ಲಿ ನಾವು ಕೊಟ್ಟ ಮಾತಿನಂತೆ ನಡೆದಿದ್ದೇವೆ. ಈ ಕ್ಷೇತ್ರದಲ್ಲಿ ಮಹದೇವ ಪ್ರಸಾದ್ ಅವರು ನಿಮ್ಮ ಹೃದಯ ಗೆದ್ದು ಕೆಲಸ ಮಾಡಿಕೊಂಡು ಬಂದಿದ್ದರು. ಇಂದು ನೀವು ಅವರ ಮಗನನ್ನು ಶಾಸಕರನ್ನಾಗಿ ಆಯ್ಕೆ ಮಾಡಿದ್ದು, ಅವರು ನಿಮ್ಮ ಋಣ ತೀರಿಸುವ ಕೆಲಸ ಮಾಡುತ್ತಿದ್ದಾರೆ" ಎಂದರು.



**ಕಾಂಗ್ರೆಸ್ ಸರ್ಕಾರದಿಂದ ಗ್ಯಾರಂಟಿ ಯೋಜನೆ, ಕ್ಷೇತ್ರಕ್ಕೆ 1 ಸಾವಿರ ಕೋಟಿ, 110 ಕೆರೆಗಳಿಗೆ ನೀರು**

"ನಾನು ಚುನಾವಣೆ ಸಂದರ್ಭದಲ್ಲಿ, ರಾಹುಲ್ ಗಾಂಧಿ ಅವರ ಭಾರತ ಜೋಡೋ ಯಾತ್ರೆ ಸಂದರ್ಭದಲ್ಲಿ ಗುಂಡ್ಲುಪೇಟೆಗೆ ಬಂದಿದೆ. ಆಗ ಒಂದು ಮಾತು ಹೇಳಿದ್ದೆ. ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚೆಂದ, ದಾನ ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಮಾತ್ರ ಚೆಂದ ಎಂದು ಹೇಳಿದ್ದೆ.

ಈ ಕೈ ಅಧಿಕಾರದಲ್ಲಿ ಇದ್ದ ಕಾರಣಕ್ಕೆ ಜಿಲ್ಲೆಯ ಈ 25 ಸಂತ್ರಸ್ತ ಕುಟುಂಬ ಸದಸ್ಯರಿಗೆ ಉದ್ಯೋಗ ಸಿಕ್ಕಿದೆ. 500 ಕೋಟಿ ವೆಚ್ಚದಲ್ಲಿ ಈ ಭಾಗದ 110 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಸಿಕ್ಕಿದೆ. 1 ಸಾವಿರ ಕೋಟಿಗೂ ಹೆಚ್ಚು ಅನುದಾನ ಕ್ಷೇತ್ರದ ಅಭಿವೃದ್ಧಿಗೆ ಬಂದಿದೆ. ಇವುಗಳ ಜತೆಗೆ ಪಂಚ ಗ್ಯಾರಂಟಿ ಯೋಜನೆಗಳು ನಿಮ್ಮನ್ನು ತಲುಪಿವೆ. ಮಹಿಳೆಯರು ಉಚಿತವಾಗಿ ಬಸ್ ಪ್ರಯಾಣ ಮಾಡುತ್ತಿದ್ದಾರೆ. ಬಡ ಕುಟುಂಬದ ಮಹಿಳೆಗೆ ಮಾಸಿಕ 2 ಸಾವಿರ ರೂಪಾಯಿ ಹಣ ಬರುತ್ತಿದೆ. ಬಡವರಿಗೆ ತಿಂಗಳಿಗೆ 10 ಕೆ.ಜಿ ಅಕ್ಕಿ. 200 ಯೂನಿಟ್ ವರೆಗೂ ಉಚಿತ ವಿದ್ಯುತ್, ನಿರುದ್ಯೋಗಿ ಯುವಕರಿಗೆ ನಿರುದ್ಯೋಗ ಭತ್ಯೆ ನೀಡಲಾಗುತ್ತಿದೆ" ಎಂದು ವಿವರಿಸಿದರು.

**ವಾರ್ಷಿಕ 1 ಲಕ್ಷ ಕೋಟಿ ಹಣ ಜನರಿಗೆ ಸಮರ್ಪಣೆ**

"ನಾವು ಜಾತಿ, ಧರ್ಮ ಹಾಗೂ ಪಕ್ಷದ ಆಧಾರದ ಮೇಲೆ ಯೋಜನೆಗಳನ್ನು ನೀಡುತ್ತಿಲ್ಲ.

ನಾನು ಅಸ್ಸಾಂ ವಿಧಾನಸಭಾ ಚುನಾವಣೆಗೆ ಹೋಗಿದ್ದೆ. ಅಲ್ಲಿನ ಬಿಜೆಪಿ ಸರ್ಕಾರ ನಮ್ಮ ಕಾರ್ಯಕ್ರಮ ನೋಡಿ ಅಲ್ಲಿ ಗ್ಯಾರಂಟಿ ಯೋಜನೆ ಜಾರಿ ಮಾಡಿದ್ದಾರೆ. ಅಲ್ಲಿ ಬಿಜೆಪಿ ಕಾರ್ಯಕರ್ತರಿಗೆ ಮಾತ್ರ ಗ್ಯಾರಂಟಿ ಯೋಜನೆ ನೀಡುತ್ತಿದ್ದಾರೆ. ನಾವು ನಮ್ಮ ರಾಜ್ಯದಲ್ಲಿ ದಳ, ಬಿಜೆಪಿ ಎಂದು ನೋಡದೇ ಎಲ್ಲ ಅರ್ಹ ಫಲಾನುಭವಿಗಳಿಗೆ ಯೋಜನೆ ನೀಡುತ್ತಿದ್ದೇವೆ. ಇದು ಕಾಂಗ್ರೆಸ್ ಪಕ್ಷದ ಇತಿಹಾಸ. ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ, ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲಾ ವರ್ಗದವರು ಅಧಿಕಾರಕ್ಕೆ ಬಂದಂತೆ. ರೈತರ ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ನೀಡಲು ನಮ್ಮ ಸರ್ಕಾರ ವಾರ್ಷಿಕ 20 ಸಾವಿರ ಕೋಟಿ ವೆಚ್ಚ ಮಾಡುತ್ತಿದೆ. ಗ್ಯಾರಂಟಿ ಯೋಜನೆಗಳಿಗೆ 52 ಸಾವಿರ ಕೋಟಿ, ಎಸ್ ಸಿಪಿ, ಟಿಎಸ್ ಪಿ ಹಾಗೂ ಪಿಂಚಣಿ ಯೋಜನೆ ಸೇರಿಸಿದರೆ ಪ್ರತಿ ವರ್ಷ 1 ಲಕ್ಷ ಕೋಟಿ ಹೆಚ್ಚು ಹಣವನ್ನು ಜನರ ಜೇಬಿಗೆ ಹಾಕುತ್ತಿದೆ" ಎಂದು ಹೇಳಿದರು.

"ಗಣೇಶ್ ಪ್ರಸಾಸ್ ಅವರ ಬೇಡಿಕೆಯಂತೆ ಇಂದು ಈ ಭಾಗದ ಕೆರೆಗಳಿಗೆ ನೀರು ತುಂಬಿಸಬೇಕು ಎಂದು 475 ಕೋಟಿ ವೆಚ್ಚದಲ್ಲಿ 110 ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಇಂತಹ ಯಾವುದಾದರೂ ಒಂದು ಕಾರ್ಯಕ್ರಮ ಕೊಟ್ಟಿದ್ದರಾ? ಅವರದ್ದು ಏನಿದ್ದರೂ ಖಾಲಿ ಬುಟ್ಟಿ ಬೇವಿನ ಸೊಪ್ಪು, ನಂದೇ ಬೆಳಗೋ ಪೂಜಾರಿ ಎಂಬಂತೆ ಖಾಲಿ ಮಾತು ಅಷ್ಟೆ. ಯಡಿಯೂರಪ್ಪ ಅವರ ಕಾಲದಲ್ಲಿ 2 ಸೀರೆ ಒಂದು ಸೈಕಲ್ ಕೊಟ್ಟಿದ್ದು ಬಿಟ್ಟರೆ ಬೇರೆ ಏನಾದರೂ ಕೊಟ್ಟರಾ? ರಾಜ್ಯದಲ್ಲಿ ಯಾವುದೇ ಜನಪರ ಕಾರ್ಯಕ್ರಮ ನೀಡಿದ್ದರೆ ಅದು ಕಾಂಗ್ರೆಸ್ ಸರ್ಕಾರ ಮಾತ್ರ" ಎಂದರು.

**10 ದಿನದಲ್ಲಿ ಮೇಕೆದಾಟು ಡಿಪಿಆರ್ ಕೇಂದ್ರಕ್ಕೆ ಸಲ್ಲಿಕೆ**

"ನಮ್ಮ ಸರ್ಕಾರ ಆರನೇ ಗ್ಯಾರಂಟಿಯಾಗಿ ಭೂಮಿ ಗ್ಯಾರಂಟಿ ನೀಡಿದೆ. 1,11,111 ಜನರಿಗೆ ಭೂಮಿ ಪಟ್ಟಾ ದಾಖಲೆ ಉಚಿತವಾಗಿ ನೀಡಿ ಅವರಿಗೆ ಭೂಮಿ ಗ್ಯಾರಂಟಿ ಯೋಜನೆ ನೀಡಿದ್ದೇವೆ.

ನಮ್ಮ ಏಳನೇ ಗ್ಯಾರಂಟಿ ಯೋಜನೆಯಾಗಿ ಇಡೀ ರಾಜ್ಯದಲ್ಲಿ ಕೆರೆಗಳಿಗೆ ನೀರು ತುಂಬಿಸುವ ಮೂಲಕ ನೀರನ್ನು ಒದಗಿಸುವ ಕಾರ್ಯಕ್ರಮ ನೀಡಲಾಗುತ್ತಿದೆ. ಮೇಕೆದಾಟು ವಿಚಾರವಾಗಿ ಕುಮಾರಸ್ವಾಮಿ ಹೇಳಿಕೆ ನೀಡಿದ್ದಾರೆ ಎಂದು ಮಾಧ್ಯಮಗಳು ಕೇಳುತ್ತಿದ್ದವು. ನೀವೆಲ್ಲರೂ ಸೇರಿ ನಮ್ಮ ನೀರು ನಮ್ಮ ಹಕ್ಕು ಎಂದು ಹೋರಾಟದ ಹೆಜ್ಜೆ ಹಾಕಿದಿರಿ.

ಸುಪ್ರೀಂ ಕೋರ್ಟ್ ನಲ್ಲಿ ನಮಗೆ ಈ ವಿಚಾರವಾಗಿ ನ್ಯಾಯ ಸಿಕ್ಕಿದ್ದು, ಈ ಯೋಜನೆ ವಿಚಾರವಾಗಿ ಅಂತಿಮ ತೀರ್ಮಾನ ಕೇವಲ ಕೇಂದ್ರ ಸರ್ಕಾರ ಮಾಡಬೇಕು ಎಂದು ಹೇಳಿದೆ. ನಾವು ಈಗಾಗಲೇ ಡಿಪಿಆರ್ ತಯಾರಿ ಮಾಡುತ್ತಿದ್ದು, ಮುಂದಿನ ಹತ್ತು ದಿನಗಳಲ್ಲಿ ಈ ಡಿಪಿಆರ್ ಕೇಂದ್ರಕ್ಕೆ ಸಲ್ಲಿಸಲಿದ್ದು, ನಂತರ ಅವರು ಅನುಮತಿ ನೀಡಬೇಕು. ಕೇಂದ್ರದ ಅನುಮತಿ ಸಿಕ್ಕ ನಂತರ ಯೋಜನೆ ಜಾರಿ ಮಾಡಲಾಗುವುದು. ಈಗಾಗಲೇ ಯೋಜನೆ ಜಾರಿಗೆ ಕಚೇರಿ ಆರಂಭಿಸಿದ್ದು, ಅಗತ್ಯ ಭೂಮಿಯನ್ನು ಗುರುತಿಸಿದ್ದೇವೆ" ಎಂದು ತಿಳಿಸಿದರು.

"ನಾನು ಕುಮಾರಸ್ವಾಮಿ ಹಾಗೂ ಬಿಜೆಪಿ ನಾಯಕರಿಗೆ ಹೇಳುವುದೊಂದೆ. ಟೀಕೆಗಳನ್ನು ಮಾಡುವುದು ಬಹಳ ಸುಲಭ. ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ. ನಾವು ಮೇಕೆದಾಟು ಯೋಜನೆಗೆ ಸಂಕಲ್ಪ ಮಾಡಿದ್ದೇವೆ. ಮನಸ್ಸಿದ್ದಲ್ಲಿ ಮಾರ್ಗವಿದೆ. ಶ್ರಮವಿದ್ದಲ್ಲಿ ಫಲವಿದೆ.

ಗಣೇಶ್ ಪ್ರಸಾದ್ ಅತ್ಯುತ್ತಮ ಶಾಸಕ, ಮಹದೇವ್ ಪ್ರಸಾದ್ ಅವರ ಸ್ಥಾನವನ್ನು ತುಂಬುವ ಶಕ್ತಿ ಅವರಿಗಿದೆ. ನಾವು ಅವರನ್ನು ಬೆಳೆಸಬೇಕು. ಅವರು ನಿಮ್ಮ ಆಸ್ತಿಯಾಗಿ ಬೆಳೆಯಲಿದ್ದಾರೆ. ನಮ್ಮ ಧ್ರುವನಾರಾಯಣ್ ಅವರ ಪುತ್ರ ದರ್ಶನ್, ಪುಟ್ಟರಂಗಶೆಟ್ಟಿ, ಕೃಷ್ಣಮೂರ್ತಿ ಅವರು ಅತ್ಯುತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಇಡೀ ಸರ್ಕಾರ ನಿಮ್ಮ ಕೈ ಬಲಪಡಿಸಲು ನಾವೆಲ್ಲರೂ ಬಂದಿದ್ದೇವೆ. ಹಸಿವುಮುಕ್ತ, ಬಡತನಮುಕ್ತ, ಅಸಮಾನತೆ ಮುಕ್ತ ರಾಜ್ಯ ನಿರ್ಮಾಣಕ್ಕೆ ಸಂಕಲ್ಪ ಮಾಡಿದ್ದೇವೆ. ನಿಮ್ಮ ಆಶೀರ್ವಾದ ನಮ್ಮ ಮೇಲಿರಲಿ" ಎಂದು ತಿಳಿಸಿದರು.

# ಶ್ರೀ ಪಂಚಭೊತೇಶ್ವರ ಸುಕ್ಷೇತ್ರ ದೇವಾಲಯದ ಮಂಠದಲ್ಲಿ ಮಕ್ಕಳಿಗೆ ಸಂಸ್ಕಾರ ಜ್ಞಾನ ಶಿಭಿರ

**ಕೆ ಆರ್ ಪೇಟೆ:** ತಾಲ್ಲೂಕಿನ ಕಿಕ್ಕೇರಿ ಸಮೀಪದ ಬೆಡದಹಳ್ಳಿಯ ಶ್ರೀ ಪಂಚಭೊತೇಶ್ವರ ದೇವಾಲಯದ ಮಠದಲ್ಲಿ ಮಕ್ಕಳಿಗೆ ವಸತಿ ಸಹಿತ ಸಂಸ್ಕಾರ ಜ್ಞಾನ ಶಿಬಿರವನ್ನು ಆಯೋಜನೆ ಮಾಡಲಾಗಿತ್ತು..

ಶಾಸಕ ಹೆಚ್ ಟಿ ಮಂಜು ಕಾರ್ಯಕದಮವನ್ನು ಉದ್ಘಾಟಿಸಿ ಮಾತನಾಡಿ ಮಕ್ಕಳಿಗೆ ಶಿಕ್ಷಣದ ಜೊತೆಗೆ




ಸಂಸ್ಕಾರದವನ್ನು ಕಲಿಕೆಯಾಗಬೇಕು ಅದೇ ರೀತಿ ಕಳೆದ ಮೂರು ವರ್ಷಗಳಿಂದ ಶ್ರೀ ಪಂಚಭೊತೇಶ್ವರ ಸುಕ್ಷೇತ್ರದಲ್ಲಿ ಪೀಠಾದ್ಯಕ್ಷರದ ಶ್ರೀ ರುದ್ರುಮುನಿ ಸ್ವಾಮೀಜಿ ರವರು ಮಕ್ಕಳಿಗೆ ಸಂಸ್ಕಾರದ ಅರಿವು ಮತ್ತು ಚಿತ್ರಕಲೆ, ಸಂಗೀತಾ, ನೃತ್ಯ ಸೇರಿದಂತೆ ಹತ್ತು ಹಲವು ಕಾರ್ಯಕ್ರಮದೊಂದಿಗೆ ಸುಮಾರು 50 ಕ್ಕೂ ಹೆಚ್ಚು ಮಕ್ಕಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದು ಈ ಶಿಭಿರದ ಪ್ರಯೋಜನವನ್ನು ಮಕ್ಕಳು ಪಡೆದುಕೊಳ್ಳುವಂತೆ ತಿಳಿಸಿದ್ರು..

ಶ್ರೀ ಪಂಚಭೊತೇಶ್ವರ ಸುಕ್ಷೇತ್ರ ಪೀಠಾದ್ಯಕ್ಷರಾದ ಶ್ರೀ ರುದ್ರಮುನಿ ಸ್ವಾಮೀಜಿ ಮಾತನಾಡಿ ಪ್ರತಿ ವರ್ಷದಂತೆ ದಾನಿಗಳ ಸಹಾರದೊಂದಿಗೆ ಊಟ ವಸತಿ ಸಹಿತ 10 ದಿನದ ಮಕ್ಕಳಿಗೆ ಸಂಸ್ಕಾರ ಶಿಭಿರ ಆಯೋಜನೆ ಮಾಡಲಾಗಿದ್ದು ಈ ಕಾರ್ಯಕ್ರಮಕ್ಕೆ ಧಾನಿಗಳು ಕೈಲಾದ ಸಹಾಯ ಮಾಡುವುದರ ಜೊತೆಗೆ ಮಕ್ಕಳ ಕಲಿಗೆ ಕೈ ಜೋಡಿಸುವಂತೆ ತಿಳಿಸಿದ್ರು..

ಕಾರ್ಯಕ್ರಮದಲ್ಲಿ ಶ್ರೀ ರುದ್ರಮುನಿ ಸ್ವಾಮಿಜಿ, ಶಾಸಕ ಹೆಚ್ ಟಿ ಮಂಜು, ಟಿ ಎ ಪಿ.ಎಂ ಎಸ್ ನಿರ್ದೇಶಕ ದೀಲೀಪ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಮಂಜೇಗೌಡ, ಬಿ.ಜಿ.ಪಿ ತಾಲ್ಲೂಕು ಅಧ್ಯಕ್ಷ ಸಾರಂಗಿ ನಾಗಣ್ಣ, ಉದ್ಯಮಿ ಎಂ ಎಸ್ ಸುಬ್ರಹ್ಮಣ್ಯ, ಶಿಕ್ಷಕ ಮಹೇಶ್, ಗ್ರಾಮ ಪಂಚಾಯಿತಿ ಮಾಜಿ ಉಪಾದ್ಯಕ್ಷ ಸುನೀಲ್, ಶಿಕ್ಷಕ ಪ್ರಕಾಶ್, ಮಠದ ಕಾರ್ಯದರ್ಶಿ ಕಾಂತರಾಜು ಪತ್ರಕರ್ತರಾದ ಶ್ರೀನಿವಾಸ್, ಚಂದ್ರು ಕಾಡುಮೆಣಸ, ಸೇರಿದಂತೆ ಮತ್ತಿತ್ತರರು ಇದ್ದರು.

# ಪಾಲಹಳ್ಳಿ ಬೇಸಿಗೆ ಶಿಬಿರದಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿದ ಸಚಿವರಾದ ಚಲುವರಾಯಸ್ವಾಮಿ

**ಶ್ರೀರಂಗಪಟ್ಟಣ:** ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರತರಲು ಬೇಸಿಗೆ ಶಿಬಿರಗಳು ಅತ್ಯುತ್ತಮ ವೇದಿಕೆಯಾಗಿದ್ದು, ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ



ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು. ಶ್ರೀರಂಗಪಟ್ಟಣ ತಾಲ್ಲೂಕಿನ ಪಾಲಹಳ್ಳಿಯಲ್ಲಿ ಆಯೋಜಿಸಲಾಗಿದ್ದ ಮಕ್ಕಳ ಬೇಸಿಗೆ ಶಿಬಿರಕ್ಕೆ ಭೇಟಿ ನೀಡಿ, ಮಕ್ಕಳೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿ ಅವರು ಮಾತನಾಡಿದರು.

**ಮಕ್ಕಳೊಂದಿಗೆ ಸಚಿವರ ಸಂವಾದ:**

ಶಿಬಿರದಲ್ಲಿ ಭಾಗವಹಿಸಿದ್ದ ಮಕ್ಕಳೊಂದಿಗೆ ಕೆಲಕಾಲ ಕಾಲಕಳೆದ ಸಚಿವರು, ಶಿಬಿರದಲ್ಲಿ ಕಲಿಯುತ್ತಿರುವ ವಿಷಯಗಳ ಬಗ್ಗೆ ವಿಚಾರಿಸಿದರು. ಮಕ್ಕಳ ಹಾಡು, ನೃತ್ಯ ಹಾಗೂ ಸೃಜನಾತ್ಮಕ ಚಟುವಟಿಕೆಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. "ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಮಕ್ಕಳು ಕೇವಲ ಅಂಕಗಳಿಗೆ ಸೀಮಿತವಾಗದೆ, ಕಲೆ, ಸಾಹಿತ್ಯ ಮತ್ತು ಕ್ರೀಡೆಗಳಲ್ಲಿಯೂ ಆಸಕ್ತಿ ಬೆಳೆಸಿಕೊಳ್ಳಬೇಕು" ಎಂದು ಅವರು ಕಿವಿಮಾತು ಹೇಳಿದರು.

**ಗಣ್ಯರ ಉಪಸ್ಥಿತಿ:**

ಈ ಸಂದರ್ಭದಲ್ಲಿ ಶ್ರೀರಂಗಪಟ್ಟಣದ ಶಾಸಕ ರಮೇಶ್ ಬಾಬು ಬಂಡಿಸಿದ್ದೇಗೌಡ ಅವರು ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳಿಗೆ ಇಂತಹ ಶಿಬಿರಗಳು ವರದಾನವಾಗಿದ್ದು, ಸ್ಥಳೀಯ ಸಂಸ್ಥೆಗಳು ಇವುಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿವೆ ಎಂದರು.

?ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಅಇಔ) ಕೆ.ಆರ್. ನಂದಿನಿ, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು. ಶಿಬಿರದ ಸಂಘಟಕರು ಹಾಗೂ ಪೋಷಕರು ಈ ಸಂದರ್ಭದಲ್ಲಿ ಹಾಜರಿದ್ದರು.

# 25ರಂದು ಆಕ್ರೋಶ ಯಾತ್ರೆ, ಸಭೆ, 27ರಿಂದ

## ವಿಧಾನಸಭಾ ಕ್ಷೇತ್ರ, ಮಂಡಲಗಳಲ್ಲಿ ಹೋರಾಟ: ಸಿ.ಮಂಜುಳಾ

ಬೆಂಗಳೂರು: ಮಹಿಳಾ ವಿರೋಧಿ ಕಾಂಗ್ರೆಸ್ ಮತ್ತು ಇಂಡಿ ಕೂಟದ ವಿರುದ್ಧ ರಾಜ್ಯಾದ್ಯಂತ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಏ. 25ರಂದು ಆಕ್ರೋಶ ಯಾತ್ರೆ ಮತ್ತು ಸಭೆಗಳನ್ನು ಏರ್ಪಡಿಸಲಾಗುವುದು ಎಂದು ಮಹಿಳಾ ಮೋರ್ಚಾ ರಾಜ್ಯ ಅಧ್ಯಕ್ಷೆ ಕು.ಸಿ.ಮಂಜುಳಾ ಅವರು ತಿಳಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳ ಜೊತೆ ಅವರು ಮಾತನಾಡಿದರು. ಇದೇ 27ರಿಂದ ರಾಜ್ಯದ ಎಲ್ಲ 224 ವಿಧಾನಸಭಾ ಕ್ಷೇತ್ರಗಳಲ್ಲಿ ಮತ್ತು ಬಿಜೆಪಿಯ 300 ಸಂಘಟನಾತ್ಮಕ ಮಂಡಲಗಳಲ್ಲಿ ಹೋರಾಟವೂ ನಡೆಯಲಿದೆ ಎಂದು ತಿಳಿಸಿದರು. ಬಳಿಕ ಬೆಂಗಳೂರು ಮತ್ತು ಹುಬ್ಬಳ್ಳಿಯಲ್ಲಿ ಬೃಹತ್ ರ್ಯಾಲಿಯನ್ನು ಸಂಘಟಿಸುವ ಕುರಿತು ಚರ್ಚೆ ನಡೆಯುತ್ತಿದೆ ಎಂದರು.

ಇಂದಿನಿಂದ ಕೇಂದ್ರ ಸಚಿವರು, ಸಂಸದರು ವಿಭಾಗ ಕೇಂದ್ರಗಳಲ್ಲಿ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ. ಇಂದು ಶಿವಮೊಗ್ಗದಲ್ಲಿ ಸಂಸದ ಬಿ.ವೈ.ರಾಘವೇಂದ್ರ, ಮಂಗಳೂರಿನಲ್ಲಿ ಸಂಸದ ಬ್ರಿಜೇಶ್ ಚೌಟ ಪತ್ರಿಕಾಗೋಷ್ಠಿ ನಡೆಸಿದ್ದಾರೆ. ನಾಳೆ ಮತ್ತು ನಾಡಿದ್ದು ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್– ಬೆಳಗಾವಿ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಹಾವೇರಿಯಲ್ಲಿ, ಕೇಂದ್ರ ಸಚಿವ ಸೋಮಣ್ಣ ಅವರು 23ರಂದು ಮೈಸೂರಿನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಕಾಂಗ್ರೆಸ್ ಮತ್ತು ಅವರ ಮಿತ್ರಪಕ್ಷಗಳ ಮಹಿಳಾ ವಿರೋಧಿ ನೀತಿಯ ಕುರಿತು ತಿಳಿಸಲಿದ್ದಾರೆ ಎಂದು ವಿವರ ನೀಡಿದರು.

ಕಾಂಗ್ರೆಸ್ ಪಕ್ಷವು ಇತಿಹಾಸದ ಉದ್ದಕ್ಕೂ ತನ್ನ ಮಹಿಳಾ ವಿರೋಧಿ ಧೋರಣೆ ಪ್ರದರ್ಶನ ಮಾಡಿದ ಕುರಿತು ತಿಳಿಸಲಿದ್ದಾರೆ ಎಂದು ಹೇಳಿದರು. ಇಂದಿರಾ ಗಾಂಧಿ, ಸೋನಿಯಾ ಗಾಂಧಿ, ಪ್ರಿಯಾಂಕ ಗಾಂಧಿ ಅವರು ಮಾತ್ರ ಮಹಿಳೆಯರು ಎಂದು ಕಾಂಗ್ರೆಸ್ ಭಾವಿಸಿದಂತಿದೆ. ಸಾಮಾನ್ಯ ಮಹಿಳೆಯರಿಗೆ ಸಿಗುವ ಅವಕಾಶಗಳನ್ನು ಅದು ಕಿತ್ತುಕೊಂಡಿದೆ ಎಂದು ಆಕ್ಷೇಪಿಸಿದರು.

ಭಾರತದ ನಾರಿಯರು ಕೇವಲ ಹೂವಲ್ಲ; ಅವರು ಜ್ವಾಲೆ ಕೂಡ ಎಂಬ ನಿಟ್ಟಿನಲ್ಲಿ ಈ ಆಕ್ರೋಶವನ್ನು ನಾವು ವ್ಯಕ್ತಪಡಿಸಲಿದ್ದೇವೆ ಎಂದು ಪ್ರಶ್ನೆಗೆ ಉತ್ತರ ನೀಡಿದರು.

# ಬೆಂಗಳೂರಿನ ಆಟೋ ಡ್ರೈವರಿನ ಬದುಕಿನ ಜೀವನ 'ಚಿತ್ರ'ಣ

ಬೆಂಗಳೂರು : ಯುವ ಪ್ರತಿಭೆ ಶರತ್ ಕೃಷ್ಣ ನಟನೆ ಮತ್ತು ನಿರ್ದೇಶನ ಹೊಸಚಿತ್ರ 'ದೊಡ್ಮನ್ಸ' ತೆರೆಗೆ ಬರಲು ಸಿದ್ದವಾಗಿದೆ. ಈಗಾಗಲೇ ಬಹುತೇಕ ಕೆಲಸಗಳನ್ನು ಪೂರ್ಣಗೊಳಿಸಿರುವ ಚಿತ್ರತಂಡ, ಇದೀಗ 'ದೊಡ್ಮನ್ಸ' ಚಿತ್ರದ ಮೊದಲ ಟೀಸರ್ ಅನ್ನು ಬಿಡುಗೊಳಿಸಿದೆ.

ಬೆಂಗಳೂರಿನಲ್ಲಿರುವ ಆಟೋ ಡ್ರೈವರ್ ಒಬ್ಬನ ಜೀವನದಲ್ಲಿ ನಡೆಯುವ ಘಟನೆಗಳ ಸುತ್ತ ನಡೆಯುವ ಕಾಲ್ಪನಿಕ ಕಥಾಹಂದರವನ್ನು ಹೊಂದಿರುವ 'ದೊಡ್ಮನ್ಸ' ಚಿತ್ರದಲ್ಲಿ ನಾಯಕ ನಟ ಕಂ ನಿರ್ದೇಶಕ ಶರತ್ ಕೃಷ್ಣ ಆಟೋ ಡ್ರೈವರ್ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಚಿತ್ರದಲ್ಲಿ ರೇಷ್ಮಾ ಲಿಂಗರಾಜಪ್ಪ ನಾಯಕಿಯಾಗಿ ಕಾಣಿಸಿಕೊಂಡಿದ್ದು, ಉಳಿದಂತೆ ಹುಲಿ ಕಾರ್ತಿಕ್, ಬಲರಾಜವಾಡಿ, ಶಿಲ್ಪಾ ಮೊದಲಾದ ಕಲಾವಿದರು ಚಿತ್ರದ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ.



'ದೊಡ್ಮನ್ಸ' ಚಿತ್ರದ ಟೀಸರ್ ಬಿಡುಗಡೆ ವೇಳೆ ಮಾತನಾಡಿದ ಚಿತ್ರದ ನಾಯಕ ನಟ ಕಂ ನಿರ್ದೇಶಕ ಶರತ್ ಕೃಷ್ಣ, 'ಸಾಮಾನ್ಯ ಆಟೋ ಡ್ರೈವರ್ ಒಬ್ಬನ ಜೀವನದಲ್ಲಿ ಹೇಗೆ ದೊಡ್ಡ ಮನುಷ್ಯನಾಗುತ್ತಾನೆ. ಸಾಮಾನ್ಯ ಮನುಷ್ಯನೊಬ್ಬ ಜೀವನದಲ್ಲಿ ಯಾವುದರಿಂದ 'ದೊಡ್ಮನ್ಸ' ಆಗುತ್ತಾನೆ ಅನ್ನೋದೆ ಈ ಚಿತ್ರ. ಪಕ್ಕಾ ಮಾಸ್ ಎಂಟರ್ಟೈನ್ಮೆಂಟ್ ಇಟ್ಟುಕೊಂಡು ಈ ಸಿನಿಮಾ ಮಾಡಿದ್ದೇವೆ. ಎಂಬುದು 'ದೊಡ್ಮನ್ಸ' ಚಿತ್ರದ ನಾಯಕ ನಟ ಕಂ ನಿರ್ದೇಶಕ ಶರತ್ ಕೃಷ್ಣ ಮಾತು.

'ದೊಡ್ಮನ್ಸ'ನ ಬಗ್ಗೆ ಮಾತನಾಡಿದ ನಾಯಕ ನಟಿ ರೇಷ್ಮಾ ಲಿಂಗರಾಜಪ್ಪ, 'ಸಾಮಾನ್ಯವಾಗಿ ಬಹುತೇಕ ಸಿನಿಮಾಗಳಲ್ಲಿ ನಾಯಕ ನಟಿಯರಿಗೆ ಪಾತ್ರದ ಪ್ರಾಮುಖ್ಯತೆ ಕಡಿಮೆಯಿರುತ್ತದೆ. ಆದರೆ ಈ ಸಿನಿಮಾದಲ್ಲಿ ನನ್ನ ಪಾತ್ರಕ್ಕೆ ಅದರದ್ದೇ ಆದ ಪ್ರಾಮುಖ್ಯತೆಯಿದೆ. ಸಿನಿಮಾ ತುಂಬ ಚೆನ್ನಾಗಿ ಬಂದಿದ್ದು, ಆದಷ್ಟು ಬೇಗ ಪ್ರೇಕ್ಷಕರ ಮುಂದೆ ಬರಲಿದ್ದೇವೆ' ಎಂದರು.

'ದೊಡ್ಮನ್ಸ' ಚಿತ್ರದ ಚಿತ್ರೀಕರಣ ಅನುಭವಗಳ ಬಗ್ಗೆ ಮಾತನಾಡಿದ ನಟ ಹುಲಿ ಕಾರ್ತಿಕ್, 'ಈ ಚಿತ್ರದ ನಾಯಕ ನಟ ಮತ್ತು ನಿರ್ದೇಶಕ ಶರತ್ ಕೃಷ್ಣ, ಇಡೀ ಸಿನಿಮಾವನ್ನು ತಮ್ಮ ಹೆಗಲ ಮೇಲೆ ಹೊತ್ತುಕೊಂಡು ಈ ಸಿನಿಮಾ ಮಾಡಿದ್ದಾರೆ. ಸಿನಿಮಾದ ಆರಂಭದಿಂದ ಅಂತ್ಯದವರೆಗೂ ಈ ಚಿತ್ರತಂಡದ ಪ್ರಯಾಣದಲ್ಲಿ ಜೊತೆಯಾಗಿದ್ದು, ಅದರ ಕಷ್ಟಗಳು, ಏಳು–ಬೀಳುಗಳನ್ನು ಹತ್ತಿರದಿಂದ ಕಂಡಿದ್ದೇನೆ. ಈ ಸಿನಿಮಾ ಖಂಡಿತವಾಗಿಯೂ ಪ್ರೇಕ್ಷಕರಿಗೆ ಇಷ್ಟವಾಗಲಿದೆ' ಎಂಬ ವಿಶ್ವಾಸ ವ್ಯಕ್ತಪಡಿಸಿದರು.

'ದೊಡ್ಮನ್ಸ' ಚಿತ್ರದಲ್ಲಿ ಒಟ್ಟು ಐದು ಹಾಡುಗಳಿದ್ದು, ಶ್ರೀಧರ ಕಶ್ಯಪ್ ಮತ್ತು ಅಲೆಕ್ಸ್ ಸಂಗೀತ ಸಂಯೋಜಿಸಿದ್ದಾರೆ. ಅಲ್ಟಿಮೇಟ್ ಶಿವು, ಜಾಗ್ವಾರ್ ಸಣ್ಣಪ್ಪ ಚಿತ್ರಕ್ಕೆ ಸಾಹಸ ಸಂಯೋಜಿಸಿದ್ದಾರೆ.

ಆನಂದ ಇಳಯರಾಜ ಛಾಯಾಗ್ರಹಣ, ವೇದಿಕ್ ಸಂಕಲನ 'ದೊಡ್ಮನ್ಸ' ಚಿತ್ರಕ್ಕಿದೆ. 'ವೇದಿಕ್ ಕಾಸ್ಮೋಸ್' ಬ್ಯಾನರಿನಲ್ಲಿ ವೇದಿಕ್ ವೀರ್ ನಿರ್ಮಿಸಿರುವ 'ದೊಡ್ಮನ್ಸ' ಚಿತ್ರಕ್ಕೆ ಕವಿತಾ ಮಂಜುನಾಥ್ ಸಹ ನಿರ್ಮಾಣದಲ್ಲಿ ಸಾಥ್ ನೀಡಿದ್ದಾರೆ.

ಬೆಂಗಳೂರು, ಅಹಮದಬಾದ್ ಸುತ್ತಮುತ್ತ 'ದೊಡ್ಮನ್ಸ' ಚಿತ್ರದ ಬಹುತೇಕ ಚಿತ್ರೀಕರಣ ನಡೆಸಲಾಗಿದೆ. ಸದ್ಯ ಟೀಸರ್ ಬಿಡುಗಡೆ ಮೂಲಕ 'ದೊಡ್ಮನ್ಸ' ಚಿತ್ರದ ಪ್ರಚಾರ ಕಾರ್ಯಗಳಿಗೆ ಚಾಲನೆ ನೀಡಿರುವ ಚಿತ್ರತಂಡ, ಶೀಘ್ರದಲ್ಲಿಯೇ ಚಿತ್ರವನ್ನು ಪ್ರೇಕ್ಷಕರ ಮುಂದೆ ತರುವ ಯೋಚನೆಯಲ್ಲಿದೆ.

# ಬಿಜೆಪಿಯ ಅಪಪ್ರಚಾರಕ್ಕೆ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರ: ಸಿ.ಎಂ ಸಿದ್ದರಾಮಯ್ಯ

**ಪಿರಿಯಾಪಟ್ಟಣ :** ಬಿಜೆಪಿಯ ಅಪಪ್ರಚಾರಕ್ಕೆ ಅಭಿವೃದ್ಧಿ ಕಾರ್ಯಗಳ ಮೂಲಕವೇ ಉತ್ತರ ನೀಡುತ್ತಿದ್ದೇವೆ.

ನಮ್ಮ ಅಭಿವೃದ್ಧಿ ಕಾರ್ಯಗಳು ಜನರಿಗೆ ಮುಟ್ಟಿವೆ. ಜನ ನಮ್ಮ ಪರವಾಗಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಜೆಪಿಗೆ ಖಡಕ್ ಉತ್ತರ ನೀಡಿದರು.

ಮೈಸೂರು ಜಿಲ್ಲಾಡಳಿತ ಮತ್ತು ಜಿಲ್ಲಾಪಂಚಾಯತ್ ವತಿಯಿಂದ ಪಿರಿಯಾಪಟ್ಟಣದ ಪಾರೆಕೊಪ್ಪಲಿನಲ್ಲಿ ಆಯೋಜಿಸಲಾಗಿದ್ದಕಾರ್ಯಕ್ರಮದಲ್ಲಿ ಶಕ್ತಿ ದೇವತೆ ಶ್ರೀ ಮಸಣಿಕಮ್ಮ ದೇವಸ್ಥಾನ ನಿರ್ಮಾಣ, ಒಕ್ಕಲಿಗ ಸಂಘದ ಸಹಯೋಗದೊಂದಿಗೆ ನಿರ್ಮಿಸುತ್ತಿರುವ ಕುವೆಂಪು ಭವನ ಹಾಗೂ ಬೆಟ್ಟದ ಪುರ ಗ್ರಾಮದ ಶ್ರೀ ಸಿಡಿಲು ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನ ಬೆಟ್ಟಕ್ಕೆ ಹೋಗುವ ರಸ್ತೆ ನಿರ್ಮಾಣ ಸೇರಿದಂತೆ ವಿವಿಧ ಇಲಾಖೆಗಳ 419.78 ಕೋಟಿಗಳ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ರಾಜ್ಯದ ಎಲ್ಲ ಕ್ಷೇತ್ರಗಳಲ್ಲೂ ಅಭಿವೃದ್ಧಿ ಕಾಮಗಾರಿಗಳು ಆಗುತ್ತಿದ್ದು ಈ ಬಾರಿಯ ಆಯವ್ಯಯದಲ್ಲಿ ಸುಮಾರು 82 ಸಾವಿರ ಕೋಟಿ ರೂಗಳನ್ನು ಅಭಿವೃದ್ಧಿ ಕೆಲಸಗಳಿಗೆ ಮೀಸಲಿರಿಸಿದೆ ಎಂದರು.

**ವಿಶ್ವಮಾನವ ಕುವೆಂಪು ಆಶಯ ನಮ್ಮದು**

ಕುವೆಂಪು ಅವರು ವಿಶ್ವಮಾನವರಾಗುವ ಪ್ರಯತ್ನವನ್ನು ಮಾಡಿದ್ದರು. ಕರ್ನಾಟಕವನ್ನು ಸರ್ವ ಜನಾಂಗದ ಶಾಂತಿಯ ತೋಟವಾಗಿಸಬೇಕು ಎಂದು ಬಯಸಿದ್ದರು. ಎಲ್ಲರೂ ಮನುಷ್ಯರಾಗಿ ಬಾಳಬೇಕೆನ್ನುವ ಆಶಯವನ್ನು ಹೊಂದಿದ್ದ ಕುವೆಂಪು ಅವರ ಭವನ ಇಲ್ಲಿ ನಿರ್ಮಾಣವಾಗುತ್ತಿರುವುದು ಸ್ವಾಗತಾರ್ಹ ಎಂದರು.

**50 ಕೋಟಿ ರೂ ವೆಚ್ಚದಲ್ಲಿ ರಸ್ತೆ ಕಾಮಗಾರಿ**

ಬೆಟ್ಟದಪುರ ಗ್ರಾಮದ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನ ಬೆಟ್ಟಕ್ಕೆ ಹೋಗುವ ರಸ್ತೆ ನಿರ್ಮಾಣ ಕಾಮಗಾರಿಯನ್ನು 50 ಕೋಟಿ ರೂ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು ಇದರಿಂದ ಜನರಿಗೆ ಅನುಕೂಲವಾಗಲಿದೆ ಎಂದರು.

ಸಚಿವರಾದ ವೆಂಕಟೇಶ್ ಅವರು ಪಿರಿಯಾಪಟ್ಟಣದ




ಶಾಸಕರಾದ ನಂತರ ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದಾರೆ ಎಂದು ಮುಖ್ಯಮಂತ್ರಿಗಳು ಶ್ಲಾಘಿಸಿದರು.

**ನುಡಿದಂತೆ ನಡೆಯುವ ಸರ್ಕಾರ ನಮ್ಮದು**

ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿದ್ದು ಕೊಟ್ಟ ಭರವಸೆಗಳನ್ನು ಈಡೇರಿಸಿದ್ದೇವೆ. ಮೂರು ವರ್ಷಗಳಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದು ಮುಂದೆಯೂ ಈ ಯೋಜನೆಗಳನ್ನು ಮುಂದುವರೆಸಲಾಗುವುದು. ಗ್ಯಾರಂಟಿ ಯೋಜನೆಗಳನ್ನು ಟೀಕಿಸುತ್ತಿದ್ದ ವಿರೋಧ ಪಕ್ಷ ಪ್ರಸ್ತುತ ಚುನಾವಣೆ ನಡೆಯುತ್ತಿರುವ ರಾಜ್ಯಗಳಲ್ಲಿ ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡುತ್ತಿದ್ದಾರೆ. ನಮ್ಮ ಸರ್ಕಾರ ಅಭಿವೃದ್ಧಿಗೂ ಹಣವನ್ನು ಮೀಸಲಿರಿಸಿದೆ ಎನ್ನಲು ಇಂದು ಶಂಕು ಸ್ಥಾಪನೆಯಾಗಿರುವ 419.78 ಕೋಟಿ ರೂ.ಗಳ ಅಭಿವೃದ್ಧಿ ಕಾಮಗಾರಿಗಳೇ ಸಾಕ್ಷಿ ಎಂದರು.

**ವಿರೋಧ ಪಕ್ಷಗಳು ಅನಗತ್ಯವಾಗಿ ಟೀಕೆ ಮಾಡುತ್ತಿವೆ**

ವಿರೋಧ ಪಕ್ಷಗಳು ಅನಗತ್ಯವಾಗಿ ಟೀಕೆ ಮಾಡುತ್ತಿದ್ದು ಅದರಲ್ಲಿ ಸತ್ಯಾಂಶವಿಲ್ಲ. ಟೀಕೆಗಳು ವಾಸ್ತವದ ನೆಲೆಗಟ್ಟಿನಲ್ಲಿರಬೇಕು. ಸುಳ್ಳು ಹೇಳುವುದನ್ನೇ ಕಸಬು ಮಾಡಿಕೊಳ್ಳದೆ ಕೈಗೊಂಡಿರುವ ಕೆಲಸಗಳ ಬಗ್ಗೆ ಮಾತನಾಡಬೇಕು. ಅವರು ಅಧಿಕಾರದಲ್ಲಿದ್ದಾಗ ನಾಲ್ಕು ವರ್ಷಗಳ ಕಾಲ ಏನು ಮಾಡಿದ್ದಾರೆಂದು ಜನರ ಮುಂದಿಡಬೇಕು. ನಾವು ಅಭಿವೃದ್ಧಿ ಕಾರ್ಯಗಳ ಮೂಲಕವೇ ಬಿಜೆಪಿಯ ಅಪಪ್ರಚಾರಕ್ಕೆ ಉತ್ತರ ಕೊಡುತ್ತಿದ್ದೇವೆ ಎಂದರು.

**ಜನರು ನಮ್ಮ ಪರವಿದ್ದಾರೆ**

ಜನ ನಮ್ಮ ಸರ್ಕಾರದ ಪರವಾಗಿದ್ದಾರೆ. ದಾವಣಗೆರೆ ಮತ್ತು ಬಾಗಲಕೋಟೆ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಜಯ ಸಾಧಿಸಲಿದ್ದು, 2028ರ ಚುನಾವಣೆಯಲ್ಲಿಯೂ ಗೆಲ್ಲಲಿದೆ ಎಂದು ಮುಖ್ಯಮಂತ್ರಿಗಳು ಇದೇ ಸಂದರ್ಭದಲ್ಲಿ ವಿಶ್ವಾಸ ವ್ಯಕ್ತಪಡಿಸಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ವೆಂಕಟೇಶ್, ಹೆಚ್. ಸಿ ಮಹದೇವಪ್ಪ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಶಾಸಕರಾದ ಹರೀಶ್ ಗೌಡ ರವಿಶಂಕರ್, ದರ್ಶನ್ ಧ್ರುವ ನಾರಾಯಣ್, ಮೊದಲಾದವರು ಉಪಸ್ಥಿತರಿದ್ದರು.

# ಪುರಸಭೆ ಮುಂದೆ ದಲಿತಪರ ಸಂಘಟನೆಗಳಿಂದ ಪ್ರತಿಭಟನೆ

**ಕೆ.ಆರ್.ಪೇಟೆ :** ತಾಲ್ಲೂಕಿನ ಹೊಸಹೊಳಲು ಗ್ರಾಮದ ದಲಿತ ಕುಳುವಾಡಿಗಳಿಗೆ ಸೇರಿದ ಸ.ನಂ.141ರಲ್ಲಿನ ಖಾಲಿ ನಿವೇಶನಗಳನ್ನು ಕೂಡಲೇ ಮೂಲ ವಾರಸುದಾರರಾದ ಡಿ.ಸ್ವಾಮಿ ಮತ್ತು ಇತರೆ 9ಮಂದಿ ಕುಟುಂಬದವರಿಗೆ ಹಂಚಿಕೆ ಮಾಡಿ ಅನುಪಾಲನಾ ವರದಿ ನೀಡುವಂತೆ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗವು ಆದೇಶ ಮಾಡಿ ಸುಮಾರು ಎರಡು ತಿಂಗಳು ಕಳೆದರೂ ಸಹ ಯಾವುದೇ ಕ್ರಮ ವಹಿಸದೇ ಇರುವ ಪುರಸಭಾ ಆಡಳಿತ ಹಾಗೂ ತಾಲ್ಲೂಕು ಆಡಳಿತದ ಕ್ರಮವನ್ನು ಖಂಡಿಸಿ ಹೊಸಹೊಳಲು ಗ್ರಾಮದ ನೊಂದ ದಲಿತ ಕುಟುಂಬಗಳ ಸದಸ್ಯರು ವಿವಿಧ ದಲಿತ ಪರ ಸಂಘಟನೆಗಳ ನೇತೃತ್ವದಲ್ಲಿ ಪುರಸಭಾ ಕಚೇರಿಯ ಮುಂದೆ ಪ್ರತಿಭಟನೆ ತಮಟೆ ಚಳುವಳಿ ನಡೆಸಿದರು.

ಹೊಸಹೊಳಲು ಗ್ರಾಮದ ಜಮಾಬಂದಿಗೆ ಸೇರಿದ ಸರ್ವೆ ನಂ 141ರಲ್ಲಿರುವ 1.31ಗುಂಟೆ ಜಮೀನನ್ನು ಸರ್ಕಾರ ಯಾವುದೇ ರೀತಿಯಲ್ಲಿಯೂ ಸ್ವಾಧೀನ ಪಡಿಸಿಕೊಂಡಿಲ್ಲ. ಈ ಬಗ್ಗೆ ಎಲ್ಲಿಯೂ ದಾಖಲೆಗಳು ಇರುವುದಿಲ್ಲ. ನಮ್ಮ ದಲಿತ ಕುಳುವಾಡಿ ಕುಟುಂಬಗಳಿಗೆ ಸೇರಿದ ಬೇಕಾದ ಭೂಮಿಯಲ್ಲಿ ಸುಮಾರು 40ನಿವೇಶನಗಳನ್ನು ಸೃಷ್ಟಿಸಲಾಗಿದೆ. ಈ ಪೈಕಿ 26ಮನೆಗಳನ್ನು ನಿರ್ಮಾಣ



ಮಾಡಲಾಗಿದೆ ಉಳಿದ 14 ನಿವೇಶನಗಳು ಖಾಲಿ ಇದ್ದು ಈ ನಿವೇಶನಗಳನ್ನು ಅರ್ಜಿದಾರರಾದ ಕುಳುವಾಡಿಕೆ ವಂಶಸ್ಥರಾದ ಡಿ.ಸ್ವಾಮಿ ಸೇರಿದಂತೆ 9ಮಂದಿ ಕುಟುಂಬಗಳಿಗೆ ತಕ್ಷಣವೇ ಹಂಚಿಕೆ ಮಾಡಿ ಅನುಪಾಲನಾ ವರದಿ ನೀಡುವಂತೆ ತಹಸೀಲ್ದಾರ್ ಮತ್ತು ಪುರಸಭಾ ಮುಖ್ಯಾಧಿಕಾರಿಗಳಿಗೆ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗವು ಆದೇಶ ಮಾಡಿ ಪತ್ರ ಬರೆದಿರುತ್ತದೆ. ಆದರೆ ಇದೂವರೆವಿಗೂ ಪುರಸಭೆಯ ಮುಖ್ಯಾಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದೇ ಸುಮ್ಮನಿದ್ದಾರೆ. ಜೊತೆಗೆ ಆಯೋಗದ ಪತ್ರವನ್ನು ತಾಲ್ಲೂಕು ಕಚೇರಿಯ ವಿಷಯ ನಿರ್ವಾಹಕ ಅಮೃತ್ ರಾಜ್ ಎಂಬುವವರು ತಹಸೀಲ್ದಾರ್ ಅವರ ಗಮನಕ್ಕೆ ತಾರದೆ, ಪತ್ರವನ್ನು ಈ ಪ್ರಕರಣದ ಎದುರುದಾರರಿಗೆ ಸೋರಿಕೆ ಮಾಡಿ ಅನುಕೂಲ ಮಾಡಿಕೊಟ್ಟಿರುತ್ತಾರೆ.

ಆದ್ದರಿಂದ ಅಮೃತರಾಜ್ ವಿರುದ್ದ ಎಸ್‌ಸಿ.ಎಸ್.ಟಿ. ದೌರ್ಜನ್ಯ ಕಾಯ್ದೆಯ ಪ್ರಕಾರ ಪ್ರಕರಣ ದಾಖಲಿಸಬೇಕು ಹಾಗೂ ಅವರನ್ನು ಕೂಡಲೇ ಸೇವೆಯಿಂದ ಅಮಾನತ್ತು ಮಾಡಬೇಕು ಎಂದು ಪ್ರತಿಭಟನಾಕಾರರು ಮೇಲಧಿಕಾರಿಗಳನ್ನು ಒತ್ತಾಯ ಮಾಡಿದರು. ಸದರಿ ಪ್ರಕರಣದಲ್ಲಿ ದಿವ್ಯ ನಿರ್ಲಕ್ಷ?ಯ ವಹಿಸಿರುವ ಪುರಸಭೆಯ ಮುಖ್ಯಾಧಿಕಾರಿ ಅಶೋಕ್ ಅವರ ವಿರುದ್ದವೂ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರ್ನಾಟಕ ರಾಜ್ಯ ಮಾತಂಗಿ ಮಾದಿಗ ಸಮಾಜ ಪರಿವರ್ತನ ವೇದಿಕೆಯ ಮಂಡ್ಯ ಜಿಲ್ಲಾಧ್ಯಕ್ಷ ಕುಮಾರ್ ಒತ್ತಾಯಿಸಿದರು.

ಹೊಸಹೊಳಲು ಗ್ರಾಮದ ಸರ್ವೆ ನಂ.141ರಲ್ಲಿ 9 ದಲಿತ ಕುಳುವಾಡಿಕೆ ಕುಟುಂಬಗಳಿಗೆ ಸೇರಿದ 14 ನಿವೇಶನಗಳ ಹಂಚಿಕೆಗೆ ಸಂಬಂಧಿಸಿದಂತೆ ರಾಜ್ಯ ಎಸ್ಸಿ–ಎಸ್ಟಿ ಆಯೋಗವು ಈಗಾಗಲೇ ಸ್ಪಷ್ಟ ತೀರ್ಪು ನೀಡಿದೆ. ಆಯೋಗದ ತೀರ್ಪಿನ ಅನ್ವಯ ಪಾಂಡವಪುರ ಉಪವಿಭಾಗಾಧಿಕಾರಿಗಳು ಹಾಗೂ ತಾಲೂಕು ದಂಡಾಧಿಕಾರಿಗಳು ಪುರಸಭಾ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದ್ದಾರೆ. ಆದರೂ ಅಧಿಕಾರಿಗಳು ನಿವೇಶನ ಹಂಚಿಕೆ ಮಾಡಲು ಪುರಸಭಾ ಮುಖ್ಯಾಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿದ್ದಾರೆ.

ಅಧಿಕಾರಿಗಳು ಮೇಲಿಂದ ಮೇಲೆ ಹಲವು ಆದೇಶ ಬಂದರೂ ದಲಿತ ಕುಟುಂಬಗಳಿಗೆ ನ್ಯಾಯ ಒದಗಿಸಿರವುದಿಲ್ಲ ಹಾಹಾಗಿ ಈ ಚಳುವಳಿಯನ್ನು ಆರಂಭಿಸಲಾಗಿದೆ ನ್ಯಾಯ ಸಿಗುವವರೆವಿಗೂ ಈ ನಮ್ಮ ಅನಿರ್ಧಿಷ್ಠಾವಧಿ ಪ್ರತಿಭಟನೆಯು ಮುಂದುವರೆಯಲಿದೆ ಎಂದು ಕುಮಾರ್ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ಮಾತಂಗಿ ಮಾದಿಗ ಸಮಾಜ ಪರಿವರ್ತನ ವೇದಿಕೆ ರಾಜ್ಯಾಧ್ಯಕ್ಷ ಪ್ರಭು ಹಿತ್ತಲಮನಿ, ರಾಜ್ಯ ಕಾರ್ಯದರ್ಶಿ ಮಹೇಶ್ ಹಿತ್ತಲಮನಿ, ಮಂಡ್ಯ ಜಿಲ್ಲಾಧ್ಯಕ್ಷ ಕುಮಾರ್, ತಾಲೂಕು ಅಧ್ಯಕ್ಷರಾದ ಆಲೇನಹಳ್ಳಿ ಚಲುವರಾಜು, ಜಿಲ್ಲಾ ಉಪಾಧ್ಯಕ್ಷ ವಿಷ್ಣುರಾಜ್, ಹೆಚ್.ಡಿ.ರವಿಕುಮಾರ್, ಅನಿಲ್‌ಕುಮಾರ್, ಗಣೇಶ್, ಸ್ವಾಮಿ, ಮಂಜು, ಹೊಸಹೊಳಲು ಅನಿಲ್, ಶಿವರಾಜ್, ಕಿರಣ್, ಮಧು, ಸಚಿನ್. ಮೂಡನಹಳ್ಳಿ ದೇವರಾಜು, ಶಿವರಾಮ್ ಸಣ್ಣಮುತ್ತಮ್ಮ ಹ–ರಿರಯನಹಳ್ಳಿ ರಮೇಶ್, ರವಿಕುಮಾರ್ ಸೇರಿದಂತೆ 9ಕುಟುಂಬಗಳ ಸದಸ್ಯರು ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ಪ್ರತಿಭಟನೆಯ ಸಂದರ್ಭದಲ್ಲಿ ವೃತ್ತ ನಿರೀಕ್ಷಕ ಸುನಿಲ್ ಕುಮಾರ್ ಮತ್ತು ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ ಕೆ.ದಿವಾಕರ್ ಹಾಜರಿದ್ದು ಪ್ರತಿಭಟನಾಕಾರರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಂಡರು.

# ಏಪ್ರಿಲ್ 23, 24ಕ್ಕೆ ಸಿಇಟಿ ಪರೀಕ್ಷೆ, 3.30 ಲಕ್ಷ ವಿದ್ಯಾರ್ಥಿಗಳು ಸಜ್ಜು: KEA

**ಬೆಂಗಳೂರು:** ಎಂಜಿನಿಯರಿಂಗ್, ಫಾರ್ಮಸಿ, ಕೃಷಿ ಹಾಗೂ ಇನ್ನಿತರ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆ (UGCET 2026) ಇದೇ ಏಪ್ರಿಲ್ 23 ಮತ್ತು 24ರಂದು ನಡೆಯಲಿವೆ. ಒಟ್ಟು 3.30 ಲಕ್ಷ ಮಂದಿ ಪರೀಕ್ಷೆ ಬರೆಯಲಿದ್ದಾರೆ ಎಂದು ಪ್ರಾಧಿಕಾರದ ಕಾರ್ಯ ನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಅವರು ಮಾಹಿತಿ ನೀಡಿದ್ದಾರೆ.

ಸಿಇಟಿ 2026 ಪರೀಕ್ಷೆಗೆ ರ್ನಾಟಕ ಪರೀಕ್ಷಾ ಪ್ರಾಧಿಕಾರ ಸಕಲ ತಯಾರಿ ಮಾಡಿಕೊಳ್ಳಲಾಗಿದೆ. ರಾಜ್ಯದ 745 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಲಿವೆ.

ಸುಮಾರು 3.30 ಲಕ್ಷ ಮಂದಿ ಪರೀಕ್ಷೆ ಬರೆಯಲು ಅರ್ಜಿ ಸಲ್ಲಿಸಿದ್ದಾರೆ. ಅತ್ಯಂತ ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು. ಇದಲ್ಲದೆ, ವಸ್ತ್ರ ಸಂಹಿತೆ ಹಾಗೂ ಪರೀಕ್ಷಾ ಸಂದರ್ಭದಲ್ಲಿ ವಿದ್ಯಾರ್ಥಿಗಳು ಪಾಲಿಸಬೇಕಾದ ಕ್ರಮಗಳ ಬಗ್ಗೆ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಅವರು ಕೆಇಎ ವಿಕಸನ (KEAVikasana) ಯೂಟ್ಯೂಬ್ ಚಾನೆಲ್ ನಲ್ಲಿ ಮಾತನಾಡಿ ಒಂದಷ್ಟು ಮಾಹಿತಿ ನೀಡಿದ್ದಾರೆ. ಪೋಷಕರು ಮತ್ತು ಅಭ್ಯರ್ಥಿಗಳು ತಪ್ಪದೇ ಇದನ್ನು ಒಮ್ಮೆ ನೋಡಿ, ಆ ಪ್ರಕಾರ ನಡೆದುಕೊಳ್ಳಲು ಕೋರಲಾಗಿದೆ.

2026ರ ಪಿಯುಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದವರು ಎರಡನೇ ಬಾರಿಯ ದ್ವಿತೀಯ ಪಿಯುಸಿ ಪರೀಕ್ಷೆ 2ಕ್ಕೆ ಹಾಜ ರಾಗಬಹುದು. ಏಕೆಂದರೆ ಸಿಇಟಿ ಪರೀಕ್ಷೆ ಅಂಕಗಳನ್ನು ಪಿಯುಸಿ ಪರೀಕ್ಷೆ 2 ಆಧರಿಸಿ ಪರಿಗಣಿಸಲಾಗುತ್ತದೆ. ಆದ್ದರಿಂದ ಅನುರ್ತೀರ್ಣರಾದವರು ಈ ಬಗ್ಗೆ ಭಯಪಡಬೇಕಿಲ್ಲ ಎಂದಿದ್ದಾರೆ. ಡ್ರೆಸ್ ಕೋಡ್ ಏನಿದೆ ನಿಯಮ ಪಾಲನೆ ಕಡ್ಡಾಯ ಕೈ ಕಾಲುಗಳು, ಇಡೀ ದೇಹ ಪೂರ್ಣವಾಗಿ ಮುಚ್ಚಿರುವಂತೆ ಬಟ್ಟೆ ಧರಿಸುವುದನ್ನು ನಿಷೇಧಿಸಲಾಗಿದೆ. ಸಾಮಾನ್ಯ ಉಡುಪು ಧರಿಸಿ ಪರೀಕ್ಷೆ ಬರೆಯಬಹುದು. ಶೂಗಳನ್ನು ಧರಿಸುವುದು, ಮೊಬೈಲ್, ಎಲ್‌ಇಡಿ ಇನ್ನಿತರ ವಾಚ್ ಧರಿಸುವುದು ಸೇರಿ ಕೆಲವು ನಿಯಮ ಜಾರಿಯಲ್ಲಿರುತ್ತವೆ. ಅದನ್ನು ಪಾಲಿಸುವಂತೆ ಪ್ರಾಧಿಕಾರ ಕೋರಿದೆ. ಯಾರೆಲ್ಲ ಅರ್ಜಿ ಸಲ್ಲಿಸಿದ್ದೀರಿ ನೀವು ಮಾತ್ರವೇ ಪರೀಕ್ಷೆಗೆ ಬರೆಯಬೇಕು. ಪರೀಕ್ಷಾ ಕೇಂದ್ರದಲ್ಲಿ ನಕಲು ಆಗದಂತೆ, ಪಾರದರ್ಶಕವಾಗಿ ನಡೆಸಲು ವಿವಿಧ ಕ್ರಮ ಕೈಗೊಳ್ಳಲಾಗಿದೆ.

ಪಿಯುಸಿ ಅಧಿಕ ಅಂಕಗಳ ಪರಿಗಣನೆ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಪರೀಕ್ಷೆ–1 ಮತ್ತು ಪರೀಕ್ಷೆ–2 ರಲ್ಲಿ ಪಡೆದ ಅಂಕಗಳ ಪೈಕಿ ಯಾವುದು ಅತ್ಯಧಿಕವೊ ಆ ಅಂಕಗಳನ್ನೇ ಸಿಇಟಿ ಫಲಿತಾಂಶಕ್ಕೆ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಗೊಂದಲ ಬೇಡ. ಕೆಲ ಅಭ್ಯರ್ಥಿಗಳು ಪರೀಕ್ಷೆ–1 ರಲ್ಲಿ ಪಡೆದ ಅಂಕಗಳನ್ನು ಉತ್ತಮಪಡಿಸಿಕೊಳ್ಳಲು ಎರಡನೇ ಪರೀಕ್ಷೆ ಕೂಡ ತೆಗೆದುಕೊಳ್ಳುತ್ತಿದ್ದಾರೆ. ಅಂತಹವರಿಗೆ ಕಳೆದ ವರ್ಷದಂತೆ ಎರಡೂ ಪರೀಕ್ಷೆಗಳಲ್ಲಿ ಪಡೆದ ಅತ್ಯಧಿಕ ಅಂಕಗಳನ್ನು ಸಿಇಟಿ ಶ್ರೇಣಿಗೆ ಪರಿಗಣಿಸಲಾಗುತ್ತದೆ ಎಂದು ಈ ಹಿಂದೆ ಪ್ರಾಧಿಕಾರ ತಿಳಿಸಿತ್ತು.

ಇಷ್ಟಕ್ಕೂ ದ್ವಿತೀಯ ಪಿಯುಸಿಯ ಎರಡೂ ಪರೀಕ್ಷೆಗಳ ಫಲಿತಾಂಶ ಬಂದ ನಂತರವೇ ಸಿಇಟಿ ಫಲಿತಾಂಶ ಪ್ರಕಟಿಸುವುದು. ಹೀಗಾಗಿ ಎರಡನೇ ಪರೀಕ್ಷೆಯ ಅಂಕಗಳನ್ನು ಪರಿಗಣಿಸುವುದಿಲ್ಲ ಎನ್ನುವುದು ಸುಳ್ಳು. ಇಂತಹ ವದಂತಿಗಳಿಗೆ ಕಿವಿ ಕೊಡಬೇಡಿ.

ಕರ್ನಾಟಕ ರಾಜ್ಯ ಪಠ್ಯ ಕ್ರಮದ ಪಿಯುಸಿ ಅಭ್ಯರ್ಥಿಗಳಿಗೆ ಮಾತ್ರ ಈ ಎರಡು ಪರೀಕ್ಷೆಗಳ ನಿಯಮ ಅನ್ವಯವಾಗುತ್ತದೆ. ಉಳಿದಂತೆ ಕೇಂದ್ರ ಹಾಗೂ ಇತರ ರಾಜ್ಯಗಳ ಬೋರ್ಡ್ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳಿಗೆ ಇದು ಅನ್ವಯಿಸುವುದಿಲ್ಲ ಎಂದು ತಿಳಿಸಿದ್ದಾರೆ.

# ಡಿಸಿಆರ್ಇ ಇನ್‌ಸ್ಪೆಕ್ಟರ್‌ಗೆ ಕಿರುಕುಳ ಆರೋಪ : ವರದಿ ನೀಡಲು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸೂಚನೆ!

ಬೆಂಗಳೂರು: ಡಿಸಿಆರ್ಇ ಇನ್‌ಸ್ಪೆಕ್ಟರ್‌ಗೆ ಮೇಲಧಿಕಾರಿಗಳ ಕಿರುಕುಳ ಆರೋಪ ಮತ್ತು ಮಂಗಳೂರು ನಗರ ಪೊಲೀಸ್ ಕಮಿಷನರ್ ವಿರುದ್ಧ ಡಿಜಿಪಿಗೆ ಎಸ್‌ಪಿ ಪತ್ರ ಬರೆದಿರುವ ಕುರಿತು ವರದಿ ನೀಡುವಂತೆ ಸೂಚನೆ ನೀಡಿದ್ದೇನೆ ಎಂದು ಗೃಹ ಸಚಿವ ಪರಮೇಶ್ವರ್ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಧ್ಯಮಗಳಲ್ಲಿ ವರದಿ ಆಗಿರುವುದನ್ನು ಗಮನಿಸಿದ್ದೇನೆ. ಡಿಸಿಆರ್ಇ ಇನ್‌ಸ್ಪೆಕ್ಟರ್ ಶ್ರೀನಿವಾಸ್ ಎಂಬುವರು ಸಾಕಷ್ಟು ಆರೋಪಗಳನ್ನು ಮಾಡಿದ್ದಾರೆ. ಈ ಸಂಬಂಧ ಎಸ್‌ಪಿ ಕಾಶಿನಾಥ್ ಪತ್ರ ಬರೆದಿದ್ದಾರೆ ಎಂದರು.

ಶಾಸಕ ಹ್ಯಾರಿಸ್ ಮನೆ ಮೇಲೆ ಇಡಿ ದಾಳಿ: ಇನ್ಫೋರ್ಸ್‌ಮೆಂಟ್ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಶಾಸಕರಾದ ಎನ್.ಎ.ಹ್ಯಾರೀಸ್ ಅವರ ಮಕ್ಕಳ ನಿವಾಸಗಳ ಮೇಲೆ ದಾಳಿ ಕುರಿತು ಪ್ರತಿಕ್ರಿಯಿಸಿದ ಸಚಿವರು, ಯಾವ ವಿಚಾರಕ್ಕೆ ದಾಳಿ ನಡೆಸಿದ್ದಾರೆ, ಏನೆಲ್ಲ ಸಿಕ್ಕಿದೆ ಎಂಬುದನ್ನು ಇಡಿ ಅಧಿಕಾರಿಗಳು ಮಾಹಿತಿ ನೀಡಬೇಕು. ಸಾಮಾನ್ಯವಾಗಿ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡುತ್ತಾರೆ. ಅಲ್ಲಿಯವರೆಗೂ ಕಾಯಬೇಕು. ಇದರ ನಡುವೆ ನಾವು ಹೇಳಿಕೆಗಳನ್ನು ಕೊಟ್ಟರೆ ಅಪ್ರಸ್ತುತ ಆಗುತ್ತದೆ ಎಂದರು.

ಬಿಟ್‌ಕಾಯಿನ್ ಹಗರಣ ಕುರಿತಂತೆ ರಾಜ್ಯದಲ್ಲಿ ಎಸ್‌ಐಟಿ ರಚನೆ ಮಾಡಲಾಗಿತ್ತು. ತನಿಖೆ ಕೊನೆ ಹಂತದಲ್ಲಿದೆ. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ವ್ಯಾಪ್ತಿ ಹೊಂದಿದೆ. ಅನೇಕ ವಿಚಾರಗಳಲ್ಲಿ ಮಾಹಿತಿಯನ್ನು ಕಲೆ ಹಾಕಿ ಅಂತಿಮ ವರದಿ ಕೊಡಬೇಕು. ಅಂತಿಮ ಹಂತದಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಗತ್ಯ ಮಾಹಿತಿ ಸಿಗುವವರೆಗೂ ತನಿಖೆ ನಡೆಸುತ್ತಾರೆ. ಟೆಕ್ನಿಕಲ್ ಆಗಿರುವುದರಿಂದ ಮಾಹಿತಿಗಳನ್ನು ಕಲೆ ಹಾಕುವುದರಲ್ಲಿ ವಿಳಂಬ ಆಗಿದೆ ಎಂದು ಅನ್ನಿಸುತ್ತದೆ. ಶೀಘ್ರವಾಗಿ ಪೂರ್ಣಗೊಳಿಸಿ, ಮಧ್ಯಂತರ ಚಾರ್ಜ್‌ಶೀಟ್



ಸಲ್ಲಿಸಲು ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿಯವರು ಪೊಲೀಸ್ ಇಲಾಖೆಯಿಂದ ಮಾಹಿತಿ ತೆಗೆದುಕೊಂಡಿದ್ರೆ ನಾನೇನು ಹೇಳಲು ಆಗಲ್ಲ. ಅವರಿಗೆ ಮಾಹಿತಿ ತೆಗೆದುಕೊಳ್ಳಲು ಅಧಿಕಾರ ಇದೆ. ಇದೇ ವಿಚಾರದಲ್ಲಿ ಮಾಹಿತಿ ತೆಗೆದುಕೊಂಡಿರಬಹುದು. ಈ ವಿಚಾರ ಅಲ್ಲ, ಬೇರೆ ವಿಚಾರ ಇದ್ರೂ ಇಡಿಯವರೇ ಹೇಳಬೇಕಾಗುತ್ತದೆ ಎಂದರು.

ಹ್ಯಾಕರ್ ಶ್ರೀಕಿ ಜೊತೆಗೆ ಪ್ರಭಾವಿಗಳು ಸಂಪರ್ಕ ಹೊಂದಿರುವ ಕುರಿತು ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಈ ವಿಚಾರದಲ್ಲಿ ತನಿಖೆಯಾದ್ರೆ ಎಲ್ಲವೂ ಹೊರಗೆ ಬರುತ್ತದೆ. ಯಾರೆಲ್ಲ ಸಂಪರ್ಕದಲ್ಲಿದ್ದರೂ, ಅವರ ಪಾತ್ರ ಏನು ಅನ್ನುವುದೆಲ್ಲ ಗೊತ್ತಾಗುತ್ತದೆ.

ನಾವು ಮಾತಾಡುವುದಕ್ಕು, ತನಿಖೆಯಲ್ಲಿ ಗೊತ್ತಾಗುವ ವಿಚಾರಗಳು ಬೇರೆ ಬೇರೆ ಇರುತ್ತದೆ. ಅನೇಕ ಸಂದರ್ಭಗಳಲ್ಲಿ ನಾವು ರಾಜಕೀಯವಾಗಿ ಏನೇನೋ ಮಾತಾಡಿರುತ್ತೇವೆ, ಅದು ತನಿಖೆಯಲ್ಲಿ ಹೊರಬರಬೇಕಲ್ಲವೇ ಎಂದರು.

ಮುಸ್ಲಿಂ ನಾಯಕರು ಪಕ್ಷದ ವರಿಷ್ಠರಿಗೆ ಪತ್ರ ಬರೆದಿರುವ ಕುರಿತು ಪ್ರತಿಕ್ರಿಯಿಸಿದ ಸಚಿವರು ಸತ್ಯಾಸತ್ಯತೆಯನ್ನು ಪರಿಶೀಲನೆ ಮಾಡುತ್ತಾರೆ. ಈ ಬಗ್ಗೆ ರಾಹುಲ್ ಗಾಂಧಿ ಅವರು ಸೂಚನೆ ನೀಡುತ್ತಾರೆ. ನಾವು ಯಾವತ್ತು ಕೂಡ ಚುನಾವಣೆಗಳಲ್ಲಿ ಸ್ಪರ್ಧಿಸಲು ಮುಸ್ಲಿಂ ಸಮುದಾಯದವರಿಗೆ ಪ್ರಾಧಾನ್ಯತೆ ನೀಡಲಾಗಿದೆ ಎಂದು ತಿಳಿಸಿದರು.

ಸಾಮಾನ್ಯವಾಗಿ ಕಾಂಗ್ರೆಸ್ ಪಕ್ಷದಲ್ಲಿ ಮೃತಪಟ್ಟ ಕುಟುಂಬದವರಿಗೆ ಟಿಕೆಟ್ ನೀಡುವ ಪದ್ಧತಿ ಇದೆ. ಅದು ಕೂಡ ತಪ್ಪಲ್ಲ. ಕಾರಣಾಂತರಗಳಿಂದ ಶಿವಶಂಕರಪ್ಪ ಅವರ ಮನೆಯವರಿಗೆ ಟಿಕೆಟ್ ಕೊಟ್ಟಿರುವುದನ್ನು ಬೇರೆ ರೀತಿ ಅರ್ಥೈಸಿಕೊಳ್ಳುವುದು ಸರಿಯಲ್ಲ.

ಇದು ಕಾಂಗ್ರೆಸ್ ಪಕ್ಷದ ಆಂತರಿಕ ವಿಚಾರ. ಪಕ್ಷದ ಅಧ್ಯಕ್ಷರು, ಮುಖ್ಯಮಂತ್ರಿಗಳು ಸೇರಿದಂತೆ ನಾವೆಲ್ಲ ಸರಿಪಡಿಸುತ್ತೇವೆ ಎಂದು ಹೇಳಿದರು.

# ಒಡಿಶಾ ಮತದಾರರ ಪಟ್ಟಿಯಿಂದ 9.8 ಲಕ್ಷ ಹೆಸರುಗಳು ಡಿಲೀಟ್ : ಮರುಪರಿಶೀಲನೆಗೆ ಚುನಾವಣಾ ಆಯೋಗ ಆದೇಶ

ಪಾಟ್ನಾ : ಒಡಿಶಾದಲ್ಲಿ ಮತದಾರರ ಪಟ್ಟಿಯಿಂದ ಸುಮಾರು 9.8 ಲಕ್ಷ ಹೆಸರುಗಳನ್ನು ಕೈ ಬಿಡಲಾಗಿರುವುದು ದೊಡ್ಡ ವಿವಾದಕ್ಕೆ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ಕಟ್ಟುನಿಟ್ಟಿನ ಮರುಪರಿಶೀಲನೆಗೆ ಆದೇಶಿಸಿದ್ದಾರೆ.

ವಿಶೇಷ ತೀವ್ರ ಪರಿಷ್ಕರಣೆ ಕಾರ್ಯಕ್ರಮಕ್ಕೂ ಮುನ್ನ ನಡೆದ ಮತದಾರರ ಮ್ಯಾಪಿಂಗ್ ಪ್ರಕ್ರಿಯೆಯಲ್ಲಿ ಈ ಹೆಸರುಗಳನ್ನು ತೆಗೆದುಹಾಕಲಾಗಿತ್ತು. ಆದರೆ, ಅರ್ಹ



ಮತದಾರರ ಹೆಸರುಗಳನ್ನು ಸಹ ಪಟ್ಟಿಯಿಂದ ಅಕ್ರಮವಾಗಿ ಅಥವಾ ತಪ್ಪಾಗಿ ಕೈಬಿಡಲಾಗಿದೆ ಎಂಬ ವ್ಯಾಪಕ ದೂರುಗಳು ಕೇಳಿಬಂದಿವೆ.

**ಮತದಾರರ ಪಟ್ಟಿ ಪರಿಶೀಲಿಸುವಂತೆ ಸೂಚನೆ**

ಈ ಗಂಭೀರ ಆರೋಪಗಳ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾಧಿಕಾರಿ ಆರ್.ಎಸ್. ಗೋಪಾಲನ್ ಅವರು ಪ್ರತಿಯೊಂದು ಹೆಸರನ್ನು ಕಟ್ಟುನಿಟ್ಟಾಗಿ ಪರಿಶೀಲಿಸಿದ ನಂತರವಷ್ಟೇ ಅಂತಿಮ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಮನೆ ಮನೆಗೆ ತೆರಳಿ ಸಮೀಕ್ಷೆ ನಡೆಸುವ ಬೂತ್ ಮಟ್ಟದ ಅಧಿಕಾರಿಗಳು ಸರಿಯಾದ ಪರಿಶೀಲನೆ ನಡೆಸದೆಯೇ ಹೆಸರುಗಳನ್ನು ಡಿಲೀಟ್ ಮಾಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಮೃತಪಟ್ಟವರು, ಬೇರೆಡೆಗೆ ವಲಸೆ ಹೋದವರು ಅಥವಾ ನಕಲಿ ದಾಖಲೆ ಹೊಂದಿರುವವರ ಹೆಸರನ್ನು ತೆಗೆಯುವ ಪ್ರಕ್ರಿಯೆಯಲ್ಲಿ ಬದುಕಿರುವ ಮತ್ತು ಅದೇ ಸ್ಥಳದಲ್ಲಿ ವಾಸವಿರುವವರ ಹೆಸರನ್ನೂ ಕೈಬಿಡಲಾಗಿದೆ ಎಂದು ಹೇಳಲಾಗಿದೆ. ಏಪ್ರಿಲ್ 2 ರ ನಂತರ ಸುಮಾರು 2 ಲಕ್ಷ ಜನರು ತಮ್ಮ ಹೆಸರುಗಳನ್ನು ಪಟ್ಟಿಗೆ ಸೇರಿಸಲು ಅಥವಾ ಈ ಬಗ್ಗೆ ಆಕ್ಷೇಪಣೆ ಸಲ್ಲಿಸಲು 'ಫಾರ್ಮ್-7' ಮೂಲಕ ಅರ್ಜಿ ಸಲ್ಲಿಸಿದ್ದಾರೆ.

**ಮತದಾರರ ಪಟ್ಟಿ ಪಾರದರ್ಶಕವಾಗಿರಬೇಕು**

ಈ ಸಮಸ್ಯೆಯನ್ನು ಬಗೆಹರಿಸಲು ಚುನಾವಣಾ ನೋಂದಣಿ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಕನಿಷ್ಠ ಶೇ. 50 ರಷ್ಟು ಆಕ್ಷೇಪಣೆಗಳನ್ನು ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ಆದೇಶಿಸಲಾಗಿದೆ. ಯಾರೊಬ್ಬರ ಹೆಸರನ್ನೂ ಸೂಕ್ತ ಕಾರಣ ಅಥವಾ ನೋಟಿಸ್ ನೀಡದೆ ಪಟ್ಟಿಯಿಂದ ತೆಗೆಯುವಂತಿಲ್ಲ. ಒಂದು ವೇಳೆ ಅರ್ಹ ಮತದಾರರ ಹೆಸರು ತಪ್ಪಾಗಿ ಡಿಲೀಟ್ ಆಗಿದ್ದರೆ, ತಕ್ಷಣವೇ ಅವರನ್ನು ಮರು-ನೋಂದಣಿ ಮಾಡಿಕೊಳ್ಳಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಒಟ್ಟಾರೆಯಾಗಿ, ಮುಂಬರುವ ಚುನಾವಣೆಗೂ ಮುನ್ನ ಮತದಾರರ ಪಟ್ಟಿಯು ಪಾರದರ್ಶಕ ಮತ್ತು ದೋಷಮುಕ್ತವಾಗಿರಬೇಕು ಎಂಬ ಉದ್ದೇಶದಿಂದ ಈ ಕಠಿಣ ಕ್ರಮಗಳನ್ನು ಕೈಗೊಳ್ಳಲಾಗಿದೆ.

# ಸಿದ್ದರಾಮಯ್ಯ ಟಗರು ಮುಂಚೆ ಹೇಗಿದ್ರೋ ಈಗಲೂ ಹಾಗೇ ಇದ್ದಾರೆ, ಟಗರು ಯಾವತ್ತೂ ಟಗರೇ: ಸಚಿವ ಜಮೀರ್ ಅಹಮದ್

**ಬೆಂಗಳೂರು:** ಸಿದ್ದರಾಮಯ್ಯ ಟಗರು ಮುಂಚೆ ಹೇಗಿದ್ರು ಈಗಲೂ ಹಾಗೇ ಇದ್ದಾರೆ. ಟಗರು ಟಗರೇ. ಅವರು ಮಾತನಾಡಿದರೆ ಬೇರೆ ತರಹ ಸೌಂಡ್ ಆಗುತ್ತದೆ ಎಂದು ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದರು.

ನಗರದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯನವರು ತಮ್ಮ ಆಪ್ತರು ಟಾರ್ಗೆಟ್ ಆದರೂ ಸೈಲೆಂಟ್ ಆಗಿದ್ದಾರೆ ಎಂಬ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಸಿಎಂಗೆ ಎಲ್ಲರೂ ಆಪ್ತರೇ. ಅವರು ನಮ್ಮ ಮುಖ್ಯಮಂತ್ರಿ. ಸಿಎಂ ಈಗ ಸೈಲೆಂಟ್ ಆಗಿರಬಹುದು, ಆದ್ರೆ ಅವರು ಮಾತನಾಡಿದರೆ ಬೇರೆ ತರಹ ಸೌಂಡ್ ಆಗುತ್ತದೆ. ಈಗ ಮಾತನಾಡುವ ಅಗತ್ಯ



ಇಲ್ಲ ಎಂದರು.

ಮುಸ್ಲಿಂ ಗುರುಗಳು ಪತ್ರ ಬರೆದ ವಿಚಾರವಾಗಿ ಪ್ರತಿಕ್ರಿಯಿಸಿ, ನಾನು ಮಾಧ್ಯಮಗಳಲ್ಲಿ ಪತ್ರವನ್ನು ನೋಡಿದ್ದೇನೆ. 15, 16 ಜನ ಗುರುಗಳು ರಾಹುಲ್ ಗಾಂಧಿಗೆ ಪತ್ರ ಬರೆದಿರೋದನ್ನು ಗಮನಿಸಿದೆ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳಿಗೆ ಮಲ್ಲಿಕಾರ್ಜುನ ಖರ್ಗೆಗೂ ಪತ್ರ ಬರೆದಿದ್ದಾರೆ. ಅವರು ಅವರ ಅಭಿಪ್ರಾಯವನ್ನು ಹೇಳಿದ್ದಾರೆ. ನೀವು ಅವರನ್ನೇ ಕೇಳಬೇಕು. ಅವರ ಅಭಿಪ್ರಾಯವನ್ನು ನಾನು ಹೇಳೋಕೆ ಬರಲ್ಲ. ಪತ್ರ ಬರೆದವರು ಗುರುಗಳಿಗೆ ಈ ಪ್ರಶ್ನೆಯನ್ನು ಕೇಳಬೇಕು. ಯಾವ ಕಾರಣಕ್ಕೆ ಪತ್ರ ಬರೆದಿದ್ದೀರ ಅಂತ ಅವರನ್ನೇ ಕೇಳಬೇಕು. ಯಾವುದೇ ತಾರತಮ್ಯ ಆಗಿಲ್ಲ. ಎಲ್ಲರನ್ನೂ ಸಮಾನವಾಗಿ ತೆಗೆದುಕೊಂಡು ಹೋಗಲಾಗುತ್ತಿದೆ. ಒಬ್ಬೊಬ್ಬರು ಒಬ್ಬೊಬ್ಬರ ಪರ ಮಾತನಾಡುತ್ತಿದ್ದಾರೆ. ಒಬ್ಬರು ನನ್ನ ಪರ ಮಾತನಾಡುತ್ತಾರೆ, ಇನ್ನೊಬ್ಬರು ಮತ್ತೊಬ್ಬರ ಪರ ಮಾತನಾಡುತ್ತಾರೆ. ಅದನ್ನೆಲ್ಲ ಪರಿಗಣಿಸಬೇಕಾಗಿಲ್ಲ ಎಂದು ಹೇಳಿದರು.

ಎಲ್ಲರ ಅಭಿಪ್ರಾಯ ಏನು ಅಂದ್ರೆ ಅಬ್ದುಲ್ ಜಬ್ಬಾರ್ ವಿಚಾರ ಇರಬಹುದು, ನಜೀರ್ ಅಹ್ಮದ್ ಅವರೇ ಇರಬಹುದು. ನಜೀರ್ ಅಹಮದ್ ಮೋಸ್ಟ್ ಸೀನಿಯರ್ ಇದ್ದಾರೆ. ಅವರು ಪಕ್ಷ ವಿರೋಧ ಚಟುವಟಿಕೆ ಮಾಡಿದ್ದರೆ ಅದಕ್ಕೆ ಒಂದು ಪ್ರೊಸೀಜರ್ ಇದೆ. ಮೊದಲು ನೋಟಿಸ್ ಕೊಡಬೇಕಿತ್ತು. ರಿಪ್ಲೈ ತೆಗೆದುಕೊಳ್ಳಬೇಕಾಗಿತ್ತು. ಆನಂತರ ಅಮಾನತು ಮಾಡಬೇಕಾಗಿತ್ತು ಅಂತ ಅಭಿಪ್ರಾಯ ಇದೆ. ಅವರು ಪಕ್ಷ ವಿರೋಧಿ ಕೆಲಸ ಮಾಡಿದ್ರೆ ತೆಗೆದಿದ್ದು ತಪ್ಪು ಅಂತ ನಾನು ಹೇಳಲ್ಲ ಎಂದರು.

ಪಕ್ಷ ಏನಾದ್ರೂ ತೀರ್ಮಾನ ಮಾಡಿದ್ರೆ ಯೋಚನೆ ಮಾಡಿ ಮಾಡಿರುತ್ತದೆ. ಒಂದು ನೋಟಿಸ್ ಕೊಟ್ಟು ಅವರ ರಿಪ್ಲೈ ತೆಗೆದುಕೊಂಡು ಆನಂತರ ತೀರ್ಮಾನ ತೆಗೆದುಕೊ ಳ್ಳಬೇಕಾಗಿತ್ತು. ಇದು ಸತೀಶ್ ಜಾರಕಿಹೊಳಿ ಅಭಿಪ್ರಾಯ. ಎಲ್ಲರ ಅಭಿಪ್ರಾಯ ಕೂಡ ಇದೇ ಎಂದು ಜಮೀರ್ ಅಹಮದ್ ತಿಳಿಸಿದರು.

ಅಬ್ದುಲ್ ಜಬ್ಬಾರ್, ನಜೀರ್ ಅಹಮದ್ ವಿರುದ್ಧದ ಕ್ರಮವನ್ನು ವಾಪಸ್ ತೆಗೆದುಕೊಳ್ಳಬೇಕು ಎಂಬ ವಿಚಾರವಾಗಿ ಪ್ರತಿಕ್ರಿಯಿಸಿ, ನಾನು ಹೇಳುವುದು ಒಂದು ನಿಯಮದ ಪ್ರಕಾರ ಮಾಡಬೇಕು. ಆತುರಾತುರವಾಗಿ ಮಾಡೋದು ಅಗತ್ಯ ಇರಲಿಲ್ಲ ಅಂತ ಹೇಳುತ್ತಿದ್ದಾರೆ ಎಂದರು.

ಪತ್ರದಲ್ಲಿ ಮುಂದಿನ ಚುನಾವಣೆಯಲ್ಲಿ ಪಾಠ ಕಲಿಸ್ತೇವೆ ಎಂಬ ಉಲ್ಲೇಖ ವಿಚಾರವಾಗಿ ಮಾತನಾಡಿ, ರಾಜಕೀಯ ಗುರುಗಳು, ಧಾರ್ಮಿಕ ಗುರುಗಳು ಅಸಮಾಧಾನ ಗೊಂಡಿರೋದು ನಿಜ. ನಾವು ಮಾತನಾಡಿ ಎಲ್ಲವನ್ನೂ ಸರಿಪಡಿಸುತ್ತೇವೆ. ಯಾರು ಪತ್ರ ಬರೆದಿದ್ದಾರೋ ಅವರಿಗೆ ತಾನೆ ಕೇಳಬೇಕು. ಸರ್ಕಾರ ಯಾವುದೇ ರೀತಿ ತಾರತಮ್ಯ ಮಾಡಿಲ್ಲ. ಬಜೆಟ್‌ನಲ್ಲಿ 1200 ಕೋಟಿ ಇತ್ತು. ಈಗ 4,900 ಕೋಟಿ ಕೊಟ್ಟಿದ್ದಾರೆ ಅವರು ಸಮರ್ಥಿಸಿಕೊಂಡರು.

ಕೆಪಿಸಿಸಿ ಅಲ್ಪಸಂಖ್ಯಾತರ ಮುಖಂಡರ ಮಾಧ್ಯಮಗೋಷ್ಠಿ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಅವರ ಬಳಿ ಯಾರದ್ದು ದಾಖಲೆ ಇದೆ ಕೊಡಲಿ. ಯಾರು ಮಾಡಿದ್ದಾರೆ ಅನ್ನೋದನ್ನು ಬಹಿರಂಗಪಡಿಸಲಿ. ಯಾರು ಮಾಡಿದ್ದಾರೆ ಅನ್ನೋದನ್ನು ಹೇಳಬೇಕು. ನನ್ನ ಹೆಸರು ಹೇಳಿದ್ರೆ ನಾನು ಉತ್ತರ ಕೊಡುತ್ತಿದ್ದೆ. ಅಡ್ಡ ಗೋಡೆ ಮೇಲೆ ದೀಪ ಇಟ್ಟು ಹೇಳಿದ್ರೆ ಯಾರು ಅಂತ ಹೇಳಲಿ ಎಂದು ಸಚಿವ ಜಮೀರ್ ಸವಾಲು ಹಾಕಿದರು.

ನಾನು ಜೆಡಿಎಸ್‌ಗೆ ಹೋಗೋದು ಊಹಾಪೋಹದ ಸುದ್ದಿ. ನನಗೆ ಕಾಂಗ್ರೆಸ್ ಯಾವ ರೀತಿಯಲ್ಲಿ ಕಡಿಮೆ ಮಾಡಿಲ್ಲ. 2018ರಲ್ಲಿ ಸಮ್ಮಿಶ್ರ ಸರ್ಕಾರದಲ್ಲೂ ಸಚಿವನಾಗಿದ್ದೆ. ನಾನು ಕಾಂಗ್ರೆಸ್ ಪಕ್ಷದಲ್ಲಿ ನಿರೀಕ್ಷೆ ಕೂಡ ಇಟ್ಟಿರಲಿಲ್ಲ. ನನಗೆ 5 ಖಾತೆಯನ್ನು ಕೊಟ್ಟಿದ್ದರು. 2023ರಲ್ಲಿ ನಾಲ್ಕು ಖಾತೆ ಕೊಟ್ಟಿದ್ದಾರೆ. ನನಗೆ ಕಾಂಗ್ರೆಸ್ ಪಕ್ಷ ಏನೂ ಕಡಿಮೆ ಮಾಡಿಲ್ಲ. ರೋಷನ್ ಬೇಗ್, ತನ್ವೀರ್ ಸೇಠ್, ಹ್ಯಾರಿಸ್ ಅಂತ ಸೀನಿಯರ್ ಇದ್ರು ಅವರನ್ನು ಬಿಟ್ಟು ನನ್ನನ್ನ ಸಚಿವನನ್ನಾಗಿ ಮಾಡಿದ್ದರು. ಅದನ್ನು ನಾನು ಮರೆಯೋಕಾಗಲ್ಲ. ಕುಮಾರಸ್ವಾಮಿಯವರ ಜೊತೆ ನಾನ್ಯಾಕೆ ಮಾತನಾಡಲಿ. ಅದೆಲ್ಲ ಊಹಾಪೋಹಾ ಎಂದು ಅವರು ನಿರಾಕರಿಸಿದರು.

ಪಕ್ಷ ನನಗೆ ಏನೂ ಕಡಿಮೆ ಮಾಡಿಲ್ಲ, ಅದಕ್ಕಿಂತ ಹೆಚ್ಚು ನನಗೇನು ಬೇಕಿಲ್ಲ. ಪಕ್ಷ ವಿರೋಧಿ ಚಟುವಟಿಕೆ ಇಂಥವರು ಮಾಡಿದ್ದಾರೆ ಅಂತ ಹೇಳಲಿ. ಯಾರಾದರೂ ಇದುವರೆಗೂ ಇಂಥವರು ಮಾಡಿದ್ದಾರೆ ಅಂತ ಹೇಳಿಲ್ಲ. ಪಕ್ಷದ ಮೇಲೆ ಅಭಿಮಾನ ಇದ್ರೆ ಇಂಥವರು ಮಾಡಿದ್ದಾರೆ ಅಂತ ಹೆಸರು ಹೇಳಲಿ ಎಂದರು.

ಶಾಸಕ ಹ್ಯಾರಿಸ್ ಮೇಲೆ ಇಡಿ ರೇಡ್ ವಿಚಾರವಾಗಿ ಮಾತನಾಡಿ, ಬಿಜೆಪಿಯವರ ಮೇಲೆ ಇಡಿ ರೇಡ್ ಆಗಲ್ಲ. ಇಡೀ ದೇಶದಲ್ಲಿ ಕಾಂಗ್ರೆಸ್ ನವರೇ ಸಿಗೋದು. ನನ್ನ ಮನೆ ಮೇಲೂ ರೇಡ್ ಆಗಿತ್ತು. ಸಾಕಷ್ಟು ಜನ ಕಾಂಗ್ರೆಸ್ ನಾಯಕರ ಮನೆ ಮೇಲೆ ಆಗಿದೆ. ಎಲ್ಲಾದರೂ ಬಿಜೆಪಿ ನಾಯಕರ ಮೇಲೆ ರೇಡ್ ಆಗಿರೋದು ತೋರಿಸಿ ನೋಡೋಣ. ರೇಡ್ ಮಾಡಿದ್ದು ತಪ್ಪು ಅಂತ ಹೇಳಲ್ಲ. ಅವರು ಮಾಡಿದರೆ ತನಿಖೆ ನಡೆಸಲಿ, ಸತ್ಯಾಂಶ ಹೊರಗೆ ಬರಲಿ. ಆದರೆ ಬಿಜೆಪಿಯವರಿಗೆ ಏನು ಮಾಡುತ್ತಿಲ್ಲ. ಬಿಜೆಪಿಯವರು ಏನು ಸತ್ಯಹರಿಶ್ಚಂದ್ರರಾ... ನಮ್ಮ ರಾಜ್ಯದಲ್ಲೇ 2008ರಲ್ಲಿ ಬಿಜೆಪಿ ಅಧಿಕಾರಕ್ಕೆ ಬರುವ ಮುಂಚೆ ಹೇಗಿದ್ರು. ಈಗ ಏನೇನಾಗಿದ್ದಾರೆ ಅಂತ ಬೇಕಾದ್ರೆ ನಿಮಗೆ ಲಿಸ್ಟ್ ಕೊಡ್ತೇನೆ. ಅದೆಲ್ಲ ಅವರಿಗೆ ಕಾಣಲ್ಲ. ಕೇವಲ ಕಾಂಗ್ರೆಸ್ ನವರು ಮಾತ್ರ ಕಾಣುತ್ತಾರೆ. ಬೇಕಂತಲೇ ಕಾಂಗ್ರೆಸ್‌ನವರನ್ನು ಟಾರ್ಗೆಟ್ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

# ಮೆಕ್ಕೆಜೋಳದ ನಡುವೆ ಗಾಂಜಾ: ಆರೋಪಿಯಿಂದ 18 ಲಕ್ಷ ರೂ. ಮೌಲ್ಯದ 187 ಕೆಜಿ ಗಾಂಜಾ ವಶ!

ಚಿತ್ರದುರ್ಗ: ಚಳ್ಳಕೆರೆ ತಾಲೂಕಿನ ಗುಂತಕೋಲಮ್ಮನ ಹಳ್ಳಿಯ ಕೃಷಿ ಭೂಮಿಯಲ್ಲಿ ಬೆಳೆಗಳ ನಡುವೆ ಬೆಳೆಸಿದ್ದ 18 ಲಕ್ಷ ರೂ. ಮೌಲ್ಯದ, 187 ಕೆ.ಜಿ. ಹಸಿ ಗಾಂಜಾವನ್ನು ನಾಯಕನಹಟ್ಟಿ ಪೊಲೀಸರು ಭಾನುವಾರ ವಶಕ್ಕೆ ಪಡೆದಿದ್ದಾರೆ.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್‌ಕುಮಾರ್ ಬಂಡಾರು , "ಮೆಕ್ಕೆಜೋಳ, ಶೇಂಗಾ, ಚೆಂಡು ಹೂವು ಬೆಳೆಗಳ ನಡುವೆ ಯಾರಿಗೂ ಅನುಮಾನ ಬಾರದಂತೆ ಗಾಂಜಾ ಬೆಳೆಯಲಾಗಿತ್ತು. ಪ್ರಕರಣ ಸಂಬಂಧ ಪಾಲಯ್ಯ ಎಂಬ ಆರೋಪಿಯನ್ನು ವಶಕ್ಕೆ ಪಡೆಯಲಾಗಿದೆ," ಎಂದರು.



**ಒಂದು ಎಕರೆಯಲ್ಲಿ ಗಾಂಜಾ**

"ಪೊಲೀಸ್ ಬಾತ್ಮೀದಾರರು ನೀಡಿದ ನಿಖರ ಮಾಹಿತಿ ಆಧರಿಸಿ ನಾಯಕನಹಟ್ಟಿ ಪೊಲೀಸ್ ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ. ಆರೋಪಿ ಪಾಲಯ್ಯ ತನ್ನ ಹೊಲದ ಸುಮಾರು ಒಂದು ಎಕರೆಯಲ್ಲಿ ಗಾಂಜಾ ಬೆಳೆದಿದ್ದಾನೆ. ಆರೋಪಿ ವಿರುದ್ಧ ಎನ್‌ಡಿಪಿಎಸ್ (ನಾರ್ಕೋಟಿಕ್ ಡ್ರಗ್ಸ್ ಮತ್ತು ಸೈಕೋಟ್ರೋಪಿಕ್ ಸಬ್ಸ್‌ಸ್ಟೆನ್ಸ್) ಕಾಯಿದೆ ಅಡಿ ಪ್ರಕರಣ ದಾಖಲಿಸಲಾಗಿದೆ," ಎಂದು ತಿಳಿಸಿದರು.

**ಕೆಎಸ್‌ಆರ್‌ಪಿ ಬೆಟಾಲಿಯನ್**

'ಚಿತ್ರದುರ್ಗ ಜಿಲ್ಲೆಯಲ್ಲಿ ಐಐಎಸ್‌ಸಿ, ಡಿಆರ್‌ಡಿಒ, ಬಿಎಆರ್‌ಸಿ ಸೇರಿ ಹಲವು ವೈಜ್ಞಾನಿಕ ಸಂಸ್ಥೆಗಳಿವೆ. ಅಂತಹ ಪ್ರಮುಖ ಸಂಸ್ಥೆಗಳ ರಕ್ಷಣೆಗೆ ವಿಶೇಷ ಗಮನ ಅಗತ್ಯವಿದೆ. ಕಾರಣ, ಈ ಸಂಸ್ಥೆಗಳ ಆವರಣದಲ್ಲಿ ಹೊಸ ಪೊಲೀಸ್ ಠಾಣೆ ತೆರೆಯುವ ಬದಲು, ಸಂಸ್ಥೆಗಳ ಭದ್ರತೆ ಹಾಗೂ ಇನ್ನಿತರೆ ಬಂದೋಬಸ್ತ್ ಗಳಿಗೆ ಅನುಕೂಲವಾಗುವಂತೆ ಕೆಎಸ್‌ಆರ್‌ಪಿ ಬೆಟಾಲಿಯನ್ ಸ್ಥಾಪನೆಗೆ ಚಿಂತನೆ ನಡೆಸಲಾಗಿದೆ' ಎಂದು ಎಸ್‌ಪಿ ತಿಳಿಸಿದರು.

**ಡ್ರೋನ್ ಬಳಸಿ ಗಾಂಜಾ ಸರ್ವೆ**

"ಹೊಲಗಳಲ್ಲಿ ಗಾಂಜಾ ಬೆಳೆಯುವುದು ಶಿಕ್ಷಾರ್ಹ ಅಪರಾಧ. ತಮಗೆ ಗೊತ್ತಿದ್ದೋ, ಗೊತ್ತಿಲ್ಲದೆಯೋ ಗಾಂಜಾ ಬೆಳೆಸಿದರೂ ಅದನ್ನು 'ಅಪರಾಧ' ಎಂದೇ ಪರಿಗಣಿಸಲಾಗುತ್ತದೆ. ಪ್ರತಿ ಹೊಲವನ್ನೂ ಪೊಲೀಸರು ಶೋಧಿಸುವುದು ಕಷ್ಟ. ಹೀಗಾಗಿ ಅನುಮಾನ ಇರುವ ಪ್ರದೇಶದಲ್ಲಿ ಡ್ರೋನ್ ಮೂಲಕ ಗಾಂಜಾ ಬೆಳೆ ಸರ್ವೆ ನಡೆಸಲಾಗುತ್ತಿದೆ. 1985ರ ಎನ್‌ಡಿಪಿಎಸ್ ಕಾಯಿದೆಯಂತೆ ಗಾಂಜಾ, ಅಫೀಮು ಸೇರಿ ಇತರೆ ಪದಾರ್ಥಗಳನ್ನು ಹೊಂದುವುದು, ಬೆಳೆಯುವುದು, ಮಾರುವುದು ಅಪರಾಧ. ಇದಕ್ಕೆ 10ರಿಂದ 20 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲು ಅವಕಾಶವಿದೆ. ರೈತರು ಇಂಥಹ ಕೃತ್ಯಗಳಲ್ಲಿ ಭಾಗಿಯಾಗಬಾರದು," ಎಂದು ಎಸ್‌ಪಿ ಮನವಿ ಮಾಡಿದರು. ಸದ್ಯ ಪ್ರಕರಣದ ಕುರಿತು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಯನ್ನು ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ.

# ಸಹಕಾರಿ ಸಂಘಗಳಲ್ಲಿ ಶೂನ್ಯ ಬಡ್ಡಿ ಸಾಲ ಅನ್ನದಾತರಿಗೆ ಮರೀಚಿಕೆ!

**ಬೆಂಗಳೂರು:** ರಾಜ್ಯದಲ್ಲಿ ಖಾಸಗಿ ಲೇವಾದೇವಿದಾರರ ಸಾಲದ ಬಲೆಗೆ ಸಿಲುಕಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿದ್ದರೂ, ಅವರಿಗೆ ರಕ್ಷಣೆ ನೀಡಬೇಕಾದ ಸಹಕಾರಿ ಸಂಘಗಳೇ ಈಗ ಹಣದ ಕೊರತೆಯಿಂದ ಕಂಗಾಲಾಗಿವೆ. ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡುವ ಸರಕಾರದ ಮಹತ್ವಾಕಾಂಕ್ಷಿ ಯೋಜನೆ ರೈತರ ಕೈಗೆಟುಕುತ್ತಿಲ್ಲ.

ಕಳೆದೆರಡು ವರ್ಷಗಳಿಂದ ನಿಗದಿತ ಗುರಿಯಂತೆ ಸಾಲ ವಿತರಿಸದ ಸಹಕಾರ ಸಂಘಗಳು 2026 –27ನೇ ಸಾಲಿನಲ್ಲೂ ರೈತರಿಗೆ ಹಣಕಾಸು ರಕ್ಷಣೆ ಒದಗಿಸುವುದು ಡೌಟು. ಸಹಕಾರ ಸಂಘಗಳಿಗೆ ನಬಾರ್ಡ್ ಶೇ.4.5ರ ಬಡ್ಡಿ ದರದಲ್ಲಿ ನೀಡುತ್ತಿದ್ದ ಪುನರ್ಧನ ಸಾಲವನ್ನು 2024 –25ನೇ ಸಾಲಿನಲ್ಲಿ ರಾಜ್ಯಕ್ಕೆ ಶೇ.58 ಕಡಿತ ಮಾಡಿದ ನಂತರ ಪರಿಸ್ಥಿತಿ ಇನ್ನೂ ಸುಧಾರಿಸಿಲ್ಲ. ವಾರ್ಷಿಕ ಸುಮಾರು 5,600 ಕೋಟಿ ರೂ. ನಬಾರ್ಡ್ ಸಾಲ 2,300 ಕೋಟಿ ರೂ.ಗೆ ಇಳಿಕೆಯಾದ ಬಳಿಕ ರೈತರಿಗೆ ಶೂನ್ಯ ಬಡ್ಡಿ ದರದ ಸಾಲ ಸೌಲಭ್ಯಕ್ಕೆ ಕತ್ತರಿ ಬಿದ್ದಿದೆ.

ಸಹಕಾರ ಸಂಘಗಳ ಮೂಲಕ ವಿತರಿಸುವ ಸಾಲದ ಮೊತ್ತ ಹಾಗೂ ಹೊಸ ರೈತರಿಗೆ ಸಾಲದ ಗುರಿ ಎರಡೂ ತಗ್ಗುತ್ತಿದೆ.

ನಬಾರ್ಡ್ ರಿಯಾಯಿತಿ ಬಡ್ಡಿ ದರದ ಪುನರ್ಧನ ಸಾಲವನ್ನು ತಗ್ಗಿಸಿ ಹೆಚ್ಚಿನ ಸಾಲಕ್ಕೆ ಶೇ.8ರವರೆಗೆ ಬಡ್ಡಿ ವಿಧಿಸುತ್ತಿದೆ. ಆದರೆ, ಸಾಲ ನೀಡಿ ಮರು ಪಾವತಿಗಾಗಿ ವರ್ಷವಿಡೀ ಕಾಯುವ ಸಹಕಾರಿ ಸಂಘಗಳ ವಹಿವಾಟು ಕಡಿಮೆ. ಹಾಗಾಗಿ ನಬಾರ್ಡ್‌ನಿಂದ ದುಬಾರಿ ಬಡ್ಡಿಗೆ ಸಾಲ ಪಡೆದು ರೈತರಿಗೆ ಹಂಚುವ ಸ್ಥಿತಿಯಲ್ಲಿ ಸಹಕಾರಿ ಸಂಸ್ಥೆಗಳು ಇಲ್ಲ. ಇದರ ಪರಿಣಾಮ ಎಂಬಂತೆ ಕಳೆದೆರಡು ವರ್ಷಗಳಿಂದ ರೈತರಿಗೆ ನೀಡುವ ಶೂನ್ಯ ಬಡ್ಡಿ ಮತ್ತು ರಿಯಾಯಿತಿ ಬಡ್ಡಿ ದರದ ಸಾಲಸೌಲಭ್ಯ ತಗ್ಗುತ್ತಿದೆ. ಹೆಚ್ಚು ಹೆಚ್ಚು ರೈತರನ್ನು ಸಹಕಾರ ಸಂಘಗಳ ಸದಸ್ಯರಾಗಿ ಮಾಡಿ ಅಲ್ಪಾವಧಿ ಬೆಳೆ ಸಾಲ ಹಾಗೂ ಮಧ್ಯಮಾವಧಿ ಸಾಲ ನೀಡುವ ಸರಕಾರದ ಘೋಷಣೆಯೇ ಹಳ್ಳ ಹಿಡಿಯುತ್ತಿದೆ.

**ಶೇ.50 ಸದಸ್ಯರಿಗೆ ಸಿಗದ ಸಾಲ** ಹೊಸ ರೈತರಿಗೆ ಸಾಲ ನೀಡುವ ಆಶಯವಿತ್ತು. ಆದರೆ, ಹಾಲಿ ಸದಸ್ಯರಿಗೇ ಸಾಲ ವಿತರಣೆ ಸಾಧ್ಯವಾಗುತ್ತಿಲ್ಲ. ರಾಜ್ಯದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಸದ್ಯ ಸುಮಾರು 54 ಲಕ್ಷ ಸದಸ್ಯ ರೈತರಿದ್ದು, ಶೂನ್ಯ ಬಡ್ಡಿ ದರದ ಸಾಲ ಸೌಲಭ್ಯ ಪಡೆದ ಸದಸ್ಯ ರೈತರ ಸಂಖ್ಯೆ ಶೇ.50 ದಾಟಿಲ್ಲ. 2024 –25ನೇ ಸಾಲಿನಲ್ಲಿ 36 ಲಕ್ಷ ರೈತರಿಗೆ ಒಟ್ಟು 27 ಸಾವಿರ ಕೋಟಿ ಸಾಲ ವಿತರಣೆ ಗುರಿ ಹೊಂದಲಾಗಿತ್ತು. ಆದರೆ, 19,21,359 ರೈತರಿಗೆ 17,717 ಕೋಟಿ ರೂ. ಮಾತ್ರವೇ ಸಾಲ ವಿತರಣೆಯಾಗಿತ್ತು.

2025–26ನೇ ಸಾಲಿನಲ್ಲಿ 38 ಲಕ್ಷ ರೈತರಿಗೆ ಒಟ್ಟು 28 ಸಾವಿರ ಕೋಟಿ ರೂ. ಸಾಲ ವಿತರಣೆ ಗುರಿಯಿತ್ತು.

ಆದರೆ, 24,532,190 ರೈತರಿಗೆ ಒಟ್ಟು 22,320 ಕೋಟಿ ರೂ. ಮಾತ್ರ ವಿತರಣೆಯಾಗಿದ್ದು, ಗುರಿ ಸಾಧನೆ ಶೇ. 79.72 ಮಾತ್ರ. ಆದರೂ ಗುರಿ ನಿಗದಿಯಲ್ಲಿ ಹಿಂದೆ ಬೀಳದ ಸರಕಾರ ಪ್ರಸಕ್ತ 2026–27ನೇ ಸಾಲಿಗೆ ಸಹಕಾರ ಸಂಘಗಳ ಮೂಲಕ ಒಟ್ಟು 38 ಲಕ್ಷ ರೈತರಿಗೆ 30 ಸಾವಿರ ಕೋಟಿ ರೂ. ಸಾಲ ವಿತರಣೆ ಘೋಷಣೆ ಮಾಡಿದೆ.




ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿಯ ವತಿಯಿಂದ ದೇಶ ವಿರೋಧಿ, ರೈತ ವಿರೋಧಿ ಅನ್ಯಾಯಕಾರಿ ಭಾರತ- ಅಮೆರಿಕ ವಾಣಿಜ್ಯ ಒಪ್ಪಂದವನ್ನು ವಿರೋಧಿಸಿ; ಈ ಅನಾಹುತಕಾರಿ ಒಪ್ಪಂದ ಹಿಂತೆಗೆದುಕೊಳ್ಳುವಂತೆ ಒತ್ತಾಯಿಸಿ, ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷರಾದ ಮಂಜುನಾಥ ಗೌಡ ನೇತೃತ್ವದಲ್ಲಿ, ರಾಜ್ಯ ಉಪಾಧ್ಯಕ್ಷರು ಚೈತ್ರ ವಿ ಗಿರೀಶ್ ಕುಮಾರ್, ದಿವ್ಯ ಆರ್ ಕೆ, ಪರಮಿತ ದಾಸ್, ಮಾಧ್ಯಮ ವಿಭಾಗದ ಮುಖ್ಯಸ್ಥರು ದೀಪಕ್ ಗೌಡ, ಶ್ರೀಧರ್ ಜಾದವ್, ಬಾಹುಬಲಿ, ಪೃಥ್ವಿ , ಮೋನಿಷ್ ,ರಾಹುಲ್, ಪೂಜಾ,ರಾಜ್ಯ ಮತ್ತು ಜಿಲ್ಲಾ ಪದಾಧಿಕಾರಿಗಳ ಜೊತೆಗೆ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಮೂರು ದಿನಗಳ " ಕಿಸಾನ್ ನ್ಯಾಯ ಸತ್ಯಾಗ್ರಹ" ಧರಣಿ ಆರಂಭಿಸಲಾಗಿದೆ.

# 11ಎಲಿವೇಟೆಡ್ ಕಾರಿಡಾರ್ ಅಭಿವೃದ್ಧಿಗೆ 13,262 ಕೋಟಿ ರೂ.

ಬೆಂಗಳೂರಿನ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರವು ಭರ್ಜರಿ ಗುಡ್‌ನ್ಯೂಸ್ ಕೊಟ್ಟಿದೆ. ಬೆಂಗಳೂರಿನ ಪ್ರಮುಖ ರಸ್ತೆಗಳ ಅಭಿವೃದ್ಧಿ ಹಾಗೂ 11 ಎಲಿವೇಟೆಡ್ ಕಾರಿಡಾರ್‌ಗಳ



ನಿರ್ಮಾಣಕ್ಕೆ ಕರ್ನಾಟಕ ಕಾಂಗ್ರೆಸ್ ಸರ್ಕಾರವು ಮುಂದಾಗಿದೆ. ಅಲ್ಲದೆ ಈ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರವು ಬರೋಬ್ಬರಿ 13,262 ಕೋಟಿ ರೂ. ಅನುದಾನವನ್ನು ಮೀಸಲಿರಿಸಿದೆ.


ಬೆಂಗಳೂರಿನ ಪ್ರಮುಖ 11 ಎಲಿವೇಟೆಡ್ ಕಾರಿಡಾರ್‌ಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಕಳೆದ ಆರು ತಿಂಗಳಿನಿಂದಲೂ ಹೆಚ್ಚು ಚರ್ಚೆ ಆಗುತ್ತಿತ್ತು. ಇದೀಗ ಈ 11 ಕಾರಿಡಾರ್‌ಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಕರ್ನಾಟಕ ಸಚಿವ ಸಂಪುಟವು ಅನುಮೋದನೆ ನೀಡಿದೆ. ಬೆಂಗಳೂರಿನಾದ್ಯಂತ 11 ಎಲಿವೇಟೆಡ್ ಕಾರಿಡಾರ್‌ಗಳ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದ್ದು, ಇದಕ್ಕಾಗಿ ಅಂದಾಜು 13,262 ಕೋಟಿ ರೂ. ಮೊತ್ತದ್ದಾಗಿದೆ. ಬೆಂಗಳೂರಿನಲ್ಲಿ ಮೆಗಾ ಮೊಬಿಲಿಟಿಯ ಭಾಗವಾಗಿದೆ. ಈ ಯೋಜನೆಯು ನಗರದ ದೀರ್ಘಕಾಲದ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲಿದೆ ಎಂದು ಹೇಳಲಾಗಿದೆ.

ಈ ವಿಚಾರವಾಗಿ ಮಾತನಾಡಿರುವ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಅವರು, ಬೆಂಗಳೂರಿನಲ್ಲಿ 75.6 ಕಿ.ಮೀ. ವ್ಯಾಪ್ತಿಯ ಈ ಕಾರಿಡಾರ್‌ಗಳು ಸಾರಿಗೆ ಮೂಲಸೌಕರ್ಯ ಅಭಿವೃದ್ಧಿಗೆ ಸಹಕಾರಿಯಾಗಿವೆ. ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಮೊದಲು 2024 ರಲ್ಲಿ ನಗರದಾದ್ಯಂತ 110 ಕಿ.ಮೀ. ಎತ್ತರದ ರಸ್ತೆಗಳನ್ನು ಪ್ರಸ್ತಾಪಿಸಿ ಎಲಿವೇಟೆಡ್ ಕಾರಿಡಾರ್ ಯೋಜನೆಯನ್ನು ಘೋಷಿಸಿದ್ದರು. ಇದು ಅಂದಾಜು 18,000 ಕೋಟಿ ರೂ., ಅಂದರೆ ಪ್ರತಿ ಕಿ.ಮೀ.ಗೆ ಸರಿಸುಮಾರು 142 ಕೋಟಿ ರೂ. ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ.

ಬೆಂಗಳೂರು – ಪ್ರಮುಖ ಮಾರ್ಗಗಳ ವಿವರ ತುಮಕೂರು ರಸ್ತೆಯಲ್ಲಿರುವ RNS ಶಾಂತಿನಿಕೇತನದ ಹತ್ತಿರದ ಒಇಖ ಜಂಕ್ಷನ್ ಮಹಾಲಕ್ಷ್ಮಿ ಲೇಔಟ್‌ನಲ್ಲಿ ವೆಸ್ಟ್ ಆಫ್ ಕಾರ್ಡ್ ರಸ್ತೆಯಿಂದ ಹೊರ ವರ್ತುಲ ರಸ್ತೆಯವರೆಗೆ ಪೈಪ್‌ಲೈನ್ ರಸ್ತೆಯಲ್ಲಿ ಗ್ರೇಡ್ ಸೆಪರೇಟರ್‌ಗಳು ದೊಡ್ಡಬಳ್ಳಾಪುರ ರಸ್ತೆ (ಪೊಲೀಸ್ ಸ್ಟೇಷನ್ ಜಂಕ್ಷನ್) ನಿಂದ ಹಳೆಯ ಯಲಹಂಕ ಮೂಲಕ ಕೋಗಿಲು ವೃತ್ತದಲ್ಲಿ ಎನ್‌ಎಚ್ –7 (ನವಯುಗ ಫ್ಲೈಓವರ್) ವರೆಗೆ ಎಲಿವೇಟೆಡ್ ಕಾರಿಡಾರ್ ಕನಕಪುರ ರಸ್ತೆಯ ಉದ್ದಕ್ಕೂ ಕೋಣನಕುಂಟೆ ವೃತ್ತ ಮತ್ತು ರಘುವನಹಳ್ಳಿ ಕ್ರಾಸ್‌ನಲ್ಲಿ ಎಲಿವೇಟೆಡ್ ಕಾರಿಡಾರ್‌ಗಳು ಅಸ್ತಿತ್ವದಲ್ಲಿರುವ ಬಿಜಿಎಸ್ ಫ್ಲೈಓವರ್‌ನಿಂದ ಟೌನ್ ಹಾಲ್‌ವರೆಗಿನ ಲೂಪ್ ಫ್ಲೈಓವರ್ ಸೇರಿದಂತೆ ಮಿನರ್ವಾ ಸರ್ಕಲ್–ಹಡ್ಸನ್ ಸರ್ಕಲ್ ಎಲಿವೇಟೆಡ್ ಕಾರಿಡಾರ್ ಸಂಗೊಳ್ಳಿ ರಾಯಣ್ಣ ವೃತ್ತ (ಆನಂದರಾವ್ ಫ್ಲೈಓವರ್) ನಿಂದ ನೃಪತುಂಗ ರಸ್ತೆ (ಕೆಆರ್ ಸರ್ಕಲ್) ವರೆಗಿನ ಕಾರಿಡಾರ್‌ಗಳು ಮೈಸೂರು ರಸ್ತೆಯ ಸಿರ್ಸಿ ವೃತ್ತದಿಂದ ನಾಯಂಡಹಳ್ಳಿಯವರೆಗೆ ಶೂಲೆ ಸರ್ಕಲ್ – ಹೊಸೂರು ರಸ್ತೆಯ – ಸೇಂಟ್ ಜಾನ್ಸ್ ಆಸ್ಪತ್ರೆ ಮಾರ್ಗ ಇನ್ನು ಕರ್ನಾಟಕ ಸರ್ಕಾರವು ಇದೀಗ

2023ಕ್ಕಿಂತಲೂ ಮೊದಲು ಘೋಷಿಸಲಾದ ಹಾಗೂ ದೀರ್ಘಾವಧಿಯಿಂದ ಬಾಕಿ ಉಳಿದಿರುವ ಮಧ್ಯಂತರ ರಿಂಗ್ ರಸ್ತೆ ಯೋಜನೆಗೆ ಸಂಬಂಧಿಸಿದಂತೆ ಸಚಿವ ಸಂಪುಟ ಸಭೆಯು ಅನುಮೋದನೆ ನೀಡಿದೆ.

IOC ಜಂಕ್ಷನ್‌ನಲ್ಲಿ ಎತ್ತರದ ರೋಟರಿ ಫ್ಲೈಓವರ್ ಮತ್ತು ಬೈಯಪ್ಪನಹಳ್ಳಿ ಲೆವೆಲ್ ಕ್ರಾಸಿಂಗ್‌ನಲ್ಲಿ ಹೆಚ್ಚುವರಿ ಎರಡು ಪಥದ ರೈಲ್ವೆ ಓವರ್‌ಬ್ರಿಡ್ಜ್ ನಿರ್ಮಾಣಕ್ಕೆ ಸಂಬಂಧಿಸಿದಂತೆ 436.44 ಕೋಟಿ ರೂ.ಗಳ ಪರಿಷ್ಕೃತ ಅಂದಾಜಿಗೆ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ.



ಮಹಾಲಕ್ಷ್ಮೀಪುರ ಬ್ರಾಹ್ಮಣ ಸಭಾ ಹಾಗೂ ಮೈತ್ರೀ ಸಂಸ್ಕೃತ – ಸಂಸ್ಕೃತಿ ಪ್ರತಿಷ್ಠಾನಮ್ ಸಹಯೋಗದಲ್ಲಿ ಆದಿಗುರು ಶಂಕರಾಚಾರ್ಯ ಜಯಂತಿ ಹಾಗೂ ತತ್ವಜ್ಞಾನಿಗಳ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಮಹಾಲಕ್ಷ್ಮೀಪುರದ ಶ್ರೀ ಪ್ರಸನ್ನ ವೀರಾಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕರಾದ ಕೆ.ಗೋಪಾಲಯ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಕರ್ನಾಟಕ ಉಚ್ಚನ್ಯಾಯಾಲಯದ ನ್ಯಾಯಾಧೀಶರಾದ ಶ್ರೀಶಾನಂದರವರು ಅಧ್ಯಕ್ಷತೆ ವಹಿಸಿದ್ದರು. ಹೆಚ್ಚುವರಿ ಅಡ್ವೊಕೇಟ್ ಜನರಲ್ ಮಲ್ಲಾರಿರಾವ್ ಹಾಗೂ ರಾಘವೇಂದ್ರ ಭಟ್ ವೇದಿಕೆಯನ್ನು ಅಲಂಕರಿಸಿದ್ದರು.

ಈ ಸಂದರ್ಭದಲ್ಲಿ ಸೌಂದರ್ಯಲಹರಿ ಪಾರಾಯಣ ಹಾಗೂ ಸ್ತೋತ್ರಾರ್ಥ ಚಿಂತನೆ ನಡೆಸಲಾಯಿತು. ಹಿರಿಯ ವಿದ್ವಾಂಸರಿಗೆ ಶಂಕರ ಸೇವಾ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ವಿಪ್ರರಾದಿಯಾಗಿ ನೂರಾರು ಜನ ಹಿಂದೂ ಸಮುದಾಯದವರು ಭಾಗವಹಿಸಿದ್ದರು.

# ಬೆಂಗಳೂರಲ್ಲಿ ಜಪ್ತಿ, ಹರಾಜಿಗೂ ಜಗ್ಗದ ಸುಸ್ತಿದಾರರು:

## 688 ಕೋಟಿ ರೂ ಬಾಕಿ ಉಳಿಸಿರುವ 1.70 ಲಕ್ಷ ಆಸ್ತಿಗಳನ್ನು ಜಿಬಿಎ ಏನು ಮಾಡಲಿದೆ

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಸುಸ್ತಿದಾರರಿಗೆ ಡಿಮ್ಯಾಂಡ್ ನೋಟಿಸ್ ಜಾರಿ, ಆಸ್ತಿ ಜಪ್ತಿ ಹಾಗೂ ಹರಾಜು ಕ್ರಮದ ಎಚ್ಚರಿಕೆ ನೀಡಿದರೂ ಜಗ್ಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ನಗರ ಪಾಲಿಕೆ ಗಳಿಂದಲೇ ಆ ಆಸ್ತಿಗಳನ್ನು ಮಾರ್ಗಸೂಚಿ ದರದಲ್ಲಿಖರೀದಿಸಿ, ಬಾಕಿ ವಸೂಲು ಮಾಡಲು ಚಿಂತನೆ ನಡೆಸಲಾಗಿದೆ.

ದೀರ್ಘಕಾಲದಿಂದ ತೆರಿಗೆ ಬಾಕಿ ಉಳಿಸಿಕೊಂಡಿರುವ ಸ್ವತ್ತುಗಳ ಮಾಲೀಕರಿಗೆ ಡಿಮ್ಯಾಂಡ್ ನೋಟಿಸ್ ಜಾರಿ, ಆಸ್ತಿ ಮುಟ್ಟುಗೋಲು ಮತ್ತು ಸಾರ್ವಜನಿಕವಾಗಿ ಹರಾಜು ಹಾಕುವ ಮೂಲಕ ತೆರಿಗೆ ವಸೂಲಿ ಮಾಡುವುದೂ ಸೇರಿದಂತೆ ಕಾನೂನುಬದ್ಧ ಕ್ರಮಗಳನ್ನು ಕೈಗೊಳ್ಳಲಾಯಿತು. ಪಂಚ ಪಾಲಿಕೆಗಳೂ ತೆರಿಗೆ ವಸೂಲಿಗೆ ಹರಾಜು ಪ್ರಕ್ರಿಯೆ ನಡೆಸಿದವು.

ಆದರೆ, ಬೆರಳೆಣಿಕೆಯ ಮಂದಿಯಷ್ಟೇ ಹರಾಜಿಗೆ ಹೆದರಿ ತೆರಿಗೆ ಪಾವತಿ ಮಾಡಿದರು. ಹರಾಜು ಪ್ರಕ್ರಿಯೆಯಲ್ಲೂ ಯಾವುದೇ ಬಿಡ್‌ದಾರರು ಭಾಗವಹಿಸದ ಕಾರಣ, ನಿರೀಕ್ಷಿತ ತೆರಿಗೆ ಸಂಗ್ರಹವಾಗಲಿಲ್ಲ. ಹೀಗಾಗಿ, ಇಂತಹ ಪ್ರಕರಣಗಳಲ್ಲಿ ಅಂತಿಮ ಕ್ರಮವಾಗಿ ಪಾಲಿಕೆಗಳು ಮಾರ್ಗಸೂಚಿ ದರದಲ್ಲಿ ಆಸ್ತಿಗಳನ್ನು ಖರೀದಿಸಲು ಉದ್ದೇಶಿಸಿವೆ.

ನಗರ ಪಾಲಿಕೆಗಳು ಆಸ್ತಿ ಖರೀದಿಸುವ ಸಂದರ್ಭದಲ್ಲಿ ಮಾರ್ಗಸೂಚಿ ದರವನ್ನಷ್ಟೇ ಪರಿಗಣಿಸಲು ತೀರ್ಮಾನಿಸಿವೆ. ನಿರ್ದಿಷ್ಟ ಆಸ್ತಿಯ ಮಾರ್ಗಸೂಚಿ ದರವನ್ನು ಲೆಕ್ಕ ಹಾಕಿ, ಬಾಕಿ ಆಸ್ತಿ ತೆರಿಗೆ, ದಂಡ, ಬಡ್ಡಿ ಮತ್ತು ಆಡಳಿತ ವೆಚ್ಚಗಳನ್ನು ಕಡಿತ ಮಾಡಿಕೊಳ್ಳಲಾಗುತ್ತದೆ. ಉಳಿದ ಮೊತ್ತವನ್ನು ಮೂಲ ಖಾತೆದಾರ ಮಾಲೀಕರ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆ ಮಾಡಲಾಗುತ್ತದೆ. ಬಳಿಕ ಆ ಆಸ್ತಿಯನ್ನು ಪಾಲಿಕೆಗಳ ಹೆಸರಿಗೆ ನೋಂದಾಯಿಸಿಕೊಳ್ಳಲು ತೀರ್ಮಾನಿಸಲಾಗಿದೆ.

ಈ ಹಂತದಲ್ಲಿಯೂ ಸುಸ್ತಿದಾರರಿಗೆ ನಿಗದಿತ ಅಂತಿಮ ಗಡುವು ನೀಡಿ, ಬಡ್ಡಿ ಸೇರಿದಂತೆ ಎಲ್ಲ ಬಾಕಿ ಮೊತ್ತವನ್ನು ಪಾವತಿಸಲು ಅವಕಾಶ ನೀಡಲಾಗುತ್ತದೆ. ಈ ಅವಧಿಯಲ್ಲಿ ಪಾವತಿ ಮಾಡಿದಲ್ಲಿ ಸ್ವಾಧೀನ ಕ್ರಮದಿಂದ ಹಿಂದೆ ಸರಿಯಲಾಗುತ್ತದೆ. ಆಸ್ತಿಯನ್ನೂ ಹಿಂದಿರುಗಿಸಲಾಗುತ್ತದೆ.

**1.70 ಲಕ್ಷ ಆಸ್ತಿಗಳಿಂದ 600 ಕೋಟಿ ರೂ. ಬಾಕಿ:** ಪಂಚ ಪಾಲಿಕೆಗಳ ವ್ಯಾಪ್ತಿಯಲ್ಲಿ 24 ಲಕ್ಷಕ್ಕೂ ಅಧಿಕ ಸ್ವತ್ತುಗಳಿವೆ. ಈ ಸ್ವತ್ತುಗಳಿಂದ ಸಂಗ್ರಹವಾಗುವ ಆದಾಯವೇ



ಪಾಲಿಕೆಗಳ ಪ್ರಮುಖ ಆದಾಯ ಮೂಲ. ಆದರೆ, ನಗರದಲ್ಲಿ 1.70 ಲಕ್ಷಕ್ಕಿಂತ ಹೆಚ್ಚಿನ ಆಸ್ತಿ ಮಾಲೀಕರು ಹಲವು ವರ್ಷಗಳಿಂದ ತೆರಿಗೆ ಪಾವತಿಸಿಲ್ಲ. ಹೀಗಾಗಿ, ಪಾಲಿಕೆಗಳಿಗೆ ಸುಮಾರು 600 ಕೋಟಿ ರೂ.ಗಳಷ್ಟು ತೆರಿಗೆ ಖೋತಾ ಆಗುತ್ತಿದೆ. ಬಾಕಿ ವಸೂಲಾತಿಗೆ ಪಾಲಿಕೆಗಳು ಇನ್ನಿಲ್ಲದ ಕಸರತ್ತು ನಡೆಸುತ್ತಲೇ ಇವೆ. ಆದರೂ, ಆಸ್ತಿ ಮಾಲೀಕರು ಕಿಮ್ಮತ್ತು ನೀಡುತ್ತಿಲ್ಲ.

ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ನಂತರ ಸುಸ್ತಿದಾರರಿಗೆ ಒಂದು ಬಾರಿ ಪರಿಹಾರ ಯೋಜನೆ (ಒಟಿಎಸ್) ಜಾರಿಗೊಳಿಸಿ, ದಂಡ, ಬಡ್ಡಿ ಪಾವತಿಯಿಂದ ವಿನಾಯಿತಿ ನೀಡಲಾಯಿತು. ಈ ಅವಕಾಶವನ್ನೂ ಕೆಲ ಮಾಲೀಕರಷ್ಟೇ ಬಳಸಿಕೊಂಡರು.

**7020 ಸ್ವತ್ತುಗಳಿಗೆ ಹರಾಜು ನೋಟಿಸ್:** ಜಿಬಿಎ ವ್ಯಾಪ್ತಿಯಲ್ಲಿ 7020 ಆಸ್ತಿಗಳು 437 ಕೋಟಿ ರೂ. ತೆರಿಗೆಯನ್ನು ಹಲವು ವರ್ಷಗಳಿಂದ ಬಾಕಿ ಉಳಿಸಿಕೊಂಡಿದ್ದವು. ಇದನ್ನು ವಸೂಲಿ ಮಾಡಲು ಈ ಆಸ್ತಿಗಳನ್ನು ಹರಾಜು ಹಾಕಲು ನಿರ್ಧರಿಸಲಾಯಿತು. ಎಲ್ಲ ಸುಸ್ತಿದಾರರಿಗೆ ಹರಾಜು ನೋಟಿಸ್ ಜಾರಿ ಮಾಡಲಾಯಿತು. ಆಯಾ ಪಾಲಿಕೆಗಳ ಕಂದಾಯ ಅಧಿಕಾರಿಗಳು, ಜಂಟಿ ಆಯುಕ್ತರು ಹರಾಜು ಪ್ರಕ್ರಿಯೆ ನಡೆಸಿದರು. ಆದರೆ, ಬಹುತೇಕರು ತೆರಿಗೆ ಪಾವತಿಗೆ ಮುಂದಾಗಲೇ ಇಲ್ಲ. ಹೀಗಾಗಿ, ಪಾಲಿಕೆಗಳ ಈ ಕ್ರಮವೂ ವಿಫಲವಾಯಿತು.

**688 ಕೋಟಿ ರೂ. ತೆರಿಗೆ ವಂಚನೆ :**

2008–2009ರಲ್ಲಿ ಸ್ವಯಂಘೋಷಿತ ಆಸ್ತಿ ತೆರಿಗೆ ಪದ್ಧತಿ ಜಾರಿಗೆ ತಂದು ತೆರಿಗೆ ಪಾವತಿಸಲು ಅನುವು ಮಾಡಿಕೊಡಲಾಗಿತ್ತು. ಆದರೆ, ಹಲವು ಆಸ್ತಿಗಳ ಮಾಲೀಕರು ಅಂದಿನಿಂದಲೂ ವಿಸ್ತೀರ್ಣವನ್ನು ತಪ್ಪಾಗಿ ಘೋಷಿಸಿಕೊಂಡು ತೆರಿಗೆ ವಂಚಿಸುತ್ತಲೇ ಇದ್ದಾರೆ.

ಇದನ್ನು ಮನಗಂಡ ಪಾಲಿಕೆಗಳು, ಡ್ರೋನ್ ಸಮೀಕ್ಷೆ ಮೂಲಕ ಲಭ್ಯವಾದ ದತ್ತಾಂಶವನ್ನು ಬಳಸಿಕೊಂಡು ಈ ಅಕ್ರಮವನ್ನು ಪತ್ತೆ ಮಾಡುತ್ತಿದ್ದಾರೆ. ಹಲವು ವಾರ್ಡ್‌ಗಳಲ್ಲಿಸಮೀಕ್ಷೆ ಪೂರ್ಣಗೊಳಿಸಲಾಗಿದೆ. ಡ್ರೋನ್ ಸಮೀಕ್ಷೆ ಜತೆಗೆ ಅಧಿಕಾರಿಗಳು ಖುದ್ದು ಸ್ಥಳಕ್ಕೆ ಭೇಟಿ ನೀಡಿ ಫೋಟೊಗಳನ್ನು ತೆಗೆದು ವಿಸ್ತೀರ್ಣವನ್ನು ಖಚಿತಪಡಿಸಿಕೊಂಡ ನಂತರ ತೆರಿಗೆ ವಂಚನೆ ಸಂಬಂಧ ಮಾಲೀಕರಿಗೆ ನೋಟಿಸ್ ನೀಡುತ್ತಿದ್ದಾರೆ.

ಆಸ್ತಿ ತೆರಿಗೆ ಪಾವತಿಸುವಂತೆ ಸುಸ್ತಿದಾರರಿಗೆ ಹಲವು ಬಾರಿ ಎಚ್ಚರಿಕೆ ನೀಡಲಾಗಿದೆ. ಡಿಮ್ಯಾಂಡ್ ನೋಟಿಸ್, ಜಪ್ತಿ ಆದೇಶ ಜಾರಿ, ಹರಾಜು ನೋಟಿಸ್‌ನಂತಹ ಕ್ರಮಗಳನ್ನು ಕೈಗೊಂಡರೂ ಸ್ಪಂದಿಸುತ್ತಿಲ್ಲ.

ಈ ಹಿನ್ನೆಲೆಯಲ್ಲಿಹರಾಜು ಹಾಕಲು ಪಟ್ಟಿ ಮಾಡಿದ್ದ ಆಸ್ತಿಗಳನ್ನು ಮಾರ್ಗಸೂಚಿ ದರದಲ್ಲೇ ಪಾಲಿಕೆಗಳಿಂದಲೇ ಖರೀದಿಸಿ, ಬಾಕಿ ತೆರಿಗೆ ವಸೂಲಾತಿಗೆ ಕ್ರಮ ಕೈಗೊಳ್ಳಲು ಚಿಂತಿಸಲಾಗಿದೆ. ಮುನೀಶ್ ಮೌದ್ಗಿಲ್, ವಿಶೇಷ ಆಯುಕ್ತ (ಕಂದಾಯ), ಜಿಬಿಎ

# ಒಂದೇ ಬ್ಯಾಂಕ್ ಖಾತೆಯಲ್ಲಿ 296 ಕೋಟಿ ಹಣ! ನೂರಾರು ಜನರಿಗೆ ವಂಚಿಸಿ ಜಮೆ

ಹೈದರಾಬಾದ್(ತೆಲಂಗಾಣ): ಒಂದೇ ಬ್ಯಾಂಕ್ ಖಾತೆಯಲ್ಲಿ 296.96 ಕೋಟಿ ಹಣ ಹೌದು, ಸೈಬರ್ ವಂಚಕರು ಕಳೆದ ಕೆಲವು ವರ್ಷಗಳಿಂದ ಹತ್ತಾರು ಜನರ ಬ್ಯಾಂಕ್ ಖಾತೆಗಳಿಂದ ದೋಚಿ ಒಂದೇ ಬ್ಯಾಂಕ್ ಖಾತೆಗೆ ಜಮೆ ಮಾಡಿರುವ ಹಣವಿದು. ಇದನ್ನು ಹೈದರಾಬಾದ್‌ನ ಸೈಬರಾಬಾದ್ ಸೈಬರ್ ಕ್ರೈಂ ಪೊಲೀಸರು ಪತ್ತೆ ಹಚ್ಚಿದ್ದಾರೆ.

'ಆಪರೇಷನ್ ಕ್ರ್ಯಾಕ್‌ಡೌನ್ 2.0'ನ ಭಾಗವಾಗಿ ಪೊಲೀಸರು ಸೈಬರ್ ಅಪರಾಧ ಪ್ರಕರಣಗಳಲ್ಲಿ ಗುರುತಿಸಲಾದ ಮ್ಯೂಲ್ ಬ್ಯಾಂಕ್ ಖಾತೆಗಳ ದತ್ತಾಂಶವನ್ನು ಪರಿಶೀಲಿಸುವಾಗ ಆಘಾತಕಾರಿ ವಂಚನೆ ಬಯಲಾಗಿದೆ.

ನೂರಾರು ಮಂದಿಯನ್ನು ವಂಚಿಸಿರುವ ಮೋಸಗಾರರು, ಕೊಂಡಾಪುರದ ವೇಣುಗೋಪಾಲ್ ೦ಗಿ ಇನ್ವೆಸ್ಟ್‌ಮೆಂಟ್ ಹೆಸರಿನಲ್ಲಿ ಬ್ಯಾಂಕ್ ಖಾತೆ ತೆರೆದು 296.96 ಕೋಟಿ ರೂ ಮೊತ್ತದ ವಹಿವಾಟು ನಡೆಸಿದ್ದಾರೆ. 2022 ಅಕ್ಟೋಬರ್ 13ರಂದು ಅವರ ಹೆಸರಿನಲ್ಲಿ ಖಾತೆ ತೆರೆಯಲಾಗಿದ್ದು, 2025ರ ಆಗಸ್ಟ್ ವೇಳೆಗೆ ಖಾತೆಯಲ್ಲಿ ವಹಿವಾಟು ಸ್ಥಗಿತ ಗೊಂಡಿರುವುದನ್ನು ಪೊಲೀಸರು ಗುರುತಿಸಿದ್ದಾರೆ.

ದೇಶಾದ್ಯಂತ 38 ಪ್ರಕರಣಗಳು ದಾಖಲಾಗಿದ್ದು, ಸುಮಾರು 310 ಕೋಟಿ ರೂ.ಗೂ ಹೆಚ್ಚಿನ ವಂಚನೆಯ ವಹಿವಾಟುಗಳನ್ನು ಪೊಲೀಸರು ಕಂಡು ಹಿಡಿದಿದ್ದಾರೆ ಮತ್ತು 17 ಮಂದಿ ವಿರುದ್ಧ ಪ್ರಕರಣಗಳನ್ನು ದಾಖಲಿಸಿದ್ದಾರೆ.

ರಾಷ್ಟ್ರೀಯ ಸೈಬರ್ ಅಪರಾಧ ವರದಿ ಮಾಡುವ ಪೋರ್ಟಲ್ ಮೂಲಕ ಸ್ವೀಕರಿಸಿದ ದೂರುಗಳಿಂದ ಪೊಲೀಸ್ ಅಧಿಕಾರಿಗಳು, ಅಪರಾಧಿಗಳ ಬ್ಯಾಂಕ್ ಖಾತೆ



ವಿವರಗಳನ್ನು ಸಂಗ್ರಹಿಸುತ್ತಿದ್ದಾರೆ ಮತ್ತು ತೆಲಂಗಾಣದಾದ್ಯಂತ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಭಾಗಿಯಾಗಿರುವ ಬ್ಯಾಂಕ್ ಖಾತೆಗಳೊಂದಿಗೆ ಅವುಗಳನ್ನು ಕ್ರಾಸ್-ರೆಫರೆನ್ಸ್ ಮಾಡುತ್ತಿದ್ದಾರೆ.

ಇದರ ಭಾಗವಾಗಿ ಸೈಬರಾಬಾದ್ ಪೊಲೀಸರು ಮಾಧಾಪುರ, ಗಚಿಬೌಲಿ ಮತ್ತು ನರಸಿಂಗಿ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ 38 ಸೈಬರ್ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವ 'ಮ್ಯೂಲ್ ಖಾತೆ'ಗಳನ್ನು ಗುರುತಿಸಿ ಅವುಗಳ ವಿವರ ಸಂಗ್ರಹಿಸಿದ್ದಾರೆ.

# ಮಲ್ಲಿಕಾರ್ಜುನ ಖರ್ಗೆಯವರಿಂದ 140 ಕೋಟಿ ಜನರು, ಪ್ರಜಾಪ್ರಭುತ್ವದ ಘನತೆಗೆ ಅವಮಾನ: ವಿಜಯೇಂದ್ರ

ಬೆಂಗಳೂರು: ಎಐಸಿಸಿ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರೇ, ಭಾರತದ ಹೆಮ್ಮೆಯ ಪ್ರಧಾನಮಂತ್ರಿಗಳಾದ ಆದರಣೀಯ ನರೇಂದ್ರ ಮೋದಿಜೀ ರವರನ್ನು ಟೀಕಿಸುವ ಭರದಲ್ಲಿ ನೀವು ಇಂದು ದೇಶದ 140 ಕೋಟಿ ಜನರನ್ನು ಹಾಗೂ ನಮ್ಮ ಪ್ರಜಾಪ್ರಭುತ್ವದ ಘನತೆಯನ್ನು ಅಪಮಾನಿಸಿದ್ದೀರಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದ್ದಾರೆ.

ಇದು ಸತತ ಮೂರನೇ ಬಾರಿಗೆ ಮೋದಿಜೀ ರವರನ್ನು ಭಾರತದ ಪ್ರಧಾನಮಂತ್ರಿಗಳ ಸ್ಥಾನದಲ್ಲಿ ಕೂರಿಸಿರುವ ದೇಶದ ಜನತೆಯ ತೀರ್ಪಿಗೆ ನೀವು ನೀಡುತ್ತಿರುವ ಗೌರವವೇ? ವಿಶ್ವದ 32ಕ್ಕೂ ಹೆಚ್ಚು ದೇಶಗಳ ಅತ್ಯುನ್ನತ ಗೌರವಗಳಿಗೆ ಪಾತ್ರರಾಗಿ, ಭಾರತದ ಕೀರ್ತಿಯನ್ನು ಜಗತ್ತಿನ ಶಿಖರಕ್ಕೇರಿಸಿದ ಕೋಟ್ಯಂತರ ಭಾರತೀಯರ ಹೆಮ್ಮೆಯ ನಾಯಕನ ಬಗ್ಗೆ ಇಂತಹ ನಂಜಿನ, ವಿಷಕಾರಿ ಮಾತುಗಳು, ನಿಮ್ಮ ವಿಕೃತ ಮನಸ್ಥಿತಿಯನ್ನು, ನಿಮ್ಮ ರಾಜಕೀಯ ದ್ವೇಷವನ್ನು, ನಿಮ್ಮ ಹತಾಶೆಯನ್ನು ಬಿಂಬಿಸುತ್ತವೆಯೇ ಹೊರತು ಮೋದಿಜೀ ರವರ ವ್ಯಕ್ತಿತ್ವಕ್ಕೆ ಭಂಗವುಂಟು ಮಾಡುವುದು ಸಾಧ್ಯವಿಲ್ಲ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಹಾಕಿದ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಸರ್ಜಿಕಲ್ ಸ್ಟ್ರೈಕ್, ಬಾಲಕೋಟ್ ಏರ್‌ಸ್ಟ್ರೈಕ್ ಮತ್ತು ಇತ್ತೀಚಿನ 'ಆಪರೇಷನ್ ಸಿಂದೂರ್' ಮೂಲಕ ಭಯೋತ್ಪಾದಕರ ಹೆಡೆಮುರಿ ಕಟ್ಟಿದ ಧೀಮಂತ ನಾಯಕನ ಬಗ್ಗೆ, ನಕ್ಸಲಿಸಂ ಅನ್ನು ನಿರ್ನಾಮ ಮಾಡಿದ ಅದ್ವಿತೀಯ ನೇತಾರನ ಬಗ್ಗೆ, ಶತ್ರು ರಾಷ್ಟ್ರದ ಒಳಗೆ ನುಗ್ಗಿ ಹೊಡೆಯುವ ದಿಟ್ಟತನದ ಪ್ರಧಾನಿಗಳ ಬಗ್ಗೆ, ತಾಯಂದಿರ ಸೌಭಾಗ್ಯವನ್ನು ಅಳಿಸಲು ಬಂದವರ ವಿರುದ್ಧ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಡೆಸಿ, ಅವರ ಅಡಗುದಾಣಗಳನ್ನೇ ಧೂಳೀಪಟ ಮಾಡಿದ ನಮ್ಮ ಹೆಮ್ಮೆಯ ಶ್ರೀ ಮೋದಿ ಜೀರವರ ನಿಮ್ಮ ಅವಹೇಳನ, ನಿಮ್ಮ ನೈಜ ಮುಖವನ್ನು ಬಯಲು ಮಾಡಿದೆ ಎಂದಿದ್ದಾರೆ.

ನರೇಂದ್ರ ಮೋದಿಜೀ ರವರ ವಿರುದ್ಧದ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಕಾರುತ್ತಿರುವ ವೈಷಮ್ಯ, ದ್ವೇಷ, ಅಸೂಯೆಗಳು ಹೊಸದೇನಲ್ಲ. ಈ ಮನಸ್ಥಿತಿಯಿಂದಲೇ ದೇಶದ ಹಾಗೂ ಪ್ರಧಾನಿ ಹುದ್ದೆಯ ಘನತೆಯನ್ನು ಕುಗ್ಗಿಸುವ ಮಟ್ಟಕ್ಕೆ ಕಾಂಗ್ರೆಸ್ ಕುಸಿದಿರುವುದನ್ನೂ ಕೂಡ ದೇಶದ ಜನ ಕಂಡಿದ್ದಾರೆ. ಮೋದಿಜೀ ರವರನ್ನು ವಿರೋಧಿಸುವ ಭರದಲ್ಲಿ ನೀವು ಭಾರತದ ಗೌರವವನ್ನು ಕುಗ್ಗಿಸುತ್ತಿದ್ದೀರಿ. ಈ ಹಿಂದೆ 'ಮೌತ್ ಕಾ ಸೌದಾಗರ್' ಎಂದವರನ್ನು, 'ಚಾಯ್ ವಾಲಾ' ಎಂದವರನ್ನು ಜನತೆ ಹೇಗೆ ಮೂಲೆಗುಂಪು ಮಾಡಿದ್ದಾರೆ ಎನ್ನುವುದು ನಿಮಗೆ ನೆನಪಿರಲಿ ಎಂದು ತಿಳಿಸಿದ್ದಾರೆ.

ಹಿರಿಯರಾಗಿ, ಹಲವಾರು ದಶಕಗಳ ಕಾಲ ರಾಜಕಾರಣದಲ್ಲಿದ್ದರೂ, ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿದ್ದರೂ, ನಿಮ್ಮ ನೇತೃತ್ವವನ್ನು ತೃಪ್ತಿಪಡಿಸಲು ನೀವು ಇಷ್ಟು ಕೀಳು ಮಟ್ಟಕ್ಕೆ ಇಳಿಯುತ್ತೀರಿ ಎಂದು ಜನರೂ ಕೂಡ ನಿರೀಕ್ಷಿಸಿರಲಿಲ್ಲ. ನಿಮ್ಮ ಈ ಅವಹೇಳನಕಾರಿ ರಾಜಕೀಯಕ್ಕೆ ಮುಂಬರುವ ದಿನಗಳಲ್ಲಿ ನಾಡಿನ ಜನರೇ ತಕ್ಕ ಉತ್ತರ ನೀಡಲಿದ್ದಾರೆ ಎಂದು ತಮ್ಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

# ಮೋದಿ ವಿರುದ್ಧ ಹೇಳಿಕೆ- ಖರ್ಗೆ ದೇಶದ ಕ್ಷಮೆ ಯಾಚಿಸಲಿ: ಎನ್.ರವಿಕುಮಾರ್ ಆಗ್ರಹ

**ಬೆಂಗಳೂರು:** ದೇಶದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭಯೋತ್ಪಾದಕನಿಗೆ ಹೋಲಿಸಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ದೇಶದ ಜನರ ಕ್ಷಮೆಯಾಚಿಸಬೇಕು ಎಂದು ವಿಧಾನ ಪರಿಷತ್ತಿನ ಮುಖ್ಯ ಸಚೇತಕ ಎನ್.ರವಿಕುಮಾರ್ ಅವರು ಆಗ್ರಹಿಸಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ?ಜಗನ್ನಾಥ ಭವನ?ದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷರ ಹೇಳಿಕೆಯನ್ನು ಭಾರತೀಯ ಜನತಾ ಪಾರ್ಟಿ ಉಗ್ರವಾಗಿ ಖಂಡಿಸುತ್ತದೆ. ಮೋದಿ ಅವರ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡುವ ಮೂಲಕ ಇಡೀ ಪಕ್ಷಕ್ಕೆ ಹಾಗೂ ದೇಶದ 140 ಕೋಟಿ ಜನಕ್ಕೆ ಅಪಮಾನ ಮಾಡಿದ್ದಾರೆ ಎಂದರು.

ಮೋದಿ ಅವರು ಭಯೋತ್ಪಾದಕ ಆಗಿದ್ದರೆ ಇ??ಟೊಂದು ಜನ ಬಿಜೆಪಿಗೆ ಮತ ಹಾಕುತ್ತಿರಲಿಲ್ಲ. ಎನ್‌ಡಿಎ ಬೆಂಬಲಿಸುತ್ತಿರಲಿಲ್ಲ. ನಿರಂತರವಾಗಿ ಮೂರನೇ ಬಾರಿಗೆ ಪ್ರಧಾನಿ ಆಗುತ್ತಿರಲಿಲ್ಲ. ಮೋದಿ ಅವರ ಜನಪ್ರಿಯತೆಗೆ ಅವರು ಇಡೀ ದೇಶದಲ್ಲಿ ಎಲ್ಲೇ ಚುನಾವಣೆ ಆದರೆ ಅವರು ಬಂದರೆ ಜನರು ಸೇರುವುದೇ ಸಾಕ್ಷಿ. ಮಲ್ಲಿಕಾರ್ಜುನ ಖರ್ಗೆ ಅವರು ದೇಶ ಕೋಟ್ಯಂತರ ಜನರಿಗೆ ಅಪಮಾನ ಮಾಡಿದ್ದಾರೆ. ಆದ್ದರಿಂದ ಅವರನ್ನು ಕಾಂಗ್ರೆಸ್ ಪಕ್ಷ ಅಧ್ಯಕ್ಷ ಹುದ್ದೆಯಿಂದ ಕಿತ್ತು ಹಾಕಬೇಕು ಎಂದು ಆಗ್ರಹಿಸಿದರು.

ಪ್ರಪಂಚದಲ್ಲಿನ ಅಭಿವೃದ್ಧಿಶೀಲ ದೇಶಗಳೂ ಕೂಡ ನರೇಂದ್ರ ಮೋದಿ ಅವರಂತಹವರ ನಾಯಕತ್ವ ನಮ್ಮ ದೇಶಕ್ಕೂ ಬೇಕು ಎಂದು ಬಯಸಿದ್ದಾರೆ. ಆದರೆ ಇದೆಲ್ಲದರ ಅರಿವು ಇಲ್ಲದ ಖರ್ಗೆ ಅವರು ಬಾಯಿಗೆ ಬಂದ ಹಾಗೆ ಮಾತನಾಡುತ್ತಾರೆ ಎಂದರು. ಖರ್ಗೆ ಅವರು ಮೋದಿ ವಿರುದ್ಧ ಮಾತನಾಡಿದ್ದು ಇದೇ ಮೊದಲಲ್ಲ. ಗುಜರಾಜ್ ಚುನಾವಣೆ ವೇಳೆ ಹತ್ತು ತಲೆಯ ರಾವಣನಿಗೆ ಮೋದಿಯವರನ್ನು ಖರ್ಗೆ ಹೋಲಿಸಿದ್ದರು. ಅ??ಟೇ ಅಲ್ಲ ಕರ್ನಾಟಕ ಚುನಾವಣೆ ವೇಳೆ ಕಲಬುರಗಿಯಲ್ಲಿ ಮೋದಿ ಅವರನ್ನು ವಿಷದ ಹಾವಿಗೆ ಹೋಲಿಸಿದ್ದರು. ಮತ್ತೊಂದು ಬಾರಿ ಮೋದಿ ಅವರು ಆಯ್ಕೆಯಾದರೆ ದೇಶದಲ್ಲಿ ಪ್ರಜಾಪ್ರಭುತ್ವ ಉಳಿಯುವುದಿಲ್ಲ ಎಂದು ಸಂಸತ್ ಒಳಗೆ ಮಾತನಾಡುವಾಗ ಹೇಳಿದ್ದರು ಎಂದು ನೆನಪಿಸಿದರು.

ಮೋದಿ ಅವರ ಬಗ್ಗೆ ಲವಲೇಶವೂ ಗೌರವ ಇಲ್ಲದೇ ಖರ್ಗೆ ಅವರು ಮಾತನಾಡುತ್ತಾರೆ. ಆದರೆ ಕೋಟ್ಯಂತರ ಜನರು ಚುನಾವಣೆ ಮೂಲಕ ಮೋದಿ ಅವರನ್ನು ಪ್ರಧಾನಿಯಾಗಿ ಮಾಡಿದ್ದಾರೆ. ಕಾಂಗ್ರೆಸ್ ನಿರಂತರವಾಗಿ ಸೋಲುತ್ತಾ ಪ್ರಪಾತಕ್ಕೆ ಬೀಳುತ್ತಿರುವಾಗ ಭ್ರಮನಿರಸನಗೊಂಡು ಮಾತನಾಡುತ್ತಿದ್ದಾರೆ. ತಮಿಳುನಾಡಿನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದಿಲ್ಲ. ಪಶ್ಚಿಮ ಬಂಗಾಳ ಮತ್ತು ಅಸ್ಸಾಂನಲ್ಲಿ ಸೋಲು ಕಟ್ಟಿಟ್ಟ ಬುತ್ತಿ ಎಂದರು

ಕಾಂಗ್ರೆಸ್‌ಗೆ ಸ್ವಲ್ಪವಾದರೂ ಗೌರವ ಇದ್ದರೆ ಖರ್ಗೆ ಅವರನ್ನು ಹುದ್ದೆಯಿಂದ ಇಳಿಸಬೇಕು. ಅಲ್ಲದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು, ಖರ್ಗೆ ಹೇಳಿಕೆ ಬಗ್ಗೆ ಅಭಿಪ್ರಾಯ ವ್ಯಕ್ತಪಡಿಸಬೇಕು ಎಂದು ಒತ್ತಾಯಿಸಿದರು.

# ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಸಹಕಾರ ನೀಡಿ

## ಕುಮಾರಸ್ವಾಮಿ, ಬಿಜೆಪಿ ನಾಯಕರಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಸವಾಲು

ಪಿರಿಯಾಪಟ್ಟಣ : ಕುಮಾರಸ್ವಾಮಿ, ಶೋಭಕ್ಕ, ಅಶೋಕ್ ಅವರೇ ನಿಮಗೆ ಬದ್ಧತೆ ಇದ್ದರೆ ಕಾನೂನು ಚೌಕಟ್ಟಿನಲ್ಲಿ ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಮೇಕೆದಾಟು ಯೋಜನೆ ಅನುಷ್ಠಾನಗೊಳಿಸಲು ಸಹಕಾರ ನೀಡಿ ಎಂದು ಒತ್ತಾಯಿಸುತ್ತಿದ್ದೇನೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಆಗ್ರಹಿಸಿದರು.

ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ಕ್ಷೇತ್ರದಲ್ಲಿ ವಿವಿಧ ಇಲಾಖೆಗಳ 419.78 ಕೋಟಿ ರೂ. ಮೊತ್ತದ ಅಭಿವೃದ್ಧಿ



ಕಾಮಗಾರಿಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಂಗಳವಾರ ಮಾತನಾಡಿದರು.

"ವಿಪಕ್ಷಗಳದ್ದು ಬರೀ ಸುಳ್ಳು ಹೇಳುವುದು, ಟೀಕೆ ಮಾಡುವುದು, ತಪ್ಪು ದಾರಿಗೆ ಎಳೆಯುವುದು ಇದೇ ಕೆಲಸ ಮಾಡುತ್ತಿವೆ. ಬಿಜೆಪಿಯವರು ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡಿ ಅವರ ಆಡಳಿತದ ರಾಜ್ಯಗಳಲ್ಲಿ ನೀಡುತ್ತಿದ್ದಾರೆ. ಇಂತಹ ಹೊಸ ಬದಲಾವಣೆ ಸಾಧ್ಯವಾಗಿದ್ದು ಕರ್ನಾಟಕದ ಮಹಾಜನತೆಯಿಂದ" ಎಂದು ಹೇಳಿದರು.

"ಬಿಜೆಪಿಯವರು ನಮ್ಮ ಯೋಜನೆಗಳನ್ನು ನಕಲು ಮಾಡುತ್ತಿರಬಹುದು ಆದರೆ ಐದೂ ಗ್ಯಾರಂಟಿ ಯೋಜನೆಗಳನ್ನು ನೀಡಲು ಆಗದೆ ಎರಡು ಮೂರು ಯೋಜನೆಗಳನ್ನು ಮಾತ್ರ ನೀಡುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಂತಹ ಐದು ಗ್ಯಾರಂಟಿ ಯೋಜನೆಗಳು ಇಡೀ ದೇಶಕ್ಕೆ ಮಾದರಿಯಾಗಿವೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಇಂತಹ ಯಾವುದಾದರೂ ಒಂದು ಕಾರ್ಯಕ್ರಮ ಕೊಟ್ಟಿದ್ದರಾ? ಎರಡು ಬಾರಿ ಅವಕಾಶ ಸಿಕ್ಕಿತ್ತು. ಒಂದಾದರೂ ಜನಪರ ಯೋಜನೆಗಳನ್ನು ನೀಡಲು ಸಾಧ್ಯವಾಯಿಯೇ? ಯಡಿಯೂರಪ್ಪ, ಬೊಮ್ಮಾಯಿ ಅವರಿಂದಲೂ ಸಾಧ್ಯವಾಗಲಿಲ್ಲ. ಕುಮಾರಸ್ವಾಮಿ ಎರಡು ಬಾರಿ ಮುಖ್ಯಮಂತ್ರಿ ಆಗಿದ್ದರು ಜನಪರ ಯೋಜನೆಗಳನ್ನು ನೀಡಲಿಲ್ಲ" ಎಂದರು.

"ಕಾವೇರಿ ಕಣಿವೆಯ ರೈತರ ಪರವಾಗಿ ನಾವು ಕೆಲಸ ಮಾಡುತ್ತಿದ್ದೇವೆ. ಅದೇ ರೀತಿ ಆಲಮಟ್ಟಿ ಎತ್ತರ ಹೆಚ್ಚಳದ ಸಂತ್ರಸ್ತ ರೈತರಿಗೆ 35 ಲಕ್ಷದವರೆಗೆ ಪರಿಹಾರ ನೀಡಲಾಗುತ್ತಿದೆ. ಆದರೆ ಈ ಯೋಜನೆಗೂ ಕೇಂದ್ರ ಒಪ್ಪಿಗೆ ನೀಡುತ್ತಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೂ 5,300 ಕೋಟಿ ಕೊಡುತ್ತೇವೆ ಅಂತ ಅದನ್ನೂ ನೀಡಿಲ್ಲ. ಕೊಟ್ಟ ಮಾತನ್ನು ಉಳಿಸಿಕೊಳ್ಳಲು ಬಿಜೆಪಿ ಸರ್ಕಾರಕ್ಕೆ ಆಗಿಲ್ಲ" ಎಂದರು.

**ಪಿರಿಯಾಪಟ್ಟಣ ಅಭಿವೃದ್ಧಿಗೆ ಸರ್ಕಾರ ಬದ್ಧ**

"ಒಕ್ಕಲಿಗರ ಸಂಘದ ಸಹಯೋಗದೊಂದಿಗೆ ಕುವೆಂಪು ಭವನವನ್ನು ನಿರ್ಮಿಸಲಾಗುತ್ತಿದೆ. ಇದು ವೆಂಕಟೇಶ್ ಅವರ ಬಹಳ ದಿನಗಳ ಕನಸಾಗಿತ್ತು. ಜನನ ಉಚಿತ ಮರಣ ಖಚಿತ. ಇದರ ನಡುವೆ ನಾವು ಏನನ್ನು ಕೊಟ್ಟು ಹೋಗುತ್ತೇವೆ ಎಂಬುದು ಮುಖ್ಯವಾಗುತ್ತದೆ. ಅದಕ್ಕೆ ಸಚಿವರಾದ ವೆಂಕಟೇಶ್ ಅವರು ಎರಡು ಕೋಟಿ ಮೌಲ್ಯದ ಭೂಮಿಯನ್ನು ಖರೀದಿ ಮಾಡಿ ಜನರ ಕಲ್ಯಾಣಕ್ಕೆ ಬಳಸಿಕೊಳ್ಳಿ ಎಂದು ತಿಳಿಸಿದ್ದಾರೆ. ಕುವೆಂಪು ಭವನ ನಿರ್ಮಾಣಕ್ಕೆ 1 ಕೋಟಿ ರೂ. ನೆರವು ನೀಡಲಾಗುವುದು. ಪಿರಿಯಾಪಟ್ಟಣ ಅಭಿವೃದ್ಧಿಗೆ ಸರ್ಕಾರ ಬದ್ಧ" ಎಂದರು.

"ಪಿರಿಯಾಪಟ್ಟಣ ಅಭಿವೃದ್ಧಿ, ಸಚಿವರಾದ ವೆಂಕಟೇಶ್ ಅವರ ಕನಸಿನ ಕೂಸು. ಕಳೆದ 40 ವರ್ಷದಿಂದ ವೆಂಕಟೇಶ್ ಅವರನ್ನು ಪಿರಿಯಾಪಟ್ಟಣದ ಜನತೆ ಸಾಕಿದ್ದಾರೆ. ಎರಡು ಬಾರಿ ಸಚಿವನನ್ನಾಗಿ ಮಾಡಿದ್ದಾರೆ. ಈ ಕ್ಷೇತ್ರದ ಜನರ ಋಣ ತೀರಿಸಬೇಕು ಎಂದು ಹತ್ತಾರು ಯೋಜನೆಗಳನ್ನು ತಂದು ಅಭಿವೃದ್ಧಿ ಮಾಡುತ್ತಿದ್ದಾರೆ" ಎಂದರು.

"ರಾಜ್ಯದ ಗ್ರಾಮ ದೇವತೆ ಚಾಮುಂಡೇಶ್ವರಿ, ಪಿರಿಯಾಪಟ್ಟಣದ ಗ್ರಾಮ ದೇವತೆ ಮಸಣಿಕಮ್ಮ. ಯಾವುದೇ ಊರಿಗೆ ಹೋದರು ಗ್ರಾಮ ದೇವತೆ ಇದ್ದೇ ಇರುತ್ತಾಳೆ. ಈ ನೂತನ ದೇವಾಲಯ ವೆಂಕಟೇಶ್ ಅವರ ಕನಸು. ಚುನಾವಣೆಗೆ ಮೊದಲು ಹಾಗೂ ನಂತರ ನೀಡಿದ ಮಾತುಗಳನ್ನು ಉಳಿಸಿಕೊಂಡಿದ್ದಾರೆ. ತಾಲ್ಲೂಕಿನ ಅಭಿವೃದ್ಧಿ, ರೈತರ ಶ್ರೇಯಕ್ಕೆ ಹೊಸ ಮುನ್ನುಡಿ ಬರೆದಿದ್ದಾರೆ. ಮುಖ್ಯಮಂತ್ರಿಯಾದಿಯಾಗಿ ಸಂಪುಟದ ಸಹೋದ್ಯೋಗಿಗಳು ವೆಂಕಟೇಶ್ ಅವರ ಜೊತೆ ಹಾಗೂ ಪಿರಿಯಾಪಟ್ಟಣದ ಅಭಿವೃದ್ಧಿಗೆ ಜೊತೆಯಾಗಿ ನಿಲ್ಲುತ್ತೇವೆ ಎನ್ನುವ ಸಂದೇಶ ನೀಡಲು ಬಂದಿದ್ದೇವೆ. ಪಿರಿಯಾಪಟ್ಟಣ ಅಭಿವೃದ್ಧಿಗೆ ಸರ್ಕಾರ ಬದ್ಧ" ಎಂದು ಹೇಳಿದರು.

**ಗುಣಮಟ್ಟದ ರಸ್ತೆ ನಿರ್ಮಾಣ**

"ಕಳೆದ ವರ್ಷ ನಾನು ಹಾಗೂ ಮುಖ್ಯಮಂತ್ರಿಯವರು ಪಿರಿಯಾಪಟ್ಟಣದ ರೈತರ ಉದ್ಧಾರಕ್ಕಾಗಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಚಾಲನೆ ನೀಡಿದ್ದೆವು. ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಹಾಗೂ ಈ ಹಿಂದಿನ ಬಾರಿ ಈ ಇಲಾಖೆ ಜವಾಬ್ದಾರಿ ಹೊತ್ತಿದ್ದ ಮಹಾದೇವಪ್ಪ ಅವರ ಕಾಲದಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಭರದಿಂದ ಕೆಲಸಗಳು ನಡೆದವು ಈಗಲೂ ನಡೆಯುತ್ತಿವೆ. ರಸ್ತೆಗಳ ಅಭಿವೃದ್ಧಿಗೆ ಸತೀಶ್ ಅವರು ಒತ್ತು ನೀಡಿದ್ದಾರೆ. ಇಡೀ ರಾಜ್ಯದಲ್ಲಿಯೇ ಗುಣಮಟ್ಟದ ರಸ್ತೆಗಳನ್ನು ನಾವು ನಿರ್ಮಿಸುತ್ತಿದ್ದೇವೆ. ಪ್ರತಿಯೊಂದು ಹಂತದಲ್ಲೂ ಅತ್ಯುತ್ತಮ ಕಾರ್ಯಕ್ರಮಗಳನ್ನು ಕಾಂಗ್ರೆಸ್ ಸರ್ಕಾರ ನಡೆಸಿಕೊಂಡು ಬರುತ್ತಿದೆ" ಎಂದು ಹೇಳಿದರು.

"ರೈತರ ಪಂಪ್ ಸೆಟ್ ಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಈ ಹಿಂದೆ ನಾನು ಸೋಲಾರ್ ಪಂಪ್ ಸೆಟ್ ನೀಡುವ ಯೋಜನೆ ರೂಪಿಸಿದ್ದೆ. ಈ ಮೂಲಕ ಹಗಲು ಹೊತ್ತಿನಲ್ಲಿಯೇ ರೈತರಿಗೆ ವಿದ್ಯುತ್ ನೀಡಲು ಸಾಧ್ಯ. ಇದನ್ನು ಗಮನಿಸಿದ ಕೇಂದ್ರ ಸರ್ಕಾರ ನಮಗೆ ಪ್ರಶಸ್ತಿ ನೀಡಿತ್ತು. ಅದೇ ಮಾದರಿಯಲ್ಲಿ ತಾಲ್ಲೂಕಿನ ಮೂರು ಕಡೆ ಸೋಲಾರು ವಿದ್ಯುತ್ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲಾಗಿದೆ. ಕ್ರಮವಾಗಿ 41 ಮೆಘಾ ವ್ಯಾಟ್, ಇನ್ನೊಂದು ಕಡೆ 22 ಮೆ.ವ್ಯಾ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ. ಒಟ್ಟು 63. ಮೆ.ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ" ಎಂದರು.

"ಗ್ಯಾರಂಟಿ ಯೋಜನೆಗಳನ್ನು ನೀಡಲು ಸಾಧ್ಯವೇ ಎಂದು ವಿಪಕ್ಷಗಳು ಟೀಕೆ ಮಾಡುತ್ತಿದ್ದವು. ನಾವು ಯಶಸ್ವಿಯಾಗಿದ್ದೇವೆ. ನಮ್ಮ ಮಾದರಿಯಲ್ಲಿಯೇ 2 ಸಾವಿರ ರೂಪಾಯಿ ನೀಡುತ್ತೇವೆ ಎಂದು ಭರವಸೆ ನೀಡಿದ್ದೇವೆ. ನಾನೇ ಪ್ರಣಾಳಿಕೆಯನ್ನು ಬಿಡುಗಡೆಗೊಳಿಸಿ ಬಂದೆ" ಎಂದರು.

# ಬಿಡಿಎ ಶಿವರಾಮ ಕಾರಂತ ಬಡಾವಣೆ ನಿವೇಶನಗಳತ್ತ ಆಕಾಂಕ್ಷಿಗಳ ಚಿತ್ತ

ಬೆಂಗಳೂರು: ಬೆಂಗಳೂರಿನ ಎರಡನೇ ಅತಿದೊಡ್ಡ ಬಡಾವಣೆಯಾಗಿರುವ ಡಾ. ಕೆ.ಶಿವರಾಮ ಕಾರಂತ ಬಡಾವಣೆಯ ಪ್ರಗತಿ ವೇಗವಾಗಿ ನಡೆದರೂ, ನಿವೇಶನ ಹಂಚಿಕೆಯಲ್ಲಿನ ವಿಳಂಬ, ಸಾವಿರಾರು ನಾಗರಿಕರಲ್ಲಿ ನಿರಾಸೆ ಮೂಡಿಸಿದೆ.

ಹೌದು, ನಾಡಪ್ರಭು ಕೆಂಪೇಗೌಡ ಬಡಾವಣೆ ನಂತರ ಡಾ. ಕೆ.ಶಿವರಾಮ ಕಾರಂತ ಬಡಾವಣೆ ಎರಡನೇ ಅತಿದೊಡ್ಡ ಬಡಾವಣೆಯಾಗಿ ಹೊರ ಹೊಮ್ಮಿದೆ. ಬೆಂಗಳೂರು ಉತ್ತರದ ಸುಮಾರು 17 ಗ್ರಾಮಗಳನ್ನು ಒಳಗೊಂಡ 3,837 ಎಕರೆ ಭೂಮಿಯಲ್ಲಿ ಈ ಬಡಾವಣೆ ಅಭಿವೃದ್ಧಿ ಪಡಿಸಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ(ಬಿಡಿಎ) 2018ರಲ್ಲಿ ಅಧಿಸೂಚನೆ ಹೊರಡಿಸಿ, ಈಗಾಗಲೇ ಸುಮಾರು 3,546 ಎಕರೆ ಪ್ರದೇಶದಲ್ಲಿ ವಿವಿಧ ಅಳತೆಯ 34,992 ನಿವೇಶನಗಳನ್ನು ರಚಿಸಿದೆ.

ಅರ್ಕಾವತಿ, ನಾಡಪ್ರಭು ಕೆಂಪೇಗೌಡ ಬಡಾವಣೆಗಳ ಪ್ರಗತಿಗೆ ಹೋಲಿಕೆ ಮಾಡಿದರೆ, ಸುಪ್ರೀಂಕೋರ್ಟ್ ಉಸ್ತುವಾರಿ ವಹಿಸಿರುವ ಹಿನ್ನೆಲೆಯಲ್ಲಿ ಶಿವರಾಮ ಕಾರಂತ ಬಡಾವಣೆಯ ಮೂಲ ಸೌಕರ್ಯಕ್ಕೆ ಸಂಬಂಧಿಸಿದ ಪ್ರಗತಿಗೆ ವೇಗವಿದೆ. ಶೇ.80ರಿಂದ 85ರಷ್ಟು ಕಾಮಗಾರಿಗಳು ಮುಗಿದಿವೆ. ಆದರೂ, 17 ಗ್ರಾಮಗಳ ಭೂಮಾಲೀಕರಿಗೆ ಅಭಿ ವೃದ್ಧಿಪಡಿಸಿರುವ ನಿವೇಶನಗಳ ಹಂಚಿಕೆ ವಿಳಂಬವಾಗುತ್ತಿದ್ದು, ಕಾದಿರುವ ಸಾವಿರಾರು ನಿವೇಶನ ಆಕಾಂಕ್ಷಿಗಳಿಗೆ ಹಂಚಿಕೆ ಪ್ರಕ್ರಿಯೆ ಯಾವಾಗ ನಡೆಯಲಿದೆ ಎಂದು ಕಾದು ನೋಡಬೇಕಿದೆ.

**ವಿಳಂಬಕ್ಕೆ ಕಾರಣಗಳು**

ಬಡಾವಣೆಯ ಪ್ರಗತಿ ವೇಗವಾಗಿ ಸಾಗುತ್ತಿದ್ದರೂ, ಸಾರ್ವಜನಿಕರಿಗೆ ನಿವೇಶನ ಹಂಚಿಕೆ ಮಾಡಲು ಕೆಲವು ತಾಂತ್ರಿಕ ಮತ್ತು ಕಾನೂನಾತ್ಮಕ ಅಡೆತಡೆಗಳು, ಉಳಿಕೆ ಕಾಮಗಾರಿಗಳು ಎದುರಾಗಿವೆ. ಜೆಸಿಸಿ ಸಮಿತಿ ವರದಿಯಂತೆ ಸುಪ್ರೀಂ ಕೋರ್ಟ್ ಅಧಿಸೂಚಿತ ಜಮೀನಿನ ಪೈಕಿ ಒಟ್ಟು 295 ಎಕರೆ 37.63 ಗುಂಟೆ ಜಮೀನನ್ನು ಭೂಸ್ವಾಧೀನದಿಂದ ಹೊರತುಪಡಿಸಿ ಆದೇಶಿಸಿದೆ. ಅಲ್ಲದೆ ಈ ಬಡಾವಣೆಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್, ಹೈಕೋರ್ಟ್ ಹಾಗೂ ಸಿವಿಲ್ ನ್ಯಾಯಾಲಯದಲ್ಲಿ ಒಟ್ಟು 226 ಪ್ರಕರಣ ಗಳು ಬಾಕಿ ಇವೆ. ಈಗಾಗಲೇ ರಚಿಸಿರುವ 34,992 ನಿವೇಶನಗಳಲ್ಲಿ ನ್ಯಾಯಾಲ ಯದಲ್ಲಿ ಪ್ರಕರಣ ದಾಖಲಾಗಿರುವ ನಿವೇಶನಗಳೂ ಇವೆ. ರಸ್ತೆ, ಒಳಚರಂಡಿ, ವಿದ್ಯುತ್ ಸೇರಿದಂತೆ ಶೇ.15ರಷ್ಟು ಸಿವಿಲ್ ಕಾಮಗಾರಿಗಳು ಕೂಡ ಬಾಕಿ ಇವೆ. ನಿವೇಶನ ಹಂಚಿಕೆಗೆ ಸಂಬಂಧಿಸಿ ದಂತೆ ತಂತ್ರಾಂಶದ ಅಭಿವೃದ್ಧಿಯೂ ಪ್ರಗತಿಯಲ್ಲಿದೆ.

**ಭೂಮಾಲೀಕರ ಸಂಕಷ್ಟ:**

ಭೂಮಿ ನೀಡಿದವರಿಗೆ 60:40ರ ಅನುಪಾತದಲ್ಲಿ ಭೂಮಿ ನೀಡುವ ತೀರ್ಮಾನವಾಗಿದೆ. ಇದರನ್ವಯ ಒಂದು ಎಕರೆ ಭೂಮಿ ನೀಡಿದವರಿಗೆ 9583 ಚದರ ಅಡಿ ಅಭಿ ವೃದ್ಧಿಪಡಿ ಸಿದ ನಿವೇಶನ ಸಿಗಲಿದೆ. ಇನ್ನು ಯೋಜನೆಗೆ ಭೂಮಿ ನೀಡಿದವರಿಗೆ ಸದ್ಯ ಆದಾಯದ ಮೂಲವೇ ಇಲ್ಲವಾಗಿದೆ. ಇತ್ತ ಭೂಮಿ ಯೂ ಇಲ್ಲದೆ, ಶೀಘ್ರ ನಿವೇಶನವೂ ಸಿಗದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮದುವೆ, ಆರೋಗ್ಯ ನಿರ್ವಹಣೆ, ಆಸ್ಪತ್ರೆ ಖರ್ಚಿಗೆ ಹಣವಿಲ್ಲದೆ ಪಡಿಪಾಟಲು ಪಡುವಂತೆಯೂ ಆಗಿದೆ. ಈಗಾಗಲೇ ನ್ಯಾಯಾಲಯ ಮೊದಲ ಹಂತದಲ್ಲಿ ಭೂಮಾಲೀಕರಿಗೆ ನಿವೇಶನ ಹಂಚಿಕೆ ಮಾಡುವಂತೆ ನಿರ್ದೇಶಿಸಿದೆ. ಇದರನ್ವಯ ಮೊದಲ ಹಂತದಲ್ಲಿ ಭೂಮಾಲೀಕರಿಗೆ 5000 ನಿವೇಶನ ಹಂಚಿಕೆ ಮಾಡಲು ನಿರ್ಧರಿಸಿ ವರ್ಷಗಳೇ ಕಳೆದಿವೆ. ಆದರೆ, ಹಂಚಿಕೆ ಮಾಡುವ ಪ್ರಕ್ರಿಯೆ ಮಾತ್ರ ಇನ್ನೂ ಆರಂಭವಾಗುತ್ತಿಲ್ಲ.

**ಭರವಸೆ ಸಿಗಲಿದೆ:**

ವರ್ಷದಿಂದ ವರ್ಷಕ್ಕೆ ನಗರ ವೇಗವಾಗಿ ಬೆಳೆಯುತ್ತಿದೆ. ಭೂಮಿಯ ಮೌಲ್ಯವೂ ಹೆಚ್ಚುತ್ತಿದೆ. ತಡವಾದಷ್ಟು ಮಾರ್ಗದರ್ಶಿ ಮೌಲ್ಯ ಹೆಚ್ಚಳದೊಂದಿಗೆ ನಿವೇಶನಗಳ ಬೆಲೆಯೂ ಹೆಚ್ಚಲಿದೆ ಎಂಬುದು ಸಾವಿರಾರು ಮಂದಿ ನಿವೇಶನ ಆಕಾಂಕ್ಷಿಗಳ ಆತಂಕವಾಗಿದೆ. ಮೊದಲ ಹಂತದಲ್ಲಿ ಭೂಮಾಲೀಕರಿಗೆ ಹಂಚಿಕೆ ಪ್ರಕ್ರಿಯೆ ಶುರುವಾದರೆ, ನಾಗಕರಿಕರಿಗೂ ಬೇಗ ನಿವೇಶನ ಹಂಚಿಕೆಯಾಗುವ ಭರವಸೆ ಸಿಗಲಿದೆ.

ಪ್ರಾಧಿಕಾರ, ಸರಕಾರದ ಇಚ್ಛಾಶಕ್ತಿ ಕೊರತೆಯಿಂದ ಹಂಚಿಕೆ ಪ್ರಕ್ರಿಯೆ ತಡವಾ ಗುತ್ತಿದೆ. ಈಗಾಗಲೇ ಭೂಮಿ ನೀಡಿದ ರೈತರು ಭೂಮಿಯೂ ಇಲ್ಲದೆ, ಇತ್ತ ನಿವೇಶನವೂ ಇಲ್ಲದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ಹಾಗಾಗಿ, ಇನ್ನೊಂದು ತಿಂಗಳಲ್ಲಿ ಹಂಚಿಕೆ ಪ್ರಕ್ರಿಯೆ ನಡೆಸುತ್ತೇವೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಸ್ವಂತ ನಿವೇಶನ, ಮನೆ ಮಾಡಿಕೊಳ್ಳುವ ಆಸೆಯೊಂದಿಗೆ ಅನೇಕರು ಕಾದಿದ್ದಾರೆ. ಈ ಕುರಿತು ನಾನು ಮತ್ತು ಯಲಹಂಕ ಶಾಸಕ ವಿಶ್ವನಾಥ್ ಅಧಿಕಾರಿಗಳ ಜತೆಗೆ ಮಾತನಾಡುತ್ತೇವೆ ಎಂದಿದ್ದಾರೆ ಎಸ್.ಮುನಿರಾಜು, ಶಾಸಕ, ದಾಸರಹಳ್ಳಿ ಕ್ಷೇತ್ರ

# ಜಯಂತಿಗಳ ಆಚರಣೆ ಹಾಸ್ಯಾಸ್ಪದವಾಗುವ ಮುನ್ನ.........

ಇತ್ತೀಚಿನ ಕೆಲವು ವರ್ಷಗಳಲ್ಲಿ ಮಹಾನ್ ವ್ಯಕ್ತಿಗಳ ಜಯಂತಿ ಯಾಕೋ ಅತಿರೇಕಕ್ಕೆ ತಲುಪಿ ಹಾಸ್ಯಸ್ಪದವಾಗುತ್ತಿರುವಂತೆ ಭಾಸವಾಗುತ್ತಿದೆ. ಅದೇ ಹಾಡು, ಅದೇ ಕುಣಿತ, ಅದೇ ಭಾಷಣ, ಅದೇ ಜನರು, ಅದೇ ಉನ್ಮಾದ, ಅದೇ ಭಕ್ತಿಯ ಪರಾಕಾಷ್ಠೆ, ಅದೇ ವ್ಯಕ್ತಿಯ ವಿಜೃಂಭಣೆ ಕೆಲವೊಮ್ಮೆ ತುಂಬಾ ವಿಚಿತ್ರವೆನಿಸುತ್ತಿದೆ.

ಗಾಂಧಿ ಜಯಂತಿಗೂ, ಹನುಮ ಜಯಂತಿಗೂ, ಅಂಬೇಡ್ಕರ್ ಜಯಂತಿಗೂ, ರಾಮ ಜಯಂತಿಗೂ, ಬಸವ ಜಯಂತಿಗೂ, ಮಹಾವೀರ ಜಯಂತಿಗೂ, ವಾಲ್ಮೀಕಿ ಜಯಂತಿಗೂ, ಕೆಂಪೇಗೌಡ ಜಯಂತಿಗೂ, ಬುದ್ದ ಜಯಂತಿಗೂ, ಕಬ್ಬಾಳಮ್ಮ ಜಯಂತಿಗೂ, ರಾಘವೇಂದ್ರ ಸ್ವಾಮಿ ಜಯಂತಿಗೂ, ಶಿರಡಿ ಸಾಯಿಬಾಬಾ ಜಯಂತಿಗೂ, ಮಂಜುನಾಥನ ರಥೋತ್ಸವಕ್ಕೂ, ವೆಂಕಟೇಶ್ವರನ ಮಹೋತ್ಸವಕ್ಕೂ ವ್ಯತ್ಯಾಸವೇ ಗೊತ್ತಾಗುತ್ತಿಲ್ಲ.

ಅವರವರಿಗೆ ಇಷ್ಟ ಬಂದಂತೆ ಅವರವರನ್ನು ವಿಜೃಂಭಿಸುತ್ತಾ ಹಾಸ್ಯಾಸ್ಪದವಾಗಿರುವುದು ಅಷ್ಟು ಒಳ್ಳೆಯ ಬೆಳವಣಿಗೆಯಲ್ಲ.

ಮೊದಲನೆಯದಾಗಿ ಪೌರಾಣಿಕ ಪಾತ್ರಗಳ ಜಯಂತಿಯೇ ಬೇರೆ, ಐತಿಹಾಸಿಕ ವ್ಯಕ್ತಿಗಳ ಜಯಂತಿಯೇ ಬೇರೆ, ಹೋರಾಟಗಾರರ ಜಯಂತಿಯೆ ಬೇರೆ, ಚಿಂತಕರು ದಾರ್ಶನಿಕರ ಜಯಂತಿಯೇ ಬೇರೆ. ಈ ಎಲ್ಲವೂ ಒಟ್ಟಾರೆ ವಿಭಿನ್ನವಾದದ್ದು, ಜೊತೆಗೆ ಜಯಂತಿ ಎಂದರೆ ಹಾಡು, ಕುಣಿತ, ಮೆರವಣಿಗೆ, ಉತ್ಸವಗಳು ಮಾತ್ರವಲ್ಲ ಅದನ್ನು ಮೀರಿದ ತುಂಬಾ ಕ್ರಿಯಾಶೀಲ ಚಟುವಟಿಕೆಗಳು ಆ ಜನುಮದಿನದ ಸಂದರ್ಭದಲ್ಲಿ ಹಮ್ಮಿಕೊಳ್ಳಬೇಕಾಗಿದೆ.

ಆ ವಿಚಾರ ಚಿಂತನೆಗಳನ್ನು ಎಲ್ಲಾ ಜನಮನದಲ್ಲಿ ಮೂಡಿಸಬೇಕಾಗಿದೆ.

ಅದಕ್ಕಾಗಿ ಜಯಂತಿಗಳ ಆಚರಣೆಯೇ ಹೊರತು ಸುಮ್ಮನೆ ಸಂಘಟನೆಗಾಗಿ, ರಾಜಕೀಯಕ್ಕಾಗಿ, ಮನರಂಜನೆಗಾಗಿ ಜಯಂತಿಗಳನ್ನು ಆಚರಿಸುವುದರಲ್ಲಿ ಯಾವುದೇ ಅರ್ಥವೂ ಇಲ್ಲ.

ಅದರಲ್ಲೂ ಗಾಂಧಿ, ಅಂಬೇಡ್ಕರ್, ಬಸವ ಜಯಂತಿಗಳಲ್ಲಿ ಅವರ ಅನುಯಾಯಿಗಳ, ಬೆಂಬಲಿಗರ, ಅಭಿಮಾನಿಗಳ ಜವಾಬ್ದಾರಿ ತುಂಬಾ ಹೆಚ್ಚಾಗಿರುತ್ತದೆ.

ಇವರು ಮನರಂಜನೆಯ ಸರಕುಗಳಲ್ಲ. ಈ ಸಮಾಜದ ಎಲ್ಲಾ ನಾಗರಿಕ ಧರ್ಮದ, ಭಾರತದ ಸಾಂಸ್ಕೃತಿಕ ಪರಂಪರೆಯ ಪ್ರತಿನಿಧಿಗಳು. ಅವರನ್ನು ಅವರ ಜನುಮದಿನದ ಸಂದರ್ಭದಲ್ಲಿ ನೆನಪಿಸಿಕೊಳ್ಳುವ ಕ್ರಿಯೆ ಅತ್ಯಂತ ಪ್ರಬುದ್ಧವಾಗಿರಬೇಕು, ಕ್ರಿಯಾತ್ಮಕವಾಗಿರಬೇಕು, ಅದೆಲ್ಲವನ್ನು ಮೀರಿ ನಮ್ಮ ಮನಸ್ಸಿನ ಪರಿವರ್ತನೆಯ, ಸಮಾಜದ ಮನಸ್ಥಿತಿಯ ಪರಿವರ್ತನೆಯ ಹಾದಿಯ ದ್ವಾರಗಳು ಮುಕ್ತವಾಗುವಂತಿರಬೇಕು.

ಆಗ ಮಾತ್ರ ಜಯಂತಿಗಳಿಗೆ ಅರ್ಥವಿರುತ್ತದೆ. ಹೆಸರುಬೇಳೆ ಪಾನಕ, ಕೋಸಂಬರಿ, ಚಿತ್ರಾನ್ನ, ಮೊಸರನ್ನ, ಬಿರ್ಯಾನಿ ಹಂಚುವಿಕೆಯಾಗಲಿ ಅಥವಾ ಬಣ್ಣ ಬಣ್ಣದ ಬಾವುಟಗಳ ಮೆರವಣಿಗೆಯಾಗಲಿ, ಘೋಷಣೆಗಳಾಗಲಿ ಸಾಂಕೇತಿಕ ಮಾತ್ರ.

ಜಯಂತಿಗಳ ಆಚರಣೆ ತಪ್ಪಲ್ಲ. ಅದು ಇಂದಿನ ಕಾಲಕ್ಕೆ ಅತ್ಯಂತ ಅನಿವಾರ್ಯವೂ, ಮಹತ್ವವು ಹೌದು. ಆದರೆ ಆಚರಣೆಯ ರೀತಿಯ ಬಗ್ಗೆ ಪುನರ್ ವಿಮರ್ಶೆ ಮಾಡಿಕೊಳ್ಳಬೇಕಾದ ಸಂದರ್ಭ ಬಂದಿದೆ. ಅವರ ವಿಚಾರಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ತಿಳಿಸುವ, ಮನವರಿಕೆ ಮಾಡಿಕೊಳ್ಳುವ, ನಡವಳಿಕೆಯಾಗಿ ರೂಪಿಸುವ ಕೆಲಸವಾಗಬೇಕಾಗಿದೆ.

ದಿನನಿತ್ಯದ ಚಟುವಟಿಕೆಗಳಲ್ಲಿ, ನಮ್ಮ ನಡವಳಿಕೆಗಳಲ್ಲಿ, ಸಮಾಜದ ಭಾಗವಹಿಸುವಿಕೆಯ ನಮ್ಮ ಪಾತ್ರಗಳಲ್ಲಿ ಅತ್ಯಂತ ಪ್ರಗತಿಪರ ಮನೋಭಾವವನ್ನು ಬೆಳೆಸಿಕೊಳ್ಳುವ ನಿಟ್ಟಿನಲ್ಲಿ ಈ ಜಯಂತಿಗಳು ಪೂರಕವಾಗಿ ಕೆಲಸ ಮಾಡುವಂತೆ ಮಾಡಬೇಕಾಗಿದೆ.

ಇಲ್ಲದಿದ್ದರೆ ಇದು ಯಾವುದೋ ಉತ್ಸವದಂತೆ ಕಾಟಾಚಾರದ ಕಾರ್ಯಕ್ರಮವಾಗಬಹುದು ಯೋಚಿಸಿ ನೋಡಿ. ಅಯ್ಯಪ್ಪ ಸ್ವಾಮಿಯನ್ನು ವಿವಿಧ ಆಧುನಿಕ ಹಾಡುಗಳಲ್ಲಿ, ರ್‍ಯಾಪ್ ಸಂಗೀತದಲ್ಲಿ ವರ್ಣಿಸುವಂತೆ, ಆಂಜನೇಯ ಸ್ವಾಮಿಯನ್ನು ಚಲನಚಿತ್ರ ಗೀತೆಯಲ್ಲಿ ವರ್ಣಿಸುವಂತೆ, ಅಂಬೇಡ್ಕರ್ ರವರನ್ನು, ಗಾಂಧಿಯವರನ್ನು, ಬಸವಣ್ಣನವರನ್ನು ವರ್ಣಿಸುತ್ತಾ, ನೃತ್ಯ ಮಾಡುತ್ತಾ ಸಾಗಿದರೆ, ಅವರುಗಳಿಗೆ ದೀರ್ಘದಂಡ ನಮಸ್ಕಾರ ಹಾಕಿ, ಹಣ್ಣು, ಕಾಯಿ ಅರ್ಪಿಸಿ, ನೈವೇದ್ಯ ಮಾಡಿದರೆ ವಿಚಾರಗಳು ಮೌಢ್ಯವಾಗಿ, ನಿಧಾನವಾಗಿ ಸಾಯುವ ಸಾಧ್ಯತೆಯೂ ಇದೆ, ಎಚ್ಚರ........

ಜಯಂತಿಗಳು ಎಲ್ಲಾ ವರ್ಗದ ಜನರನ್ನು ಒಳಗೊಳ್ಳುವ, ಅಭಿವೃದ್ಧಿ ಹೊಂದಿದ ನಾಗರಿಕ ಸಮಾಜ ನಿರ್ಮಾಣವಾಗುವ ಆಶಯದ ರೀತಿಯಲ್ಲಿದ್ದರೆ ಉತ್ತಮವಲ್ಲವೇ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



ವಿವೇಕಾನಂದ. ಎಚ್. ಕೆ.
9663750451.....
9844013068.......

# ಖರ್ಗೆ ಅವರದು ಕೀಳುಮಟ್ಟದ ಹೇಳಿಕೆ: ಡಾ.ಸಿ.ಎನ್.ಅಶ್ವತ್ಥನಾರಾಯಣ ಆಕ್ಷೇಪ

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಖರ್ಗೆ ಅವರದು ಕೀಳು ಮಟ್ಟದ ಹೇಳಿಕೆ. ಇದನ್ನು ತೀವ್ರವಾಗಿ ಖಂಡಿಸುವುದಾಗಿ ಮಾಜಿ ಉಪ ಮುಖ್ಯಮಂತ್ರಿ ಹಾಗೂ ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ ಅವರು ಹೇಳಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷರಾಗಿ ಜವಾಬ್ದಾರಿ ಇರುವವರು, ಹಿರಿತನ ಹೊಂದಿರುವವರು ಬಳಸುವ ಭಾಷೆ ನೋಡಿದರೆ ಅಸಹ್ಯವಾಗುತ್ತದೆ. ಭಾರತೀಯರಿಗೆ ಇದು ಅವಮಾನ ಎಂದರು.

ಖರ್ಗೆ ಅವರು ಇಷ್ಟು ಕೀಳುಮಟ್ಟದ ಹೇಳಿಕೆ ನೀಡಬಾರದು. ಈ ಹಿಂದೆಯೂ ಖರ್ಗೆ ಅವರು ಮೋದಿ ಅವರ ವಿರುದ್ಧ ನಾಲಿಗೆ ಹರಿಬಿಟ್ಟಿದ್ದಾರೆ. ಅವಹೇಳನಕಾರಿಯಾಗಿ ಮಾತನಾಡುವುದು ನಂತರ ವಿಷಾದ ವ್ಯಕ್ತಪಡಿಸುವುದು. ಅವರ ಅನುಭವಕ್ಕೆ ಸರಿಯಲ್ಲ. ಇಂತಹುದನ್ನು ಎಲ್ಲ ಭಾರತೀಯರು ಸಹಿಸಿಕೊಳ್ಳುವುದಿಲ್ಲ ಎಂದರು. ಕಾಂಗ್ರೆಸ್‌ಗೆ ದೇಶದ ಜನ ಮುಂದೆ ಸರಿಯಾದ ಪಾಠ ಕಲಿಸಲಿದ್ದಾರೆ. ಪಕ್ಷಕ್ಕೆ ಬಹಿಷ್ಕಾರ ಹಾಕುವ ದಿನ ದೂರವಿಲ್ಲ ಎಂದು ಹೇಳಿದರು.

ದಲಿತರು, ಬಡವರು, ಮಹಿಳೆಯರು, ಯುವಕರು ಹೀಗೆ ಸಮಾಜದ ಎಲ್ಲ ವರ್ಗದ ಜನರ ಏಳಿಗೆಗಾಗಿ ದುಡಿಯುವ ಮಹಾನ್ ನಾಯಕ ಮೋದಿ ಅವರು. ಆದರೆ ಇದನ್ನು ತಿಳಿಯದೇ ಖರ್ಗೆ ಅವರು ಮಾತನಾಡುತ್ತಾರೆ. ಅವರಿಗೆ ಏನು ಸಮಸ್ಯೆ ಇದೆಯೋ, ಯಾರನ್ನು ಓಲೈಸಲು ಹೀಗೆ ಮಾತನಾಡುತ್ತಾರೋ, ಮುಂದೆ ಯಾವ ಸ್ಥಾನ ಪಡೆಯಲು ಹೀಗೆ ಆಡುತ್ತಾರೋ ಗೊತ್ತಿಲ್ಲ ಎಂದರು.

**ಮಕ್ಕಳ ಜೊತೆ ಸರ್ಕಾರದ ಚೆಲ್ಲಾಟ...**

ಹಿಂದಿಗೆ ಗ್ರೇಡಿಂಗ್ ಬದಲು ಅಂಕ ನೀಡಬೇಕು ಎಂಬ ವಿಷಯದ ಕುರಿತ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅಶ್ವತ್ಥನಾರಾಯಣ ಅವರು, ಮಕ್ಕಳ ಶಿಕ್ಷಣದ ಬಗ್ಗೆ ಅರ್ಥ ಮಾಡಿಕೊಳ್ಳದ ಸರ್ಕಾರ ಇದು. ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟ ಆಡುತ್ತಿದೆ. ಶಿಕ್ಷಣವನ್ನು ಸರ್ಕಾರ ಹೀಗೆ ಹಗುರವಾಗಿ ಪರಿಗಣಿಸಿರುವುದು ಇದೇ ಮೊದಲಲ್ಲ. ಏನು ಮಾಡಿದರೂ ನಡೆಯುತ್ತದೆ ಎಂದುಕೊಂಡಿದೆ. ಯಾವುದೇ ನೀತಿಯನ್ನು ಸರಿಯಾಗಿ ಅನುಷ್ಠಾನ ಮಾಡದ ಸರ್ಕಾರ ಇನ್ನಾದರೂ ವಿದ್ಯಾರ್ಥಿಗಳ ಹಿತ ಕಾಪಾಡಲಿ ಎಂದರು.

# ಪ್ರೊ. ಎನ್. ಅನಂತಾಚಾರ್ ಅವರ: ಅಂಚೆ ಲಕೋಟೆ ಬಿಡುಗಡೆ

**ಬೆಂಗಳೂರು** : ಆಚಾರ್ಯ ಪಾಠಶಾಲಾ ಶಿಕ್ಷಣ ಸಂಸ್ಥೆಯ ಸಾರ್ಥಕ 9 ದಶಕಗಳ ರಚನಾತ್ಮಕ ಶೈಕ್ಷಣಿಕ ಸೇವೆಯನ್ನು ಸ್ಮರಿಸುವ, ಶಿಕ್ಷಣ ಮತ್ತು ಸಮಾಜಕ್ಕೆ ಸಂಸ್ಥೆಯು ನೀಡಿದ ಮಾದರಿಯಾದ ಕೊಡುಗೆಯನ್ನು ಸ್ಮರಿಸಲು ವಿಶೇಷ ಲಕೋಟೆಯನ್ನು ಬಿಡುಗಡೆ ಮಾಡಲಾಯಿತು.

ಬಸವನಗುಡಿಯ ಎನ್.ಆರ್. ಕಾಲೋನಿಯಲ್ಲಿರುವ ಆಚಾರ್ಯ ಪಾಠಶಾಲಾ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ವಿಶ್ವಸ್ತರು, ಗಣ್ಯರು ಮತ್ತು ಹಿತೈಷಿಗಳ ಸಮ್ಮುಖದಲ್ಲಿ ನಡೆಯಿತು. ಬೆಂಗಳೂರು ಕೇಂದ್ರ ಕಚೇರಿ ವಲಯದ ಅಂಚೆ ಸೇವೆಗಳ ನಿರ್ದೇಶಕರಾದ ವಿ. ತಾರಾ ಅಂಚೆ ಲಕೋಟೆ ಬಿಡುಗಡೆ ಮಾಡಿದರು. ಎಪಿಎಸ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಸಿಎ ಡಾ. ವಿಷ್ಣು ಭರತ್ ಅಲಂಪಲ್ಲಿ, ಮತ್ತಿತರೆ ಗಣ್ಯರು ಉಪಸ್ತಿತರಿದ್ದರು.

ನಂತರ ಮಾತನಾಡಿದ ಡಾ. ವಿಷ್ಣು ಭರತ್ ಅಲಂಪಲ್ಲಿ, ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಪ್ರೊ. ಎನ್. ಅನಂತಾಚಾರ್ ಅವರ ದೂರದೃಷ್ಟಿಯ ಕೊಡುಗೆಗಳಿಗೆ ಅರ್ಪಿಸಿದ ಗೌರವ ಇದಾಗಿದೆ. ಅವರ ಪರಂಪರೆಯು ತಲೆಮಾರುಗಳಿಗೆ ಸ್ಫೂರ್ತಿ ನೀಡುತ್ತಲೇ ಇದೆ. ಈ ವಿಶೇಷ ಲಕೋಟೆಯ ಬಿಡುಗಡೆಯು ಅವರ ಶಾಶ್ವತ ಪ್ರಭಾವ ಮತ್ತು ಕಳೆದ ಒಂಬತ್ತು ದಶಕಗಳಲ್ಲಿ ಆಚಾರ್ಯ ಪಾಠಶಾಲಾ ಶಿಕ್ಷಣ ಸಂಸ್ಥೆಯ ಗಮನಾರ್ಹ ಪ್ರಯಾಣದ ಸ್ಮರಣೆಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಎಪಿಎಸ್ ಶಿಕ್ಷಣ ಸಂಸ್ಥೆಗಳ ಪ್ರಧಾನ ಕಾರ್ಯದರ್ಶಿ ಪ್ರೊ. ಎ. ಪ್ರಕಾಶ್, ಅಂಚೆ ಅಧೀಕ್ಷರಾದ ಗಜೇಂದ್ರ ಕುಮಾರ್ ಮೀನಾ ಮತ್ತಿತರರು ಭಾಗವಹಿಸಿದ್ದರು.

# ತಮ್ಮ ಜ್ಞಾನದ ಶ್ರೇಷ್ಠತೆಯಿಂದ ಶಂಕರಾಚಾರ್ಯರು ಜನಮಾನಸದಲ್ಲಿದ್ದಾರೆ: ದಿನೇಶ್ ಗುಂಡೂರಾವ್

**ಬೆಂಗಳೂರು:** ಆಚಾರ್ಯ ಶಂಕರರು ನಾವು ಸರಿಯಾದ ದಾರಿಯಲ್ಲಿ ಯೋಚನೆ ಮಾಡುವಂತೆ ಮಾಡಿದ್ದಾರೆ. ಅವರ ಜೀವನ ಶ್ರೇಷ್ಠತೆಯ ತತ್ವಗಳನ್ನು ಅವಲೋಕನ ಮಾಡಿದರೆ ಮಾತ್ರ ಶಂಕರರ ಮಹತ್ವದ ಅರಿವು ಆದೀತು. ಚಿಕ್ಕ ವಯಸ್ಸಿನಲ್ಲಿಯೇ ಭಾಷ್ಯಗಳನ್ನು ಬರೆದು, ದೇಶದಾದ್ಯಂತ ಪ್ರವಾಸಮಾಡಿ ಜನರ ಮನಸ್ಸನ್ನು ಜೋಡಿಸಿದ್ದು ಅವರ ಸಾಧನೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ನಡೆದ ಶ್ರೀ ಆದಿಗುರು ಶಂಕರಾಚಾರ್ಯರ ಜಯಂತಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಾವು ಜೀವನದಲ್ಲಿ ಅನೇಕ ವಿಷಯಗಳ ಬಗ್ಗೆ ಆಳವಾಗಿ ಯೋಚನೆ ಮಾಡುವುದಿಲ್ಲ. ಅವರು ಪವಾಡ ಪುರಷರಾಗಿರಲಿಲ್ಲ. ಜನಸಾಮಾನ್ಯರು, ರಾಜರುಗಳ ಮನಸ್ಸನ್ನು ಗೆದ್ದು ಅವನತಿಯಲ್ಲಿದ್ದ ಧರ್ಮವನ್ನು ಪುನರುತ್ಥಾನ ಮಾಡಿದರು. ಆಚಾರ್ಯ ಶಂಕರರು ಜ್ಞಾನದ ಮುಖೇನ ಶ್ರೇಷ್ಠರಾದವರು. ನೆನಪಿಡಿ ಶಂಕರರ ಸಾಧನೆ ನಮ್ಮಿಂದ ಉಳಿಯುವುದಿಲ್ಲ. ಅವರು ಹೇಳಿದ ಜೀವನ ಧರ್ಮ, ಹಂಚಿದ ಜ್ಞಾನ, ಅವರು ಬೋಧಿಸಿದ ತತ್ವಗಳಿಂದಲೇ ಅವರು ಚಿರಸ್ಥಾಯಿಯಾಗಿದ್ದಾರೆ. ಮುಂದೆಯೂ ಇರುತ್ತಾರೆ. ರಾಜ್ಯದ ಮೂಲೆಮೂಲೆಗಳಲ್ಲಿಯೂ ಶಂಕರರ ತತ್ವ ಪಸರಿಸಬೇಕು. ಜನರು ಸ್ವಯಂಪ್ರೇರಿತರಾಗಿ ಶಂಕರ ಜಯಂತಿ ಆಚರಿಸುವಂತಾಗಬೇಕು.

ಶಂಕರಾಚಾರ್ಯರ ಹೆಸರಿನಲ್ಲಿ ಪ್ರಶಸ್ತಿ ನೀಡಬೇಕು. ಕಳೆದ ವರ್ಷವೇ ಈ ಕುರಿತು ಚರ್ಚೆ ಆಗಿತ್ತು. ನಾನು ಮುಖ್ಯಮಂತ್ರಿಯವರ ಜೊತೆ ಮಾತನಾಡಿ ಶ್ರೀ ಶಂಕರರ ಹೆಸರಲ್ಲಿ ಮುಂದಿನ ವರ್ಷದಿಂದ ಪ್ರಶಸ್ತಿ ನೀಡಲು ಸಕಲ ಪ್ರಯತ್ನ ಮಾಡುತ್ತೇನೆ.

ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಸಗೋಡು ಜಯಸಿಂಹ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕ ಮಂಜುನಾಥ ಸ್ವಾಮಿ, ಡಾ. ವಿ ಆರ್ ಗೌರಿಶಂಕರ ಚಿಂತಕರಾದ ಸಿ ಎಸ್ ದ್ವಾರಕಾನಾಥ, ಪಾವಗಡ ಪ್ರಕಾಶ್ ರಾವ್, ಗುರಾಜ ಕರ್ಜಗಿ, ಅಖಿಲ ಕರ್ನಾಟಕ ಬ್ರಾಹ್ಮಣ ಸಂಘದ ಅಧ್ಯಕ್ಷ ಎಸ್ ರಘುನಾಥ ಇನ್ನಿತರರು ಉಪಸ್ಥಿತರಿದ್ದರು.

# ಕೆಎಸ್‌ಐಸಿ ಉಪಾಧ್ಯಕ್ಷರಾಗಿ ನೇಮಕ; ವಿಲೀನ ಪ್ರಕ್ರಿಯೆಗೆ ಸರ್ಕಾರದ ಮಹತ್ವದ ಹೆಜ್ಜೆ

**ಚನ್ನಪಟ್ಟಣ:** ರಾಜ್ಯದ ರೇಷ್ಮೆ ಉದ್ಯಮಕ್ಕೆ ಮತ್ತೊಂದು ಮಹತ್ವದ ಆಡಳಿತಾತ್ಮಕ ಹೆಜ್ಜೆಯಾಗಿ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ (ಕೆಎಸ್‌ಎಂಬಿ)ಯನ್ನು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ (ಕೆಎಸ್‌ಐಸಿ) ಯೊಂದಿಗೆ ವಿಲೀನಗೊಳಿಸುವ ಪ್ರಕ್ರಿಯೆಗೆ ರಾಜ್ಯ ಸರ್ಕಾರ ಚಾಲನೆ ನೀಡಿದ್ದು, ಇದರ ಅಂಗವಾಗಿ ಚನ್ನಪಟ್ಟಣ ತಾಲೂಕಿನ ಸೋಗಾಲ ಗ್ರಾಮದ ಎಸ್. ಗಂಗಾಧರ್ ಅವರಿಗೆ ಹೊಸ ಜವಾಬ್ದಾರಿ ನೀಡಲಾಗಿದೆ.



ರಾಜ್ಯ ಸರ್ಕಾರದ ಆದೇಶ :

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದಲ್ಲಿ ಹೊಸದಾಗಿ ಉಪಾಧ್ಯಕ್ಷರ ಹುದ್ದೆ ಸೃಜಿಸಿ, ಪ್ರಸ್ತುತ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯ ಅಧ್ಯಕ್ಷರಾಗಿರುವ ಎಸ್. ಗಂಗಾಧರ್ ಅವರನ್ನು ಉಪಾಧ್ಯಕ್ಷರಾಗಿ ನೇಮಕ ಮಾಡಿ ಆದೇಶ ಹೊರಡಿಸಲಾಗಿದೆ.

ಈ ಮೂಲಕ ರೇಷ್ಮೆ ಕ್ಷೇತ್ರದ ಎರಡು ಪ್ರಮುಖ ಸಂಸ್ಥೆಗಳ ಆಡಳಿತ ಸಮನ್ವಯಕ್ಕೆ ಸರ್ಕಾರ ಸ್ಪಷ್ಟ ದಿಕ್ಕು ತೋರಿದಂತಾಗಿದೆ. ವಿಲೀನ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಸ್ತಿತ್ವದಲ್ಲೇ ಇರುವುದರಿಂದ, ಎಸ್. ಗಂಗಾಧರ್ ಅವರು ಹಾಲಿ ಅಧ್ಯಕ್ಷರ ಹುದ್ದೆಯ ಜೊತೆಗೆ ಕೆಎಸ್‌ಐಸಿಯ ಉಪಾಧ್ಯಕ್ಷರ ಜವಾಬ್ದಾರಿಯನ್ನೂ ನಿರ್ವಹಿಸಲಿದ್ದಾರೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ರೇಷ್ಮೆ ಉದ್ಯಮದ ಅಭಿವೃದ್ಧಿ, ರೈತರ ಹಿತಾಸಕ್ತಿ, ಉತ್ಪಾದನೆ ಹಾಗೂ ಮಾರುಕಟ್ಟೆ ವ್ಯವಸ್ಥೆಯ ಬಲವರ್ಧನೆ ದೃಷ್ಟಿಯಿಂದ ಈ ವಿಲೀನ ಕ್ರಮ ಕೈಗೊಳ್ಳಲಾಗಿದೆ ಎನ್ನಲಾಗುತ್ತಿದೆ. ಇದರಿಂದ ಆಡಳಿತ ಸರಳೀಕರಣ, ಯೋಜನೆಗಳ ಸಮರ್ಪಕ ಅನುಷ್ಠಾನ ಹಾಗೂ ರೇಷ್ಮೆ ಬೆಳೆಗಾರರಿಗೆ ಹೆಚ್ಚಿನ ನೆರವು ದೊರೆಯುವ ನಿರೀಕ್ಷೆ ವ್ಯಕ್ತವಾಗಿದೆ.

ಚನ್ನಪಟ್ಟಣ ತಾಲೂಕಿನ ಸೋಗಾಲ ಗ್ರಾಮದವರಾದ ಎಸ್. ಗಂಗಾಧರ್ ಅವರಿಗೆ ದೊರೆತ ಈ ನೇಮಕಾತಿ ಸ್ಥಳೀಯರಲ್ಲಿ ಹರ್ಷ ಮೂಡಿಸಿದೆ. ರೇಷ್ಮೆ ಬೆಳೆ ಮತ್ತು ಕೈಗಾರಿಕಾ ವಲಯದಲ್ಲಿ ಜಿಲ್ಲೆಯ ಪಾತ್ರ ಮಹತ್ತರವಾಗಿರುವ ಸಂದರ್ಭದಲ್ಲಿ ಸ್ಥಳೀಯ ನಾಯಕನಿಗೆ ದೊರೆತ ಈ ಸ್ಥಾನಮಾನ ಗಮನ ಸೆಳೆದಿದೆ.

ಈ ಕುರಿತು ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ (ರೇಷ್ಮೆ) ಸರ್ಕಾರದ ಅಧೀನ ಕಾರ್ಯದರ್ಶಿ ಪ್ರಮೀಳ ಎನ್ ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

ರಾಜ್ಯದ ರೇಷ್ಮೆ ವಲಯದಲ್ಲಿ ಹೊಸ ಆಡಳಿತಾತ್ಮಕ ರೂಪುರೇಷೆಗೆ ಇದು ನಾಂದಿ ಹಾಡಿದಂತಾಗಿದ್ದು, ಮುಂದಿನ ದಿನಗಳಲ್ಲಿ ಉದ್ಯಮ ವೃದ್ಧಿಗೆ ಇದು ಪೂರಕವಾಗಲಿದೆ ಎಂಬ ವಿಶ್ವಾಸ ವ್ಯಕ್ತವಾಗಿದೆ.

# ಚೆನ್ನೈನಲ್ಲಿ AIADMKಗೆ ಬುದ್ಧಿವಾದ ಹೇಳಲು ಹೋಗಿ ಉಗ್ರವಾದ ಮಲ್ಲಿಕಾರ್ಜುನ ಖರ್ಗೆ! ವಿವಾದ

ಚೆನ್ನೈ: ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ ಆ ರಾಜ್ಯದ ರಾಜ ಕಾರಣಿಗಳು ನೀಡುವ ಹೇಳಿಕೆ ಗಳಿಗಿಂತ, ಕರ್ನಾಟಕದ ರಾಜಕಾರಣಿಗಳು ನೀಡು ತ್ತಿರುವ ಹೇಳಿಕೆಗಳೇ ಸದ್ದು ಮಾಡುತ್ತಿವೆ. ತಮಿಳುನಾಡಿನಲ್ಲಿ ಹಿಂದಿ ಹೇರಿಕೆ ವಿರುದ್ಧ ಡಿಕೆ ಶಿವಕುಮಾರ್ ಗುಡುಗು ಮತ್ತು



ಅದಕ್ಕೆ ಕರ್ನಾಟಕ ಬಿಜೆಪಿ ನೀಡಿರುವ ತಿರುಗೇಟಿನ ಮಧ್ಯೆ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿರುವ ಹೇಳಿಕೆಯೊಂದು ಇದೀಗ ವಿವಾದದ ಕಿಡಿ ಹೊತ್ತಿಸಿದೆ.

ಹೌದು, ತಮಿಳುನಾಡು ರಾಜಧಾನಿ ಚೆನ್ನೈನಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡುತ್ತಾ, ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು "ಟೆರರಿಸ್ಟ್" ಎಂದು ಕರೆದಿದ್ದಾರೆ. ಪ್ರಧಾನಿ ಮೋದಿ ಕುರಿತ ಎಐಸಿಸಿ ಅಧ್ಯಕ್ಷರ ಈ ಹೇಳಿಕೆ ತೀವ್ರ ವಿವಾದಕ್ಕೆ ಕಾರಣ ವಾಗುವ ಸಾಧ್ಯತೆ ದಟ್ಟವಾಗಿದೆ.

ತಮಿಳುನಾಡಿನಲ್ಲಿ ಎಐಎಡಿಎಂಕೆ ಮತ್ತು ಬಿಜೆಪಿ ನಡುವಿನ ಮೈತ್ರಿಯ ಔಚಿತ್ಯವನ್ನು ಪ್ರಶ್ನಿಸಿದ ಮಲ್ಲಿಕಾರ್ಜುನ ಖರ್ಗೆ, ಸಮಾನತೆ ಮತ್ತು ನ್ಯಾಯದ ಮೇಲೆ ನಂಬಿಕೆ ಇರದ ಪಕ್ಷದೊಂದಿಗೆ ಎಐಎಡಿ ಎಂಕೆ ನಂಬಿಕೆ ಇಟ್ಟಿರುವುದು ಆಶ್ಚರ್ಯ ಎಂದು ಗುಡುಗಿದ್ದಾರೆ.

"ಅವರು ಪ್ರಧಾನಿ ಮೋದಿ ಜೊತೆ ಹೇಗೆ ಕೈಜೋಡಿಸಿದ್ದಾರೆ ಎಂಬುದು ಅರ್ಥವಾಗುತ್ತಿಲ್ಲ. ನರೇಂದ್ರ ಮೋದಿ ಓರ್ವ ಭಯೋತ್ಪಾದಕ.

ಅವರ ಪಕ್ಷ ಸಮಾನತೆ ಮತ್ತು ನ್ಯಾಯದಲ್ಲಿ ನಂಬಿಕೆ ಇಡುವುದಿಲ್ಲ. ಈ ಜನರು ಅವರೊಂದಿಗೆ ಕೈಜೋಡಿಸುತ್ತಿದ್ದಾರೆ ಎಂದರೆ ಅವರು ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುತ್ತಿದ್ದಾರೆ ಎಂದೇ ಅರ್ಥ" ಎಂದು ಮಲ್ಲಿಕಾರ್ಜುನ ಖರ್ಗೆ ಎಐಎಡಿ ಎಂಕೆ ಪಕ್ಷವನ್ನು ತರಾಟೆಗೆ ತೆಗೆದುಕೊಂ ಡಿದ್ದಾರೆ. ಅಂಬೇಡ್ಕರ್ ಜಯಂತಿ ದಿನ ಪ್ರಧಾನಿ ಮೋದಿ– ಮಲ್ಲಿಕಾರ್ಜುನ ಖರ್ಗೆ ಆಪ್ತ ಸಮಾಲೋಚನೆ ನಡೆಸಿದ್ದನ್ನು ಇಲ್ಲಿ ಸ್ಮರಿಸಬಹುದು. ತಮಿಳುನಾಡಿನಲ್ಲಿ ಎಐ ಎಡಿ ಎಂಕೆ ಮತ್ತು ಬಿಜೆಪಿ ಒಟ್ಟಾಗಿ ಚುನಾವಣೆ ಎದುರಿ ಸುತ್ತಿವೆ. ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ ಈಗಾಗಲೇ ರಾಜ್ಯದಲ್ಲಿ ಹಲವು ಸುತ್ತಿನ ಚುನಾವಣಾ ಪ್ರಚಾರ ಸಭೆಗಳನ್ನು ನಡೆಸಿದ್ದಾರೆ. ಆಡಳಿತಾ ರೂಢ ಡಿಎಂಕೆ ನೇತೃತ್ವದ ಮೂತ್ರಿಕೂಟ ವನ್ನು ಅಧಿಕಾರದಿಂದ ಕಿತ್ತೆಸೆಯಲು, ಎನ್‌ಡಿಎ ಪ್ರಯತ್ನಗಳನ್ನು ಆರಂಭಿಸಿದೆ. ತಮಿಳುನಾಡಿನಲ್ಲಿ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಮತ್ತು ಕರ್ನಾಟಕದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೇರಿದಂತೆ ಹಲವರು ಭರ್ಜರಿ ಪ್ರಚಾರ ನಡೆಸುತ್ತಿದ್ದಾರೆ.ಇತ್ತೀಚಿಗೆ ಕೇರಳದಲ್ಲಿ ಚುನಾವಣಾ ಭಾಷಣ ಮಾಡುತ್ತಾ, ಗುಜರಾತಿಗಳು ಅನಕ್ಷರಸ್ಥರು ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿಕೆ ನೀಡಿದ್ದರು. ಈ ಹೇಳಿಕೆಗೆ ತೀವ್ರ ವಿರೋಧ ವ್ಯಕ್ತವಾದ ಬಳಿಕ, ಎಐಸಿಸಿ ಅಧ್ಯಕ್ಷರು ಕ್ಷಮೆಯನ್ನೂ ಕೋರಿದ್ದರು.

# ಸಹಾಯ ಮರೆತ ಸರ್ಕಾರಿ ವಾಣಿಗಳು, ಸಹಾಯವಾಣಿಯನ್ನೇ ಮರೆತ ಜನಸಾಮಾನ್ಯರು: ರಾಜೀವ್ ಹೆಗಡೆ

ಬೆಂಗಳೂರು: ಬೆಂಗಳೂರು ಸೇರಿದಂತೆ ರಾಜ್ಯದ ನಾನಾ ಕಡೆಗಳಲ್ಲಿ ಸಮಸ್ಯೆಗಳು ಕಂಡು ಬಂದರೆ ಆಯಾ ಇಲಾಖೆ, ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರಬೇಕಾದರೆ ಸಹಾಯ ವಾಣಿಗಳು ಪ್ರಮುಖ ಪಾತ್ರ ವಹಿಸುತ್ತವೆ. ಕೆಲವು ಇಲಾಖೆ, ಸಂಸ್ಥೆಗಳ ಸಹಾಯ ವಾಣಿಗಳು ನಾಮಕಾವಸ್ತೆ ಇವೆ. ಇನ್ನೂ ಕೆಲವು ಸಹಾಯವಾಣಿಗಳು ಜನರಿಗಾಗಿ ಇವೆ. ಆದರೆ ಅವುಗಳ ಬಳಕೆಯನ್ನು ಜನಸಾಮಾನ್ಯರೇ ಮರೆತಿದ್ದಾರೆ. ಈ ಕುರಿತು ಪತ್ರಕರ್ತ ಮತ್ತು ಗ್ಲ್ಯಾನ್ಸ್ ಅಸೋಸಿಯೇಟ್ ಎಡಿಟರ್ ರಾಜೀವ್ ಹೆಗಡೆ ಅವರ ಫೇಸ್‌ಬುಕ್ ಬರಹ ಇಲ್ಲಿದೆ.

‘ನಾನು ಓಡಾಡುವಾಗ ಅಥವಾ ಕಾರಿನಲ್ಲಿ ಹೋಗುವಾಗ ಯಾವುದೇ ಸಮಸ್ಯೆಗಳು ಕಣ್ಣಿಗೆ ಬಿದ್ದರೆ ಸಂಬಂಧ ಪಟ್ಟವರ ಗಮನಕ್ಕೆ ತರುವ ಚಟವೊಂದು ನನಗಿದೆ. ಇದರಿಂದ ನನ್ನ ಕುಟುಂಬ ಸದಸ್ಯರು ಹಾಗೂ ಸ್ನೇಹಿತರ ಮನಸ್ಸಿಗೂ ಬೇಸರವಾಗಿರುವ ಉದಾಹರಣೆಗಳಿವೆ. ಆದರೆ ಅದನ್ನು ನೋಡಿ ನನಗೆ ಸುಮ್ಮನಿರಲು ಸಾಧ್ಯವಿಲ್ಲ. ಕಳೆದ ಹಲವು ವರ್ಷಗಳಿಂದ ಇದನ್ನು ಮಾಡಿಕೊಂಡು ಬಂದಿದ್ದೇನೆ. ಒಂದಿಷ್ಟು ವಿಚಾರಗಳಿಗೆ ಪರಿಹಾರ ದೊರೆತಿದೆ, ಸಾಕಷ್ಟು ವಿಚಾರಗಳಲ್ಲಿ ಏನೂ ಆಗಿಲ್ಲ. ನನ್ನ ಕರೆಯಿಂದ ಎಲ್ಲವೂ ಬದಲಾಗುತ್ತದೆ ಎನ್ನುವ ಭ್ರಮೆಯಲ್ಲಿ ನಾನು ಬದುಕುತ್ತಿಲ್ಲ. ಆದರೆ ನನ್ನ ಇಷ್ಟು ವರ್ಷಗಳ ಅನುಭವ ಆಧರಿಸಿ ಸಹಾಯವಾಣಿ ಬಗ್ಗೆ ಬರೆಯಲೇಬೇಕು ಎಂದೆನಿಸಿದೆ.

ನಾನು ಹೆಚ್ಚಿನ ಸಂದರ್ಭದಲ್ಲಿ ಕರೆ ಮಾಡುವುದು ಗ್ರೇಟರ್ ಬೆಂಗಳೂರು (1533), ಎಸ್ಕಾಂ(1912), ರಾಷ್ಟ್ರೀಯ ಹೆದ್ದಾರಿ(1800116062), ಆಹಾರ ಇಲಾಖೆ(1967), ಸಂಚಾರ ಪೊಲೀಸ್(112), ಬ್ಯಾಂಕ್ ಹಾಗೂ ಇ-ಕಾಮರ್ಸ್ ವೇದಿಕೆಗಳ ಸಹಾಯ ವಾಣಿಗಳಿಗೆ. ಕೆಲವೊಮ್ಮೆ ಹಠದಿಂದ ಸಂಬಂಧಪಟ್ಟ ಅಧಿಕಾರಿಗಳ ದೂರವಾಣಿ ಸಂಖ್ಯೆಗೆ ಬಿಗಿಪಟ್ಟು ಹಿಡಿದು ಹಿಂದೆ ಬಿದ್ದ ಉದಾಹರಣೆಗಳಿವೆ.

ಇವೆಲ್ಲ ಸರ್ಕಾರಿ ಹಾಗೂ ಕಾರ್ಪೊರೇಟ್ ಸಂಸ್ಥೆಗಳ ಸಹಾಯವಾಣಿಗಳಲ್ಲಿ ಕಳೆದೈದು ವರ್ಷಗಳಿಂದ ಒಂದು ಸಾಮಾನ್ಯವಾದ ಬದಲಾವಣೆಯಾಗಿದೆ. ಸಹಾಯವಾಣಿಯನ್ನು ನಡೆಸುವ ಗುತ್ತಿಗೆ ಸಂಸ್ಥೆಗಳ ಗುಣಮಟ್ಟ ಹಳ್ಳ ಹಿಡಿದಿದೆ ಹಾಗೂ ಇದರ ಜವಾಬ್ದಾರಿಯನ್ನು ಹೊತ್ತ ಜನರು ಸಮಸ್ಯೆಗಳನ್ನು ಆಲಿಸುವುದಕ್ಕಷ್ಟೇ ಸೀಮಿತವಾಗಿದ್ದಾರೆ.

ಸಹಾಯವಾಣಿ ಎನ್ನುವುದರ ಬದಲಾಗಿ,



ದೂರುವಾಣಿ ಎಂದು ಬದಲಿಸುವುದು ಒಳ್ಳೆಯದು. ಉದ್ಯಮದ ಕಾರಣದಿಂದ ಇ-ಕಾಮರ್ಸ್ ಹಾಗೂ ಮೊಬೈಲ್ ಕಂಪೆನಿಗಳ ಸಹಾಯವಾಣಿಗಳು ಒಂದು ಹಂತಕ್ಕೆ ಸಮರ್ಪಕವಾಗಿವೆ. ಆದರೆ ಬ್ಯಾಂಕಿಂಗ್ ಹಾಗೂ ಸರ್ಕಾರದ ಉಳಿದ ಸಹಾಯವಾಣಿಗಳು ನೆಪ ಮಾತ್ರಕ್ಕೆ ಸೀಮಿತವಾಗಿವೆ.

ಜನಸ್ಪಂದನ, ಜಿಬಿಎ, ಆಹಾರ ಇಲಾಖೆ ಸಹಾಯವಾಣಿ ಹಾಗೂ ಬ್ಯಾಂಕಿಂಗ್ ಸಹಾಯವಾಣಿಗೆ ಸಂಬಂಧಿಸಿ ನನ್ನ ಅನುಭವ ಹಂಚಿಕೊಳ್ಳುತ್ತೇನೆ. ನಿಮ್ಮ ಅನುಭವ ವಿಭಿನ್ನವಾಗಿದ್ದರೆ, ಅದನ್ನೂ ಹಂಚಿಕೊಳ್ಳಿ’ ಎಂದಿದ್ದಾರೆ.

ಜಬಿಎ ಸಹಾಯವಾಣಿ ‘ಬೆಂಗಳೂರನ್ನು ಉದ್ಧಾರ ಮಾಡುತ್ತೇವೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮಾಡಿದ ರಾಜ್ಯ ಸರ್ಕಾರವು, ಕಸ ವಿಂಗಡಣೆಗೆ ಇನ್ನೊಂದು ಪ್ರಾಧಿಕಾರ ಮಾಡಿತು. ಕಸದ ಸಮಸ್ಯೆಗೆ ಕರೆ ಮಾಡಬೇಕಿದ್ದರೆ ಜಿಬಿಎ ಸಹಾಯವಾಣಿಗೆ ಕರೆ ಮಾಡಿ ಅವರಿಗೆ ಮನವಿ ಮಾಡಿ ಕೊಂಡು ಕರೆಯನ್ನು ವರ್ಗಾಯಿಸಿಕೊಳ್ಳಬೇಕು. ಇನ್ನು ಜಿಬಿಎಗೆ ನೇರವಾಗಿ ಕರೆ ಮಾಡಬಹುದು. ಆದರೆ ಇಬ್ಬರ ವರ್ತನೆಯಲ್ಲಿ ಯಾವುದೇ ದೊಡ್ಡ ಬದಲಾವಣೆಯಿಲ್ಲ. ಮೊದಲೆಲ್ಲ ಕರೆ ಮಾಡಿದರೆ ಸಂಬಂಧಪಟ್ಟ ಅಧಿಕಾರಿಗಳ ಮೊಬೈಲ್ ಸಂಖ್ಯೆ ನೀಡುತ್ತಿದ್ದರು. ಬಳಿಕ ಸಮಸ್ಯೆ ಪರಿಹಾರದ ಕಾಲಮಿತಿಯೊಳಗೆ ಮತ್ತೆ ಕರೆ ಮಾಡಿ, ಏನಾಯಿತು ಎಂದು ವಿಚಾರಿಸುತ್ತಿದ್ದರು. ಆದರೀಗ ಎಲ್ಲವೂ ಸಂಪೂರ್ಣ ಹದಗೆಟ್ಟಿದೆ.

ಬೇಕಾಬಿಟ್ಟಿಯಾಗಿ ಅಧಿಕಾರಿಗಳಿಗೆ ದೂರುಗಳು ವರ್ಗಾವಣೆಯಾಗುತ್ತವೆ. ದೂರುದಾರರನ್ನು ಸಂಪರ್ಕಿಸದೇ ದೂರುಗಳನ್ನು ಮುಕ್ತಾಯಗೊ ಳಿಸಲಾಗುತ್ತದೆ. ಹಾಗೆಯೇ ದೂರಿನ ಬಗ್ಗೆ ಯಾವುದೇ ಕ್ರಮಗಳನ್ನು ಕೂಡ ತೆಗೆದುಕೊಳ್ಳುವುದಿಲ್ಲ. ಕನಕಪುರ ಮುಖ್ಯ ರಸ್ತೆಯ ಯಲಚೇನಹಳ್ಳಿ ಮೆಟ್ರೋ ನಿಲ್ದಾಣದ ಬಳಿ ಚರಂಡಿ ನೀರು ಒಂದು ವಾರದಿಂದ ಹರಿಯುತ್ತಿತ್ತು. ಸತತ ಎರಡು ಬಾರಿ ಅದಕ್ಕೆ ಪರಿಹಾರವನ್ನೇ ಒದಗಿಸದೇ ದೂರನ್ನು ಮುಕ್ತಾಯಗೊಳಿಸಿದ್ದರು. ನಿಮ್ಮ ಉಸ್ತುವಾರಿ ಸಚಿವರ ಊರಿಗೆ ಹೋಗುವ ರಸ್ತೆಯಲ್ಲಿ ಕೊಳಚೆ ನೀರು ಹರಿಯುವುದನ್ನು ನಿಲ್ಲಿಸಲಾಗದಿದ್ದರೆ ನೀವೆಲ್ಲ ಕತ್ತೆ ಮೇಯಿಸೋಕೆ ಹೋಗಿ ಎಂದು ಬೈದ ಮರುದಿನ ತೆರೆದ ಚರಂಡಿಯನ್ನು ಮುಚ್ಚಿದ್ದರು. ಬೀದಿ ನಾಯಿಗಳಿಗೆ ಸಂಬಂಧಿಸಿದ ಇಂತಹದ್ದೇ ಹಲವು ದೂರುಗಳು ಪರಿಹಾರವಿಲ್ಲದೇ ಮುಕ್ತಾಯವಾಗಿದೆ.

ಕಸದ ಸಮಸ್ಯೆಯ ಕಥೆಯೂ ವಿಭಿನ್ನವಾಗಿಲ್ಲ. ಅಂದರೆ ನಮ್ಮ ದೂರುಗಳ ಸಂಖ್ಯೆಯು ಕೇವಲ ಯಾವುದೋ ಏಜೆನ್ಸಿಯ ಮಾಸಿಕ ಬಿಲ್ ಪಾವತಿಗೆ ಲೆಕ್ಕವಷ್ಟೇ. ಏಜೆನ್ಸಿ ನಡೆಸಲು ಅವರಿಗೆ ನಮ್ಮ ದೂರುಗಳು ಬೇಕಷ್ಟೆ. ಆ ದೂರುಗಳಿಗೆ ಪರಿಹಾರ ಸಿಕ್ಕಿತೇ ಎನ್ನುವುದಕ್ಕೆ ಯಾರಿಗೂ ಜವಾಬ್ದಾರಿಯಿಲ್ಲ.

ಈ ಬಗ್ಗೆ ಸಹಾಯವಾಣಿ ಸಿಬ್ಬಂದಿ ಕೇಳಿದರೆ, ಇದಕ್ಕೆ ಪೂರಕವಾದ ಉತ್ತರ ಬರುತ್ತದೆ. ನಮ್ಮ ಕೆಲಸ ದೂರು ಪಡೆದುಕೊಂಡು ವರ್ಗಾಯಿಸುವುದಷ್ಟೇ. ನಿಮಗೆ ಪರಿಹಾರ ಸಿಕ್ಕಿತೇ, ಇಲ್ಲವೇ ಎನ್ನುವುದು ನಮಗೆ ಸಂಬಂಧಿಸಿದ್ದಲ್ಲ ಎನ್ನುತ್ತಾರೆ. ಅವರು ನಮಗೆ ನೀಡುವ ಅಧಿಕಾರಿಗಳು ಬಹುತೇಕ ಸಂದರ್ಭದಲ್ಲಿ ಜನಸಾಮಾನ್ಯರ ಕರೆಯನ್ನು ಸ್ವೀಕರಿಸಿ ಮಾತನಾಡುವ ವ್ಯವಧಾನ ಹೊಂದಿ ರುವುದಿಲ್ಲ. ಹೀಗಾಗಿ ಸಹಾಯ ವಾಣಿಯು ಕೇವಲ ದೂರು ಕೇಳುವ ವಾಣಿಯಾಗಿ ಪರಿವರ್ತನೆ ಆಗುತ್ತಿದೆ.

ಆಹಾರ ಇಲಾಖೆ ಆಹಾರ ಇಲಾಖೆ ಯ ಅತಿ ದೊಡ್ಡ ಕಾರ್ಯಕ್ರಮವೆಂದರೆ ಅನ್ನಭಾಗ್ಯ ಯೋಜನೆ. ಇದಕ್ಕಾಗಿ ಸರ್ಕಾರವು ವಿಶೇಷ ಸಹಾಯವಾಣಿಯನ್ನು ಹೊಂದಿದೆ. ಆದರೆ ಈ ಸಹಾಯವಾಣಿಯ ವಿಶೇಷವೇನೆಂದರೆ ವರ್ಷದ ಒಂದು ದಿನವೂ ಇಲ್ಲಿ ಕರೆ ಸ್ವೀಕರಿಸುವವರು ಇರುವುದಿಲ್ಲ. ಅನ್ನಭಾಗ್ಯ ಯೋಜನೆಯ ಅಕ್ಕಿ ಸಾಗಾಟ ಮಾಡುವಾಗ ಮುಚ್ಚಿಗೆ ಮಾಡುವುದಿಲ್ಲ ಎನ್ನುವ ಬಗ್ಗೆ ಒಂದು ದೂರು ನೀಡಲು ನಾನು ಕನಿಷ್ಠ 20 ಜನರಿಗೆ ಕರೆ ಮಾಡಿದ್ದೇನೆ. ನಾನು ಇಂತಹ ಹತ್ತಕ್ಕೂ ಅಧಿಕ ದೂರು ನೀಡಿದ್ದು, ಒಮ್ಮೆಯೂ ಸಹಾಯವಾಣಿಯಲ್ಲಿ ಕರೆಯನ್ನು ಯಾರೂ ಸ್ವೀಕರಿಸಿಲ್ಲ. ಆದರೆ ಬಡವರ ಹೆಸರಲ್ಲಿ ಸತತವಾಗಿ ಗೆಲ್ಲುತ್ತಿರುವ ಮುನಿಯಪ್ಪನವರು ಮಾತ್ರ ತಮ್ಮ ಭಾಷಣ ಹಾಗೂ ಇಲಾಖೆಯ ವೆಬ್‌ಸೈಟ್‌ನಲ್ಲಿ ಸಹಾಯ ವಾಣಿಯನ್ನು ಉಲ್ಲೇಖಿಸುತ್ತಾರೆ. ಆ ಸಹಾಯವಾಣಿ ಹೆಸರಲ್ಲಿ ಯಾರ ಮನೆಯ ತಿಜೋರಿ ತುಂಬುತ್ತಿದೆಯೋ ದೇವರಿಗೆ ಗೊತ್ತು.

ಜನಸ್ಪಂದನ ವೇದಿಕೆ ಜನಸ್ಪಂದನ ಎನ್ನುವ ಅಪ್ಲಿಕೇಷನ್ ಲಭ್ಯವಿದೆ. ಅದರಲ್ಲಿ ಯಾವುದೇ ಇಲಾಖೆಯನ್ನು ಟ್ಯಾಗ್ ಮಾಡಿ ದೂರು ನೀಡಲು ಅವಕಾಶವಿದೆ. ಹಾಗೆಯೇ ದೂರುಗಳನ್ನು ಟ್ರ್ಯಾಕ್ ಕೂಡ ಮಾಡ ಬಹುದು. ಮೇಲೆ ಉಲ್ಲೇಖಿಸಿದ ಪ್ರಕರಣದಲ್ಲಿಯೇ ನಾನು ಫೋಟೋ ಸಮೇತ ದೂರು ನೀಡಿದ್ದೆ. ಈ ವೇದಿಕೆ ಎಷ್ಟು ಅದ್ಭುತವಾಗಿ ಕೆಲಸ ಮಾಡುತ್ತಿ ದೆಯೆಂದರೆ, ಯಾವ ಕ್ರಮ ಜರು ಗಿಸಲಾಯಿತು, ಏನಾಯಿತು ಎನ್ನುವ ಯಾವುದೇ ಮಾಹಿತಿಯಿಲ್ಲದೇ ದೂರನ್ನು ಮುಕ್ತಾಯಗೊಳಿಸಿದ್ದರು. ಆದರೆ ವಾಸ್ತವದಲ್ಲಿ ನಾನು ನೀಡಿದ್ದ ಸಮಸ್ಯೆಯು ಇಂದಿಗೂ ಮುಂದುವರಿದಿದೆ.

ಬ್ಯಾಂಕಿಂಗ್ ವಲಯ ಬಹುತೇಕ ಎಲ್ಲ ಬ್ಯಾಂಕ್‌ಗಳು ಸಹಾಯವಾಣಿಯನ್ನು ಹೊಂದಿವೆ. ಹಾಗೆಯೇ ಕುಖ್ಯಾತ ಎಸ್‌ಬಿಐನಲ್ಲೂ ಈ ಅವ್ಯವಸ್ಥೆಯಿದೆ. ಇತ್ತೀಚೆಗೆ ನನ್ನ ಖಾತೆಯ ಕೆವೈಸಿ ಮಾಡಿಕೊಳ್ಳುವಂತೆ ಸಂದೇಶ ಬಂದಿತ್ತು. ಅವರ ವೆಬ್‌ಸೈಟ್ ಹೇಳುವಂತೆಯೇ ಯುನೋ ಅಪ್ಲಿಕೇಷನ್, ಸಹಾಯವಾಣಿಗೆ ಕರೆ, ಎಟಿಎಂ ಹಾಗೂ ಬ್ಯಾಂಕ್ ವೆಬ್‌ತಾಣದ ಮೂಲಕ ಕೆವೈಸಿ ಅಪ್ಡೇಟ್ ಮಾಡಲು ಪ್ರಯತ್ನಿಸಿದೆ.

ದಿನಗಟ್ಟಲೇ ಪ್ರಯಾಸದ ಬಳಿಕವೂ ತಾಂತ್ರಿಕ ದೋಷವೆನ್ನುವ ಕಾರಣ ನೀಡುತ್ತಲೇ ಇತ್ತು. ಈ ಸಂಬಂಧ ದೂರು ನೀಡಿ, ಸ್ಪಷ್ಟನೆ ಕೇಳಲು ಸಹಾಯವಾಣಿಗೆ ಕರೆ ಮಾಡಿದೆ.

ಅಲ್ಲಿ ಕುಳಿತ ಸಿಬ್ಬಂದಿಯು ಎಸ್‌ಬಿಐ ಕಚೇರಿಯಲ್ಲಿ ಊಟಕ್ಕೆ ಹೋಗುವ ಸಿಬ್ಬಂದಿಗಿಂತ ಕೆಟ್ಟದಾಗಿದ್ದರು. ಸಮಸ್ಯೆಗಳ ಬಗ್ಗೆ ದೂರು ಪಡೆಯಲು ಸಾಧ್ಯವಿಲ್ಲ. ನೀವು ಹತ್ತಿರದ ಕಚೇರಿಗೆ ಭೇಟಿ ನೀಡಿ ಎಂದು ಕೈ ತೊಳೆದುಕೊಂಡರು.

ತಾಂತ್ರಿಕ ದೋಷವು ನಿಮ್ಮ ಕಡೆಯಿಂದಿದ್ದರೆ ದೂರು ಪಡೆದುಕೊಂಡು ಸರಿಪಡಿಸಬಹುದಲ್ಲವೇ ಎಂದು ಕೇಳಿದರೆ, ಅದೆಲ್ಲ ಆಗುವುದಿಲ್ಲ ಎಂದು ಸುಮ್ಮನಾಗಿಬಿಟ್ಟರು.

Printed, Published, & owned by : YOGESH, Printed at: SNEHA PRINTERS, No. 129, Kempe gowda Nagar, Magadi Main Road, Bangalore 560 091.
Published at : No. 10, 2nd Floor, 7th Block, Sir M. Visweswaraiah Layout, Muddayanapalya Circle, Bangalore 560 091.
Editor : YOGESH : Mobile : 9912220350 Email : info.southindiatimes@gmail.com